ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 17 ಭಾನುವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 328 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com



ಇಂದು ಗುಬ್ಬಚ್ಚಿ ಸಂರಕ್ಷಣಾ ದಿನಾಚರಣೆ



ಮೈಸೂರು, ಮಾ. 16–ವಿಶ್ವ ಗುಬ್ಬಚ್ಚಿ ದಿನಾಚರಣೆ ಅಂಗವಾಗಿ, ಮೈಸೂರಿನ ಪೀಪಲ್ ಫಾರ್ ಅನಿಮಲ್ಸ್ (ಪಿಎಫ್ಎ) ಮತ್ತು ಗುಬ್ಬಚ್ಚಿ ಸಂರಕ್ಷಣಾವಾದಿ ಕೋಕಿಲಾ ರಮೇಶ್ ಅವರ ಜಂಟಿ ಆಶ್ರಯದಲ್ಲಿ ಮಾ.17ರಂದು ಬೋಗಾದಿಯ ಪೀಪಲ್ಸ್ ಫಾರ್ ಅನಿಮಲ್ಸ್ ಆವರಣದಲ್ಲಿ ಗುಬ್ಬಚ್ಚಿ ಸಂರಕ್ಷಣಾ ದಿನವನ್ನು ಆಚರಿಸಲಾಗುತ್ತಿದೆ.

ಭಾಗವಹಿಸುವವರು ಗುಬ್ಬಚ್ಚಿಗಳ ಪ್ರಪಂಚದ ಒಳನೋಟವನ್ನು ತಮ್ಮ ಸಂರಕ್ಷಣಾ ಸವಾಲುಗಳು ಮತ್ತು ಅವುಗಳ ರಕ್ಷಣೆಯನ್ನು ಹೈಲೈಟ್ ಮಾಡುವ ತಿಳಿವಳಿಕೆ ವೀಡಿಯೊ ಕ್ಲಿಪ್‌ಗಳೊಂದಿಗೆ ಪಡೆಯಬಹುದು. ಅವರು ಗುಬ್ಬಚ್ಚಿ–ವಿಷಯದ ಬೋರ್ಡ್ ಆಟವನ್ನು ಅನುಭವಿಸಬಹುದು, ಅವುಗಳ ಬಗ್ಗೆ ಅರಿವು ಮೂಡಿಸಲು ತಮಾಷೆಯ ಮತ್ತು ಶೈಕ್ಷಣಿಕ ವಿಧಾನವನ್ನು ನೀಡುತ್ತದೆ. ಇದರ ಅಂಗವಾಗಿ 8 ಮತ್ತು 18 ವರ್ಷದ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ ಏರ್ಪಡಿಸಿದ್ದು, ಗುಬ್ಬಚ್ಚಿಗಳಿಗಾಗಿ ಕ್ರಿಯಾತ್ಮಕ ಮತ್ತು ಸುಂದರವಾದ ಮನೆಯನ್ನು ಅಲಂಕರಿಸಬಹುದು ಮತ್ತು ಚಿತ್ರಿಸಬಹುದು. ಅವರು ಇಂಗ್ಲಿಷ್, ಹಿಂದಿ ಅಥವಾ ಕನ್ನಡದಲ್ಲಿ ಗುಬ್ಬಚ್ಚಿಗಳ ಬಗ್ಗೆ ಕವಿತೆಗಳನ್ನು ರಚಿಸಬಹುದು. ಭಾಗವಹಿಸುವ ವಿದ್ಯಾರ್ಥಿಗಳಿಗೆ ಪಿಎಫ್ಎಯಿಂದ ಪ್ರಶಸ್ತಿ ಪ್ರಮಾಣ ಪತ್ರ ನೀಡಲಾಗುವುದು. ಮಾಜಿ ಮೇಯರ್ ಡಾ.ರೂಪಾ ಯೋಗೇಶ್, ಪಕ್ಷಿ ವೀಕ್ಷಕರಾದ ವಿಜಯಲಕ್ಷ್ಮಿ, ಶೈಲಜೇಶ್ ಭಾಗವಹಿಸುವರು. ಆಸಕ್ತರು ಬೆಳಗ್ಗೆ 8 ಗಂಟೆಗೆ ಹಾಜರಿರಬೇಕು. ಮಾಹಿತಿಗೆ ಮೊ.98456–54429 ಸಂಪರ್ಕಿಸಿ.

ಮಾ.24, ರಾಜ್ಯಮಟ್ಟದ ಗಾಯನ


ಮೈಸೂರು, ಮಾ. 16–ಡಾ.ಪಂಡಿತ್ ಪುಟ್ಟರಾಜ ಗವಾಯಿ ಸ್ಮರಣಾರ್ಥ ಮಾ. 24ರಂದು ಮಧ್ಯಾಹ್ನ 2 ಗಂಟೆಯಿಂದ ಸಂಜೆ 6ರವರೆಗೆ ಕನ್ನಡ ಕಲಿಕಾ ಗಾನ ಕಲಾವಿದರ ವೇದಿಕೆಯಿಂದ ಕೃಷ್ಣಮೂರ್ತಿಪುರಂನ ನಮನ ಕಲಾಮಂಟಪದಲ್ಲಿ ರಾಜ್ಯಮಟ್ಟದ ಗಾಯನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆಸಕ್ತರು ಹಾಗೂ ಉದಯೋನ್ಮುಖರು ಮಕ್ಕಳ ವಿಭಾಗ (4ರಿಂದ 16 ವರ್ಷದವರೆಗೆ ಪ್ರವೇಶ ಶುಲ್ಕ 20 ರೂ.),



ಕಿರಿಯರ ವಿಭಾಗ (16 ವರ್ಷದಿಂದ 40 ವರ್ಷದವರೆಗೆ ಪ್ರವೇಶ ಶುಲ್ಕ 30 ರೂ.), ಹಿರಿಯರ ವಿಭಾಗ (40 ವರ್ಷದಿಂದ ಮೇಲ್ಪಟ್ಟವರು ಪ್ರವೇಶ ಶುಲ್ಕ 50 ರೂ.) ಹೆಸರನ್ನು ನೋಂದಾಯಿಸಿಕೊಂಡವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ. 9513807425ಸಂಪರ್ಕಿಸಬಹುದು.

ಪವರ್ ಸ್ಟಾರ್ ಪುನೀತ್ ರಾಜಕುಮಾರ್ ಜನ್ಮದಿನ

ಗಿಡ ನೆಟ್ಟು ಅಭಿಮಾನಿಗಳಿಗೆ ಇಂದು ಸಿಹಿ ವಿತರಣೆ



ಮೈಸೂರು,ಮಾ.16–ಭುವನೇಶ್ವರಿ ಸೇವಾ ಟ್ರಸ್ಟ್ ಹಾಗೂ ಪುನೀತ್ ರಾಜಕುಮಾರ್ ಅಭಿಮಾನಿ ಬಳಗದಿಂದ ಪವರ್ ಸ್ಟಾರ್ ಪುನೀತ್ ರಾಜಕುಮಾರ್ ಜನ್ಮದಿನ ಅಂಗವಾಗಿ ಗಿಡ ನೆಟ್ಟು ಅಭಿಮಾನಿಗಳಿಗೆ ಸಿಹಿ ವಿತರಣಾ ಕಾರ್ಯಕ್ರಮವನ್ನು ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿರುವ ಡಾ. ರಾಜಕುಮಾರ್ ಉದ್ಯಾನವನದಲ್ಲಿ ನಾಳೆ (ಮಾ.17) ಬೆಳಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ ಎಂದು ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ಅಧ್ಯಕ್ಷೆ ನಾಗಶ್ರೀ ಸುಚೆಂದ್ರ ತಿಳಿಸಿದ್ದಾರೆ

ಮುಖ್ಯ ಅತಿಥಿಗಳಾಗಿ ಬಿಜೆಪಿಯ ಹಿಂದುಳಿದ ವರ್ಗದ ರಾಜ್ಯಾಧ್ಯಕ್ಷ ಆರ್ ರಘು ಕೌಟಿಲ್ಯ, ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್, ಯಶಸ್ವಿನಿ ಸೋಮಶೇಖರ್, ಮೈಸೂರು ನಗರ–ಜಿಲ್ಲಾ ಗ್ರಾಮೀಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ರಾಜಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ರಾಮೇಗೌಡ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಇನ್ನಿತರರು ಭಾಗವಹಿಸಲಿದ್ದಾರೆ.

ಮಹಾಜನ ಕಾಲೇಜಲ್ಲಿ ವಿಶ್ವ 'ಪೈ' ದಿನಾಚರಣೆ



ಮಹಾಜನ ಪ್ರಥಮ ದರ್ಜೆ ಕಾಲೇಜಲ್ಲಿ ನಡೆದ ವಿಶ್ವ ಪೈ ದಿನಾಚರಣೆಯಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಅಧ್ಯಕ್ಷ ಆರ್. ಅನಂತರಾಮು ಮಾತನಾಡಿದರು.

ಮೈಸೂರು, ಮಾ. 16– ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಮೈಸೂರು ಘಟಕ, ಮಹಾಜನ ಪ್ರಥಮ ದರ್ಜೆ ಕಾಲೇಜು ಸಂಯುಕ್ತ ಆಶ್ರಯದಲ್ಲಿ ಕಾಲೇಜಿನ ಸಭಾಂಗಣದಲ್ಲಿ ವಿಶ್ವ ಪೈ ದಿನವನ್ನು ಆಚರಿಸಲಾಯಿತು.

ಮೈಸೂರು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಅಧ್ಯಕ್ಷ ಆರ್.ಅನಂತರಾಮು 'ಪೈ ದಿನ'ವನ್ನು ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಸಂಪನ್ಮೂಲ ವ್ಯಕ್ತಿಯಾಗಿದ್ದ ಮೈಸೂರು ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಗಣಿತಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ಎಂ.ಎ. ಶ್ರೀರಾಜ್ ಮಾತನಾಡುತ್ತಾ, 'ಪೈ' ಎಂಬುದು ವೃತ್ತದ ಸುತ್ತಳತೆಯ ಅನುಪಾತವು ಅದರ ವ್ಯಾಸಕ್ಕೆ ಸರಿಸುಮಾರು 3,14159ಗೆ ಸಮಾನವಾಗಿರುತ್ತದೆ. ಇದು ಕೇವಲ ಸಂಖ್ಯಾತ್ಮಕ ಕುತೂಹಲವಲ್ಲ, ಆದರೆ ಗಣಿತ ಮತ್ತು ವಿಜ್ಞಾನದ ವಿವಿಧ ಶಾಖೆಗಳಲ್ಲಿ ಮೂಲಭೂತ ಅಂಶವಾಗಿದೆ. ಇದರ ಸರ್ವವ್ಯಾಪಕತ್ವವು ವಲಯಗಳನ್ನು ಮೀರಿ ವಿಸ್ತರಿಸುತ್ತದೆ. ಜ್ಯಾಮಿತಿ, ತ್ರಿಕೋನಮಿತಿ, ಭೌತಶಾಸ್ತ್ರ, ಇಂಜಿನಿಯರಿಂಗ್ ಮತ್ತು ಅಂಕಿ ಅಂಶಗಳಲ್ಲಿ ಅನ್ವಯಗಳನ್ನು ಕಂಡುಕೊಳ್ಳುತ್ತದೆ ಎಂದು 'ಪೈ' ದಿನದ ಇತಿಹಾಸವನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು.

ಪ್ರಾಂಶುಪಾಲರಾದ ಡಾ.ಬಿ.ಆರ್. ಜಯಕುಮಾರಿ, ಗಣಿತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಸುಮತಿ ಎಂ.ಪಿ., ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಪೂರ್ಣಿಮಾ, ಸಹಾಯಕ ಪ್ರಾಧ್ಯಾಪಕರಾದ ನಿರಂಜನ್, ಶ್ರೀಮತಿ ಗಾಯತ್ರಿ ವಿ ಈ ವೇಳೆ ಉಪಸ್ಥಿತರಿದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು, ಮಾ.16– ಕಡಕೊಳ ವಿದ್ಯುತ್ ಸ್ವೀಕರಣಾ ಕೇಂದ್ರ ಮತ್ತು ಮೇಗಳಾಪುರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಕಾಮಗಾರಿ ನಿಮಿತ್ತ ಮಾ.17 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಈ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಕಡಕೊಳ: ಕಡಕೊಳ, ಬ್ಯಾತಹಳ್ಳಿ, ದಡದಹಳ್ಳಿ, ಸಿಂಧುವಳ್ಳಿ, ದೊಡ್ಡಕಾನ್ಯ, ಚಿಕ್ಕಕಾನ್ಯ, ಕೂಡನಹಳ್ಳಿ, ಕೋಚನಹಳ್ಳಿ, ಮರಸೆ, ಮಾಕನಹುಂಡಿ, ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ, ವಿಮಾನ ನಿಲ್ದಾಣ, ಬೀರೇಗೌಡನಹುಂಡಿ, ಕೆ.ಎಂ. ಹುಂಡಿ, ಬಿ.ಜಿ. ಹುಂಡಿ, ಕೆ.ಎನ್. ಹುಂಡಿ, ಆಯರಹಳ್ಳಿ, ಕಿರಾಳು, ದೂರ, ಮುರುಡಗಳ್ಳಿ, ತಳೂರು, ಡಿ. ಕಾಟೂರು, ಟಿ.ವಿ.ಎಸ್. ಫ್ಯಾಕ್ಟರಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳು.

ಮೇಗಳಾಪುರ: ಮೇಗಳಾಪುರ, ಇನಾಂ ಉತ್ತನಹಳ್ಳಿ, ಎಂ.ಸಿ.ಹುಂಡಿ, ಕೀಳನಪುರ, ಸಿದ್ದರಾಮನಹುಂಡಿ, ಮಾಧವಗೆರೆ, ಗುರುಕಾರಪುರ, ದುದ್ದಗೆರೆ, ಮಹದೇವಿ ಕಾಲೋನಿ, ಲಕ್ಷ್ಮೀಪುರ, ಪಿ.ಜಿ.ಹುಂಡಿ, ಚಟ್ಟನಹಳ್ಳಿ, ಚಟ್ಟನಹಳ್ಳಿ ಪಾಳ್ಯ, ಹೊಸಹಳ್ಳಿ, ರಂಗನಾಥಪುರ, ಶ್ರೀನಿವಾಸಪುರ, ಯಡಕೊಳ, ಕಡವೆಕಟ್ಟೆಹುಂಡಿ, ಅಂಚೆಹುಂಡಿ, ದೇವೇಗೌಡನಹುಂಡಿ, ಮುದ್ದೇಗೌಡನಹುಂಡಿ, ಕುಪ್ಪೆಗಾಲ, ವರಕೋಡು ಪೇಪರ್ ಮಿಲ್, ಎಸ್.ಆರ್. ಇಂಡಸ್ಟ್ರೀಸ್, ಜಾಗ್ವರಿ ಸಿಮೆಂಟ್ ಇಂಡಸ್ಟ್ರೀಸ್, ರಾಜಶ್ರೀ ಇಂಡಸ್ಟ್ರೀಸ್ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ವಿ.ವಿ ಮೊಹಲ್ಲಾ: ವಿಜಯನಗರ 4ನೇ ಹಂತ, ಕೆ.ಹೆಚ್.ಬಿ ಕಾಲೋನಿ, ಹೂಟಗಳ್ಳಿ ಗ್ರಾಮ, ಬೆಳವಾಡಿ ಗ್ರಾಮ, ಬಸವನಪುರ, ಮರಟಿಕ್ಯಾತನಹಳ್ಳಿ, ಪಂಚಚಾರ್ಯ ಲೇಔಟ್, ಕೆ.ಹೆಮ್ಮನಹಳ್ಳಿ, ಲಿಂಗದೇವರ ಕೊಪ್ಪಲು, ಇಲವಾಲ, ಹೂಟಗಳ್ಳಿ ಕೆ.ಆರ್.ಎಸ್.ರೋಡ್, ಆದಿತ್ಯ ಬಡಾವಣೆ, ಎಸ್.ಆರ್.ಎಸ್. ಕಾಲೋನಿ, ಕೂರ್ಗಳ್ಳಿ, ಎನ್.ಹೆಚ್.ಬಿ ಕಾಲೋನಿ, ಬೆಳವಾಡಿ ಕೈಗಾರಿಕಾ ಪ್ರದೇಶ, ಶಾಹಿ ಗಾರ್ಮೆಂಟ್ಸ್, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ಗ್ರ್ಯಾಂಡ್ ಮೌರ್ಯ ಹೋಟೆಲ್, ರಿಲಾಯನ್ಸ್, ಮಾಸ್ ಫರ್ನಿಚರ್ಸ್, ಯಶಸ್ವಿನಿ ಕಲ್ಯಾಣ ಮಂಟಪ, ಸೌಪರ್ಣಿಕ ಅಪಾರ್ಟ್‌ಮೆಂಟ್ ಹಿನಕಲ್, ಎಸ್.ವಿ.ಇ.ಐ ಕಾಲೇಜು ಸುತ್ತಮುತ್ತ, ಜಟ್ಟಿಹುಂಡಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 6ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಶ್ರೇಷ್ಠ ಭಾರತ ನಿರ್ಮಾಣಕ್ಕೆ ಪ್ರಧಾನಿ ಮೋದಿ ಕೈ ಬಲಪಡಿಸಬೇಕಿದೆ

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕರೆ



ಮೈಸೂರಿನ ರಮಾವಿಲಾಸ ರಸ್ತೆಯ ತಮ್ಮ ಕಚೇರಿಯಲ್ಲಿ ಶನಿವಾರ ಮಾಜಿ ಸಚಿವ ಸಾ.ರಾ.ಮಹೇಶ್ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಅವರನ್ನು ಅಭಿನಂದಿಸಿದರು.

ಮೈಸೂರು,ಮಾ.16(ಬಿಎಲ್‌ಯು)–ನೂರು ವರ್ಷಗಳ ದೂರದೃಷ್ಟಿ ಯೋಜನೆಗಳು ಸಾಕಾರಗೊಂಡು, ಶ್ರೇಷ್ಠ ಭಾರತ ನಿರ್ಮಾಣ ಮಾಡಲು ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಬೆಂಬಲಿಸಿ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕರೆ ನೀಡಿದ್ದಾರೆ.

ಮೈಸೂರಿನ ರಮಾವಿಲಾಸ ರಸ್ತೆಯ ಮಾಜಿ ಸಚಿವ ಸಾ.ರಾ.ಮಹೇಶ್ ಕಚೇರಿಯಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ಮೈಸೂರು ಮಹಾರಾಜರ ಜನಪರ ಮಾದರಿ ಯೋಜನೆಗಳನ್ನು ಕೇಂದ್ರದ ಬಿಜೆಪಿ ಸರ್ಕಾರದಲ್ಲಿ ಕಾಣಬಹುದು ಎಂದು ಅಭಿಪ್ರಾಯಪಟ್ಟರು.

ವಿಕಸಿತ ಭಾರತದ ಪರಿಕಲ್ಪನೆಯಲ್ಲಿ ದೇಶದ ಅಭಿವೃದ್ಧಿ ಸಾಕಾರಗೊಂಡಿದೆ. ನರೇಂದ್ರ ಮೋದಿ ಮತ್ತಷ್ಟು ಅಭಿವೃದ್ಧಿ ಮಾಡುವ ಕನಸು ಕಂಡಿದ್ದಾರೆ. ನರೇಂದ್ರ ಮೋದಿ ಅವರ ಪ್ರತಿಯೊಂದು ಯೋಜನೆಯೂ 100 ವರ್ಷಗಳ ಭವಿಷ್ಯದ ದೂರದೃಷ್ಟಿ ಹೊಂದಿದೆ. ಈ ಮೂಲಕ ಶ್ರೇಷ್ಠ ಭಾರತ ನಿರ್ಮಾಣ ಮಾಡಲು ಎನ್‌ಡಿಎ ಸರ್ಕಾರವನ್ನು ಬೆಂಬಲಿಸುವಂತೆ ಯದುವೀರ್ ಮನವಿ ಮಾಡಿದರು.

ಕಳೆದ 9 ವರ್ಷದ ಹಿಂದೆ ನಾನು ಮೈಸೂರು ರಾಜಮನೆತನ ದತ್ತು ಸ್ವೀಕಾರ ಮಾಡಿದಾಗ ಅರಮನೆಯಲ್ಲಿ ನಡೆದ ಎಲ್ಲಾ ರೀತಿಯ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಿಗೆ ಪ್ರೋತ್ಸಾಹ ನೀಡಿದ್ದೀರಾ. ಈಗ ಜನರ ಸೇವೆ ಮಾಡುವ ದೃಷ್ಟಿಯಿಂದ ರಾಜಕಾರಣಕ್ಕೆ ಪಾದಾರ್ಪಣೆ ಮಾಡಿದ್ದು, ನನ್ನನ್ನು ಬೆಂಬಲಿಸಿ ಎಂದು ಕೋರಿದರು.

ಮೈಸೂರು ಹಾಗೂ ಕೊಡಗು ಜಿಲ್ಲೆಗಳ ಪ್ರವಾಸಿ ತಾಣಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸಬೇಕಿದೆ. ಈಗಾಗಲೇ ರೂಪುಗೊಂಡಿರುವ ಯೋಜನೆಗಳು ಅನುಷ್ಠಾನಗೊಳ್ಳಲು ಬಿಜೆಪಿ ಬೆಂಬಲಿಸಿ, ನನ್ನನ್ನು ಆಯ್ಕೆ ಮಾಡಬೇಕು ಎಂದು ಯದುವೀರ್ ಮನವಿ ಮಾಡಿದರು.

ಬಳಿಕ ಮಾತನಾಡಿದ ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಯದುವೀರ್ ಜನರ ಕಷ್ಟ–ಸುಖಗಳಿಗೆ ಸ್ಪಂದಿಸಲಿದ್ದು, ಲೋಕಸಭಾ ಸದಸ್ಯರಾಗಿ ಆಯ್ಕೆಯಾಗುತ್ತಾರೆ. ಈ ಮೂಲಕ ರಾಜಕೀಯವಾಗಿ ಬೆಳವಣಿಗೆ ಹೊಂದುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಯದುವೀರ್ ಅವರಿಗೆ ಸಾ.ರಾ. ಮಹೇಶ್ ಮೈಸೂರು ಪೇಟ ತೊಡಿಸಿ ಅಭಿನಂದಿಸಿದರು. ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವ ಸ್ವಾಮಿ, ಮಾಜಿ ಅಧ್ಯಕ್ಷ ಹೇಮಂತ್‌ಕುಮಾರ್‌ಗೌಡ, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಮಾಜಿ ಮುಡಾ ಅಧ್ಯಕ್ಷ ಯಶಸ್ವಿ ಸೋಮಶೇಖರ್, ಮಾಜಿ ಮೇಯರ್ ಎಂ.ಜೆ. ರವಿಕುಮಾರ್ ಈ ಸಂದರ್ಭ ಉಪಸ್ಥಿತರಿದ್ದರು.

ಸಿದ್ದರಾಮಯ್ಯ ತಲಾ ಒಬ್ಬರಿಗೆ 1 ಲಕ್ಷ ಸಾಲದ ಹೊರೆ ಹೊರಿಸಿದ್ದಾರೆ

ಅಭಿವೃದ್ಧಿ ಹೆಸರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದ ಪ್ರತಿಯೊಬ್ಬ ಪ್ರಜೆಯ ಮೇಲೆ ಒಂದು ಲಕ್ಷ ರೂಪಾಯಿ ಸಾಲದ ಹೊರೆ ಹೊರಿಸಿದೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ದೂರಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್‌ಗೆ ಅಭಿನಂದನೆ ಸಲ್ಲಿಸಿ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿ ಮಾಡುತ್ತಿದ್ದೇವೆ ಎಂದು ಸುಳ್ಳು ಹೇಳುತ್ತಿರುವ ಸಿದ್ದರಾಮಯ್ಯ, ಗ್ಯಾರಂಟಿ ಯೋಜನೆಗಳನ್ನು ನೀಡಿ ಜನರನ್ನು ಸಾಲಗಾರರನ್ನಾಗಿ ಮಾಡಿದ್ದಾರೆ ಎಂದು ಸಾ.ರಾ.ಮಹೇಶ್ ಆಪಾದಿಸಿದರು.

ಆದರೆ ಮೈಸೂರು ರಾಜಮನೆತನದವರು ಕೆಆರ್‌ಎಸ್ ಸೇರಿದಂತೆ ಇತರೆ ಅಭಿವೃದ್ಧಿಗಾಗಿ ತಮ್ಮಲ್ಲಿದ್ದ ಚಿನ್ನಾಭರಣ ಮಾರಾಟ ಮಾಡಿದರು. ಈಗ ಮೈಸೂರು–ಕೊಡಗು ಜಿಲ್ಲೆಯ ಜನರು ಇದರ ಹೋಲಿಕೆ ಮಾಡಿ ಯಾರು ಸೂಕ್ತ ಅಭ್ಯರ್ಥಿ ಎಂದು ತೀರ್ಮಾನ ಮಾಡಬೇಕಿದೆ ಎಂದು ಸಲಹೆ ನೀಡಿದರು.

ಕಳೆದ ಲೋಕಸಭಾ ಚುನಾವಣೆ ಪರಿಸ್ಥಿತಿ ಬೇರೆ, ಈಗ ನಡೆಯುತ್ತಿರುವ ಚುನಾವಣೆಯ ಪರಿಸ್ಥಿತಿ ಬೇರೆ. ಕಳೆದ ಬಾರಿ ಮಂಡ್ಯದಲ್ಲಿ ಕಾಂಗ್ರೆಸ್‌ನವರು ಪಿತೂರಿ ಮಾಡಿ ನಮ್ಮ ಜೆಡಿಎಸ್ ಅಭ್ಯರ್ಥಿ ಸೋಲಿಸಿದರು. ನಾವು ಕೂಡ ಅದಕ್ಕೆ ಸೇಡು ತೀರಿಸಿಕೊಳ್ಳಲು ಬಿಜೆಪಿ ಅಭ್ಯರ್ಥಿ ಪ್ರತಾಪ್ ಸಿಂಹ ಬೆಂಬಲಿಸಿದ್ದೆವು. ಆದರೆ ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಡುವೆ ಒಳ್ಳೆಯ ಬಾಂಧವ್ಯ ಹಾಗೂ ಸಮನ್ವಯತೆ ಇದ್ದು, ಎರಡು ಪಕ್ಷದವರು ಕೆಲಸ ಮಾಡಿ ಮೈತ್ರಿ ಅಭ್ಯರ್ಥಿ ಗೆಲ್ಲಿಸುತ್ತೇವೆ ಎಂದು ಸಾ.ರಾ.ಮಹೇಶ್ ಭರವಸೆ ನೀಡಿದರು.

ಮಹಾರಾಜರಿಗೆ ಜನರು ಕೈ ಮುಗಿಯುತ್ತಾರೆ. ಆದರೆ ಈಗ ಚುನಾವಣೆಯಲ್ಲಿ ಸ್ಪರ್ಧೆ ಮಾಡಿರುವ ಕಾರಣ ಯದುವೀರ್ ಅವರೇ ಜನರಿಗೆ ಕೈ ಮುಗಿಯಬೇಕಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆ ನಡೆಯುತ್ತಿದೆ. ಆದರೆ ಒಳ್ಳೆಯ ಕಾನೂನು ರೂಪಿಸಲು ನರೇಂದ್ರ ಮೋದಿ ಕೈ ಬಲಪಡಿಸಲು ಯದುವೀರ್ ಚುನಾವಣೆಯಲ್ಲಿ ಸ್ಪರ್ಧಿಸಿದ್ದು, ಈಗ ಅವರನ್ನು ಗೆಲ್ಲಿಸಿ ದೆಹಲಿಗೆ ಕಳುಹಿಸಬೇಕು. ಈ ಮೂಲಕ ನರೇಂದ್ರ ಮೋದಿಯವರ ಕೈ ಬಲಪಡಿಸಬೇಕು ಎಂದು ಸಾ.ರಾ.ಮಹೇಶ್ ಹೇಳಿದರು.

ಶ್ರೀ ಗುರು ರಾಘವೇಂದ್ರ ಸ್ವಾಮಿಗಳ 429ನೇ ವರ್ಧಂತಿ



ಮೈಸೂರು, ಮಾ.16–ದೇಶದಲ್ಲಿ ಶಾಂತಿ ನೆಲೆಸಲಿ ಹಾಗೂ ಮಳೆ ಬೆಳೆ ಚೆನ್ನಾಗಿ ಬಂದು ರೈತರು ಸುಖ ಶಾಂತಿಯಿಂದ ಬಾಳುವಂತಾಗಲಿ ಎಂದು ಶಾಸಕ ಕೆ.ಹರೀಶ್‌ಗೌಡ ಹೇಳಿದರು.

ಮೈಸೂರಿನ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ಸುಬ್ಬರಾಯನಕೆರೆಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀ ಸುಶಮೀಂದ್ರ ತೀರ್ಥರ ಸೇವಾ ಸಂಘದ ವತಿಯಿಂದ ಶ್ರೀ ಗುರು ರಾಘವೇಂದ್ರ ಸ್ವಾಮಿಗಳ 429ನೇ ವರ್ಧಂತಿ ಅಂಗವಾಗಿ ಭಕ್ತಾದಿಗಳಿಗೆ ಲಾಡು, ಪ್ರಸಾದ ವಿತರಿಸಿ, ಮಾತನಾಡಿದ ಅವರು, ರಾಯರು ಜಾತ್ಯತೀತ, ಭಾಷಾತೀತ, ಪ್ರಾಂತ್ಯಾತೀತರಾಗಿ ಭಕ್ತರ ಉಳ್ಳವರು. ಮನುಕುಲ ಆಶೀರ್ವದಿಸುತ್ತಾ ಬಂದಿದ್ದಾರೆ ಎಂದರು.

ಭಕ್ತರನ್ನು ಸನ್ಮಾರ್ಗದಲ್ಲಿ ಕೊಂಡೊಯ್ಯುವ ಗುರುಗಳಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳು ಪ್ರಮುಖರು. ವಿರಳಾತಿವಿರಳರಾದ ಗುರುಗಳಲ್ಲಿ ಗುರುತ್ವವಿದೆ ಎಂದು ಬಣ್ಣಿಸಿದರು. ದೇಶದಲ್ಲಿ ಶಾಂತಿ ನೆಲೆಸಲಿ, ಮಳೆ ಬೆಳೆ ಚೆನ್ನಾಗಿ ಬಂದು ರೈತರು ಸುಖ–ಶಾಂತಿಯಿಂದ ಬಾಳುವಂತೆ ರಾಯರು ಹಾರೈಸಲಿ ಎಂದು ಪ್ರಾರ್ಥಿಸಿದರು. ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಮುಡಾ ಮಾಜಿ ಸದಸ್ಯ ನವೀನ್‌ಕುಮಾರ್, ಶ್ರೀ ಶ್ರೀ ಸುಶಮೀಂದ್ರ ತೀರ್ಥರ ಸೇವಾ ಸಂಘ ಅಧ್ಯಕ್ಷ ನಾಗರಾಜ್, ಉಪಾಧ್ಯಕ್ಷ ವರುಣ ಮಹದೇವ್, ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನ ಕೊಪ್ಪಲು, ಡೆಲ್ಲಿ ರವಿ, ಸಮಾಜ ಸೇವಕರಾದ ವಿದ್ಯಾ, ರವಿಚಂದ್ರ, ನಾಗಶ್ರೀ, ಮಂಜುನಾಥ್, ಬೈರತಿ ಲಿಂಗರಾಜು, ನವೀನ್ ಇನ್ನಿತರರು ಹಾಜರಿದ್ದರು.

ಇಂದು ಸಂಸದ ವಿ. ಶ್ರೀನಿವಾಸ ಪ್ರಸಾದ್ ಅವರ ಚುನಾವಣಾ ರಾಜಕೀಯ ಸುವರ್ಣ ಮಹೋತ್ಸವ ಅಭಿನಂದನಾ ಸಮಾರಂಭ



ಮೈಸೂರು, ಮಾ. 16 –ಸಂಸದ ವಿ. ಶ್ರೀನಿವಾಸ ಪ್ರಸಾದ್ ಅಭಿನಂದನಾ ಸಮಿತಿ ವತಿಯಿಂದ ವಿ.ಶ್ರೀನಿವಾಸ್ ಪ್ರಸಾದ್ ಅವರು ಚುನಾವಣಾ ರಾಜಕೀಯದಲ್ಲಿ 50 ವರ್ಷ ಪೂರ್ಣಗೊಳಿಸುತ್ತಿರುವ ಹಿನ್ನೆಲೆಯಲ್ಲಿ ನಾಳೆ (ಮಾ. 17) ಬೆಳಗ್ಗೆ 11 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಸಭಾಂಗಣದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರ ಚುನಾವಣಾ ರಾಜಕೀಯ ಸುವರ್ಣ ಮಹೋತ್ಸವ ಅಭಿನಂದನಾ ಸಮಾರಂಭವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಮಾಜಿ ಮುಖ್ಯಮಂತ್ರಿಗಳು ಹಾಗೂ ಮಾಜಿ ವಿದೇಶಾಂಗ ವ್ಯವಹಾರಗಳ ಸಚಿವರಾದ ಎಸ್.ಎಂ.ಕೃಷ್ಣ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳೂ ಆದ ಮಾಜಿ ಕೇಂದ್ರ ಸಚಿವ ಡಾ. ಎಂ. ವೀರಪ್ಪ ಮೊಯ್ಲಿ ಭಾಗವಹಿಸುವರು.

ನಾಡಿನ ಹಿರಿಯ ಸಾಹಿತಿಗಳು ಹಾಗೂ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಡಾ. ಚಂದ್ರಶೇಖರ ಕಂಬಾರ ಅವರು 'ಸ್ವಾಭಿಮಾನಿ ನೆನಪುಗಳು' ಅಭಿನಂದನಾ ಗ್ರಂಥ ಬಿಡುಗಡೆ ಮಾಡುವರು. ಹಿರಿಯ ಸಮಾಜವಾದಿ ಕಾಗೋಡು ತಿಮ್ಮಪ್ಪ ಅಧ್ಯಕ್ಷತೆ ವಹಿಸಲಿದ್ದು, ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ ಉಪಸ್ಥಿತರಿರುವರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.3.2024 ಭಾನುವಾರ, ಮಳೆ ನಕ್ಷತ್ರ: ಉತ್ತರಾಭಾದ್ರ 17.03.2024 ರಿಂದ 30.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಪಾಲ್ಗುಣ ಮಾಸ, ಶುಕ್ಲ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ಮೃಗಶಿರ, ರಾಹುಕಾಲ: ಸಂಜೆ 4.30 ರಿಂದ 6ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ಶ್ರೀ ವಿನಾಯಕ ದೇವಾಲಯ ಸೇವಾ ಸಂಸ್ಥೆ, ಲಯನ್ಸ್ ಕ್ಲಬ್ ಆಫ್ ಮೈಸೂರು ಹೆರಿಟೇಜ್ ಸಿಟಿ, ಭಾರತ್ ಕ್ಯಾನ್ಸರ್ ಆಸ್ಪತ್ರೆ, ನಾರಾಯಣ ಹೃದಯಾಲಯ, ಅನ್ನಪೂರ್ಣ ಕಣ್ಣಿನ ಆಸ್ಪತ್ರೆ :** ಮೆಗಾ ಆರೋಗ್ಯ ತಪಾಸಣಾ ಶಿಬಿರ, ಸ್ಥಳ:ಉಲ್ಬ ಚಾರಿಟಿ ಹಾಸ್ಪಿಟಲ್ ಮತ್ತು ಸಂತ ಆಲ್ಫೋನ್ಸ್ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆ, ಬೆಳಗ್ಗೆ 9.30 ರಿಂದ.

■ **ಶ್ರೀ ದಂಡಿನ ಮಾರಮ್ಮನವರ ಪೂಜಾ ಮಹೋತ್ಸವ ಸಮಿತಿ:** ಶ್ರೀ ಮನೆಮಂಚಮ್ಮ ಶ್ರೀ ದಂಡಿನ ಮಾರಮ್ಮ, ಬಿಸಿಲು ಮಾರಮ್ಮ ಜಾತ್ರಾ ಮಹೋತ್ಸವ, ಸ್ಥಳ: ದಂಡಿನಮಾರಮ್ಮ ದೇವಸ್ಥಾನ, ಮೈಸೂರು–ಬೆಂಗಳೂರು ರಸ್ತೆ

■ **ಮದರ್‌ಹುಡ್ ಫರ್ಟಿಲಿಟಿ ಮತ್ತು ಐವಿಎಫ್ ಸೆಂಟರ್ :** ಉಚಿತ ಫರ್ಟಿಲಿಟಿ ಮತ್ತು ಐವಿಎಫ್ ಸಮಾಲೋಚನೆ, ಸ್ಥಳ: ಮದರ್‌ಹುಡ್ ಹಾಸ್ಪಿಟಲ್, ಬೆಳಗ್ಗೆ 10 ರಿಂದ.

■ **ಪೀಪಲ್ಸ್ ಫಾರ್ ಅನಿಮಲ್ಸ್, ಗುಬ್ಬಚ್ಚಿ ಸಂರಕ್ಷಣಾವಾದಿ ಕೋಕಿಲಾ ರಮೇಶ್:** ವಿಶ್ವ ಗುಬ್ಬಚ್ಚಿ ದಿನಾಚರಣೆ ಅಂಗವಾಗಿ ಚಿತ್ರಕಲಾ ಸ್ಪರ್ಧೆ, ಸ್ಥಳ: ಪೀಪಲ್ ಫಾರ್ ಅನಿಮಲ್ಸ್, ಬೋಗಾದಿ, ಬೆಳಗ್ಗೆ 10 ರಿಂದ.

■ **ಮೈಸೂರು ಆರ್ಟ್ ಗ್ಯಾಲರಿ :** ಕಲಾವಿದೆ: ರಾಣಿ ಎಸ್. ನಾಗವಾಲ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ರಾಮಾನುಜ ರಸ್ತೆ, ಬೆಳಗ್ಗೆ 10.30ರಿಂದ.

■ **ಪುನೀತ್ ರಾಜ್‌ಕುಮಾರ್ ಸಮಾಜ ಸೇವಾ ಸಮಿತಿ:** ಡಾ.ಪುನೀತ್ ರಾಜ್‌ಕುಮಾರ್‌ರವರ ಹುಟ್ಟುಹಬ್ಬದ ಪ್ರಯುಕ್ತ ಉಚಿತ ಸಾಮೂಹಿಕ ವಿವಾಹ, ಸಾನ್ನಿಧ್ಯ: ಶ್ರೀ ನಾರಾಯಣಗುರು ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ರೇಣುಕಾನಂದ ಸ್ವಾಮೀಜಿ, ಉದ್ಘಾಟನೆ: ಚಿತ್ರನಟ ಚಿಕ್ಕಣ್ಣ, ಅಧ್ಯಕ್ಷತೆ: ಶಾಸಕ ಹರೀಶ್ ಗೌಡ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಆಯೂಬ್ ಖಾನ್, ಮೈಸೂರು–ಚಾಮರಾಜನಗರ ಜಿಲ್ಲಾ ಆರ್ಯ ಈಡಿಗರ ಸಂಘದ ಅಧ್ಯಕ್ಷ ಎಂ.ಕೆ. ಪೋತರಾಜು, ಎಂಸಿಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಎಸ್.ಚಂದ್ರಶೇಖರ್, ಉದ್ಯಮಿ ಎನ್.ಸಂದೇಶ, ಆಶಯ ನುಡಿ: ಗೀತ ರಚನೆಕಾರ ಪ್ರೊ.ಲೋಲಾಕ್ಷಿ, ಸ್ಥಳ: ದಸರಾ ವಸ್ತುಪ್ರದರ್ಶನ ಆವರಣ, ಬೆಳಗ್ಗೆ 10.30 ರಿಂದ.

■ **ಪುನೀತ್ ರಾಜ್‌ಕುಮಾರ್ ತಂಡ:** ಡಾ. ಪುನೀತ್ ರಾಜ್‌ಕುಮಾರ್ ಹುಟ್ಟುಹಬ್ಬದ ಪ್ರಯುಕ್ತ ಚಿತ್ರ ಬಿಡಿಸುವ ಸ್ಪರ್ಧೆ, ಸ್ಥಳ: ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ.

■ **ಕರ್ನಾಟಕ ರಾಜ್ಯ ನಾಯಕರ ಯುವ ಸೇನೆ :** ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಅತ್ಯುನ್ನತ ದರ್ಜೆಯಲ್ಲಿ ತೇರ್ಗಡೆಯಾದ ನಾಯಕ ಜನಾಂಗದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಸ್ಥಳ: ವಾಲ್ಮೀಕಿ ಭವನ, ವಿಜಯನಗರ 2ನೇ ಹಂತ, ಬೆಳಗ್ಗೆ 11ಕ್ಕೆ.

■ **ಸಂಸದ ವಿ. ಶ್ರೀನಿವಾಸಪ್ರಸಾದ್ ಅಭಿನಂದನಾ ಸಮಿತಿ :** ಸಂಸದ ವಿ. ಶ್ರೀನಿವಾಸ ಪ್ರಸಾದ್ ಚುನಾವಣಾ ರಾಜಕೀಯ ಸುವರ್ಣ ಮಹೋತ್ಸವ ಅಭಿನಂದನಾ ಸಮಾರಂಭ, ಉದ್ಘಾಟನೆ : ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ, ಮುಖ್ಯ ಅತಿಥಿಗಳು : ಮಾಜಿ ಮುಖ್ಯಮಂತ್ರಿ ಡಾ. ಎಂ. ವೀರಪ್ಪ ಮೊಯ್ಲಿ, 'ಸ್ವಾಭಿಮಾನಿ ನೆನಪುಗಳು' ಅಭಿನಂದನಾ ಗ್ರಂಥ ಬಿಡುಗಡೆ : ಹಿರಿಯ ಸಾಹಿತಿ ಡಾ. ಚಂದ್ರಶೇಖರ ಕಂಬಾರ, ಅಭಿನಂದಿತರು: ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದ ವಿ. ಶ್ರೀನಿವಾಸ ಪ್ರಸಾದ್, ಅಧ್ಯಕ್ಷತೆ : ಹಿರಿಯ ಸಮಾಜವಾದಿ ಕಾಗೋಡು ತಿಮ್ಮಪ್ಪ, ಉಪಸ್ಥಿತರು : ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ, ಸ್ಥಳ: ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯ ಘಟಿಕೋತ್ಸವ ಸಭಾಂಗಣ, ಬೆಳಗ್ಗೆ 11ಕ್ಕೆ.

■ **ರಂಗರತ್ನಾಕರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ವೃತ್ತಿರಂಗಭೂಮಿ ನಾಟಕ ಪುಸ್ತಕಗಳ ಬಿಡುಗಡೆ ಮತ್ತು ಕೆ. ಹಿರಣ್ಣಯ್ಯ ವಿರಚಿತ 'ಎಚ್ಚಮನಾಯಕ' ಐತಿಹಾಸಿಕ ನಾಟಕ ಪ್ರದರ್ಶನ, ಉದ್ಘಾಟನೆ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಅಧ್ಯಕ್ಷತೆ: ಕನ್ನಡ ವಿಕಾಸ, ಶೈಕ್ಷಣಿಕ, ಸಾಮಾಜಿಕ ಸಾಂಸ್ಕೃತಿಕ ಸಂಸ್ಥೆ ಕಾರ್ಯದರ್ಶಿ ಪ್ರೊ. ಎಚ್.ಜಿ.ಕೃಷ್ಣಪ್ಪ, ಮುಖ್ಯ ಅತಿಥಿಗಳು : ಕನ್ನಡ ವಿಕಾಸ, ಶೈಕ್ಷಣಿಕ, ಸಾಮಾಜಿಕ ಸಾಂಸ್ಕೃತಿಕ ಸಂಸ್ಥೆ ಉಪಾಧ್ಯಕ್ಷ ಸ.ರ. ಸುದರ್ಶನ, ಸ್ಥಳ: ರಮಾಗೋವಿಂದ ರಂಗಮಂದಿರ, ನೃಪತುಂಗ ಶಾಲಾ ಆವರಣ, ರಾಮಕೃಷ್ಣನಗರ, ಸಂಜೆ 5.30ಕ್ಕೆ.

■ **ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ :** ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರ, ಬೆಳಗ್ಗೆ 6.30ಕ್ಕೆ ಧ್ವಜಾರೋಹಣ : ಸೇಂಟ್ ಜೋಸೆಫ್ ಪ್ರಥಮ ದರ್ಜೆ ಕಾಲೇಜು ಪ್ರಿನ್ಸಿಪಾಲ್ ಹೆಚ್.ಎನ್. ಚಂದ್ರಶೇಖರ, ಸಂಜೆ 4ಕ್ಕೆ ಸಮರ್ಥನಂ ಅಂಗವಿಕಲರ ಸಂಸ್ಥೆ ವಿಭಾಗೀಯ ಸಂಯೋಜಕ ಎಂ. ಶಿವರಾಜು ಅವರಿಂದ ವಿಶೇಷಚೇತನರಿಗೆ ದೊರೆಯುವ ಸೌಲಭ್ಯಗಳು ಕುರಿತು ಉಪನ್ಯಾಸ, ಅಧ್ಯಕ್ಷತೆ: ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಮುಖ್ಯಸ್ಥ ಕೆ. ಮಹದೇವಸ್ವಾಮಿ, ಸ್ಥಳ:ಪಾಲಿಟೆಕ್ನಿಕ್ ಆವರಣ.

■ **ಡಾ.ಪುನೀತ್ ರಾಜ್‌ಕುಮಾರ್ ಗೆಳೆಯರ ಬಳಗ:** ಡಾ.ಪುನೀತ್ ರಾಜ್‌ಕುಮಾರ್ ಹುಟ್ಟುಹಬ್ಬ ಆಚರಣೆ, ಉಪಸ್ಥಿತರು: ಮುಖಂಡರಾದ ಮಹದೇವು, ಕೆ.ಎಸ್.ಮುರುಳಿ, ಹಿನಕಲ್ ತಮ್ಮಣ್ಣೇಗೌಡ, ಕೃಷ್ಣಮೂರ್ತಿ, ಸಾದನಹಳ್ಳಿ ನಾರಾಯಣ್, ಡಾ.ರಾಜು, ರಾಜೇಶ್, ಸ್ಥಳ: ಬಳಗದ ಆವರಣ, ಬಿ.ಎಂ.ಶ್ರೀನಗರ, ಸಂಜೆ 5.30ಕ್ಕೆ

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ :** ತಿಂಗಳ ಸಂಗೀತ ಕಾರ್ಯಕ್ರಮ, ವಿದ್ವಾನ್ ಸಮೃದ್ಧ್ ಶ್ರೀನಿವಾಸ್ ಅವರಿಂದ ವೇಣುವಾದನ, ವಿದುಷಿ ಸಿ.ವಿ. ಶ್ರುತಿ–ಪಿಟೀಲು, ವಿದ್ವಾನ್ ಪಿ. ನಟರಾಜ್–ಮೃದಂಗ, ವಿದ್ವಾನ್ ಎಸ್. ಮಂಜುನಾಥ್–ಘಟಂ, ಸ್ಥಳ: ಶ್ರೀ ವಿದ್ಯಾಭಾರತಿ ಪ್ರಾರ್ಥನಾ ಮಂದಿರ, ಶ್ರೀ ಚಂದ್ರಮೌಳೀಶ್ವರ ದೇವಸ್ಥಾನದ ಆವರಣ, ವಿ.ವಿ. ಮೊಹಲ್ಲಾ, ಸಂಜೆ 6ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ:** ಶ್ರೀ ರಾಮಕೃಷ್ಣ ಪರಮಹಂಸರ 189ನೇ ಜನ್ಮದಿನೋತ್ಸವ, ಆಶ್ರಮದ ವಾರ್ಷಿಕೋತ್ಸವ, ಸಂಜೆ 5.30ರಿಂದ ಸಂಧ್ಯಾರತಿ, ಸಂಜೆ 5.45 ರಿಂದ ವಿದ್ವಾನ್ ಗುರುರಾಜ್ ಮತ್ತು ತಂಡದವರಿಂದ ದಿವ್ಯತ್ರಯರ ಗಾನರಸಾಮೃತ ಕುರಿತು ಉಪನ್ಯಾಸ, ಸಂಜೆ 6.45 ರಿಂದ ನಂದೀಶ ಅವರಿಂದ ಕುವೆಂಪುರವರ ರಾಮಾಯಣ ದರ್ಶನಂ ವಾಚನ ಮತ್ತು ವ್ಯಾಖ್ಯಾನ, ಸ್ಥಳ: ಶ್ರೀರಾಮಕೃಷ್ಣ ಆಶ್ರಮ, ಯಾದವಗಿರಿ.

■ **ರಂಗಾಯಣ :** ವಾರಾಂತ್ಯ ರಂಗ ಪ್ರದರ್ಶನ, ರಂಗಾಯಣದ ರೆಪರ್ಟರಿ ಕಲಾವಿದರಿಂದ ಸಿ. ಬಸವಲಿಂಗಯ್ಯನವರ ಪರಿಕಲ್ಪನೆ ಮತ್ತು ನಿರ್ದೇಶನದಲ್ಲಿ ಗೋರ್‌ಮಾಟಿ ನಾಟಕ ಪ್ರದರ್ಶನ, ಸ್ಥಳ: ಭೂಮಿಗೀತ, ರಂಗಾಯಣ, ಸಂಜೆ ಸಂಜೆ 6.30ಕ್ಕೆ.

ಹಾರೋಹಳ್ಳಿ ಗ್ರಾಮ (ಮೈಸೂರು ತಾಲೂಕು)

■ **ಮೈಸೂರು ವಿಶ್ವವಿದ್ಯಾನಿಲಯ, ರಾಷ್ಟ್ರೀಯ ಸೇವಾ ಯೋಜನೆ ಮತ್ತು ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು:** ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭ, ಸಮಾರೋಪ ಭಾಷಣ : ಹಿರಿಯ ತಜ್ಞ ಡಾ. ಮಾಲೇಗೌಡ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಮುಖ್ಯ ಅತಿಥಿಗಳು: ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಪಿ. ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣವರ್, ಟಿ. ನಾಗರಾಜು, ಆರ್. ಸುರೇಶ್‌ಕುಮಾರ್, ಕಾಲೇಜು ಪ್ರಿನ್ಸಿಪಾಲ್ ಡಾ.ಎಸ್.ಮರೀಗೌಡ, ಹಾರೋಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಶ್ರೀಮತಿ ಜ್ಯೋತಿ ಮಹದೇವನಾಯಕ, ಗ್ರಾಪಂ ಸದಸ್ಯರಾದ ಹೆಚ್.ಎಂ. ಮೂರ್ತಿ, ಶ್ರೀಮತಿ ಮಮತ ಮಹದೇವಸ್ವಾಮಿ, ನಟರಾಜು, ರೇವಣ್ಣ, ಶ್ರೀಮತಿ ಲಕ್ಷ್ಮಿ ಚಲುವರಾಜು, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹಾರೋಹಳ್ಳಿ ಗ್ರಾಮ, ಮೈಸೂರು ತಾಲೂಕು, ಬೆಳಗ್ಗೆ 11.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಮನೋಹರ್ ಪ್ರಸಾದ್, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಒಡಹುಟ್ಟಿನ ನುಡಿಗಳು–ಕನ್ನಡದ ಒಡನಾಡಿ ಭಾಷೆಗಳ ಕುರಿತ ಬಾನುಲಿ ಸರಣಿ, ಲೇಖನ ಹಾಗೂ ಪ್ರಸ್ತುತಿ–ಡಾ.ತೀತೀರ ರೇಖಾ ವಸಂತ, 6.40 ಪದ ಸಂಸ್ಕೃತಿ, ಪ್ರಸ್ತುತಿ–ಡಾ.ಟಿ.ವಿ.ಸತ್ಯನಾರಾಯಣ, 6.50 ರೈತರಿಗೆ ಸಲಹೆ, 9.40 ನಮ್ಮ ಆರೋಗ್ಯ–ವಿಶ್ವ ಬಾಯಿ ಆರೋಗ್ಯ ದಿನಾಚರಣೆ ಸಂಬಂಧವಾಗಿ ವಿಶೇಷ ಕಾರ್ಯಕ್ರಮ–ಮಕ್ಕಳಲ್ಲಿ ಕಂಡುಬರುವ ವಿವಿಧ ಬಗೆಯ ಬಾಯಿ ಆರೋಗ್ಯದ ಸಮಸ್ಯೆಗಳು ಮತ್ತು ಚಿಕಿತ್ಸೆ ಕುರಿತು ಡಾ.ಸ್ಮಿತಾ ಜೆ.ಡಿ. ಅವರೊಂದಿಗೆ ಮಾತುಕತೆ, 10.00 ಕೇಳಿಗಿಳಿಗಳೇ–ಅಮೃತ ವಿದ್ಯಾಲಯಂ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 10.30 ಮಕ್ಕಳ ಮಂಟಪ–ನಂದಗೋಕುಲ, ಪ್ರಸ್ತುತಿ– ಕೆ.ಬಿ.ಮೀನಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30ದೇವರನಾಮ–ಡಾ.ಆರ್.ಎನ್.ಶ್ರೀಲತಾ, ಎಸ್. ಶಂಕರ್, 12.45 ಜನಪದ ಸಂಗೀತ–ಹೆಗ್ಗಡಹಳ್ಳಿ ಕೃಷ್ಣೇಗೌಡ ಹಾಗೂ ಸಂಗಡಿಗರು, 1.20 ಭಾವಗೀತೆ–ಎ.ಜೆ. ದಿವ್ಯಾ, 2.35 ಕನ್ನಡ ಚಲನಚಿತ್ರ ಧ್ವನಿ ವಾಹಿನಿ 'ಬಂಗಾರದ ಮನುಷ್ಯ' 3.40 ಯಕ್ಷಗಾನ ತಾಳ ಮದ್ದಲೆ, ಪ್ರಸಂಗ– ಸೀತಾ ಪರಿತ್ಯಾಗ, ಪ್ರಸ್ತುತಿ– ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕೃಪಾ ಪೋಷಿತ ಯಕ್ಷಗಾನ ಮಂಡಳಿಯ ಕಲಾವಿದರು, 6.50 ಕೃಷಿರಂಗ–ತೋರಣ ಹೂರಣ, ಪ್ರಸ್ತುತಿ–ಎನ್. ಕೇಶವಮೂರ್ತಿ, ಆರ್.ಲೋಕೇಶ್ವರಿ, 8.00 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಪರಿಸರ ಪ್ರೀತಿಯ MAN ಮನು–ಅವರೊಂದಿಗೆ ಸಂವಾದ ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 10.00 ರವಿವಾಸರೀಯ ಅಖಿಲ ಭಾರತೀಯ ಸಂಗೀತ ಸಭಾ–ವಿದುಷಿ ಅಂಜನಾ ನಾಥ್–ಗಾಯನ



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಮಾರ್ಚ್ 17 ಭಾನುವಾರ 2024

ಸಂಪುಟ: 44 | ಸಂಚಿಕೆ: 328 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಲೋಕ ಸಮರಕ್ಕೆ ಮುಹೂರ್ತ

ಏಳು ಹಂತದಲ್ಲಿ ಚುನಾವಣೆ



ರಾಜೀವ್‌ಕುಮಾರ್

ಜೂ.4 ಫಲಿತಾಂಶ

ಏ. 19 (102 ಕ್ಷೇತ್ರ) ಏ. 26 (89 ಕ್ಷೇತ್ರ)
ಮೇ 7 (94 ಕ್ಷೇತ್ರ) ಮೇ 13 (96 ಕ್ಷೇತ್ರ)
ಮೇ 20 (49 ಕ್ಷೇತ್ರ) ಮೇ 25 (57 ಕ್ಷೇತ್ರ)
ಜೂ.1 (57 ಕ್ಷೇತ್ರ)

● ದೇಶದ 97 ಕೋಟಿ ಮತದಾರರಿಂದ ಹಕ್ಕು ಚಲಾವಣೆ; ಇವರಲ್ಲಿ 18–19 ವಯೋಮಾನದ 1.80 ಕೋಟಿ ಮತದಾರರಿದ್ದಾರೆ ● 85 ವರ್ಷ ಮೇಲ್ಪಟ್ಟವರು, ವಿಶೇಷಚೇತನರಿಗೆ ಮನೆಯಲ್ಲೇ ಮತದಾನ ವ್ಯವಸ್ಥೆ: 12 ರಾಜ್ಯಗಳಲ್ಲಿ ನಾರಿಯರ ಪ್ರಾಬಲ್ಯ! ● ಅಭ್ಯರ್ಥಿಗಳು ಕ್ರಿಮಿನಲ್ ಪ್ರಕರಣಗಳ ಮಾಹಿತಿ ನೀಡುವುದು ಕಡ್ಡಾಯ; ಅಪರಾಧ ತಡೆಗೆ ಡ್ರೋಣ್ ಬಳಕೆ

ನವದೆಹಲಿ, ಮಾ.16– **ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ ಭಾರತದ 18ನೇ ಲೋಕಸಭೆ ಚುನಾವಣೆ ಏ.19ರಿಂದ ಜೂನ್ 1ರವರೆಗೆ ಏಳು ಹಂತಗಳಲ್ಲಿ ನಡೆಯಲಿದ್ದು, ಜೂ.4 ಫಲಿತಾಂಶ ಪ್ರಕಟಗೊಳ್ಳಲಿದೆ.**

ನವದೆಹಲಿಯ ವಿಜ್ಞಾನ ಭವನದಲ್ಲಿ ಕಿಕ್ಕಿರಿದ ಪತ್ರಿಕಾಗೋಷ್ಠಿಯಲ್ಲಿ ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತ ರಾಜೀವ್‌ಕುಮಾರ್ ಲೋಕಸಭಾ ಚುನಾವಣೆಯ ದಿನಾಂಕವನ್ನು ಪ್ರಕಟಿಸಿದರು.

543 ಲೋಕಸಭಾ ಕ್ಷೇತ್ರಗಳಿಗೆ ಒಟ್ಟು ಏಳು ಹಂತದಲ್ಲಿ ಮತದಾನ ನಡೆಯಲಿದ್ದು, ಮೊದಲ ಹಂತದ ಏ.19 (102 ಕ್ಷೇತ್ರ), ಎರಡನೇ ಹಂತದ ಏ.26(89 ಕ್ಷೇತ್ರ), ಮೂರನೇ ಹಂತ ಮೇ 7(94 ಕ್ಷೇತ್ರ), ನಾಲ್ಕನೇ ಹಂತ ಮೇ 13(96 ಕ್ಷೇತ್ರ), ಐದನೇ ಹಂತ ಮೇ 20(49 ಕ್ಷೇತ್ರ), ಆರನೇ ಹಂತ ಮೇ 25(57 ಕ್ಷೇತ್ರ), ಕೊನೆಯ ಏಳನೇ ಹಂತದ ಮತದಾನ ಜೂನ್ 1 (57 ಕ್ಷೇತ್ರ)ರಂದು ನಡೆಯಲಿದೆ.

ಒಂದೇ ಹಂತ: ಅರುಣಾಚಲ ಪ್ರದೇಶ, ಅಂಡಮಾನ್ ನಿಕೋಬಾರ್, ಛತ್ತೀಸ್‌ಘಡ, ದಾದರ್ ಮತ್ತು ಹವೇಲಿ, ದೆಹಲಿ, ಗೋವಾ, ಗುಜರಾತ್, ಹಿಮಾಚಲ ಪ್ರದೇಶ, ಹರಿಯಾಣ, ಕೇರಳ, ಲಕ್ಷದ್ವೀಪ, ಲಡಾಖ್, ಮಿಜೋರಾಂ, ಮೇಘಾಲಯ, ನಾಗಲ್ಯಾಂಡ್, ಪುದುಚೇರಿ, ಸಿಕ್ಕಿಂ, ತಮಿಳುನಾಡು, ಪಂಜಾಬ್, ತೆಲಂಗಾಣ, ಉತ್ತರ ಖಂಡ್‌ನಲ್ಲಿ ಒಂದೇ ಹಂತದ ಮತದಾನ ನಡೆಯಲಿದೆ. ● 7ನೇ ಪುಟಕ್ಕೆ



ಕರ್ನಾಟಕದಲ್ಲಿ ಎರಡು ಹಂತದಲ್ಲಿ ಚುನಾವಣೆ

ಏ.26, ಮೇ 7ರಂದು ತಲಾ 14 ಕ್ಷೇತ್ರದಲ್ಲಿ ಮತದಾನ

■ ಮೊದಲ ಹಂತಕ್ಕೆ ಮಾ.28ರಂದು ನಾಮಪತ್ರ ಸಲ್ಲಿಕೆ ಆರಂಭ; ಏ.4 ಕೊನೆ ದಿನ, ಏ.5 ಪರಿಶೀಲನೆ, ಏ.8 ಹಿಂಪಡೆಯಲು ಕಡೇ ದಿನ ■ ಎರಡನೇ ಹಂತಕ್ಕೆ ಏ.12ರಿಂದ ನಾಮಪತ್ರ ಸಲ್ಲಿಕೆ, ಏ.19 ಕಡೇ ದಿನ, ಏ.20 ಪರಿಶೀಲನೆ; ಏ.22 ಹಿಂಪಡೆಯಲು ಕಡೇ ದಿನ





ರಾಜ್ಯದ ಒಟ್ಟು ಮತದಾರರು	–5,37,85,815
ಪುರುಷ	–2,69,33,750
ಮಹಿಳಾ	–2,68,47,145
ಇತರೆ ಮತದಾರರು	–4,920
ಒಟ್ಟು ಮತಗಟ್ಟೆಗಳ ಸಂಖ್ಯೆ	–58,834

ಮೊದಲ ಹಂತದ ಚುನಾವಣೆ	ಎರಡನೇ ಹಂತದ ಚುನಾವಣೆ
■ ಬೆಂಗಳೂರು ಉತ್ತರ	■ ಬೀದರ್
■ ಬೆಂಗಳೂರು ದಕ್ಷಿಣ	■ ಚಿಕ್ಕೋಡಿ
■ ಬೆಂಗಳೂರು ಕೇಂದ್ರ	■ ಬೆಳಗಾವಿ
■ ಬೆಂಗಳೂರು ಗ್ರಾಮಾಂತರ	■ ಕಲಬುರಗಿ
■ ತುಮಕೂರು	■ ವಿಜಯಪುರ
■ ಚಿಕ್ಕಬಳ್ಳಾಪುರ	■ ಬಾಗಲಕೋಟೆ
■ ಕೋಲಾರ	■ ಕೊಪ್ಪಳ
■ ಮಂಡ್ಯ	■ ರಾಯಚೂರು
■ ಹಾಸನ	■ ಬಳ್ಳಾರಿ
■ ಉಡುಪಿ–ಚಿಕ್ಕಮಗಳೂರು	■ ಹಾವೇರಿ–ಗದಗ
■ ಚಿತ್ರದುರ್ಗ	■ ದಾವಣಗೆರೆ
■ ಮೈಸೂರು–ಕೊಡಗು	■ ಶಿವಮೊಗ್ಗ
■ ಚಾಮರಾಜನಗರ	■ ಧಾರವಾಡ
■ ದಕ್ಷಿಣ ಕನ್ನಡ	■ ಉತ್ತರ ಕನ್ನಡ

ಬೆಂಗಳೂರು, ಮಾ. 16(ಕೆಎಂಶಿ)– **ಲೋಕಸಭಾ ಚುನಾವಣೆ ದಿನಾಂಕಗಳು ಘೋಷಣೆಯಾಗಿದ್ದು, ಕರ್ನಾಟಕದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ. ಏಪ್ರಿಲ್ 26ರಂದು ಮೊದಲ ಹಂತ ಮತ್ತು ಮೇ 7ರಂದು ಎರಡನೇ ಹಂತ. ಜೂನ್ 4ಕ್ಕೆ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ.**

ಕರ್ನಾಟಕದಲ್ಲಿ ಮೊದಲ ಹಂತದಲ್ಲಿ ದಕ್ಷಿಣ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಿಗೆ ಏಪ್ರಿಲ್ 26ರಂದು, ಉತ್ತರ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಿಗೆ ಮೇ 7 ರಂದು ಮತದಾನ ನಡೆಯಲಿದೆ.

ಮೊದಲ ಹಂತದಲ್ಲಿ ಏಪ್ರಿಲ್ 26 ರಂದು ಚುನಾವಣೆ ನಡೆಯಲಿರುವ ಕ್ಷೇತ್ರಗಳಲ್ಲಿ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಕೇಂದ್ರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮಂಡ್ಯ, ಹಾಸನ, ಉಡುಪಿ–ಚಿಕ್ಕಮಗಳೂರು, ಚಿತ್ರದುರ್ಗ, ಮೈಸೂರು–ಕೊಡಗು, ಚಾಮರಾಜನಗರ ಮತ್ತು ದಕ್ಷಿಣ ಕನ್ನಡ ಸೇರಿವೆ.

ಮೊದಲ ಹಂತದ ಚುನಾವಣೆಗೆ ಅಧಿಸೂಚನೆ ಮಾರ್ಚ್ 28ರಂದು ಹೊರಬೀಳಲಿದ್ದು ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಗೆ ಚಾಲನೆ ದೊರೆಯಲಿದೆ. ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 4 ಕೊನೆಯ ದಿನವಾಗಿದೆ. ನಾಮಪತ್ರ ಪರಿಶೀಲನೆ ಏಪ್ರಿಲ್ 5ರಂದು ನಡೆಯಲಿದ್ದು, ನಾಮಪತ್ರ ಹಿಂತೆಗೆದುಕೊಳ್ಳಲು ಏಪ್ರಿಲ್ 8 ಕೊನೆಯ ದಿನವಾಗಿದೆ. ಏಪ್ರಿಲ್ 26 ರಂದು ಮತದಾನ ನಿಗದಿಯಾಗಿದೆ.

ಎರಡನೇ ಹಂತದಲ್ಲಿ ಮೇ 7ರಂದು ಚುನಾವಣೆ ನಡೆಯಲಿರುವ ಕ್ಷೇತ್ರಗಳಲ್ಲಿ ಬೀದರ್, ಚಿಕ್ಕೋಡಿ, ಬೆಳಗಾವಿ, ಕಲಬುರಗಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ರಾಯಚೂರು, ಬಳ್ಳಾರಿ, ಹಾವೇರಿ–ಗದಗ, ದಾವಣಗೆರೆ, ಶಿವಮೊಗ್ಗ, ಧಾರವಾಡ, ಉತ್ತರ ಕನ್ನಡ ಸೇರಿವೆ.

ಎರಡನೇ ಹಂತದಲ್ಲಿ ಕೊಪ್ಪಳ ಲೋಕಸಭಾ ಕ್ಷೇತ್ರದ ಜೊತೆಗೆ ಶಾಸಕ ರಾಜಾವೆಂಕಟಪ್ಪ ನಾಯಕ ಅವರ ನಿಧನದಿಂದ ತೆರವಾಗಿರುವ ಸುರಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯೂ ನಡೆಯಲಿದೆ. ಕರ್ನಾಟಕದಲ್ಲಿ ನಡೆಯಲಿರುವ ಎರಡನೇ ಹಂತದ ಚುನಾವಣೆಗೆ ಅಧಿಸೂಚನೆ ಏಪ್ರಿಲ್ 12 ರಂದು ಹೊರಬೀಳಲಿದ್ದು, ನಾಮಪತ್ರ ಸಲ್ಲಿಕೆಗೆ ಏಪ್ರಿಲ್ 19 ಕೊನೆಯ ದಿನವಾಗಿದೆ. ನಾಮಪತ್ರ ಪರಿಶೀಲನೆ ಏಪ್ರಿಲ್ 20 ರಂದು ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಏಪ್ರಿಲ್ 22 ಕೊನೆಯ ದಿನವಾಗಿದೆ. ಮೇ 7ರಂದು ಮತದಾನ ನಡೆಯಲಿದೆ.

ರಾಷ್ಟ್ರಾದ್ಯಂತ 543 ಲೋಕಸಭಾ ಕ್ಷೇತ್ರಗಳಿಗೆ ಒಟ್ಟು ಏಳು ಹಂತಗಳಲ್ಲಿ ಚುನಾವಣೆ ನಡೆಯಲಿದ್ದು, ಮೊದಲನೇ ಹಂತ ಏಪ್ರಿಲ್ 19 ಮತ್ತು ಎರಡನೇ ಹಂತ 26, ಮೂರನೇ ಹಂತ ಮೇ 7, ನಾಲ್ಕನೇ ಹಂತ ಮೇ 13, ಐದನೇ ಹಂತ ಮೇ 20, ಆರನೇ ಹಂತ ಮೇ 25 ಮತ್ತು ಏಳನೇ ಹಾಗೂ ಕೊನೆಯ ಹಂತ ಜೂನ್ 1ರಂದು ಮತದಾನ ನಡೆಯಲಿದೆ. ಒಟ್ಟು 96.8 ಕೋಟಿ ● 7ನೇ ಪುಟಕ್ಕೆ



20X30 PLOT
Pay ₹ 3 Lakhs
2 BHK HOUSE
Pay ₹ 5 Lakhs
BALANCE ▸ EASY EMI
PRM/KA/RERA/1268/378/PR/200117/003188
Yesh 9538885514

ಮೈಸೂರು–ಕೊಡಗು ಕ್ಷೇತ್ರದಲ್ಲಿ ಏ.26ರ ಚುನಾವಣೆಗೆ

ನಾವ್ ರೆಡಿ; ಎಲ್ಲಾ ವ್ಯವಸ್ಥೆ ಮಾಡಿದ್ದೇವೆ

● ಮೈಸೂರು ಜಿಲ್ಲಾಡಳಿತ ಸನ್ನದ್ಧ ● ಮತಯಂತ್ರ, ಅಧಿಕಾರಿಗಳ ನೇಮಕವಾಗಿದೆ ● ಮತದಾನದ ಬಗ್ಗೆಯೂ ಸಿದ್ಧತೆ; ವೆಚ್ಚದ ಮೇಲೆ ತೀವ್ರ ನಿಗಾ ● ಮೈಸೂರು ಜಿಲ್ಲಾಧಿಕಾರಿಗಳೂ ಆದ ಡಿಸಿ ಡಾ.ರಾಜೇಂದ್ರ ಮಾಹಿತಿ



ಮೈಸೂರು, ಮಾ.16(ಎಸ್‌ಬಿಡಿ)– ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಲೋಕಸಭಾ ಚುನಾವಣೆ ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ತಿಳಿಸಿದರು.

ಮೈಸೂರು ಜಿಲ್ಲಾ ಪಂಚಾಯಿತಿಯ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಚುನಾವಣೆ ಸಂಬಂಧ ವಿವರ ನೀಡಿ, ಎಲ್ಲಾ ಮತಗಟ್ಟೆಗಳಲ್ಲಿ ಅಗತ್ಯ ಕನಿಷ್ಠ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಸಖಿ ಮತಗಟ್ಟೆಗಳು, ಯುವ ಮತದಾರರ ಮತಗಟ್ಟೆಗಳು, ವಿಶೇಷಚೇತನರ ಮತಗಟ್ಟೆಗಳು, ಎಥ್ನಿಕ್ ಮತಗಟ್ಟೆಗಳು ಹಾಗೂ ಥೀಮ್ ಆಧಾರಿತ ಮತಗಟ್ಟೆಗಳನ್ನು ವಿಶೇಷವಾಗಿ ಸ್ಥಾಪಿಸಲಾಗುತ್ತಿದೆ. ಮತದಾನದ ದಿನ ಮತದಾರರಿಗೆ ಸಹಾಯಕವಾಗುವಂತೆ ಪ್ರತಿ ಮತಗಟ್ಟೆಗಳಲ್ಲೂ ಆಯಾ ವ್ಯಾಪ್ತಿಯ ಬಿಎಲ್‌ಓ ಹಾಗೂ ಸಿಬ್ಬಂದಿಯನ್ನೊಳಗೊಂಡ ಮತದಾರರ ಸಹಾಯಕ ಬೂತ್‌ಗಳನ್ನು ತೆರೆಯಲು ಕ್ರಮ ವಹಿಸಲಾಗಿದೆ ಎಂದರು.

ವಿದ್ಯುನ್ಮಾನ ಮತಯಂತ್ರ: ಮೊದಲ ಹಂತದ ಪರಿಶೀಲನೆಯಲ್ಲಿ 5870 ಬ್ಯಾಲೆಟ್ ಯೂನಿಟ್, 4146 ಕಂಟ್ರೋಲ್ ಯೂನಿಟ್ ಹಾಗೂ 4433 ವಿವಿ ಪ್ಯಾಟ್‌ಗಳು ಸಮರ್ಪಕವಾಗಿರುವುದನ್ನು ಖಚಿತಪಡಿಸಿಕೊಳ್ಳಲಾಗಿದೆ. ಇದರಲ್ಲಿ ತಲಾ 291 ಯೂನಿಟ್‌ಗಳನ್ನು ತರಬೇತಿ ಹಾಗೂ ಜಾಗೃತಿ ಉದ್ದೇಶಕ್ಕಾಗಿ ಉಪ ವಿಭಾಗಾಧಿಕಾರಿಗಳಿಗೆ ವಿತರಿಸಲಾಗಿದ್ದು, ಇನ್ನು 5579 ಬ್ಯಾಲೆಟ್ ಯೂನಿಟ್, ● 7ನೇ ಪುಟಕ್ಕೆ



ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಏ.26ಕ್ಕೆ ಮತದಾನ

ಮುಕ್ತ, ನ್ಯಾಯಸಮ್ಮತದ ಚುನಾವಣೆಗೆ ಜಿಲ್ಲಾಡಳಿತ ಸನ್ನದ್ಧ

ಚಾಮರಾಜನಗರ, ಮಾ.16– ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಏಪ್ರಿಲ್ 26 ರಂದೇ ಮತದಾನ ನಡೆಯಲಿದೆ. ಚುನಾವಣಾ ಪ್ರಕ್ರಿಯೆಗೆ ಜಿಲ್ಲಾಡಳಿತ ಚಾಲನೆ ನೀಡಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪನಾಗ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಲೋಕಸಭಾ ಚುನಾವಣೆ ಸಂಬಂಧ ಅವರು ವಿವರ ನೀಡಿದರು. ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಮಾರ್ಚ್ 28ರಂದು ಅಧಿಸೂಚನೆ ಪ್ರಕಟವಾಗುವುದರೊಂದಿಗೆ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಏಪ್ರಿಲ್ 4 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಏ.5ರಂದು ಪರಿಶೀಲನೆ ನಡೆಯಲಿದೆ. ಏ.8ರಂದು ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕಡೆಯ ದಿನವಾಗಿದೆ. ಏ.26ರಂದು ಮತದಾನ ನಡೆಯಲಿದ್ದು, ಜೂನ್ 4ರಂದು ಮತ ಎಣಿಕೆ ನಡೆಯಲಿದೆ. ಚುನಾವಣಾ ಪ್ರಕ್ರಿಯೆ ಜೂನ್ 6ರಂದು ಪೂರ್ಣಗೊಳ್ಳಲಿದೆ. ಚುನಾವಣೆ ನೀತಿ ಸಂಹಿತೆಯು ತಕ್ಷಣದಿಂದಲೇ ಜಾರಿಗೆ ಬಂದಿದೆ ಎಂದರು.



ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ನಾಮಪತ್ರ ಸ್ವೀಕರಿಸಲಾಗುತ್ತದೆ. ಚಾಮರಾಜನಗರ ಲೋಕಸಭಾ ಕ್ಷೇತ್ರ (ಪ.ಜಾ) ವ್ಯಾಪ್ತಿಗೆ ಹನೂರು, ಕೊಳ್ಳೇಗಾಲ, ಚಾಮರಾಜನಗರ, ಗುಂಡ್ಲುಪೇಟೆ, ಹೆಚ್.ಡಿ. ಕೋಟೆ, ನಂಜನಗೂಡು, ವರುಣ, ಟಿ. ನರಸೀಪುರ ● 9ನೇ ಪುಟಕ್ಕೆ



ನಕ್ಕರೆ ಅದೇ ಸ್ವರ್ಗ

ಬಾಸ್ : ಈ ಕೆಲಸಕ್ಕೆ ನನಗೊಬ್ಬ ಹೊಣೆಗಾರ ವ್ಯಕ್ತಿ ಬೇಕು

ಅರ್ಜಿದಾರ : ಹಾಗಾದರೆ ನನಗಿಂತ ಹೆಚ್ಚು ಅರ್ಹತೆಯುಳ್ಳವರು ಇನ್ನಾರು ಇಲ್ಲ. ನಾನು ಕೆಲಸ ಮಾಡಿದಲ್ಲೆಲ್ಲಾ ತಪ್ಪಾಯಿತು ಎಂದರೆ ನನ್ನನ್ನೇ 'ಹೊಣೆಗಾರ' ಎನ್ನುತ್ತಿದ್ದರು!

ಮೈಸೂರು ಮಿತ್ರ

ಭಾನುವಾರ, 17 ಮಾರ್ಚ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಜ್ಞಾನ, ದರ್ಶನ ಮತ್ತು ತಪಸ್ಸು –ಈ ಮಾರ್ಗವನ್ನು ಸಂಪಾದಿಸಿಕೊಂಡರೆ ಜೀವಿಗಳು ಸದ್ಗತಿ ಪಡೆಯುತ್ತಾರೆ –ಭಗವಾನ್ ಮಹಾವೀರ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಒಟ್ಟಿಗೆ ಉಂಡರೂ ಅವರೆ ಕಾಳು ತಿನ್ನಬೇಡ ಅಂದ್ಹಾಗೆ

ನಿಮ್ಮ ಪತ್ರಗಳು

■ ಡಾ.ಮಂಜುನಾಥ್, ಯದುವೀರ್‌ಗೆ ರಾಜಕೀಯದ ಅವಶ್ಯಕತೆ ಇತ್ತೆ!?



ಡಾ.ಮಂಜುನಾಥ್ ಯದುವೀರ್

ಮಾನ್ಯರೆ,

ವೃತ್ತಿಯಲ್ಲಿ ವೈದ್ಯರಾಗಿ ವೈದ್ಯಕೀಯ ಕ್ಷೇತ್ರದಲ್ಲಿ ಅಪಾರ ಜನ ಮನ್ನಣೆ ಗಳಿಸಿದವರು ಡಾ.ಮಂಜುನಾಥ್. ರಾಜ ಮನೆತನದಲ್ಲಿ ಹುಟ್ಟಿ ಎಲ್ಲರ ಗೌರವಕ್ಕೂ ಪಾತ್ರರಾಗಿರುವ ಯದುವೀರ್–ಇವರಿಬ್ಬರಿಗೂ ರಾಜಕೀಯದ ಅವಶ್ಯಕತೆ ಇತ್ತೆ? ಆಗೊಮ್ಮೆ ನೋಡಿದರೆ ಇಂದಿನ ರಾಜಕೀಯ ಸನ್ನಿವೇಶದಲ್ಲಿ ಖಂಡಿತ ಈ ಕ್ಷೇತ್ರದಲ್ಲಿ ಹೆಸರು ಮಾಡಲು ಸಾಧ್ಯವಿಲ್ಲ. ಈ ಕ್ಷೇತ್ರದಲ್ಲಿ ಒಂದು ಸಣ್ಣ ತಪ್ಪು ನಡೆದರು ಹೆಸರು ಹಾಳಾಗುತ್ತದೆ. ಸಮಾಜ ಸೇವೆ ಮಾಡಲು ವೈದ್ಯಕೀಯ ವೃತ್ತಿ ಸಾಕಾಗುತ್ತಿರಲಿಲ್ಲವೇ. ರಾಜಕೀಯ ರಂಗ ಪ್ರವೇಶ ಮಾಡಿದ ಮೇಲೆ ಪರ– ವಿರೋಧ ಇರುತ್ತದೆ. ಅದನ್ನು ಎದುರಿಸುವುದು ಯದುವೀರ್ ಮತ್ತು ಡಾಕ್ಟರ್‌ಗೆ ಕಷ್ಟಕರ. ಈಗಂತೂ ಮೂರು ಬಿಟ್ಟವ ಊರಿಗೆ ದೊಡ್ಡವ... ಎನ್ನುವ ಹಾಗೆ ಎಲ್ಲವನ್ನು ಬಿಟ್ಟು ರಾಜಕೀಯಕ್ಕೆ ಬರಬೇಕು. ಗುಂಪುಗಾರಿಕೆ, ತಂತ್ರಗಾರಿಕೆ ಎಲ್ಲವನ್ನು ಬಲ್ಲವರಾಗಿರಬೇಕು. ಗೆದ್ದರಷ್ಟೆ ನಿಮಗೆ ಬೆಲೆ, ಇಲ್ಲದಿದ್ದರೆ ಗಳಿಸಿದ್ದು ಹೊಳೆಯಲ್ಲಿ ಹುಣಸೆಹಣ್ಣು ತೊಳೆದಂತೆ ಆಗುತ್ತದೆ.

–ದಡದಹಳ್ಳಿ ರಮೇಶ್, ಚಂದಕವಾಡಿ, ಚಾಮರಾಜನಗರ ಜಿಲ್ಲೆ

■ ಪಾಲಿಕೆ ಅಧಿಕಾರಿಗಳು ಏನು ಮಾಡ್ತಾ ಇದ್ದಾರೆ?



ಮಾನ್ಯರೆ,

ಮೈಸೂರಿನ ಹಲವಾರು ಬಡಾವಣೆಗಳಲ್ಲಿ ಯಾರೂ ವಾಸಿಸದೇ ಮನೆಗಳು ಪಾಳು ಬೀಳುತ್ತಿವೆ. ಇದರಿಂದ ಅಕ್ಕಪಕ್ಕದ ಮನೆಯವರಿಗೆ ತೊಂದರೆಯಾಗುತ್ತಿದೆ. ಹತ್ತಾರು ವರ್ಷಗಳಿಂದ ಪಾಳು ಬಿದ್ದಿರುವ ಮನೆಯ ಮಾಲೀಕರನ್ನು ಪತ್ತೆ ಮಾಡಿ ಆ ಮನೆಗಳನ್ನು ಸುವ್ಯವಸ್ಥಿತವಾಗಿಟ್ಟುಕೊಳ್ಳುವಂತೆ ಮೈಸೂರು ಮಹಾನಗರ ಪಾಲಿಕೆ ತಾಕೀತು ಮಾಡಬೇಕು. ನಗರದ ಸೌಂದರ್ಯಕ್ಕೂ ಧಕ್ಕೆ ತರುತ್ತಿರುವ ಇಂತಹ ಮನೆಗಳ ಬಗ್ಗೆ ಒಂದು ಸರ್ವೆ ಮಾಡಿ ಪಾಲಿಕೆಯ ನಿಯಮಾವಳಿಗಳನ್ವಯ ಅಗತ್ಯ ಕ್ರಮವನ್ನು ಪಾಲಿಕೆ ತೆಗೆದುಕೊಳ್ಳಲಿ.

–ಕೊ.ಸು.ನರಸಿಂಹಮೂರ್ತಿ, ಹಿರಿಯ ನಾಗರಿಕ, ಮೈಸೂರು.

■ ಸುಧಾಮೂರ್ತಿಯವರು ಮಾತೃಭಾಷೆಯಲ್ಲಿ ಪ್ರಮಾಣವಚನ; ಇತರರಿಗೆ ಮಾದರಿ



ಮಾನ್ಯರೆ,

ಇನ್ಫೋಸಿಸ್ ಫೌಂಡೇಶನ್‌ನ ಡಾ. ಸುಧಾಮೂರ್ತಿ ಅವರನ್ನು ರಾಜ್ಯಸಭೆ ಸದಸ್ಯರಾಗಿ ಮಾಡುವ ಮೂಲಕ ಕೇಂದ್ರ ಸರ್ಕಾರ ಅವರಿಗೆ ಗೌರವ ಸಲ್ಲಿಸಿದೆ. ದೆಹಲಿಯಲ್ಲಿ ರಾಜ್ಯ ಸಭೆಯ ಸದಸ್ಯರಾಗಿ ಕನ್ನಡದಲ್ಲೇ ಪ್ರಮಾಣವಚನವನ್ನು ಸ್ವೀಕರಿಸಿದ್ದು ಕನ್ನಡಿಗರಿಗೆ ಹೆಮ್ಮೆಯ ವಿಷಯ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಸುಧಾಮೂರ್ತಿಯವರು ಇನ್ಫೋಸಿಸ್ ಮೂಲಕ ಹೆಸರುವಾಸಿಯಾಗಿದ್ದರೂ ಯಾವ ಹಮ್ಮು ಬಿಮ್ಮು ಇಲ್ಲದೆ ತಮ್ಮ ಮಾತೃ ಭಾಷೆಯಲ್ಲಿ ಪ್ರಮಾಣವಚನ ಸ್ವೀಕರಿಸಿ, ಇತರರಿಗೆ ಮಾದರಿಯಾಗಿದ್ದಾರೆ. ಇದೇ ನಿಜವಾದ ಕನ್ನಡಾಭಿಮಾನ. ಇಂತಹ ಮಹನೀಯರಿಂದಲೇ ಕನ್ನಡ ಶ್ರೀಮಂತ ಭಾಷೆಯಾಗುತ್ತದೆ. ಇತರರು ಇದನ್ನೇ ಮೇಲ್ಪಂಕ್ತಿಯಾಗಿಟ್ಟುಕೊಂಡು ಕನ್ನಡದಲ್ಲೇ ವ್ಯವಹರಿಸಬೇಕು. ಆಗ ಕನ್ನಡ ತನ್ನತನವನ್ನು ಉಳಿಸಿ–ಬೆಳೆಸಿದಂತಾಗುತ್ತದೆ. ಈ ಮೂಲಕ ಸುಧಾಮೂರ್ತಿ ಅವರಿಗೆ ಎಲ್ಲಾ ಕನ್ನಡಿಗರ ಪರವಾಗಿ ಅಭಿನಂದನೆಗಳು.

–ಬ್ಯಾಂಕ್ ಶಿವಕುಮಾರ್, ಜೆ.ಪಿ.ನಗರ, ಮೈಸೂರು.

■ ಸರಕಾರದ ಗಮನಕ್ಕೆ!

ಮಾನ್ಯರೆ,

ಗೋಬಿ ಮಂಚೂರಿ ಹಾಗೂ ಬೊಂಬಾಯಿ ಮಿಠಾಯಿಯ ಕೃತಕ ಬಣ್ಣವನ್ನು ನಿರ್ಬಂಧಿಸಲು ನಿರ್ಧರಿಸಿದೆಯಂತೆ ರಾಜ್ಯ ಸರಕಾರ!

ಗೋಬಿ ಮಂಚೂರಿ ಹಾಗೂ ಬೊಂಬಾಯಿ ಮಿಠಾಯಿ ಮೆಲ್ಲುವವರ ಮೇಲೆ ಸರಕಾರಕ್ಕಿರುವ ಕಾಳಜಿ ಮದ್ಯಪಾನಿ, ಧೂಮಪಾನಿಗಳ ಮೇಲೇಕಿಲ್ಲ?

ಸಿಗರೇಟು ಮತ್ತು ಮದ್ಯದಲ್ಲಿ ವಿಟಮಿನ್ ಮತ್ತು ಪ್ರೋಟೀನುಗಳಿವೆಯೇ...!

–ಪಿ.ಜೆ.ರಾಘವೇಂದ್ರ, ಮೈಸೂರು

■ ಬದುಕು–ಬಿಂದು

ಮಾನ್ಯರೆ,

1. **ಮಹಾ(ನು)ಭಾವ :** ಇತ್ತೀಚೆಗೆ ನಡೆದ ಚಾಮರಾಜ ವಿಧಾನಸಭಾ ಕ್ಷೇತ್ರದ ಪ್ರಥಮ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಡಾ. ಕೆ. ಚಿದಾನಂದಗೌಡರು ತಮ್ಮ ಮಾಹಿತಿಪೂರ್ಣ, ಉಪಯುಕ್ತ ಭಾಷಣದಲ್ಲಿ ಹೇಳಿದಂತೆ, ವಾಙ್ಮಯದಲ್ಲಿ ಎರಡು ವರ್ಗ : ಮಾಹಿತಿ ಮತ್ತು ಮಹಾಭಾವ. ಎರಡನೆಯದು ಶ್ರೀ ರಾಮಕೃಷ್ಣರಂಥ ಮಹಾನುಭಾವರಲ್ಲಿ ಕಾಣುವಂಥದು. (ಅಂದ ಹಾಗೆ ಸಮ್ಮೇಳನ ಯಶಸ್ವಿಯಾಯಿತು).
2. **ವೈದ್ಯ ವರ್ಗಗಳು :** ವೈದ್ಯರಲ್ಲಿ ನಾಲ್ಕು ವಿಧ : 'ನರ' ವೈದ್ಯರು; ನರ ಪಶು ವೈದ್ಯರು; ಪಶು ವೈದ್ಯರು ಮತ್ತು ಶಿಶು ವೈದ್ಯರು (ಕೆಲವೊಮ್ಮೆ ವೈದ್ಯರೇ 'ಬಲಿಪಶು'ಗಳು!)
3. **ವಿವೇಕ :** "ಜನಗಣಮನ ಅಧಿನಾಯಕ" ಯಾರು? ಪ್ರತಿಯೊಬ್ಬರಲ್ಲೂ ಸುಪ್ತವಾಗಿರುವ ವಿವೇಕವಷ್ಟೆ; ಅದು ಎಚ್ಚರಬೇಕು.
4. **ವಚನ :** ಏಕವಚನ ಬಳಸಿದರೆ ಅದು ಬೈಗುಳವಾಗುತ್ತದೆಯೇ? ಇಂಗ್ಲೀಷಿನಲ್ಲಿ ಗೌರವ ಸೂಚಕವಾಗಿ ಕೂಡ ಏಕವಚನವೇ ಬಳಕೆಗೊಳ್ಳುತ್ತದೆ!
5. **ಕುಡಿತ :** ಮದ್ಯಪಾನ ಕೆಟ್ಟದ್ದೆಂದು ಪರಿಗಣಿತವಾಗಿದೆ. ಆದರೆ ಪರ್ಶಿಯನ್ ಕವಿ ಉಮರ್ ಖಯ್ಯೂಮ್ ಉದ್ಗರಿಸುತ್ತಾನೆ : "ಕುಡಿತಕಿಂ ಕೀಳ್ ಕೆಲಸ ನೂರ ನೀ ಮಾಳ್ಪೆ!" (ಇದು ಮದ್ಯಪಾನಕ್ಕೆ 'ಲೈಸೆನ್ಸ್' ಎಂದು ಭಾವಿಸಬೇಕಿಲ್ಲ!)
6. **ಒಳ್ಳೆ ಮಾತು :** "ಎಳ್ಳು ತಿಂದು ಒಳ್ಳೆಯ ಮಾತಾಡು" (–ಗಾದೆ) ತಿನ್ನದೆಯೂ ಆಡಬಹುದಲ್ಲ!
7. **ಸ್ತಬ್ಧ :** ಗಣರಾಜ್ಯೋತ್ಸವದಲ್ಲಿ ಕರ್ನಾಟಕದ ಸ್ತಬ್ಧಚಿತ್ರಕ್ಕೆ ಅವಕಾಶವಿಲ್ಲ ಎಂದು ಸ್ವಲ್ಪ 'ಗಲಾಟೆ' ಯಾಯಿತು; ಆಮೇಲೆ 'ಸ್ತಬ್ಧ'ವಾಯಿತು!


–ಸಿಪಿಕೆ, ಹಿರಿಯ ಸಾಹಿತಿಗಳು, ಮೈಸೂರು.

ನಮ್ಮ ಮೈಸೂರಿನ ಅಸಾಮಾನ್ಯರು



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದವರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿದೆ. ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ನನಗೆ ಬರೆದ ತೃಪ್ತಿ.

12. ಕೆ.ಎಸ್. ಚಂದ್ರಶೇಖರ ಅಯ್ಯರ್





ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ: 8762788685

ಅಂದಿನ ಮೈಸೂರು ಸಂಸ್ಥಾನದಲ್ಲಿ ಹಲವಾರು ಹುದ್ದೆಗಳಲಿದ್ದು ಸುದೀರ್ಘ ಕಾಲ ನ್ಯಾಯಾಧೀಶರಾಗಿ ನಿಷ್ಠೆಯಿಂದ ಕರ್ತವ್ಯ ನಿರ್ವಹಿಸಿದ ರಾಜಧರ್ಮಪ್ರವೀಣ ದಿವಾನ್ ಬಹದ್ದೂರು ಕೆ. ಎಸ್. ಚಂದ್ರಶೇಖರ ಅಯ್ಯರ್ ನಿವೃತ್ತಿಯ ನಂತರವೂ ಸುಮಾರು ನಾಲ್ಕು ದಶಕಗಳ ಕಾಲ ಹಲವಾರು ಸಾಮಾಜಿಕ ಕರ್ತವ್ಯಗಳಲ್ಲಿ ಪ್ರಮುಖ ಪಾತ್ರವಹಿಸಿ ಖ್ಯಾತನಾಮರಾದರು.

1809ರ ಆಗಸ್ಟ್ 2ರಂದು ಜನಿಸಿದ ಚಂದ್ರಶೇಖರ ಅಯ್ಯರ್ ಅವರು ಅಂದಿನ ತಿರುಚಿನಾಪಲ್ಲಿಯ ಸೇಂಟ್ ಜೋಸೆಫ್ ಕಾಲೇಜು, ಮದ್ರಾಸಿನ ಪ್ರೆಸಿಡೆನ್ಸಿ ಕಾಲೇಜು ಮತ್ತು ಲಾ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಿದರು. 1889ರ ಬಿ.ಎ. ಪದವಿಯ ಗಣಿತಶಾಸ್ತ್ರ ಮತ್ತು ಭಾಷೆಗಳಲ್ಲಿ ಅವರು ಗಳಿಸಿದ್ದು ಪ್ರಥಮ ಸ್ಥಾನ. 1892ರ ಬಿ. ಎಲ್. ಪದವಿ ಪಟ್ಟಿಯಲ್ಲಿ ಮೊದಲ ಸ್ಥಾನ ಗಳಿಸಿ ಅದೇ ವರ್ಷ ಜುಲೈ ತಿಂಗಳಲ್ಲಿ ಮೊದಲ ಬಾರಿಗೆ ನಡೆದ ಮೈಸೂರು ಸಿವಿಲ್ ಸರ್ವೀಸ್ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಮೊದಲ ರ್‍ಯಾಂಕ್ ಪಡೆದು ಉತ್ತೀರ್ಣರಾದರು. ಮೊದಲಿಗೆ ಅವರನ್ನು ಬೆಂಗಳೂರಿನಲ್ಲಿ ಪ್ರೊಬೇಷನರಿ ಅಸಿಸ್ಟೆಂಟ್ ಕಮಿಷನರನ್ನಾಗಿ ನೇಮಿಸಲಾಯಿತು.

ಅದೇ ವರ್ಷದ ಆಗಸ್ಟ್ ತಿಂಗಳಲ್ಲಿ ಅವರನ್ನು ಮೈಸೂರು ಮುಖ್ಯ ನ್ಯಾಯಾಲಯಕ್ಕೆ ಅಧೀನಗೊಳಿಸಿ, ಸೆಪ್ಟೆಂಬರ್ ತಿಂಗಳಲ್ಲಿ ಲೆಜಿಸ್ಲೇಟಿವ್ ಸೆಕ್ರೆಟರಿ ಕಚೇರಿಗೆ ವರ್ಗಾಯಿಸಲಾಯಿತು. 1894ರಲ್ಲಿ ಅವರಿಗೆ ಹಾಸನದ ಮುನ್ಸೀಫ್ ನ್ಯಾಯಾಲಯದ ಮುನ್ಸೀಫ್ ಹುದ್ದೆಯಲ್ಲಿ ತಾತ್ಕಾಲಿಕ ಹುದ್ದೆ ನೀಡಲಾಯಿತಾದರೂ ನಂತರದ ವರ್ಷದಲ್ಲಿ ಅವರನ್ನು ಅದೇ ಕೇಂದ್ರದ ಸಾಮಾನ್ಯ ಕರ್ತವ್ಯ ನಿರ್ವಹಣೆಗೆ ನೇಮಿಸಲಾಯಿತು. 1898ರಲ್ಲಿ ಸಹಾಯಕ ಕಮೀಷನರ್ ಎರಡನೇ ದರ್ಜೆಗೆ ಉನ್ನತಿ ಪಡೆದು ಮೈಸೂರು ಸರ್ಕಾರದ ಸಾಮಾನ್ಯ ಆಡಳಿತ ಮತ್ತು ರೆವಿನ್ಯೂ ಇಲಾಖೆಗಳಲ್ಲಿ ಸಹಾಯಕ ಕಮೀಷನರಾಗಿ ತಾತ್ಕಾಲಿಕ ಹುದ್ದೆಯಲ್ಲಿದ್ದರು. ತರುವಾಯ ಅವರು ಮೊದಲನೇ ದರ್ಜೆ ಹುದ್ದೆಗೆ ಬಡ್ತಿ ಪಡೆದರು. 1904ರಲ್ಲಿ ಅವರಿಗೆ ಮತ್ತೆ ಬಡ್ತಿ ದೊರೆತು ಅದೇ ಇಲಾಖೆಯಲ್ಲಿ ಉಪಕಾರ್ಯದರ್ಶಿಗಳಾದರು. ಸುಮಾರು ಎರಡು ವರ್ಷಗಳ ಕಾಲ ಅದೇ ಇಲಾಖೆಯಲ್ಲಿ ಕಾರ್ಯದರ್ಶಿಗಳಾಗಿ ಮೇಲ್ದರ್ಜೆಯ ಸ್ಥಾನ ಗಳಿಸಿದರು. 1904 ಮತ್ತು 1905ರಲ್ಲಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಎರಡು ಬಾರಿ ಕರ್ತವ್ಯ ನಿರ್ವಹಿಸಿ, 1907ರಲ್ಲಿ ಮೈಸೂರು ಮುಖ್ಯ ನ್ಯಾಯಾಲಯದ ತಾತ್ಕಾಲಿಕ ನ್ಯಾಯಾಧೀಶರಾಗಿ ಹತ್ತು ತಿಂಗಳ ಕಾಲ ಸೇವೆ ಸಲ್ಲಿಸಿದರು. ನಂತರ ನ್ಯಾಯಾಧೀಶರೂ ಆದರು. ಸತತವಾಗಿ 17 ವರ್ಷಗಳ ಕಾಲ ಮುಖ್ಯ ನ್ಯಾಯಾಲಯದ ನ್ಯಾಯಾಧೀಶರಾಗಿ ಇದ್ದವರು ಇವರೊಬ್ಬರೇ. ಅಷ್ಟು ದೀರ್ಘ ಕಾಲ ನ್ಯಾಯಾಧೀಶರಾಗಿದ್ದು ವಿಕ್ರಮವನ್ನೇ ಸಾಧಿಸಿದರು. ನ್ಯಾಯ ನೀಡುವಲ್ಲಿ ಅವರು ಯಾವುದೇ ಪಕ್ಷಪಾತವನ್ನು ತೋರಿಸದೆ ವಿಚಕ್ಷಣೆಯಿಂದ ಕೂಡಿದ ಶ್ರೇಷ್ಠ ಮಟ್ಟದ ತೀರ್ಪುಗಳನ್ನು ನೀಡಿ ಖ್ಯಾತಿ ಪಡೆದರು. ಅವು ಅವರ ನ್ಯಾಯ ಸಂಬಂಧ ಪರಿಣತಿಯನ್ನು ತೋರುತ್ತಿದ್ದವು.

ಚಂದ್ರಶೇಖರ ಅಯ್ಯರ್ ಅವರು ನ್ಯಾಯಾಧೀಶರಾಗಿರುವುದರ ಜೊತೆಗೆ ಸ್ವಲ್ಪ ಕಾಲ ರಾಜ್ಯದ ಎಕ್ಸಿಕ್ಯುಟಿವ್ ಕೌನ್ಸಿಲ್ಲಿನ ಸದಸ್ಯರೂ ಆಗಿ ಸೇವೆ ಸಲ್ಲಿಸಿದರು. ಮಹಾರಾಜರ ಸರ್ಕಾರ ಅವರ ಉನ್ನತ ಮಟ್ಟದ ಸೇವೆಯನ್ನು ಗುರುತಿಸಿ 'ರಾಜಧರ್ಮ ಪ್ರವೀಣ ದಿವಾನ್ ಬಹದ್ದೂರ್' ಬಿರುದು ನೀಡಿ ಗೌರವಿಸಿತು.

ಅವರು ನಿವೃತ್ತರಾದ ಸುಮಾರು ನಲ್ವತ್ತು ವರ್ಷಗಳ ಕಾಲ ಬದುಕಿದ್ದು ಆ ಅವಧಿಯನ್ನು ಸಾರ್ವಜನಿಕ ಸೇವೆಗೆ ಮುಡುಪಾಗಿಟ್ಟರು. ಅವರ ಅಪಾರ ಅನುಭವ ಮತ್ತು ಜ್ಞಾನದ ಲಾಭವನ್ನು ಸರ್ಕಾರ ಹಲವಾರು ರೀತಿಯಲ್ಲಿ ಬಳಸಿಕೊಂಡಿತು. ಅವರನ್ನು ಹಲವಾರು ಸಮಿತಿಗಳಿಗೆ ನೇಮಿಸಿ ಅವರ ಪರಿಣತಿಯ ಲಾಭ ಪಡೆಯಿತು. ಹಲವು ವರ್ಷಗಳ ಕಾಲ ಅವರು ಸಾರ್ವಜನಿಕ ಪುಸ್ತಕ ಭಂಡಾರ ಮತ್ತು ಸಹಕಾರ ಸಮಿತಿಯ ಅಧ್ಯಕ್ಷರಾಗಿದ್ದರು.

ರಾಜ್ಯದ ಕಾರಾಗೃಹಗಳಲ್ಲಿನ ಹೀನ ಪರಿಸ್ಥಿತಿಯನ್ನು ಕಂಡ ಮಹಾರಾಜರ ಸರ್ಕಾರ ಅವುಗಳಲ್ಲಿನ ಜೀವನ ಪರಿಸ್ಥಿತಿಯನ್ನು ತನಿಖೆ ಮಾಡಿ ಅಗತ್ಯ ಸುಧಾರಣೆಗಳನ್ನು ತರಲು ಕಾರಾಗೃಹಗಳ ಸುಧಾರಣಾ ಸಮಿತಿಯೊಂದನ್ನು ಚಂದ್ರಶೇಖರ ಅಯ್ಯರ್ ಅವರ ಅಧ್ಯಕ್ಷತೆಯಲ್ಲಿ ನೇಮಿಸಲು ನಿರ್ಧರಿಸಿತು. ಆಗ ಬೆಂಗಳೂರಿನ ಬಂದೀಖಾನೆಯಲ್ಲಿನ ಪರಿಸ್ಥಿತಿ ಅತ್ಯಂತ ಹೀನಾಯ ಪರಿಸ್ಥಿತಿಯಲ್ಲಿತ್ತು. ಕಾರಾಗೃಹಿಗಳಿಗೆ ಒಂದೇ ಒಂದು ಟ್ರೌಶರ್, ಶರ್ಟು ಮತ್ತು ಟೋಪಿ ಮಾತ್ರ ನೀಡಲಾಗುತ್ತಿತ್ತು. ಕಾರಾಗೃಹಿಗಳು ಅದನ್ನೇ ತಿಂಗಳುಗಟ್ಟಲೆ ಹಾಕಿಕೊಳ್ಳಬೇಕಾಗಿತ್ತು. ಅವು ಎಷ್ಟು ಕೊಳೆಯಾದರೂ ಅವುಗಳನ್ನು ಬದಲಾಯಿಸಲು ಬೇರೆ ಅಂಗವಸ್ತ್ರಗಳಿರುತ್ತಿರಲಿಲ್ಲ. ಅಲ್ಲದೆ, ಆಂಗ್ಲ ಬಂದಿಗಳು ಮತ್ತು ಸ್ಥಳೀಯ ಬಂದಿಗಳಿಗೆ ಕೊಡುತ್ತಿದ್ದ ಊಟದಲ್ಲಿ ತಾರತಮ್ಯ ತೋರಿಸಲಾಗುತ್ತಿತ್ತು. ಸ್ನಾನ ಮತ್ತು ಸ್ಯಾನಿಟರಿ ಸೌಕರ್ಯಗಳೂ ಬಹಳ ಕೆಟ್ಟದ್ದಾಗಿದ್ದವು. ಸಮಿತಿ ಇವುಗಳನ್ನೆಲ್ಲಾ ಕೂಲಂಕಷವಾಗಿ ಪರಿಶೀಲಿಸಿ, ಕಾರಾಗೃಹಿಗಳನ್ನು ಮಾನವರಂತೆ ಕಾಣಬೇಕೆಂದು ಹೇಳಿ ವೈದ್ಯಕೀಯ ಸೌಕರ್ಯವೂ ಸೇರಿದಂತೆ ಉತ್ತಮ ಮಟ್ಟದ ಸೌಕರ್ಯಗಳನ್ನು ಕಲ್ಪಿಸುವಂತೆ ಹಲವಾರು ಸಲಹೆಗಳನ್ನು ಮಾಡಿತು. ಅಯ್ಯರ್ ಅವರ ಸಲಹೆಗಳನ್ನು ಅಂಗೀಕರಿಸಿದ ಸರ್ಕಾರ ಜೈಲುಗಳಲ್ಲಿನ ಪರಿಸ್ಥಿತಿಯನ್ನು ಸುಧಾರಿಸಲು ಮೈಸೂರು ಕಾರಾಗೃಹಗಳ ಕಾಯಿದೆ 1943 ಜಾರಿಗೆ ತಂದಿತು. ಅಯ್ಯರ್ ಅವರು ಮಾಡಿದ ಸಲಹೆಗಳಿಂದಾಗಿ ರಾಜ್ಯದ ಜೈಲುಗಳ ಪರಿಸ್ಥಿತಿ ಬಹಳಷ್ಟು ಸುಧಾರಣೆಗೊಂಡು ಕಾರಾಗೃಹಿಗಳ ಬದುಕು ಉತ್ತಮಗೊಂಡಿತು.

ಹಿಂದೂ ಕಾನೂನಿನ ಅಡಿಯಲ್ಲಿ ರಾಜ್ಯದಲ್ಲಿರುವ ಹಿಂದೂ ಸ್ತ್ರೀಯರ ಪರಿಸ್ಥಿತಿಯನ್ನು ಅಭಿವೃದ್ಧಿಗೊಳಿಸಲು ಸರ್ಕಾರ ನಿರ್ಧರಿಸಿ, ಪ್ರಜಾಪ್ರತಿನಿಧಿ ಸಭೆಯ ಅಭಿಪ್ರಾಯಪಟ್ಟಂತೆ 1929ರ ಜೂನ್ ತಿಂಗಳಲ್ಲಿ ಅಧಿಕೃತ ಸಮಿತಿಯೊಂದನ್ನು ನೇಮಿಸಿತು. ಹತ್ತು ಸದಸ್ಯರ ಸಮಿತಿಗೆ ಮೈಸೂರಿನ ಮುಖ್ಯ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾಗಿ ನಿವೃತ್ತರಾಗಿದ್ದ ದಿವಾನ್ ಬಹದ್ದೂರ್ ಚಂದ್ರಶೇಖರ ಅಯ್ಯರ್ ಅವರು ಅಧ್ಯಕ್ಷರಾಗಿದ್ದರು. ಈ ಹತ್ತು ಜನರಲ್ಲಿ ಮಹಿಳೆಯರ ಪೈಕಿ ಪ್ರಥಮ ಪದವೀಧರರಾಗಿದ್ದ ಡಿ.ಕೆ.ರುಕ್ಮಿಣಿಯಮ್ಮ ಓರ್ವ ಸದಸ್ಯರಾಗಿದ್ದರು. ಹಿಂದೂ ಕಾನೂನಿನ ಅಡಿಯಲ್ಲಿ ಸ್ತ್ರೀಯರ ಪರಿಸ್ಥಿತಿಯನ್ನು ಉತ್ತಮ ಪಡಿಸುವ ಬಗ್ಗೆ ಆಗ ತಾನೇ ಬ್ರಿಟಿಷ್ ಆಡಳಿತದ ಭಾರತದಲ್ಲಿ ಹೊಸದಾಗಿ ತಂದ ಕಾಯ್ದೆಯನ್ನು ಗಮನಕ್ಕೆ ತೆಗೆದುಕೊಂಡು ಸಮಗ್ರವಾಗಿ ಪರಿಶೀಲಿಸುವುದು, ಹಿಂದೂ ಕಾನೂನು ಜಾರಿಗೆ ಕೊಡುವಲ್ಲಿ ಯಾವ ಅಂಶಗಳನ್ನು ಜಾರಿಗೆ ತರಲಾಗುತ್ತಿದೆ ಎಂಬುದನ್ನು ಪರಿಶೀಲಿಸಿ ವರದಿ ನೀಡುವುದು, ಹಾಗೂ ಸಮಿತಿಯ ಎಲ್ಲಾ ಸಲಹೆಗಳನ್ನು ಒಳಗೂಡಿಸಿದಂತೆ ಸೂಕ್ತ ಕರಡನ್ನು ರಚಿಸುವುದು ಇವು ಸಮಿತಿಯ ಜವಾಬ್ದಾರಿಯಾಗಿತ್ತು.

ಸಮಿತಿ ಈ ಎಲ್ಲಾ ಅಂಶಗಳನ್ನೂ ಕೂಲಂಕಷವಾಗಿ ಪರಿಶೀಲಿಸಿ, ಪ್ರಶ್ನಾವಳಿಯೊಂದರ ಮೂಲಕ ಮಾಹಿತಿ ಸಂಗ್ರಹಿಸಿ, ಬೇರೆ ರಾಜ್ಯಗಳಲ್ಲಿನ ಖ್ಯಾತ ವಕೀಲರ ಮತ್ತು ನ್ಯಾಯಾಧೀಶರುಗಳ ಅಭಿಪ್ರಾಯಗಳನ್ನು ಪಡೆದು 1930ರ ಸೆಪ್ಟಂಬರ್ ತಿಂಗಳಲ್ಲಿ ಸರ್ಕಾರಕ್ಕೆ ವರದಿಯೊಂದನ್ನು ಸಲ್ಲಿಸಿತು. ಬ್ರಿಟಿಷ್ ಇಂಡಿಯಾದ ಬೇರೆ ರಾಜ್ಯಗಳಿಗೆ ಹೋಲಿಸಿದರೆ ಮೈಸೂರು ರಾಜ್ಯದಲ್ಲಿ ಮಹಿಳೆಯರ ಸ್ಥಿತಿ ಉತ್ತಮವಾಗಿದೆ ಎಂಬ ಅಭಿಪ್ರಾಯಕ್ಕೆ ಬಂದು ಮಹಿಳೆಯರ ಹಕ್ಕುಗಳಿಗೆ ಸಂಬಂಧಪಟ್ಟಂತೆ ಹಿಂದೂ ಕಾನೂನಿನಲ್ಲಿ ಕೆಲವು ಬದಲಾವಣೆಗಳನ್ನು ತರುವಂತೆ ಸಲಹೆ ಮಾಡಿತು. ಹಿಂದೂ ಕಾನೂನು ಪರಿಷ್ಕರಣ ಸಮಿತಿಯ ಅಧ್ಯಕ್ಷರಾಗಿ ಚಂದ್ರಶೇಖರ ಅಯ್ಯರ್ ಅವರು ಸಲ್ಲಿಸಿದ ಈ ವರದಿ ಎಷ್ಟು ಉತ್ತಮದ್ದಾಗಿತ್ತೆಂದರೆ ಅದು ಇಡೀ ಭಾರತದಲ್ಲಿ ಇಂತಹ ಬದಲಾವಣೆ ತರಲು ಪ್ರೇರಣೆ ನೀಡಿತು.

ಚಂದ್ರಶೇಖರ ಅಯ್ಯರ್ ಅವರು ಶಾಸ್ತ್ರೀಯ ಸಂಗೀತದ ರಸಿಕರೂ, ಪೋಷಕರೂ ಆಗಿದ್ದರು. ಕರ್ನಾಟಕ ಸಂಗೀತದ ಗುಣಮಟ್ಟವನ್ನು ಶ್ರೇಷ್ಠ ಮಟ್ಟದಲ್ಲಿ ಕಾಪಾಡಿಕೊಂಡು ಹೋಗಲು ಪ್ರೋತ್ಸಾಹ ನೀಡಿದರು.

ರಾವ್ ಬಹದ್ದೂರ್ ಕೆ. ಶಾಮರಾವ್, ದಿವಾನ್ ಸರ್ ಮಿರ್ಜಾ ಇಸ್ಮಾಯಿಲ್, ರಾಜಮಾಂತ್ರಿಕ ಪ್ರವೀಣ ದಿವಾನ್ ಬಹದ್ದೂರ್ ಪಿ. ರಾಘವೇಂದ್ರ ರಾವ್, ರಾಜತಂತ್ರ ಪ್ರವೀಣ ಡಾ. ಸರ್ ಬ್ರಜೇಂದ್ರನಾಥ ಸೀಲ್, ಮುಷೀರ್ ಉಲ್ ಮುಲ್ಕ್ ಮೀರ್ ಹಂಸಾ ಹುಸೇನ್, ಕೆ. ಆರ್ ಶ್ರೀನಿವಾಸ ಅಯ್ಯಂಗಾರ್, ಮತ್ತು ಕೆ. ಚಾಂಡಿ ಅವರ ಜೊತೆಯಲ್ಲಿ 1926–27ರಿಂದ ಹಲವು ವರ್ಷಗಳ ಕಾಲ ರಾಜಧರ್ಮಪ್ರವೀಣ ದಿವಾನ್ ಬಹದ್ದೂರ್ ಚಂದ್ರಶೇಖರ ಅಯ್ಯರ್ ಮಿಥಿಕ್ ಸೊಸೈಟಿಯ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದರು.

ಮುಂಚಿನಿಂದಲೂ ದೇವತಾಶಾಸ್ತ್ರದಲ್ಲಿ (ಥಿಯೋಸೊಫಿ) ಆಸಕ್ತಿ ಹೊಂದಿದ್ದ ಅವರು ಥಿಯೋಸೊಫಿಕಲ್ ಸೊಸೈಟಿಯ ಹೊಸತರಲ್ಲಿಯೇ ಅದರ ಸದಸ್ಯರಾದರು. 1938ರಲ್ಲಿ ಬೆಂಗಳೂರಿನ ಸೊಸೈಟಿಯ ಆಶ್ರಯದಲ್ಲಿ ಜರುಗಿದ ಬುದ್ಧ ಜಯಂತಿ ಆಚರಣೆಯ ಅಧ್ಯಕ್ಷತೆ ವಹಿಸಿ 'ಗೌತಮ ಬುದ್ಧ–ಅವನ ಜೀವನ ಮತ್ತು ಬೋಧನೆಗಳು' ಕುರಿತು ಸುದೀರ್ಘ ಭಾಷಣ ಮಾಡಿದರು. ಅವರ ಈ ಭಾಷಣ ಸೊಸೈಟಿಯ ಸೆಪ್ಟಂಬರ್ 1938ರ 'ದಿ ಥಿಯೋಸೊಫಿಸ್ಟ್' ಸಂಚಿಕೆಯಲ್ಲಿ ಪ್ರಕಟವಾಗಿ ಪ್ರಶಂಸೆ ಗಳಿಸಿತು. ಅದೇ ರೀತಿ ಮಿಥಿಕ್ ಸೊಸೈಟಿಯ ಅರ್ಧವಾರ್ಷಿಕ ಪುರವಣಿಗಳಲ್ಲೂ ವೇದಾಂತದ ವಿಷಯಗಳ ಬಗ್ಗೆ ಕೆಲವು ಲೇಖನಗಳನ್ನು ಬರೆದರು. ಅವರು ಬರೆದ 'ದಿ ಎನ್ರಿಚ್‌ಮೆಂಟ್ ಆಫ್ ಲೈಫ್' ಎಂಬ ಸಣ್ಣ ಹೊತ್ತಿಗೆ 1948ರಲ್ಲಿ ಮೊದಲ ಬಾರಿಗೆ ಪ್ರಕಟವಾಯಿತು. ಕೂಡ್ಲಿ ರಾಮಾಶಾಸ್ತ್ರಿಗಳು ಅದನ್ನು 1979ರಲ್ಲಿ ಮತ್ತೆ ಪ್ರಕಟಿಸಿದರು. ಈ ಎರಡನೆಯ ಪ್ರಕಟಣೆಗೆ ಚಂದ್ರಶೇಖರ ಅಯ್ಯರ್ ಅವರ ಸೇವೆ ಮತ್ತು ವ್ಯಕ್ತಿತ್ವವನ್ನು ಗುಣಗಾನ ಮಾಡಿ ನ್ಯಾಯಾಧೀಶ ನಿಟ್ಟೂರು ಶ್ರೀನಿವಾಸರಾಯರು ಮುನ್ನುಡಿ ಬರೆದರು.

ಚಂದ್ರಶೇಖರ ಅಯ್ಯರ್ ಅವರ ಪತ್ನಿ ಪಾರ್ವತಮ್ಮ ಅವರು ತಮ್ಮ ಪತಿಯನ್ನು ಅನುಸರಿಸಿ ಮಹಿಳೆಯರು ಮತ್ತು ಮಕ್ಕಳ ಏಳಿಗೆಗಾಗಿ ಶ್ರಮಿಸಿ, ಹಲವು ಸಂಸ್ಥೆಗಳನ್ನು ಸ್ಥಾಪಿಸಿದರು.

ರಾಜ್ಯ ಸರ್ಕಾರ ಲೂಟಿಯಲ್ಲಿ ತೊಡಗಿದೆ; ಕಾಂಗ್ರೆಸ್‌ಗೆ ಭ್ರಷ್ಟಾಚಾರವೇ ಆಕ್ಸಿಜನ್!

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತವರಲ್ಲಿ ಪ್ರಧಾನಿ ಮೋದಿ ವಾಗ್ದಾಳಿ



ಕಲಬುರಗಿ, ಮಾ.16– ಪ್ರಧಾನಿ ನರೇಂದ್ರ ಮೋದಿ ಕಲಬುರಗಿಯಿಂದ ಲೋಕಸಭಾ ಚುನಾವಣೆ ಪ್ರಚಾರ ಆರಂಭಿಸಿದ್ದು, ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ತವರಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ಆಡಳಿತದಲ್ಲಿ ರಾಜ್ಯದ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ, ಜನತೆ ಸಂಕಷ್ಟ ಎದುರಿಸುತ್ತಿರುವಾಗ ಸರ್ಕಾರ ಲೂಟಿಯಲ್ಲಿ ತೊಡಗಿದೆ ಎಂದು ಮೋದಿ ಆರೋಪಿಸಿದ್ದಾರೆ.

ಜನತೆಗೆ ಕಾಂಗ್ರೆಸ್ ಬಗ್ಗೆ ಸತ್ಯ ಅರಿವಾಗಿದ್ದು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸಲಿದ್ದಾರೆ ಎಂದು ಹೇಳಿರುವ ಮೋದಿ, ಕಾಂಗ್ರೆಸ್ ಎಷ್ಟೇ ಬಾರಿ ತಮ್ಮ ಉಡುಪುಗಳನ್ನು ಬದಲಾಯಿಸಿದರೂ ಅವರ ದುಷ್ಕೃತ್ಯಗಳು ಬದಲಾಗುವುದಿಲ್ಲ. ಈ ಬಗ್ಗೆ ಜಾಗೃತರಾಗಿರುವ ಕರ್ನಾಟಕದ ಮಂದಿ ಕಾಂಗ್ರೆಸ್ ನಡೆಗೆ ಆಕ್ರೋಶಗೊಂಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವಾಗ್ದಾಳಿ ನಡೆಸಿದರು.

ಹಲವು ಅವಕಾಶಗಳು ಸಿಕ್ಕಿದ್ದರೂ ಕಾಂಗ್ರೆಸ್ ಸುಧಾರಣೆ ಮಾಡಿಕೊಳ್ಳುವುದಕ್ಕೆ ತಯಾರಿಲ್ಲ. ಸಮಾಜಘಾತುಕ ಶಕ್ತಿಗಳಿಗೆ ರಾಜ್ಯದಲ್ಲಿ ಬಹಿರಂಗವಾಗಿಯೇ ಬೆಂಬಲ ಸಿಗುತ್ತಿದೆ. ಜನರ ಮನಸ್ಸಿನಲ್ಲಿ ಭಯ ಉಂಟುಮಾಡಲಾಗುತ್ತಿದೆ. ಜನರು ಆತಂಕಗೊಂಡಿರುವಾಗ ಕಾಂಗ್ರೆಸ್ ಲೂಟಿಯಲ್ಲಿ ನಿರತವಾಗಿದೆ. ಕಲ್ಲಿದ್ದಲಿನ ಕಪ್ಪುತನವನ್ನು ಹೋಗಲಾಡಿಸಬಹುದು ಆದರೆ ಭ್ರಷ್ಟಾಚಾರವನ್ನು ಕಾಂಗ್ರೆಸ್‌ನಿಂದ ಬೇರ್ಪಡಿಸಲು ಸಾಧ್ಯವಿಲ್ಲ. ಇಂತಹವರಿಗೆ ಭ್ರಷ್ಟಾಚಾರವೇ ಆಮ್ಲಜನಕ ಎಂದು ನರೇಂದ್ರ ಮೋದಿ ಹೇಳಿದ್ದಾರೆ.

ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ, ಭಗವಂತ ಖೂಬಾ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ, ಗುಲ್ಬರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಉಮೇಶ ಜಾಧವ್ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಉಜ್ಬೇಕಿಸ್ತಾನ ಮಹಿಳೆ ಹತ್ಯೆ ಪ್ರಕರಣ
ಇಬ್ಬರು ಹಂತಕರ ಬಂಧನ

ಬೆಂಗಳೂರು, ಮಾ.16– 27 ವರ್ಷದ ಉಜ್ಬೇಕಿಸ್ತಾನ್ ಮಹಿಳೆಯ ಕೊಲೆ ಪ್ರಕರಣವನ್ನು ಭೇದಿಸಿರುವ ಶೇಷಾದ್ರಿಪುರಂ ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಆರೋಪಿಗಳನ್ನು ಅಸ್ಸಾಂ ಮೂಲದ ಅಮೃತ್ (22) ಮತ್ತು ರಾಬರ್ಟ್ ಪಿ (26) ಎಂದು ಗುರುತಿಸಲಾಗಿದೆ. ಇಬ್ಬರೂ ಸ್ಯಾಂಕಿ ರಸ್ತೆಯಲ್ಲಿರುವ ಹೋಟೆಲ್‌ನಲ್ಲಿ ಹೌಸ್‌ಕೀಪಿಂಗ್ ಸಿಬ್ಬಂದಿಗಳಾಗಿದ್ದರು. ಪ್ರವಾಸಿ ವೀಸಾದ ಮೇಲೆ ನಾಲ್ಕು ದಿನಗಳ ಕಾಲ ಬೆಂಗಳೂರಿಗೆ ಬಂದಿದ್ದ ಜರೀನಾ ಜೆಪರೋವಾ ಬುಧವಾರ ರಾತ್ರಿ 11 ಗಂಟೆ ಸುಮಾರಿಗೆ ಹೋಟೆಲ್‌ನ ಎರಡನೇ ಮಹಡಿಯ ಕೊಠಡಿಯಲ್ಲಿ ಕೊಲೆಯಾದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು.

ಚೆಕ್–ಔಟ್ ಸಮಯದ ನಂತರವೂ ಮಹಿಳೆ ಹೊರಗೆ ಬರದ ಕಾರಣ, ಹೋಟೆಲ್ ಸಿಬ್ಬಂದಿ ಫೋನ್ ಮಾಡಿದರೆ, ದೂರವಾಣಿ ಕರೆಗೆ ಪ್ರತಿಕ್ರಿಯಿಸದ ಕಾರಣ ಕೊಠಡಿಗೆ ತೆರಳಿದ್ದಾರೆ. ಮಹಿಳೆ ಬಾಗಿಲು ತೆರೆಯದ ಕಾರಣ ಮಾಸ್ಟರ್ ಕೀ ಬಳಸಿ ಬಾಗಿಲು ತೆರೆದಿದ್ದಾರೆ. ಈ ವೇಳೆ ಜರೀನಾ ಕೊಲೆಯಾದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು. ಪ್ರಕರಣ ಭೇದಿಸಲು ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಇದರಂತೆ ಕೃತ್ಯದಲ್ಲಿ ಹೋಟೆಲ್ ಹೌಸ್ ಕೀಪಿಂಗ್ ಸಿಬ್ಬಂದಿ ಕೈವಾಡ ಖಚಿತವಾದ ಕೂಡಲೇ ಆ ಸಿಬ್ಬಂದಿಯ ಬೆನ್ನತ್ತಿದ್ದರು. ಕೃತ್ಯ ಎಸಗಿದ ಬಳಿಕ ಆರೋಪಿಗಳು ಮೆಜೆಸ್ಟಿಕ್‌ಗೆ ಬಂದು ಕೇರಳ ಬಸ್‌ನಲ್ಲಿ ಪರಾರಿಯಾಗಿದ್ದರು. ಅಂತಿಮವಾಗಿ ಕೇರಳದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ.

ಜರೀನಾ ಕೋಣೆಗೆ ಸ್ವಚ್ಛತೆಗೆ ಆರೋಪಿಗಳು ತೆರಳಿದ್ದರು. ಆ ವೇಳೆ ಊಟದ ಬಿಲ್ ಪಾವತಿಸುವಾಗ ಆಕೆಯ ಪರ್ಸ್‌ನಲ್ಲಿ ಹಣ ತುಂಬಿರುವುದು ಆರೋಪಿಗಳ ಕಣ್ಣಿಗೆ ಬಿದ್ದಿದೆ. ಆಗ ಜರೀನಾ ಬಳಿ ತುಂಬಾ ಹಣವಿದೆ ಎಂದು ದುರಾಸೆಯಿಂದ ಅಮೃತ್ ಹಾಗೂ ರಾಬರ್ಟ್ ಹತ್ಯೆಗೆ ನಿರ್ಧರಿಸಿದ್ದರು. ಅಂತೆಯೇ ಬುಧವಾರ ಮಧ್ಯಾಹ್ನ ಸಿಂಕ್ ಸ್ವಚ್ಛಗೊಳಿಸುವ ನೆಪದಲ್ಲಿ ಜರೀನಾ ಕೋಣೆಗೆ ತೆರಳಿದ್ದಾರೆ. ಆಕೆಯನ್ನು ಉಸಿರುಗಟ್ಟಿಸಿ ಹತ್ಯೆಗೈದು ಪರಾರಿಯಾಗಿದ್ದಾರೆಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಅಮಿತ್ ಶಾ ಭೇಟಿ ಮಾಡಿದ ಡಾ. ಸಿ.ಎನ್.ಮಂಜುನಾಥ್



ನವದೆಹಲಿ, ಮಾ.16– ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ. ಸಿ.ಎನ್.ಮಂಜುನಾಥ್ ಅವರು ನವದೆಹಲಿಯಲ್ಲಿ ಶನಿವಾರ ಸಂಜೆ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರ ಜೊತೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೊಂದು ಸೌಹಾರ್ದಯುತ ಭೇಟಿಯಾಗಿದೆ. ಇದುವರೆಗೂ ನಾನು ಅಮಿತ್ ಶಾ ಅವರನ್ನು ನೋಡಿರಲಿಲ್ಲ. ಇಂದು ಭೇಟಿಯಾಗಿ ಲೋಕಸಭಾ ಚುನಾವಣೆಗೆ ಅವರ ಸಹಕಾರ ಕೇಳಿದ್ದೇನೆ. ಬಿಜೆಪಿ ಸದಸ್ಯತ್ವವನ್ನು ಈಗಾಗಲೇ ಪಡೆದಿದ್ದೇನೆ. ಸೋಮವಾರ ಬೆಂಗಳೂರಿನಲ್ಲಿ ಅಧಿಕೃತವಾಗಿ ಬಿಜೆಪಿ ಸೇರುತ್ತಿದ್ದೇನೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಅವರು ಅಮಿತ್ ಶಾ ಅವರನ್ನು ಭೇಟಿ ಮಾಡಿ ಲೋಕಸಭೆ ಚುನಾವಣೆ ಸಂಬಂಧ ಮಾತುಕತೆ ನಡೆಸಿದರು. ಜೆಡಿಎಸ್‌ಗೆ ಮೂರು ಕ್ಷೇತ್ರಗಳನ್ನು ಬಿಟ್ಟುಕೊಟ್ಟಿದ್ದು, ಚುನಾವಣಾ ತಯಾರಿ, ಕಣಕ್ಕಿಳಿಸಲಿರುವ ಅಭ್ಯರ್ಥಿಗಳ ಬಗ್ಗೆ ಅಮಿತ್ ಶಾ ಅವರ ಜೊತೆ ಹೆಚ್‌ಡಿಕೆ ಮಾಹಿತಿ ಹಂಚಿಕೊಂಡಿದ್ದಾರೆ ಎನ್ನಲಾಗಿದೆ. ಈ ವೇಳೆ, ರಾಜ್ಯ ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಅನಸೂಯ ಮಂಜುನಾಥ್ ಅವರು ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆ ; ಮೈಸೂರು ಮಹಾರಾಜರ ಕೊಡುಗೆ ನೆನೆದು ಯದುವೀರರನ್ನು ಬೆಂಬಲಿಸಿ

ಜೆಡಿಎಸ್ ಕಾರ್ಯಕರ್ತರಲ್ಲಿ ಶಾಸಕ ಜಿ.ಟಿ.ದೇವೇಗೌಡ ಮನವಿ



ಮೈಸೂರು,ಮಾ.16(ಪಿಎಂ)– ಮೈಸೂರು ಮಹಾರಾಜರು ದೇಶ ಮತ್ತು ರಾಜ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿ ಸ್ಪರ್ಧಿಸಿದ್ದು, ಅವರನ್ನು ಬೆಂಬಲಿಸುವಂತೆ ಶಾಸಕ ಜಿ.ಟಿ.ದೇವೇಗೌಡ ಮನವಿ ಮಾಡಿದರು.

ಬೆಲವತ್ತ ಗ್ರಾಮದಲ್ಲಿ ಶನಿವಾರ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರು ಮಹಾರಾಜರು ನಮ್ಮ ರಾಜ್ಯದ ಅಭಿವೃದ್ಧಿಗೆ ಅವಿಸ್ಮರಣೀಯ ಕೊಡುಗೆ ನೀಡಿದ್ದಾರೆ. ಅವರ ವಂಶಸ್ಥರಾದ ಯದುವೀರರು ನಮ್ಮ ಯುವರಾಜರಿದ್ದಂತೆ. ಕ್ಷೇತ್ರದ ಅಭಿವೃದ್ಧಿಯ ಕನಸು ಹೊತ್ತು ಅವರು ಸ್ಪರ್ಧೆ ಮಾಡಿದ್ದಾರೆ. ಅವರನ್ನು ಬೆಂಬಲಿಸಬೇಕೆಂದು ಕೋರಿದರು.

ಜನಪರ ಆಡಳಿತದ ಮೂಲಕ ನಾಡು ಕಟ್ಟಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅನೇಕ ಯೋಜನೆಗಳನ್ನು ಕಾರ್ಯಗತಗೊಳಿಸಿ ಜನಜೀವನದ ಸುಧಾರಣೆಗೆ ಕಾರಣರಾದರು. ಅವರ ಕೊಡುಗೆಗಳನ್ನು ನೆನೆದು ಸರಳ ಸಜ್ಜನಿಕೆ ವ್ಯಕ್ತಿತ್ವದ ಯದುವೀರರನ್ನು ಬೆಂಬಲಿಸಿದರೆ ಕ್ಷೇತ್ರದ ಅಭಿವೃದ್ಧಿಯಾಗಲಿದೆ. ಲೋಕಸಭೆಗೆ ಅವರು ಆಯ್ಕೆಯಾಗಬೇಕು ಎಂದರು.

ಸ್ಥಳೀಯ ಜೆಡಿಎಸ್ ಅಧ್ಯಕ್ಷ ಹೆಚ್.ಸಿ.ರಾಜು, ಜಿಪಂ ಮಾಜಿ ಸದಸ್ಯ ದಿನೇಶ್, ತಾಪಂ ಮಾಜಿ ಸದಸ್ಯ ಕುಮಾರ್ ಸೇರಿದಂತೆ ಜೆಡಿಎಸ್ ಮುಖಂಡರು ಪಾಲ್ಗೊಂಡಿದ್ದರು.

SITE FOR SALE

TWO 30X40
WEST FACING
SITES FOR SALE IN
GATEWAY MYSORE
NEAR MANIPAL HOSPITAL,
MYSORE
BANGLORE ROAD
8073280019

ಶ್ರೀಮತಿ ಲೀಲಾ ಶ್ರೀ ಹೆಚ್ ಚನ್ನಯ್ಯ ಕಲ್ಯಾಣ ಮಂಟಪ

ವಾಲ್ಮೀಕಿ ರಸ್ತೆ, ವಿನಾಯಕನಗರ (ಪಡುವಾರಹಳ್ಳಿ)

4 ಸಿಲಿಂಡರ್, ಕ್ಲೀನಿಂಗ್, ಅಡಿಗೆ ಪಾತ್ರೆಗಳು ಎಲ್ಲಾ ಸೇರಿ 1,20,000/- ರೂ ಗಳು. ಮೇ, ಜೂನ್, ಜುಲೈ ತಿಂಗಳುಗಳಲ್ಲಿ ಖಾಲಿ ಇದೆ. (ಸಸ್ಯಾಹಾರ ಮಾತ್ರ)

ಸಂಪರ್ಕಿಸಿ: 8073929354 / 6362421885

ಹಸಿರು ನಮ್ಮ ಉಸಿರು

PUBLIC NOTICE

The General public is hereby informed that my client is intending to purchase the below mentioned schedule property from its owners Sri. Mallikarjuna swamy. M S/o late Mahadevaswamy V.N, Sri Madhukumar.M. S/o late Sri Mahadeva swamy.V.N and Sri Manukumar.M S/o late Sri Mahadevaswamy.V.N. and their respective legal heirs, residents of Varuna village Varuna Hobli, Mysore Taluk. If anybody is having any objection,claim interest, dispute with the above owners, boundaries for the intended sale transaction, he/she/ they may contact the undersigned with the documentary proof substantiating his/her/their objections/claims/details of dispute/s within Seven(07) days from the date of this publication, failing which my client will proceed to complete the sale transaction with the above owners as if there are no third party claims/objections/disputes in respect of the Schedule property and thereafter no claims/ objections/ disputes will be entertained

SCHEDULE PROPERTY

All that piece and parcel of Agricultural land bearing survey no.545 measuring 3 Acres 35 Guntas situated at Varkoodu villge Varuna Hobli, Mysore Taluk bounded upon by,
East: Lakshamma's Land, West: Private property, North: Private property, South: Sarkari Halla

Sd/- **H.S.Kumar**, B.A.L., LL.B
Advocate
No. 1411, 1st Floor
6th Cross, Thyagaraja Road
K.R.Mohalla, Mysuru
Date: 16-03-2024 **Mob: 9448797546**

ಮೊದಲ ವರ್ಷದ ಪುಣ್ಯಸ್ಮರಣೆ



ಕೆ.ಎಸ್.ಗುರುಪ್ರಸಾದ್‌ರವರು
(ಮೈಸೂರು ಗುರು)

ಜನನ : 01-07-1966
ನಿಧನ : 17-03-2023

ನೀವು ನಮ್ಮನ್ನು ಅಗಲಿ ಒಂದು ವರ್ಷ ಕಳೆದರು
ನಿಮ್ಮ ನೆನಪು ನಮ್ಮೆಲ್ಲರ ಮನದಲ್ಲಿ ಅಚ್ಚು-ಹಸಿರಾಗಿದೆ
ನಿಮ್ಮ ಆತ್ಮಕ್ಕೆ ಪರಮಾತ್ಮನು ಚಿರಶಾಂತಿ ಕರುಣಿಸಲಿ

ಸದಾ ನಿಮ್ಮ ಸ್ಮರಣೆಯಲ್ಲಿರುವ
ಪತ್ನಿ : ಶ್ರೀಮತಿ ಉಷಾ, ಮಕ್ಕಳಾದ : ಎಂ.ಜಿ. ವೈಷ್ಣವಿ
ಎಂ.ಜಿ.ಕಾರ್ತಿಕ್ ಗುರು ಅಣ್ಣಂದಿರಾದ : ಕೆ.ಎಸ್. ಪ್ರಸನ್ನ ಶ್ರೀಕಂಠದತ್
ಡಾ.ಕೆ.ಎಸ್.ರಾಮ್ ಪ್ರಸಾದ್ ಹಾಗೂ ಕುಟುಂಬವರ್ಗದವರು

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪರಿಸರವನ್ನು ಕಾಪಾಡಿ

FOR ADVERTISEMENT
STAR OF MYSORE 46
Please Call: 0821-2496522 / 23
Email: ad@starofmysore.com
ಮೈಸೂರು ಮಿತ್ರ 44
Please Call: 0821-2496522 / 23
Email: ad@mysurumithra.com

ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಅಧ್ಯಕ್ಷರಾಗಿ ಗೋವಿಂದ ರಾವ್

ಬೆಂಗಳೂರು: ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಅಧ್ಯಕ್ಷರಾಗಿ ಪ್ರೊ.ಗೋವಿಂದ ರಾವ್ ಅವರನ್ನು ನೇಮಕಗೊಳಿಸಿ ರಾಜ್ಯ ಸರ್ಕಾರ ಆದೇಶಿಸಿದೆ.

ಡಿ.ಎಂ.ನಂಜುಂಡಪ್ಪನವರ ಪ್ರಾದೇಶಿಕ ಅಸಮತೋಲನ ನಿವಾರಣಾ ವರದಿಯು 22 ವರ್ಷಗಳಷ್ಟು ಹಳೆಯದಾಗಿದೆ. ಇದರಿಂದ ರಾಜ್ಯ ಸರ್ಕಾರವು 233 ತಾಲೂಕುಗಳಲ್ಲಿ ಪ್ರಸ್ತುತ ಲಭ್ಯವಿರುವ ಅಂಕಿಅಂಶಗಳ ಆಧಾರದ ಮೇಲೆ ಹಿಂದುಳಿದಿರುವಿಕೆಯನ್ನು ಅಧ್ಯಯನ ಮಾಡಿ ಸಮಗ್ರ ಸಂಯುಕ್ತ ಅಭಿವೃದ್ಧಿ ಸೂಚ್ಯಂಕ ಗುರುತಿಸಲು ಆರ್ಥಿಕ ತಜ್ಞರಾದ ಪ್ರೊಫೆಸರ್ ಗೋವಿಂದ ರಾವ್ ಅವರನ್ನು ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಅಧ್ಯಕ್ಷರಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ.

ಗಂಗಾಮತಸ್ಥರಿಂದ ಯದುವೀರ್‌ಗೆ ಅಭಿನಂದನೆ



ಮೈಸೂರು ಜಿಲ್ಲಾ ಗಂಗಾಮತಸ್ಥರ ಸಂಘ ಹಾಗೂ ಸುಣ್ಣದಕೇರಿ ಗಂಗಾಮತಸ್ಥರ ಸಂಘದ ವತಿಯಿಂದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಅಭಿನಂದಿಸಲಾಯಿತು.

ಮೈಸೂರು, ಮಾ.16(ಎಂಕೆ)– ಮೈಸೂರು ಜಿಲ್ಲಾ ಗಂಗಾಮತಸ್ಥರ ಸಂಘ ಹಾಗೂ ಸುಣ್ಣದಕೇರಿ ಗಂಗಾಮತಸ್ಥರ ಸಂಘದ ವತಿಯಿಂದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಅಭಿನಂದಿಸಲಾಯಿತು.

ಈ ವೇಳೆ ಸಂಘದ ಮುಖಂಡ ಪ್ರಶಾಂತ್ ಮಾತನಾಡಿ, ಮೈಸೂರು ಜಿಲ್ಲಾ ಗಂಗಾಮತಸ್ಥರ ಸಂಘವು ಬಿಜೆಪಿ ಹಾಗೂ ಬಿಜೆಪಿ ಪಕ್ಷದ ಅಭ್ಯರ್ಥಿ ರಾಜವಂಶಸ್ಥ ಯದುವೀರರಿಗೆ ಸಂಪೂರ್ಣ ಬೆಂಬಲ ನೀಡಲಿದೆ. ಹಾಗೆಯೇ 39 ಪರ್ಯಾಯ ಜಾತಿ ಹೆಸರುಗಳಿಂದ ಕರೆಯಲ್ಪಡುವ ಗಂಗಾಮತಸ್ಥರ ಸಮುದಾಯ ಹಾಗೂ ಬಿಜೆಪಿ ಪಕ್ಷದಲ್ಲಿ ಗುರ್ತಿಸಿಕೊಂಡಿರುವ ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ಅವರಿಗೆ ಮುಂದಿನ ದಿನಗಳಲ್ಲಿ ಸೂಕ್ತ ಸ್ಥಾನಮಾನ ನೀಡಬೇಕು ಹಾಗೂ ನಮ್ಮ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕೆಂದು ಎಂದು ಕೋರಿದರು. ಬಿಜೆಪಿ ಪಕ್ಷಕ್ಕೆ ಹಾಗೂ ಪ್ರಧಾನಿ ಮೋದಿಯವರ ಆಶಯವನ್ನು ಈಡೇರಿಸಲು ಸಮುದಾಯದವರು ಬೆಂಬಲ ನೀಡಲಾಲಿದೆ ಎಂದರು. ಸಂಘದ ಮುಖಂಡರಾದ ವಿಜಯ್ ಗಂಗಾಪುತ್ರ, ಮಹೇಶ್‌ನಾಯಕ್, ನಾಗೇಂದ್ರ, ಪ್ರಶಾಂತ್, ದಾಸಿ ಶಿವಸ್ವಾಮಿ, ಚಿಕ್ಕಲಿಂಗಯ್ಯ ಮತ್ತಿತರರಿದ್ದರು.

ಸಾರ್ವಜನಿಕ ತಿಳುವಳಿಕೆ

ಈ ಮೂಲಕ ಸಾರ್ವಜನಿಕರಲ್ಲಿ ತಿಳಿಸುವುದೇನೆಂದರೆ, ನಮ್ಮ ಕಕ್ಷಿದಾರರಾದ ನಂದೀಶ್ ಬಿನ್ ಹನುಮಂತೇಗೌಡ ವಾಸ ಮನೆ ನಂ.270, 6ನೇ ಕ್ರಾಸ್, 3ನೇ ಮೈನ್, ಐ ಬ್ಲಾಕ್, ರಾಮಕೃಷ್ಣನಗರ, ಮೈಸೂರು ಮೊಬೈಲ್ ನಂ.9901722223 ಇವರು ಷೆಡ್ಯೂಲ್‌ನಲ್ಲಿ ನಮೂದು ಮಾಡಿರುವ ಸ್ವತ್ತನ್ನು ಲೇಟ್ ದಂಡನಾಯಕರವರ ಹೆಂಡತಿ ಮರಿನಿಂಗಮ್ಮ ಇವರ ಮಕ್ಕಳಾದ ದಂಡಮ್ಮ, ಲೇಟ್ ಕೆಂಪಚೌಡಮ್ಮರವರ ಮಕ್ಕಳು ಮತ್ತು ಮರಿನಿಂಗಮ್ಮರವರ ಮೊಮ್ಮಕ್ಕಳಾದ ರಂಗಸ್ವಾಮಿ.ಎಂ., ರೇಖಾ, ಮರಿನಿಂಗಮ್ಮರವರ ಮಗ ಲೇಟ್ ಪುಟ್ಟದಂಡನಾಯಕರವರ ಹೆಂಡತಿ ಶಿವಮ್ಮ, ಮಕ್ಕಳಾದ ರಾಜೇಶ ನಾಯಕ, ನಾಗರಾಜು.ಪಿ ಮತ್ತು ರವಿಕುಮಾರ್.ಪಿ. ಮರಿನಿಂಗಮ್ಮರವರ ಮಗ ಚೌಡನಾಯಕ ಇವರ ಹೆಂಡತಿ ರಾಜಮ್ಮ ಇವರ ಮಕ್ಕಳಾದ ಸವಿತ.ಸಿ, ಪ್ರವೀಣ್ ಕುಮಾರ್.ಸಿ., ಶಿವಕುಮಾರ್ ಸಿ. ಮತ್ತು ಮರಿಚೌಡಮ್ಮ, ಹುಲ್ಲೇಹಳ್ಳಿ, ಬಿಳಿಕೆರೆ ಹೋಬಳಿ, ಹುಣಸೂರು ತಾಲ್ಲೋಕು, ಮೈಸೂರು ಜಿಲ್ಲೆ, ಇವರ ಹಕ್ಕು ಬಾಧ್ಯತೆ ಅಧಿಕಾರ ಮಾಲೀಕತ್ವಕ್ಕೆ ಒಳಪಟ್ಟು ಸ್ವಾಧೀನದಲ್ಲಿರುವ ಷೆಡ್ಯೂಲ್ ಸ್ವತ್ತನ್ನು ನೊಂದಣಿ ಕ್ರಯ ಪತ್ರದ ಮೂಲಕ ಕ್ರಯಕ್ಕೆ ಪಡೆದುಕೊಳ್ಳುತ್ತಿರುತ್ತಾರೆ. ಆದ್ದರಿಂದ ಸದರಿ ಸ್ವತ್ತಿಗೆ ಸಂಬಂಧಿಸಿದಂತೆ ಯಾರಿಗಾದರು ಹಕ್ಕು ಭಾಧ್ಯತೆ, ಅಧಿಕಾರ, ಹಿತಾಸಕ್ತಿ, ಮಾಲೀಕತ್ವ ಭಾಗಾಂಶ ಅಥವಾ ದಾವೆಗಳು ಇದ್ದಂತಹ ಪಕ್ಷದಲ್ಲಿ ದಾಖಲೆಯೊಂದಿಗೆ ತಮ್ಮ ತಕರಾರರನ್ನು ಪತ್ರಿಕೆಯಲ್ಲಿ ಪ್ರಕಟಣೆಗೊಂಡ 7 ದಿನಗಳ ಒಳಗಾಗಿ ವಕೀಲರ ಕಚೇರಿಗಾಗಲಿ ಅಥವಾ ನಮ್ಮ ಕಕ್ಷಿದಾರರಿಗಾಗಲಿ ಸಲ್ಲಿಸತಕ್ಕದ್ದು. ಒಂದು ವೇಳೆ ಮೇಲ್ಕಂಡ ನಿಗಧಿತ ಕಾಲದಲ್ಲಿ ಯಾವುದೇ ತಕರಾರು ಬರದಿದ್ದ ಪಕ್ಷದಲ್ಲಿ ಬೇರೆ ಯಾರಿಗೂ ಷೆಡ್ಯೂಲ್ ಸ್ವತ್ತಿಗೆ ಅನುಗುಣವಾಗಿ ಹಕ್ಕು ಇರುವುದಿಲ್ಲವೆಂದು ತಿಳಿದು ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಕ್ರಯಕ್ಕೆ ಪಡೆದು ಕೊಳ್ಳುತ್ತಾರೆಂದು ಈ ಮೂಲಕ ತಿಳಿಯಪಡಿಸಲಾಗಿದೆ

ಷೆಡ್ಯೂಲ್

ಮೈಸೂರು ತಾಲ್ಲೋಕು, ಜಯಪುರ ಹೋಬಳಿ, ಉದ್ಬೂರು ಗ್ರಾಮ ಸರ್ವೆ ನಂಬರ್.119/1ರ ವಿಸ್ತೀರ್ಣ 1 ಎಕರೆ ಖುಷ್ಕಿ ಜಮೀನಿಗೆ ಚಕ್ಕುಬಂದಿ; ಪೂರ್ವಕ್ಕೆ– ಸರ್ವೆ ನಂಬರ್.122ರ ಜಮೀನು, ಪಶ್ಚಿಮಕ್ಕೆ–ಸರ್ವೆ ನಂಬರ್.119/2ರ ಜಮೀನು,, ಉತ್ತರಕ್ಕೆ– ಸರ್ವೆ ನಂಬರ್.120ರ ಜಮೀನು, ಮತ್ತು ದಕ್ಷಿಣಕ್ಕೆ– ಸರ್ವೆ ನಂಬರ್.118ರ ಜಮೀನು,

ಸಹಿ/– ಹೆಚ್.ಎಂ.ಮಾದೇಗೌಡ, ವಕೀಲರು,
ನಂ.2393, ಎಸ್.ಜಿ.ಕಾಂಪ್ಲೆಕ್ಸ್,
ನ್ಯೂ ಕಾಂತರಾಜೇಅರಸ್ ರಸ್ತೆ,
ಕೆ.ಜಿ.ಕೊಪ್ಪಲು, ಮೈಸೂರು–570009
ಮೊ: 9341392621

ಮೈಸೂರು ಮಿತ್ರ 44
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ದಿ ಗ್ರ್ಯಾಜ್ಯುಯೇಟ್ಸ್ ಕೋ-ಆಪರೇಟಿವ್ ಬ್ಯಾಂಕ್ ಲಿ., ಚಾಮರಾಜ ಜೋಡಿ ರಸ್ತೆ, ಮೈಸೂರು–570 024

ಚಿನ್ನದ ಒಡವೆಗಳ ಬಹಿರಂಗ ಹರಾಜು

ಈ ಕೆಳಕಂಡ ಸದಸ್ಯರು ನಮ್ಮ ಬ್ಯಾಂಕಿನಿಂದ ಚಿನ್ನದ ಒಡವೆಗಳ ಮೇಲೆ ಸಾಲ ಪಡೆದು ಇದುವರೆವಿಗೂ ಎಲ್ಲಾ ತರಹ ನೋಟಿಸ್‌ಗಳನ್ನು ಕೊಟ್ಟಾಗ್ಯೂ ಸಾಲದ ಮೊಬಲಗು ಇತ್ಯಾದಿಗಳನ್ನು ತೀರಿಸದೇ ಇರುತ್ತಾರೆ. ಆದ್ದರಿಂದ ಇವರುಗಳ ಚಿನ್ನದ ಒಡವೆಗಳನ್ನು ಬ್ಯಾಂಕಿನ ನಿಯಮದ ರೀತ್ಯಾ ಬ್ಯಾಂಕಿನ ಕಛೇರಿ ಆವರಣದಲ್ಲಿ ದಿನಾಂಕ: 27–3–2024ನೇ ಬುಧವಾರ ಬೆಳಿಗ್ಗೆ 11 ಗಂಟೆಗೆ ಸರಿಯಾಗಿ ಬಹಿರಂಗವಾಗಿ ಹರಾಜು ಮಾಡಲಾಗುತ್ತದೆ. ಬ್ಯಾಂಕಿನ ಷರತ್ತುಗಳಿಗೆ ಒಳಪಟ್ಟು ರೂ. 5000/– ಠೇವಣಿ ಮಾಡಿ ಹರಾಜಿನಲ್ಲಿ ಭಾಗವಹಿಸಬಹುದು.

ಹರಾಜಿನ ಮೊಬಲಗನ್ನು ಒಪ್ಪುವ ಅಥವಾ ತಿರಸ್ಕರಿಸುವ ಹಕ್ಕನ್ನು ಕಾಯ್ದಿರಸಲಾಗಿದೆ. ಹರಾಜು ಒಪ್ಪಿದ್ದಲ್ಲಿ ಮೊಬಲಗನ್ನು ತಕ್ಷಣ ಬ್ಯಾಂಕಿಗೆ ಜಮಾ ಮಾಡಿ ಆಭರಣಗಳನ್ನು ಪಡೆಯತಕ್ಕದ್ದು. ಇಲ್ಲದಿದ್ದಲ್ಲಿ ಠೇವಣಿ ಮೊಬಲಗನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಕ್ರಮ ಸಂಖ್ಯೆ	ಷೇರು ಖಾತೆ ಸಂಖ್ಯೆ	ಖಾತೆ ಸಂಖ್ಯೆ	ಹೆಸರು ಮತ್ತು ವಿಳಾಸ ಮತ್ತು ಮೊಬೈಲ್ ನಂ.	ಸಾಲದ ದಿನಾಂಕ	ವಾಯಿದೆ ದಿನಾಂಕ	ಸಾಲದ ಮೊಬಲಗು	ಬಾಕಿ ಮೊಬಲಗು	ಬಡ್ಡಿ ಮತ್ತು ಇತರೆ ವಿವರಗಳು 06-03-2023ಕ್ಕೆ	ಒಟ್ಟು ಮೊತ್ತ
1.	Ams/ 501	13395	ರೂಪ.ಪಿ.ಕುಮಾರ್ ನಂ.1054/01, ಸಿ.ಹೆಚ್–21/1, ಮೈತಿಲಿ, ದೇವಪಾರ್ತೀವ ರಸ್ತೆ, ಚಾಮರಾಜಪುರಂ, ಮೈಸೂರು–570005 ಮೊ.ನಂ. 9901566622	03-03-2022	03-03-2023	1,50,000	1,50,000	28,187.00 2926.32	1,81,113.32
2.	Nms/ 768	13396	ಪವನ್ ಕುಮಾರ್. ಆರ್ #788/88, 12ನೇ ಕ್ರಾಸ್, ರಾಮಾನುಜ ರಸ್ತೆ, ಲಕ್ಷ್ಮೀಪುರಂ, ಮೈಸೂರು–570020 ಮೊ.ನಂ. 9731937501	03-03-2022	03-03-2023	75,000	75,000	14,093.00	89,093.00
3.	Ams/ 494	13517	ಮಹದೇವ್.ಎನ್. #2378/ಎ, ಕಾಂತರಾಜ್ ಅರಸ್ ರಸ್ತೆ, ಕೆ.ಜಿ. ಕೊಪ್ಪಲು, ಮೈಸೂರು ಮೊ.ನಂ. 9448601222	10-06-2022	10-06-2023	1,10,500	1,10,500	17,917.00 1,554.85	1,29,971.85
4.	Ams/ 494	13533	ಮಹದೇವ್.ಎನ್. #2378/ಎ, ಕಾಂತರಾಜ್ ಅರಸ್ ರಸ್ತೆ, ಕೆ.ಜಿ. ಕೊಪ್ಪಲು, ಮೈಸೂರು ಮೊ.ನಂ. 9448601222	30-06-2022	30-06-2023	1,06,000	1,06,000	16,637.00 2,255.92	1,24,892.92
5.	Shr/ 8704	13649	ನರಸಿಂಹಸ್ವಾಮಿ ಹೆಚ್.ಸಿ. #622, ಅಡವಿಸ್ವಾಮಿ ಕ್ರಾಸ್, ಇರ್ವಿನ್ ರಸ್ತೆ, ಮಂಡಿ ಮೊಹಲ್ಲಾ, ಮೈಸೂರು–570021 ಮೊ.ನಂ. 9164411534	16-01-2023	16-01-2024	1,80,000	1,22,126	12,134.00 247.53	1,34,507.53
6.	Ams/ 495	13669	ರಾಣಿ ಎಸ್.ಎಸ್., ಎ–703, ಫೌಂಡೇಷನ್ ಸಿಲ್‌ವರ್ ಸ್ಪ್ರಿಂಗ್, ಕೆ.ಆರ್.ಎಸ್. ರಸ್ತೆ, ಹೂಟಗಳ್ಳಿ, ಮೈಸೂರು–570018 ಮೊ.ನಂ. 9986796873	07-02-2023	07-02-2024	3,37,000	3,37,000	31,661.00 3,102.65	3,71,763.65
7.	Ams/ 495	13670	ರಾಣಿ ಎಸ್.ಎಸ್. ಎ–703, ಫೌಂಡೇಷನ್ ಸಿಲ್‌ವರ್ ಸ್ಪ್ರಿಂಗ್, ಕೆ.ಆರ್.ಎಸ್. ರಸ್ತೆ, ಹೂಟಗಳ್ಳಿ, ಮೈಸೂರು–570018 ಮೊ.ನಂ. 9986796873	07-02-2023	07-02-2024	2,40,000	2,40,000	22,548.00 2,209.51	2,64,757.51
8.	Shr/ 13126	13673	ಗಿರೀಶ್ ಎಂ.ಹೆಚ್. #2656, ಮೇದರಕೇರಿ, 2ನೇ ಕ್ರಾಸ್, ಕೆ.ಆರ್. ಮೊಹಲ್ಲಾ, ಮೈಸೂರು–570004 ಮೊ.ನಂ.9480951455, 7760948889	09-02-2023	09-02-2024	1,58,000	1,58,000	14,766.00 112.58	1,72,878.58
9.	Ams/ 804	13675	ನಾಗರಾಜು.ಬಿ. #2744/1, 1ನೇ ಕ್ರಾಸ್, ಕೆ.ಜಿ. ಕೊಪ್ಪಲ್, ಮೈಸೂರು–570004 ಮೊ.ನಂ. 9342132177	10-02-2023	10-02-2024	76,500	76,500	7,129.00 50.28	83,679.28
10.	Ams/ 623	13693	ಯಸೀನ್ ಪಾಶಾ #69, 3ನೇ ಕ್ರಾಸ್, ಕೆ.ಇ.ಬಿ. ಕಾಲೋನಿ, ಉದಯಗಿರಿ, ಮೈಸೂರು–570 019 ಮೊ.ನಂ. 9986493789	23-02-2023	23-02-2024	55,000	55,000	4,949.00	59,949.00

ಸೂಚನೆ: ಹರಾಜಿನ ದಿನದಂದು ಯಾವುದಾದರೂ ಕಾರಣದಿಂದ ಸರ್ಕಾರ ಬ್ಯಾಂಕಿಗೆ ರಜೆ ಘೋಷಿಸಿದಲ್ಲಿ ಬ್ಯಾಂಕಿನ ವ್ಯವಹಾರದ ಮುಂದಿನ ತಾರೀಖಿನ ಅದೇ ವೇಳೆಯಲ್ಲಿ ಹರಾಜನ್ನು ನಡೆಸಲಾಗುವುದು.

ಸಹಿ/– ವ್ಯವಸ್ಥಾಪಕರು

ಎ.1ರಿಂದ ಮೈಸೂರು ಪಾಲಿಕೆ ವ್ಯಾಪ್ತಿ ಆಸ್ತಿ ತೆರಿಗೆ ಹೆಚ್ಚಳ

ಎಲ್ಲಾ 9 ವಲಯ ಕಚೇರಿಗಳ ಕಂದಾಯಾಧಿಕಾರಿಗಳಿಂದ ಮಾಹಿತಿ ಪಡೆದ ನಂತರ ಶೇಕಡಾವಾರು ಹೆಚ್ಚಳ ಪ್ರಕಟ: ಆಯುಕ್ತೆ ಡಾ.ಎನ್‌ಎನ್.ಮಧು

ಮೈಸೂರು,ಮಾ.16(ಆರ್‌ಕೆ)–ಮೈಸೂರು ಮಹಾನಗರಪಾಲಿಕೆ ವ್ಯಾಪ್ತಿಯ ಆಸ್ತಿಗಳ ತೆರಿಗೆ ಪರಿಷ್ಕರಣೆಯಾಗಲಿದ್ದು, ಏಪ್ರಿಲ್ 1ರಿಂದ ಹೊಸ ದರ ಜಾರಿಗೆ ಬರಲಿದೆ. ಪಾಲಿಕೆಯ ಎಲ್ಲಾ 9 ವಲಯ ಕಚೇರಿಗಳ ಕಂದಾಯ ಅಧಿಕಾರಿಗಳಿಂದ ಮಾಹಿತಿ ಪಡೆದ ಬಳಿಕ ಯಾವ ಯಾವ ಪ್ರದೇಶದಲ್ಲಿ ಎಷ್ಟೆಷ್ಟು ಆಸ್ತಿ ತೆರಿಗೆ ಹೆಚ್ಚಳವಾಗಿದೆ ಎಂಬುದನ್ನು ಪ್ರಕಟಿಸಲಾಗುವುದು ಎಂದು ಮೈಸೂರು ಮಹಾನಗರ ಪಾಲಿಕೆಯ ನೂತನ ಆಯುಕ್ತರಾದ ಡಾ.ಎನ್‌ಎನ್.ಮಧು 'ಮೈಸೂರುಮಿತ್ರ'ನಿಗೆ ತಿಳಿಸಿದ್ದಾರೆ.



ಡಾ.ಎನ್‌ಎನ್.ಮಧು
ಪಾಲಿಕೆ ನೂತನ ಆಯುಕ್ತೆ

ಇತ್ತೀಚೆಗಷ್ಟೇ ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಮೈಸೂರು ನಗರಪಾಲಿಕೆ ಆಯುಕ್ತ ರಾಗಿದ್ದ ಆಶಾದ್ ಉರ್ ರೆಹಮಾನ್ ಷರೀಫ್‌ರನ್ನು ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರ್ಕಾರ ವಿಜಯಪುರ ಮಹಾನಗರಪಾಲಿಕೆ ಆಯುಕ್ತರಾಗಿ ವರ್ಗಾವಣೆ ಮಾಡಿತ್ತು. ಅವರ ವರ್ಗಾವಣೆಯಿಂದ ತೆರವುಗೊಂಡ ಮೈಸೂರು ಮಹಾ ನಗರಪಾಲಿಕೆ ಆಯುಕ್ತರ ಸ್ಥಾನಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿ ನಿರ್ದೇಶಕಿ ಕೆಎಎಸ್ ಅಧಿಕಾರಿ (ಹಿರಿಯ ಶ್ರೇಣಿ) ಡಾ.ಎನ್‌ಎನ್.ಮಧು ಅವರನ್ನು ವರ್ಗಾವಣೆ ಮಾಡಲಾಗಿದೆ.

ಮೈಸೂರು ಮಹಾನಗರ ಪಾಲಿಕೆಗೆ ಆಸ್ತಿ ತೆರಿಗೆಯು ಪ್ರಮುಖ ಆದಾಯ ಮೂಲವಾಗಿದ್ದು, ನಿವೇಶನ, ಮನೆ, ವಾಣಿಜ್ಯ ಕಟ್ಟಡ, ಕೈಗಾರಿಕೆ, ಉದ್ದಿಮೆಗಳು, ಸಿನಿಮಾ ಮಂದಿರ, ಕಲ್ಯಾಣ ಮಂಟಪಗಳು, ಸಮುದಾಯ ಭವನಗಳು, ಮಾಲ್‌ಗಳು, ಶಾಲಾ–ಕಾಲೇಜು ಸೇರಿದಂತೆ ಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ತಿಗಳ ತೆರಿಗೆಯನ್ನು ಹೆಚ್ಚಿಸಲಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಕರ್ನಾಟಕ ಮುನಿಸಿಪಲ್ ಕಾಯ್ದೆ 1976 ರನ್ವಯ ರಾಜ್ಯದ ಎಲ್ಲಾ ಪಾಲಿಕೆಗಳ ವ್ಯಾಪ್ತಿಯ ಆಸ್ತಿಗಳ ತೆರಿಗೆ ಪರಿಷ್ಕರಿಸಲು ರಾಜ್ಯ ಸರ್ಕಾರ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಏಪ್ರಿಲ್ 1 ರಿಂದ ಜಾರಿಗೆ ಬರುವಂತೆ ಹೆಚ್ಚಿಸಲಾಗಿದೆ. ಮೈಸೂರು ಬಳ್ಳಾರಿ, ತುಮಕೂರು, ಶಿವಮೊಗ್ಗ, ಹುಬ್ಬಳ್ಳಿ–ಧಾರವಾಡ, ಬೆಳಗಾವಿ, ವಿಜಯಪುರ, ಮಂಗಳೂರು ಮತ್ತು ಕಲಬುರಗಿ ಮಹಾನಗರಪಾಲಿಕೆಗಳಲ್ಲಿ ತೆರಿಗೆ ದರ ಪರಿಷ್ಕರಿಸಲಾಗಿದೆ.

ರಸ್ತೆಯ ಅಗಲ, ಗೈಡ್‌ಲೈನ್ಸ್ ವ್ಯಾಲ್ಯು ಆಧಾರದ ಮೇಲೆ ಮೈಸೂರಿನ ಪಾಲಿಕೆ ವ್ಯಾಪ್ತಿಯ ಆಸ್ತಿಗಳ ತೆರಿಗೆ ದರದ ಬಗ್ಗೆ ಆಯಾ ವ್ಯಾಪ್ತಿಯ ವಲಯ ಕಚೇರಿ ಕಂದಾಯಾಧಿಕಾರಿಗಳ ವರದಿ ಪಡೆದು ತೆರಿಗೆ ಪರಿಷ್ಕೃತ ದರವನ್ನು ಪ್ರಕಟಿಸಲಾಗುವುದು ಎಂದ ಡಾ.ಮಧು, ಸಾಧಾರಣ ಪ್ರಮಾಣದಲ್ಲಿ ತೆರಿಗೆ ದರ ಹೆಚ್ಚಳವಾಗುವುದರಿಂದ ಆಸ್ತಿ ಮಾಲೀಕರು ಆತಂಕ ಪಡುವ ಅಗತ್ಯವಿಲ್ಲ ಎಂದರು.



ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆಯನ್ನು ಪಾವತಿಸುವಂತೆ ಮನವಿ ಮಾಡಿರುವ ಅವರು, ಏಪ್ರಿಲ್ 30ರೊಳಗೆ ಪಾವತಿಸಿದರೆ ಪ್ರಸಕ್ತ ಸಾಲಿನ ಆಸ್ತಿ ತೆರಿಗೆ ಮೇಲೆ ಶೇ.5ರಷ್ಟು ರಿಯಾಯಿತಿ ನೀಡಲಾಗುವುದು ಎಂದರು. ಮೈಸೂರು ಮಹಾನಗರ ಪಾಲಿಕೆ ಮೇಯರ್, ಸದಸ್ಯರ ಅಧಿಕಾರಾವಧಿ ಅಂತ್ಯವಾಗಿರುವುದರಿಂದ ಪಾಲಿಕೆ ಆಡಳಿತಾಧಿಕಾರಿಗಳು ಹಾಗೂ ಆಯುಕ್ತರು ಆಸ್ತಿ ತೆರಿಗೆ ಹೆಚ್ಚಳ ಸಂಬಂಧ ನಿರ್ಧರಿಸಿ ಅಧಿಸೂಚನೆ ಹೊರಡಿಸಿದ್ದಾರೆ.

ಇಂದು ಬಂದ ಸೋಲು ನಾಳೆ ಗೆಲುವಾಗುತ್ತದೆ...!

ಡಿವಿಜಿಯವರ ಮಂಕುತಿಮ್ಮನ ಕಗ್ಗದ ಮೂಲಕ ವಿರೋಧಿಗಳಿಗೆ ಪ್ರತಾಪ್ ಸಿಂಹ ಟಾಂಗ್

ಮೈಸೂರು, ಮಾ.16(ಬಿಎಲ್‌ಯು) – ಇಂದು ಬಂದ ಸೋಲು ನಾಳೆ ಗೆಲುವಾಗುತ್ತದೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ವಂಚಿತ ಹಾಲಿ ಸಂಸದ ಪ್ರತಾಪ್ ಸಿಂಹ ವಿರೋಧಿಗಳಿಗೆ ಟಾಂಗ್ ನೀಡಿದ್ದಾರೆ.

ಮಂಕುತಿಮ್ಮನ ಕಗ್ಗದ ಸಾಲುಗಳನ್ನು ಉಲ್ಲೇಖಿಸಿರುವ ಪ್ರತಾಪ್ ಸಿಂಹ ನಾನು ಅಲೆಗಳಂತೆ ಮೇಲೇಳುವೆ ಎಂದು ಘರ್ಜಿಸಿದ್ದಾರೆ.

ಸತ್ತೆನೆಂದೆನಬೇಡ;
ಸೋತೆನೆಂದೆನಬೇಡ ।
ಬತ್ತಿತೆನ್ನೊಳು
ಸತ್ತ್ವದೂಟೆಯೆನಬೇಡ ॥
ಮೃತ್ಯುವೆನ್ನುವುದೊಂದು
ತೆರೆಯಿಳಿತ; ತೆರೆಯೇರು ।
ಮತ್ತೆ ತೋರ್ಪುದು ನಾಳೆ–
ಮಂಕುತಿಮ್ಮ ॥

ಡಿವಿಜಿ ಅವರ **ಕಗ್ಗದ** ಈ ಸಾಲುಗಳನ್ನು ಉಲ್ಲೇಖಿಸಿರುವ ಪ್ರತಾಪ್ ಸಿಂಹ ಅದರ ತಾತ್ಪರ್ಯ ವಿವರಿಸಿ, ತಾನು ಫೀನಿಕ್ಸ್‌ನಂತೆ ಮತ್ತೆ ಮೇಲೇಳುತ್ತೇನೆ ಎಂದು ಸೂಚ್ಯವಾಗಿ ಹೇಳಿದ್ದಾರೆ.

ಬ್ರಹ್ಮ ವಸ್ತುವು ಆನಂದಪಡುವುದಕೋಸ್ಕರ ಪ್ರಕೃತಿಯ ಮೂಲಕವಾಗಿ ಆಟವನ್ನು ನಡೆಸುತ್ತಿದೆ. ತ್ರಿಗುಣಗಳ ವ್ಯತ್ಯಾಸದಿಂದ ಸೋಲು, ಗೆಲುವು ಸ್ವಾಭಾವಿಕವೇ? ಈ ಲೀಲೆ ಸತತವಾಗಿ ಕೊನೆಯಿಲ್ಲದೆ ನಡೆಯುತ್ತಿರುವುದರಿಂದ ಇಲ್ಲಿ ಒಂದು ಸಲ ಸೋಲಾಗಬಹುದು, ಇನ್ನೊಂದು ಸಲ ಗೆಲುವಾಗಬಹುದು ಎಂದು ಪ್ರತಾಪ್ ಸಿಂಹ ತಿಳಿಸಿದ್ದಾರೆ.



ಆದ್ದರಿಂದ ಈ ತತ್ವವನ್ನು ಮನದಟ್ಟು ಮಾಡಿಕೊಂಡು, ನನ್ನ ಜೀವನ ಕೆಟ್ಟಿತು, ನಾನು ಸಾಧಿಸಬೇಕಾದದ್ದನ್ನು ಸಾಧಿಸದೆಯೇ ಸಾಯುತ್ತಿದ್ದೇನೆ. ನಾನು ಸೋತೆ, ನನ್ನ ಒಳ ಸತ್ವ ಬತ್ತಿ ಹೋಗಿದೆ, ನಾನು ಕೆಲಸಕ್ಕೆ ಬಾರದವನಾದೆ ಎಂದು ನಿರಾಸೆಯ ಮನೋಭಾವವನ್ನು ತಳೆಯುವುದು ತಪ್ಪು ಎನ್ನುತ್ತಾರೆ ತಿಮ್ಮಗುರು ಎಂದಿದ್ದಾರೆ.

ಮೃತ್ಯು ಎಂಬುವುದು ಒಂದು ಅಲೆಯಂತೆ; ಅಲೆ ಮೇಲೇಳುತ್ತದೆ ಮತ್ತೆ ಬೀಳುತ್ತದೆ, ಇನ್ನೊಂದು ಸಲ ಏಳುತ್ತದೆ. ಹೀಗೆ ನಮ್ಮ ಜೀವನ ಒಂದೇ ಜನ್ಮದಲ್ಲಿ ಮುಗಿದು ಹೋಗುವುದಿಲ್ಲ. ಇಂದು ಬಿದ್ದ ಅಲೆ ನಾಳೆ ಏಳುತ್ತದೆ. ಇಂದು ಬಂದ ಸೋಲು ನಾಳೆ ಗೆಲುವಾಗುತ್ತದೆ ಎಂದು ಮಂಕುತಿಮ್ಮನ ತಾತ್ಪರ್ಯದ ಮೂಲಕ ತಮ್ಮ ಅಂತರಾಳದ ಮಾತುಗಳನ್ನು ಪ್ರತಾಪ್ ಸಿಂಹ ವಿವರಿಸಿದ್ದಾರೆ.

ಮೈಸೂರಲ್ಲಿ ಒಕ್ಕಲಿಗ ಆರಕ್ಷಕರ ಸೇವಾ ಟ್ರಸ್ಟ್ ಉದ್ಘಾಟನೆ



ಮೈಸೂರಿನ ಹೆಬ್ಬಾಳು, ಶ್ರೀ ಲಕ್ಷ್ಮೀಕಾಂತ ದೇವಸ್ಥಾನದ ಸಭಾಂಗಣದಲ್ಲಿ ಆದಿಚುಂಚನಗಿರಿ ಶ್ರೀ ಕ್ಷೇತ್ರದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದ ಸ್ವಾಮೀಜಿ ಒಕ್ಕಲಿಗ ಆರಕ್ಷಕರ ಸೇವಾ ಟ್ರಸ್ಟ್ ಶನಿವಾರ ಉದ್ಘಾಟಿಸಿದರು.

ಮೈಸೂರು,ಮಾ.16(ಆರ್‌ಕೆ)– ಮೈಸೂರಿನ ಹೆಬ್ಬಾಳು, ಶ್ರೀ ಲಕ್ಷ್ಮೀಕಾಂತ ದೇವಸ್ಥಾನದ ಸಭಾಂಗಣದಲ್ಲಿ ಆದಿ ಚುಂಚನಗಿರಿ ಶ್ರೀ ಕ್ಷೇತ್ರದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದ ಸ್ವಾಮೀಜಿ ಒಕ್ಕಲಿಗ ಆರಕ್ಷಕರ ಸೇವಾ ಟ್ರಸ್ಟ್ ಉದ್ಘಾಟಿಸಿದರು.

ನಂತರ ಆಶೀರ್ವಚನ ನೀಡಿದ ಶ್ರೀಗಳು, ಆರ್ಥಿಕ, ಸಾಮಾಜಿಕ ಸ್ವಾವಲಂಬನೆಗಾಗಿ, ಹಲವು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು, ಆ ಮೂಲಕ ದೇಶ ಕಟ್ಟುವ ಸಲುವಾಗಿ ಇಂತಹ ಸಂಸ್ಥೆಗಳ ಅಗತ್ಯವಿದೆ. ಕೇವಲ ಪೊಲೀಸರಲ್ಲದೆ, ಶಾಲಾ ಶಿಕ್ಷಕರು, ಕಾಲೇಜು ಉಪನ್ಯಾಸಕರು, ರೈತರು, ಐಟಿ–ಬಿಟಿ ಉದ್ಯೋಗಿಗಳು, ವಕೀಲರು, ವೈದ್ಯರುಗಳು ಸಹ ಪ್ರತ್ಯೇಕ ಸಂಘಗಳನ್ನು ಸ್ಥಾಪಿಸಿ ಜಾತ್ಯಾತೀತ ಮನೋಭಾವನೆಯಿಂದ ಸೇವೆ ಸಲ್ಲಿಸಿ ಎಂದು ಹೇಳಿದರು.

ಆಳುವವರ ಕಣ್ಣೊರೆಸಿ, ಆಳುವವರು ನಾವು, ಆಳುವವರಲ್ಲ. ಕೆಂಪೇಗೌಡರು ನಿರ್ಮಿಸಿದ ಬೆಂಗಳೂರಲ್ಲಿ ಎಲ್ಲರೂ ಬದುಕುತ್ತಿದ್ದಾರೆ. ಅದೇ ರೀತಿ ಒಕ್ಕಲಿಗ ಆರಕ್ಷಕರ ಸೇವಾ ಟ್ರಸ್ಟ್ ಜಾತ್ಯಾತೀತ ಮನೋಭಾವನೆಯಿಂದ ಸರ್ವರನ್ನೂ ಒಗ್ಗೂಡಿಸುವ ಕೆಲಸ ಮಾಡಬೇಕು. ಆ ಮೂಲಕ ಸಮುದಾಯದವರ ಸಮಸ್ಯೆ ಪರಿಹರಿಸಿಕೊಳ್ಳುವಂತೆಯೂ ಶ್ರೀ ನಿರ್ಮಲಾನಂದನಾಥ ಸ್ವಾಮಿಗಳು ಇದೇ ವೇಳೆ ಸಲಹೆ ನೀಡಿದರು.

85 ವರ್ಷ ತುಂಬಿದ ನಿವೃತ್ತ ಪೊಲೀಸ್ ಅಧಿಕಾರಿಗಳಾದ ಸಣ್ಣೇಗೌಡ, ಹನುಮಂತಪ್ಪ, ಕಾಳೇಗೌಡ, ಪೊಲೀಸ್ ಕ್ರೆಡಿಟ್ ಸೊಸೈಟಿಗೆ ಆಯ್ಕೆಯಾದ ನಾಲ್ವರು, ಪದವಿ ಮತ್ತು ಕ್ರೀಡೆಯಲ್ಲಿ ಚಿನ್ನದ ಪದಕ ಪಡೆದ ನಾಲ್ವರನ್ನು ಶ್ರೀಗಳು ಇದೇ ಸಂದರ್ಭ ಅಭಿನಂದಿಸಿದರು. ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಟ್ರಸ್ಟ್ ಮಹಾ ಪೋಷಕರಾದ ನಿವೃತ್ತ ಡಿಐಜಿ ಕೆ.ಟಿ. ಬಾಲಕೃಷ್ಣ, ಅಧ್ಯಕ್ಷ ಧನಂಜಯ, ಕಾನೂನು ಸಲಹೆಗಾರ ಬಿ.ಪಿ.ಸುರೇಶ್, ಸಲಹೆಗಾರ ಶಂಕರೇಗೌಡ, ಸಿಐಟಿಬಿ ಮಾಜಿ ಅಧ್ಯಕ್ಷ ಡಿ. ಮಾದೇಗೌಡ, ಟ್ರಸ್ಟ್ ಗೌರವ ಅಧ್ಯಕ್ಷ ಟಿ.ಎನ್. ನಾಗೇಶ, ಉಪಾಧ್ಯಕ್ಷರುಗಳಾದ ಟಿ. ಚೆಲುವೇಗೌಡ, ಶ್ರೀನಿವಾಸಗೌಡ, ಮೊಗಣ್ಣೇಗೌಡ, ಹೆಚ್.ಎಲ್. ವೀಣಾ, ಕಾರ್ಯಾಧ್ಯಕ್ಷ ಜೆ.ಸ್ವಾಮಿ, ಪ್ರಧಾನ ಕಾರ್ಯದರ್ಶಿ ಮರೀಗೌಡ ಸೇರಿದಂತೆ ಪದಾಧಿಕಾರಿಗಳು ಹಾಗೂ ನಿರ್ದೇಶಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಡಿಇಎಲ್‌ಇಡಿ ದಾಖಲಾತಿ ಪ್ರಕ್ರಿಯೆ ಪ್ರಾರಂಭ

ಮೈಸೂರು,ಮಾ.16– 2023–24ನೇ ಸಾಲಿನ ಡಿಇಎಲ್‌ಇಡಿ (ಟಿಸಿಹೆಚ್–ಪ್ರಾಥಮಿಕ ಶಾಲಾ ಶಿಕ್ಷಕರ ತರಬೇತಿ) ದಾಖಲಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ. ಈ ಹಿನ್ನೆಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಸಾಮಾನ್ಯ ಅಭ್ಯರ್ಥಿಗಳು ಶೇ.30ರಷ್ಟು ಪ.ಜಾತಿ ಅಥವಾ ಪ.ಪಂಗಡ ವಿದ್ಯಾರ್ಥಿಗಳು ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು ಮತ್ತು ಪಿಯುಸಿ ಪೂರಕ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳಿಗೂ ಅವಕಾಶವಿರುತ್ತದೆ. ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಶುಲ್ಕವಿರುವುದಿಲ್ಲ. ಸಾಮಾನ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕ ರೂ. 3065 (ವಿದ್ಯಾರ್ಥಿವೇತನ ಶುಲ್ಕ ಮರುಪಾವತಿಗೆ ಅವಕಾಶವಿರುತ್ತದೆ. ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ರೂ. 25000 ವಿದ್ಯಾರ್ಥಿವೇತನ ಇರುತ್ತದೆ). ಆಸಕ್ತರು ಕಚೇರಿಯ ಪಿಎಸ್‌ಟಿಇ ನೋಡಲ್ ಅಧಿಕಾರಿ ಅಮಿತ್ ಮೊ:8971265899 ಅನ್ನು ಸಂಪರ್ಕಿಸಬಹುದು ಎಂದು ವಸಂತಮಹಲ್‌ನ ಡಯೆಟ್ ಪ್ರಾಂಶುಪಾಲರು ತಿಳಿಸಿದ್ದಾರೆ.

ಏಳನೇ ವೇತನ ಆಯೋಗದ ವರದಿ ಪರಿಶೀಲಿಸಿ ಜಾರಿ: ಸಿಎಂ

ಬೆಂಗಳೂರು, ಮಾ. 16(ಕೆಎಂಶಿ)– ರಾಜ್ಯದ 7ನೇ ವೇತನ ಆಯೋಗವು ಸಲ್ಲಿಸಿರುವ ವರದಿಯಲ್ಲಿ ಮೂಲವೇತನದಲ್ಲಿ ಶೇಕಡ 27.5ರಷ್ಟು ಹೆಚ್ಚಳ ಮಾಡಲು ಶಿಫಾರಸು ಮಾಡಿದ್ದು, ವರದಿ ಪರಿಶೀಲಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ನಿವೃತ್ತ ಮುಖ್ಯ ಕಾರ್ಯದರ್ಶಿ ಕೆ.ಸುಧಾಕರ ರಾವ್ ಅಧ್ಯಕ್ಷತೆಯ ಏಳನೇ ವೇತನ ಆಯೋಗದ ವರದಿ ಸ್ವೀಕರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು, ವೇತನ ಆಯೋಗದ ಅವಧಿಯನ್ನು ಮೂರು ತಿಂಗಳು ವಿಸ್ತರಿಸಲಾಗಿತ್ತು, ಅವಧಿಯು ಮಾ.15ರಂದು ಮುಕ್ತಾಯಗೊಂಡಿದ್ದು, ನಿನ್ನೆ ತಾವು ಮೈಸೂರಿನಲ್ಲಿದ್ದ ಕಾರಣ ವರದಿ ಸ್ವೀಕರಿಸಲು ಸಾಧ್ಯವಾಗಿರಲಿಲ್ಲ ಎಂದರು. ಹಾಗಾಗಿ ಇಂದು ವರದಿ ಸ್ವೀಕರಿಸಲಾಗಿದೆ. ವರದಿಯಲ್ಲಿ ಕನಿಷ್ಠ ಮೂಲ ವೇತನವನ್ನು 17,000 ರೂ.ಗಳಿಂದ 27 ಸಾವಿರ ರೂ.ಗಳವರೆಗೆ ಹೆಚ್ಚಿಸುವಂತೆ ಶಿಫಾರಸು ಮಾಡಲಾಗಿದೆ. ಇದರೊಂದಿಗೆ ಇನ್ನೂ ಅನೇಕ ಶಿಫಾರಸುಗಳಿದ್ದು ವರದಿಯನ್ನು ಆರ್ಥಿಕ ಇಲಾಖೆಗೆ ನೀಡಲಾಗಿದೆ. ಆರ್ಥಿಕ ಇಲಾಖೆ ವರದಿಯನ್ನು ಕೂಲಂಕಷವಾಗಿ ಅಧ್ಯಯನ ಮಾಡಿ, ನೀಡುವ ಸಲಹೆಗಳ ಆಧಾರದಲ್ಲಿ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ವಾಸು ಅವರಿಗೆ ಪತ್ರಿಕಾ ಪ್ರತಿನಿಧಿಗಳ ಶ್ರದ್ಧಾಂಜಲಿ



ಮೈಸೂರು, ಮಾ. 16(ಆರ್‌ಕೆ)– ಮಾರ್ಚ್ 9ರಂದು ನಿಧನರಾದ ಮಾಜಿ ಶಾಸಕ, ವಿದ್ಯಾ ವಿಕಾಸ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಹಾಗೂ ಮೈಸೂರು ಜಿಲ್ಲಾ ಅಧಿಕೃತ ಪತ್ರಿಕಾ ಪ್ರತಿನಿಧಿಗಳ ಸಂಘದ ಗೌರವಾಧ್ಯಕ್ಷರಾದ ವಾಸು ಅವರಿಗೆ ಮೈಸೂರಿನ ಚಿಕ್ಕಗಡಿಯಾರ ಬಳಿ ಇಂದು ಬೆಳಗ್ಗೆ ಪತ್ರಿಕಾ ಪ್ರತಿನಿಧಿಗಳು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ಮೈಸೂರು ಜಿಲ್ಲಾ ಅಧಿಕೃತ ಪತ್ರಿಕಾ ಪ್ರತಿನಿಧಿಗಳ ಸಂಘದ ಅಧ್ಯಕ್ಷ ಪಿ. ಸುರೇಶ್ ಮಾತನಾಡಿ, ಸಂಘದ ಗೌರವಾಧ್ಯಕ್ಷರಾಗಿ, ಶಿಕ್ಷಣ, ರಾಜಕೀಯ, ಕ್ರೀಡೆ, ಕೈಗಾರಿಕೆ, ಕಲಾ ಕ್ಷೇತ್ರಗಳಲ್ಲಿ ಛಾಪು ಮೂಡಿದ್ದ ವಾಸು ಅವರು, ಪತ್ರಿಕಾ ರಂಗದಲ್ಲಿ ಅವಿರತ ಸೇವೆ ಸಲ್ಲಿಸಿದ್ದರು ಎಂದರು

ನಗರಪಾಲಿಕೆ ಮಾಜಿ ಸದಸ್ಯ ಪಿ. ಪ್ರಶಾಂತ್‌ಗೌಡ ಅವರು ವಾಸು ಅವರೊಂದಿಗಿನ ಸಂಬಂಧವನ್ನು ಸ್ಮರಿಸಿದರೆ, ಸಂಘದ ಪ್ರಧಾನ ಕಾರ್ಯದರ್ಶಿ ಎ. ರವಿ, ಚಾಮರಾಜ ಕ್ಷೇತ್ರದ ಶಾಸಕರಾಗಿ ವಾಸು ಅವರು ಹಲವು ಆಸ್ಪತ್ರೆ ಕಟ್ಟಡಗಳನ್ನು ನಿರ್ಮಿಸಿ ರೋಗಿಗಳ ಚಿಕಿತ್ಸೆಗೆ ನೆರವಾಗಿರುವುದು ಅವರ ಸೇವಾ ಪ್ರತೀಕವಾಗಿದೆ ಎಂದರು.

ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನಿಕಟಪೂರ್ವ ಅಧ್ಯಕ್ಷ ಎಸ್.ಟಿ. ರವಿಕುಮಾರ್, 'ಪ್ರಜಾನುಡಿ' ಪತ್ರಿಕೆ ಸಂಪಾದಕ ವೀರಭದ್ರಪ್ಪ, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮ್ ದೇವ, 'ಮೈಸೂರು ಮಿತ್ರ' ಪ್ರಸರಣ ವ್ಯವಸ್ಥಾಪಕ ಟಿ.ಎಸ್.ಗೋಪಿನಾಥ್, 'ಪ್ರಜಾವಾಣಿ'ಯ ಗಿರೀಶ್, 'ಕನ್ನಡಪ್ರಭ'ದ ಗಣೇಶ್, ಶಾಂತೇಶ್‌ಬಾಬು, ಚಂದ್ರು, ಕೃಷ್ಣ ಹಾಗೂ ಇತರರು ಈ ಸಂದರ್ಭ ಉಪಸ್ಥಿತರಿದ್ದು, ವಾಸು ಅವರಿಗೆ ನಮನ ಸಲ್ಲಿಸಿದರು.

ಕೋಟಿ ಕೋಟಿ ತೆರಿಗೆ ಬಾಕಿ; ಬೆಳ್ಳಂಬೆಳಗ್ಗೆ ಮಂತ್ರಿಮಾಲ್‌ಗೆ ಬೀಗ ಜಡಿದು ಲೈಸೆನ್ಸ್ ಕ್ಯಾನ್ಸಲ್ ಮಾಡಿದ ಬಿಬಿಎಂಪಿ!



ಬೆಂಗಳೂರು, ಮಾ.16– ಕೋಟಿ ಕೋಟಿ ರೂಪಾಯಿ ತೆರಿಗೆ ಹಣ ಬಾಕಿ ಉಳಿಸಿಕೊಂಡಿರುವ ಹಿನ್ನೆಲೆಯಲ್ಲಿ ಬಿಬಿಎಂಪಿ ಅಧಿಕಾರಿಗಳು ಬೆಂಗಳೂರಿನ ಪ್ರತಿಷ್ಠಿತ ಮಂತ್ರಿ ಮಾಲ್‌ಗೆ ಬೀಗ ಜಡಿದಿದ್ದಾರೆ.

ಸುಮಾರು 32 ಕೋಟಿವರೆಗೂ ಮಂತ್ರಿ ಮಾಲ್ ತೆರಿಗೆ ಪಾವತಿ ಉಳಿಸಿಕೊಂಡಿದೆ ಎಂದು ಹೇಳಲಾಗುತ್ತಿದೆ. ಈ ಹಿಂದೆ ಕೂಡ ಅನೇಕ ಬಾರಿ ತೆರಿಗೆ ವಿಚಾರವಾಗಿ ಮಾಲ್‌ಗೆ ಬೀಗ ಹಾಕಲಾಗಿತ್ತು. ಇದೀಗ ಮತ್ತೆ ಇಂದು ಮಾಲ್‌ಗೆ ಬೀಗ ಹಾಕಲಾಗಿದ್ದು, ಮುಖ್ಯ ಪ್ರವೇಶ ದ್ವಾರಕ್ಕೆ ಅಧಿಕಾರಿಗಳು ಬೀಗ ಜಡಿದು, ಶಾಕ್ ನೀಡಿದ್ದಾರೆ. ಬಿಬಿಎಂಪಿ ಅಧಿಕಾರಿಗಳು ಮಾರ್ಷಲ್ ಹಾಗೂ ಪೊಲೀಸರ ಬಿಗಿ ಭದ್ರತೆಯಲ್ಲಿ ಮಾಲ್‌ಗೆ ಬೀಗ ಹಾಕಿದ್ದಾರೆ.


ಮಾಲ್‌ನ ಮುಖ್ಯ ದ್ವಾರಕ್ಕೆ ಬೀಗ ಹಾಕುವುದರೊಂದಿಗೆ ನೋಟಿಸ್ ಕೂಡ ಅಂಟಿಸಲಾಗಿದೆ. ಬಿಬಿಎಂಪಿ ಕಾಯ್ದೆ 2020ರ ಕಲಂ 156 ಹಾಗೂ ದಿನಾಂಕ 2023ರ ಡಿಸೆಂಬರ್ 6ರ ಸುತ್ತೋಲೆಯಂತೆ, ನಿಮ್ಮ ವ್ಯಾಪಾರ ಪರವಾನಗಿಯನ್ನು ಅಮಾನತುಗೊಳಿಸಲಾಗಿದೆ. ಬಿಬಿಎಂಪಿ ಆದೇಶ ಮೇರೆಗೆ ಬಾಕಿ ಆಸ್ತಿ ತೆರಿಗೆಗಳನ್ನು ಪಾವತಿಸದ ಕಾರಣಕ್ಕಾಗಿ ಆಸ್ತಿಯನ್ನು ಸೀಲ್ ಮಾಡಲಾಗಿದೆ ಎಂದು ಬ್ಯಾನರ್ ಅಳವಡಿಸಲಾಗಿದೆ. ಈ ನಡುವೆ ಎಂದಿನಂತೆ ಕೆಲಸಕ್ಕೆ ಬಂದ ಬಟ್ಟೆ, ಸೂಪರ್ ಮಾರ್ಕೆಟ್, ಮೇಕ್ ಅಪ್ ಸೇರಿ ಮಾಲ್ ಒಳಗಿರುವ ಹಲವು ಮಳಿಗೆಗಳ ಸಿಬ್ಬಂದಿ ಕಂಗಲಾಗಿದ್ದು ಕಂಡು ಬಂದಿತು.

ಇಂದು ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಹುಟ್ಟುಹಬ್ಬ; ರಾಜ್ಯಾದ್ಯಂತ ಅಭಿಮಾನಿಗಳಿಂದ ಆಚರಣೆ



ಬೆಂಗಳೂರು,ಮಾ.16–ನಾಳೆ (ಮಾ.17) ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಕಂಠೀರವ ಸ್ಟುಡಿಯೊದಲ್ಲಿನ ಅಪ್ಪು ಸಮಾಧಿಯನ್ನು ಸಿಂಗರಿಸಲಾಗಿದೆ. ಅಪ್ಪು ಕುಟುಂಬಸ್ಥರು ಬೆಳಗ್ಗೆ 9 ಗಂಟೆಗೆ ಸಮಾಧಿ ಸ್ಥಳಕ್ಕೆ ಆಗಮಿಸಿ ಪೂಜೆ ನೆರವೇರಿಸಲಿದ್ದಾರೆ.

ಅಲ್ಲದೆ, ಇಡೀ ರಾಜ್ಯದಾದ್ಯಂತ ಅಪ್ಪು ಅಭಿಮಾನಿಗಳು ಪುನೀತ್ (ಅಪ್ಪು) ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಲು ಸಜ್ಜಾಗಿದ್ದಾರೆ. ಪುನೀತ್ ಅಭಿಮಾನಿಗಳು ಅನ್ನಸಂತರ್ಪಣೆ ಸೇರಿದಂತೆ ವಿವಿಧ ಸೇವಾ ಕಾರ್ಯಗಳ ಮೂಲಕ ನೆಚ್ಚಿನ ನಾಯಕನ ಜನ್ಮದಿನ ಆಚರಿಸಲು ತಯಾರಿ ನಡೆಸಿದ್ದಾರೆ. ರಾಜ್ಯ ವಿವಿಧೆಡೆ ಅಭಿಮಾನಿಗಳು ಶನಿವಾರ ರಾತ್ರಿಯಿಂದಲೇ ಅಪ್ಪು ಹುಟ್ಟುಹಬ್ಬದ ಆಚರಣೆಗೆ ಸಿದ್ಧತೆ ನಡೆಸಿದ್ದಾರೆ. ಅಪ್ಪು ಇಲ್ಲದೇ 3ನೇ ವರ್ಷದ ಹುಟ್ಟುಹಬ್ಬ ಇದಾಗಿದ್ದು, ನಾಳೆ ಇಡೀ ದಿನ ಅನ್ನಸಂತರ್ಪಣೆ, ರಕ್ತದಾನ ಶಿಬಿರ, ಆರೋಗ್ಯ ತಪಾಸಣೆ ಶಿಬಿರ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಅಭಿಯಾನಿಗಳು ರಾಜ್ಯಾದ್ಯಂತ ನಡೆಸುತ್ತಿದ್ದಾರೆ. ಪುನೀತ್ ರಾಜ್‌ಕುಮಾರ್ ಅವರ ಈ ಬಾರಿಯ 49ನೇ ಹುಟ್ಟುಹಬ್ಬದ ಪ್ರಯುಕ್ತ ಅಭಿಮಾನಿಗಳಿಗಾಗಿ ಪುನೀತ್ ನಟನೆಯ ಸೂಪರ್ ಹಿಟ್ ಸಿನಿಮಾ 'ಜಾಕಿ' ಶುಕ್ರವಾರ ಮರು ಬಿಡುಗಡೆಯಾಗಿದ್ದು, ಈ ಸಿನಿಮಾ ವೀಕ್ಷಣೆ ಮೂಲಕ ಅಪ್ಪು ಸ್ಮರಿಸಲು ಅಭಿಮಾನಿಗಳು ಈಗಾಗಲೇ ಮುಗಿಬಿದ್ದಿದ್ದಾರೆ.



ಜಯಪುರ ಹೋಬಳಿಯ ರೈತ ಸಂಪರ್ಕ ಕೇಂದ್ರದಲ್ಲಿ ಶನಿವಾರ ಕೃಷಿ ಯಾಂತ್ರೀಕರಣ ಯೋಜನೆಯಡಿ ಅರ್ಹ ಫಲಾನುಭವಿ ರೈತರಿಗೆ ಶಾಸಕ ಜಿ.ಟಿ.ದೇವೇಗೌಡರು ಯಂತ್ರೋಪಕರಣಗಳನ್ನು ವಿತರಿಸಿದರು. ಕೃಷಿ ಅಧಿಕಾರಿಗಳಾದ ಕುಮಾರ್, ಕಾರ್ತಿಕ್, ಲೆಕ್ಕಸಹಾಯಕ ವಿಜಯ್, ಜಯಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಹದೇವಯ್ಯ, ಸದಸ್ಯರಾದ ಎಂ.ನಾಗರಾಜು, ರೇಣುಕಾ, ಮುಖಂಡರಾದ ಕೋಟೆಹುಂಡಿ ಮಹದೇವು, ಅಬ್ದುಲ್ ಮುತಾಲಿಪ್, ಬರಡನಪುರ ಬಸವಣ್ಣ, ರಂಗಸ್ವಾಮಿ, ಬಸವಣ್ಣ, ಅಭಿಷೇಕ್, ಅನುವುಗಾರರಾದ ಮಂಚಯ್ಯ, ರವಿ, ಸಿದ್ದೇಗೌಡ ಪಾಲ್ಗೊಂಡಿದ್ದರು.

ನಮ್ಮ ಮೆಟ್ರೋ ಅಧಿಕಾರಿಯಿಂದ ಮಹಿಳಾ ಸೆಕ್ಯೂರಿಟಿಗಳಿಗೆ ಲೈಂಗಿಕ ಕಿರುಕುಳ ಆರೋಪ

ಬೆಂಗಳೂರು, ಮಾ.16– ಬೆಂಗಳೂರಿನ ನಮ್ಮ ಮೆಟ್ರೋ ನಿಲ್ದಾಣದ ಅಧಿಕಾರಿ ಯೊಬ್ಬರ ವಿರುದ್ಧ ಮಹಿಳಾ ಸೆಕ್ಯೂರಿಟಿಗಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಕೇಳಿ ಬಂದಿದ್ದು, ಈ ಸಂಬಂಧ ಸುಬ್ರಮ್ಮಣ್ಯ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ರಾಜಾಜಿನಗರ ಮೆಟ್ರೋ ನಿಲ್ದಾಣದ ಸಹಾಯಕ ಶಾಖಾಧಿಕಾರಿ ಗಜೇಂದ್ರ ಪಿ ತಮಗೆ ಲೈಂಗಿಕ ಕಿರುಕುಳ ನೀಡುತ್ತಿರುವುದಾಗಿ ಆರೋಪಿಸಿ ಮಹಿಳಾ ಭದ್ರತಾ ಸಿಬ್ಬಂದಿ ಪೊಲೀಸರಿಗೆ ದೂರು ನೀಡಿದ್ದಾರೆ. ಗಜೇಂದ್ರ ಮಹಿಳಾ ಸಿಬ್ಬಂದಿಗೆ ಅಶ್ಲೀಲ ಪದಗಳಿಂದ ನಿಂದಿಸುವುದಲ್ಲದೆ, ಮೈಕೈ ಮುಟ್ಟಿ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ತಮಗೆ ಸಹಕರಿಸದ ಮಹಿಳೆಯರಿಗೆ ಬೇರೆ ಕಡೆ ವರ್ಗಾವಣೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಮಹಿಳಾ ಭದ್ರತಾ ಸಿಬ್ಬಂದಿ ಆರೋಪಿಸಿದ್ದಾರೆ. ಈ ಬಗ್ಗೆ ಸೆಕ್ಯೂರಿಟಿ ಏಜೆನ್ಸಿ ಮಾಲೀಕರ ಗಮನಕ್ಕೂ ತರಲಾಗಿದ್ದು, ಅವರು ಸಹ ಸಹಕರಿಸುವಂತೆ ಒತ್ತಾಯ ಮಾಡಿದ್ದಾರೆ. ಸಹಕರಿಸಿ ಇಲ್ಲ ಕೆಲಸದಿಂದ ತೆಗೆಯುತ್ತೇನೆ ಎಂದು ಬೆದರಿಕೆ ಹಾಕುವುದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಮಹಿಳಾ ಸಿಬ್ಬಂದಿ ಬಿಎಂಆರ್‌ಸಿಎಲ್ ಹಿರಿಯ ಅಧಿಕಾರಿಗಳಿಗೂ ದೂರು ನೀಡಿದ್ದಾರೆ.

ಎಫ್‌ಐಆರ್ ದಾಖಲು

ಸಿಎಂ ವಿರುದ್ಧ ಆಕ್ಷೇಪಾರ್ಹ ಹೇಳಿಕೆ: ಅನಂತ್‌ಕುಮಾರ್ ಹೆಗಡೆ ವಿರುದ್ಧದ ಎಫ್‌ಐಆರ್‌ಗೆ ಹೈಕೋರ್ಟ್ ತಡೆ

ಬೆಂಗಳೂರು, ಮಾ.16– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಪಿ ಸಂಸದ ಅನಂತಕುಮಾರ ಹೆಗಡೆ ವಿರುದ್ಧ ಮುಂಡಗೋಡು ಠಾಣಾ ಪೊಲೀಸರು ದಾಖಲಿಸಿದ್ದ ಎಫ್‌ಐಆರ್‌ಗೆ ಹೈಕೋರ್ಟ್ ಶುಕ್ರವಾರ ತಡೆ ನೀಡಿದೆ. ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಅನಂತಕುಮಾರ ಹೆಗಡೆ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರ ನೇತೃತ್ವದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಅರ್ಜಿದಾರರ ಪರ ವಕೀಲ ಎಚ್ ಪವನ ಚಂದ್ರ ಶೆಟ್ಟಿ ವಾದ ಆಲಿಸಿದ ಪೀಠವು ಪ್ರತಿವಾದಿಗಳಾದ ಮುಂಡಗೋಡು ಠಾಣಾ ಪೊಲೀಸರು ಮತ್ತು ದೂರುದಾರ ಕಾನ್‌ಸ್ಟೆಬಲ್ ಗಣಪತಿ ಬಸವಂತಪ್ಪ ಹುನ್ನಳ್ಳಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿತು.



ಕರ್ತವ್ಯ ಲೋಪ: ಮುಡಾ ನಗರ ಯೋಜಕ ಸದಸ್ಯ ಅಮಾನತು

ಮೈಸೂರು,ಮಾ.16(ಆರ್‌ಕೆ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ನಗರ ಯೋಜಕ ಸದಸ್ಯ (ಟಿಪಿಎಂ) ಆರ್.ಶೇಷ ಅವರನ್ನು ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಸೇವೆಯಿಂದ ಅಮಾನತುಗೊಳಿಸಲಾಗಿದೆ.

ಶುಕ್ರವಾರ ಬೆಳಿಗ್ಗೆ ಮುಡಾ ಸೂಪರಿಂಟೆಂಡಿಂಗ್ ಇಂಜಿನಿಯರ್ ಎನ್.ಬಿ. ಚೆನ್ನಕೇಶವ ಅವರ ನಿವೃತ್ತಿಯಿಂದಾಗಿ ಖಾಲಿ ಇದ್ದ ಸ್ಥಾನಕ್ಕೆ ಶೇಷ ಅವರಿಗೆ ಹೆಚ್ಚುವರಿಯಾಗಿ ಪ್ರಭಾರ ಜವಾಬ್ದಾರಿ ನಿರ್ವಹಿಸುವಂತೆ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ಆದೇಶ ಮಾಡಿದ್ದರು.

ಇದರ ಬೆನ್ನಲ್ಲೇ ಸಂಜೆ ಸರ್ಕಾರ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆ ಯಿಂದ ಅಮಾನತುಗೊಳಿಸಿ ಆದೇಶ ಹೊರ ಡಿಸಿದೆ. ಮೈಸೂರು ತಾಲೂಕು ವರುಣ ಹೋಬಳಿ, ಮಾದರಹಳ್ಳಿ ಗ್ರಾಮದ ಸ.ನಂ. 73/1ರಲ್ಲಿ 4 ಎಕರೆ 19 ಗುಂಟೆ ಜಮೀನನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂ ಪರಿವರ್ತನೆ ಮಾಡುವ ಪ್ರಸ್ತಾವನೆ ಮುಡಾ ಆಯುಕ್ತರಿಂದ ಸರ್ಕಾರಕ್ಕೆ ಸಲ್ಲಿಕೆಯಾಗಿತ್ತು. ಆ ಸಂಬಂಧ ಸರ್ಕಾರದಲ್ಲಿ ಪರಿಶೀಲಿಸಿದಾಗ ಸದರಿ ಜಮೀನಿನಲ್ಲಿ ಏರ್ ಪೋರ್ಟ್ ಹೈವೆ ರಿಸ್ಟ್ರಿಕ್ಷನ್ ಗಡಿ ಹಾದು ಹೋಗಿರುವುದರಿಂದ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ (AAI)ದಿಂದ ಅಭಿಪ್ರಾಯ ಪಡೆದು ಪ್ರಸ್ತಾವನೆ ಸಲ್ಲಿಸುವಂತೆ ಸರ್ಕಾರವು 2022ರ ಏಪ್ರಿಲ್ 20ರಂದು ಮುಡಾಗೆ ನಿರ್ದೇಶನ ನೀಡಿತ್ತು.



ಆರ್.ಶೇಷ

ಅದರಂತೆ ಕ್ರಮವಹಿಸದೇ, ಮುಡಾ ಆಯುಕ್ತರ ಅನುಮೋದನೆಯನ್ನೂ ಪಡೆಯದೆ, ಅರ್ಜಿದಾರರು ಸಲ್ಲಿಸಿರುವ ಮಾಹಿತಿಯೊಂದಿಗೆ 2022ರ ಜೂ.15ರಂದು ಸರ್ಕಾರಕ್ಕೆ ಪತ್ರ ಬರೆದು ಅಧಿಕಾರ ವ್ಯಾಪ್ತಿ ಮೀರಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಶೇಷ ಅವರಿಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಿ ಲಿಖಿತ ಹೇಳಿಕೆ ಸಲ್ಲಿಸುವಂತೆ ಸೂಚಿಸಲಾಗಿತ್ತು

ಅದಕ್ಕೆ ಲಿಖಿತ ವಿವರಣೆ ನೀಡಿದ್ದ ಶೇಷ ಅವರು ಸದರಿ ಜಮೀನಿನ ನಕ್ಷೆ ವಿನ್ಯಾಸ ಅನುಮೋದನೆ ನೀಡುವ ವೇಳೆ ಏರ್‌ಪೋರ್ಟ್ ಅಥಾರಿಟಿಯಿಂದ ಅಭಿಪ್ರಾಯ ಪಡೆಯಬೇಕೆಂದು ಅರ್ಥೈಸಿಕೊಂಡು ಸರ್ಕಾರದ ಅವಗಾಹನೆಗೆ ಸಲ್ಲಿಸಲಾಗಿತ್ತು. ಇನ್ನು ಮುಂದೆ ಸರ್ಕಾರದಿಂದ ನೀಡಲಾಗುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು ಹಾಗೂ ಆಗಿರುವ ಲೋಪವನ್ನು ಮನ್ನಿಸಿ ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಸರ್ಕಾರವನ್ನು ಕೋರಿಕೊಂಡಿದ್ದರು.

ಮಾಜಿ ಸಚಿವೆ ನಾಗಮ್ಮ ಕೇಶವಮೂರ್ತಿ ನಿಧನ


ದಾವಣಗೆರೆ, ಮಾ.16– ಮಾಜಿ ಸಚಿವೆ ನಾಗಮ್ಮ ಕೇಶವಮೂರ್ತಿ ಅವರು ಶನಿವಾರ ಸಂಜೆ ವಿಧಿವಶರಾಗಿದ್ದಾರೆ. ಅವರಿಗೆ 90 ವರ್ಷ ವಯಸ್ಸಾಗಿತ್ತು.



ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯಾಗಿ, ಕೆಪಿಸಿಸಿ ಉಪಾಧ್ಯಕ್ಷರಾಗಿ, ಪ್ರಧಾನ ಕಾರ್ಯದರ್ಶಿಯಾಗಿ ನಾಗಮ್ಮ ಕೇಶವಮೂರ್ತಿ ಕಾರ್ಯನಿರ್ವಹಿಸಿದ್ದರು. ದಾವಣಗೆರೆ, ಮಾಯಕೊಂಡ ಕ್ಷೇತ್ರದಿಂದ 2 ಬಾರಿ ಶಾಸಕಿಯಾಗಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಸಚಿವೆಯಾಗಿ, ವಿಧಾನ ಸಭೆಯ ಉಪಸಭಾಪತಿಯಾಗಿ, ಬೃಹತ್ ಮತ್ತು ಕೈಗಾರಿಕಾ ಸಚಿವೆಯಾಗಿದ್ದವರು. 1993ರ ಮೇ.15ರಂದು ಧಾರವಾಡದ ಜಿಲ್ಲಾ ಉಸ್ತುವಾರಿಯಾಗಿದ್ದ ಅವರು, 1993ರ ಜೂನ್ 6ರಂದು ರಾಜ್ಯ ಶಿಕ್ಷಣ ಸಚಿವೆಯಾಗಿ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಸೇವೆ ಸಲ್ಲಿಸಿದವರು. ಶಿಕ್ಷಣ ಸಚಿವರಾಗಿದ್ದಾಗ ಇವರು 1ರಿಂದ 4ನೇ ತರಗತಿಯವರೆಗೆ ಕನ್ನಡ ಮಾಧ್ಯಮ ಕಡ್ಡಾಯಗೊಳಿಸಿದವರು. ಪ್ರಾಥಮಿಕ ಶಾಲಾ ಹಂತದಲ್ಲಿ ಮಹಿಳೆಯರಿಗೆ ಶೇಕಡಾ 50ರಷ್ಟು ಮೀಸಲಾತಿ ಸೇರಿದಂತೆ ಕೈಗೊಂಡ ಹಲವಾರು ಯೋಜನೆಗಳು ಇಂದಿಗೂ ಮಾದರಿ.

ಪ್ರಸಾರ ಭಾರತಿ ನೂತನ ಅಧ್ಯಕ್ಷರಾಗಿ ನವನೀತ್‌ಕುಮಾರ್ ಸೆಹಗಲ್ ನೇಮಕ

ನವದೆಹಲಿ, ಮಾ.16– ಪ್ರಸಾರ ಭಾರತಿಯ ನೂತನ ಅಧ್ಯಕ್ಷರಾಗಿ ಮಾಜಿ ಅಧಿಕಾರಿ ನವನೀತ್ ಕುಮಾರ್ ಸೆಹಗಲ್ ನೇಮಕ ಮಾಡಲಾಗಿದೆ.



ನವನೀತ್‌ಕುಮಾರ್

ಬರೋಬ್ಬರಿ ನಾಲ್ಕು ವರ್ಷಗಳಿಂದ ಖಾಲಿ ಇದ್ದ ಪ್ರಸಾರ ಭಾರತಿ ಅಧ್ಯಕ್ಷ ಸ್ಥಾನಕ್ಕೆ ನಿವೃತ್ತ ಅಧಿಕಾರಿ ನವನೀತ್ ಕುಮಾರ್ ಸೆಹಗಲ್ ಅವರನ್ನು ನೇಮಕ ಮಾಡಲಾಗಿದೆ. ಸೆಹಗಲ್ ಅವರು ಎ ಸೂರ್ಯ ಪ್ರಕಾಶ್ ಅವರ ಉತ್ತರಾಧಿಕಾರಿಯಾಗಿದ್ದು, ಅವರ ಅಧಿಕಾರಾವಧಿಯು ಫೆಬ್ರವರಿ 2020ರಲ್ಲಿ ಅವರ 70 ವರ್ಷ ವಯಸ್ಸಿನ ನಂತರ ಕೊನೆಗೊಂಡಿತ್ತು. ಇದು ಈ ಹುದ್ದೆಯನ್ನು ಹೊಂದಿರುವ ವ್ಯಕ್ತಿಗೆ ಗರಿಷ್ಠ ವಯಸ್ಸಿನ ಮಿತಿಯಾಗಿದೆ. ಈ ಬಗ್ಗೆ ಆದೇಶ ಹೊರಡಿಸಿರುವ ಮಾಹಿತಿ ಮತ್ತು ಪ್ರಸಾರ ಸಚಿವಾಲಯ, ಅಧ್ಯಕ್ಷರು, ಆಯ್ಕೆ ಸಮಿತಿಯ ಶಿಫಾರಸಿನ ಮೇರೆಗೆ, ಐಎಎಸ್ (ನಿವೃತ್ತ) ನವನೀತ್‌ಕುಮಾರ್ ಸೆಹಗಲ್ ಅವರನ್ನು ಪ್ರಸಾರ ಭಾರತಿ ಮಂಡಳಿಯ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ.

ಮೂರು ವರ್ಷಗಳ ಅವಧಿ ಅಥವಾ ಅವರು 70 ವರ್ಷ ವಯಸ್ಸನ್ನು ತಲುಪುವವರೆಗೆ ಕೆಲಸ ಮಾಡಲಿದ್ದಾರೆ ಎಂದು ಹೇಳಿದೆ. ಉಪರಾಷ್ಟ್ರಪತಿ ಜಗದೀಪ್ ಧಂಕರ್ ಅವರು ದೇಶದ ಸಾರ್ವಜನಿಕ ಪ್ರಸಾರ ಸಂಸ್ಥೆಯ ಅಧ್ಯಕ್ಷರನ್ನು ಆಯ್ಕೆ ಮಾಡಲು ಸಭೆ ನಡೆಸಿದ್ದರು. ರಾಜ್ಯಸಭೆಯ ಅಧ್ಯಕ್ಷರೂ ಆಗಿರುವ ರಾಷ್ಟ್ರಪತಿಗಳು ಪ್ರಸಾರ ಭಾರತಿ ಅಧ್ಯಕ್ಷರ ಹುದ್ದೆಗೆ ಆಯ್ಕೆ ಸಮಿತಿಯ ಮುಖ್ಯಸ್ಥರಾಗಿರುತ್ತಾರೆ. ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾದ ಅಧ್ಯಕ್ಷರು ಮತ್ತು ಅಧ್ಯಕ್ಷರ ನಾಮನಿರ್ದೇಶಿತರು ಮೂವರು ಸದಸ್ಯರ ಸಮಿತಿಯನ್ನು ಪೂರ್ಣಗೊಳಿಸುತ್ತಾರೆ. ಸಭೆಯಲ್ಲಿ ಪ್ರೆಸ್ ಕೌನ್ಸಿಲ್ ಆಫ್ ಇಂಡಿಯಾ ಅಧ್ಯಕ್ಷ ನ್ಯಾಯಮೂರ್ತಿ ರಂಜನಾ ದೇಸಾಯಿ (ನಿವೃತ್ತ) ಮತ್ತು ಮಾಹಿತಿ ಮತ್ತು ಪ್ರಸಾರ ಕಾರ್ಯದರ್ಶಿ ಸಂಜಯ್ ಜಾಜು ಇದ್ದರು.

ಮೂರನೇ ಪುಟದಿಂದ

ಜೂನ್ 4 ಫಲಿತಾಂಶ

ಬಹು ಹಂತ: ಕರ್ನಾಟಕ, ರಾಜಸ್ಥಾನ, ತ್ರಿಪುರ, ಮತ್ತು ಮಣಿಪುರದಲ್ಲಿ ಎರಡನೇ ಹಂತದ ಮತದಾನ ನಡೆದರೆ ಛತ್ತೀಸ್‌ಘಡ ಮತ್ತು ಅಸ್ಸಾಂನಲ್ಲಿ ಮೂರು ಹಂತದ ಮತದಾನ ನಡೆಸಲು ಆಯೋಗ ತೀರ್ಮಾನಿಸಿದೆ. ಒಡಿಸ್ಸಾ, ಮಧ್ಯಪ್ರದೇಶ ಮತ್ತು ಜಾರ್ಖಂಡ್‌ನಲ್ಲಿ ನಾಲ್ಕು ಹಂತ, ಮಹಾರಾಷ್ಟ್ರ, ಜಮ್ಮು–ಕಾಶ್ಮೀರದಲ್ಲಿ 5 ಹಂತ ಹಾಗೂ ಉತ್ತರಪ್ರದೇಶ, ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ 7 ಹಂತಗಳಲ್ಲಿ ಮತದಾನ ನಡೆಯಲಿದೆ.

ಈ ಬಾರಿ ದೇಶಾದ್ಯಂತ 97 ಕೋಟಿ ಮತದಾರರು ತಮ್ಮ ಹಕ್ಕನ್ನು ಚಲಾಯಿಸಲಿದ್ದು, ಮೊದಲ ಬಾರಿಗೆ ಅಂದರೆ 18ರಿಂದ 19 ವರ್ಷದೊಳಗಿನ ಸುಮಾರು 1.80 ಕೋಟಿ ಮತದಾರರು ಮತದಾನದ ಹಕ್ಕು ಹೊಂದಿದ್ದಾರೆ. 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮನೆಯಿಂದಲೇ ಮತ ಚಲಾಯಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಈ ಬಾರಿ 12 ರಾಜ್ಯಗಳಲ್ಲಿ ಮಹಿಳಾ ಮತದಾರರೇ ಹೆಚ್ಚಾಗಿದ್ದು, ಶೇ.40ಕ್ಕಿಂತ ಹೆಚ್ಚು ವಿಕಲಚೇತನರಿದ್ದರೆ ಅವರು ಕೂಡ ಮನೆಯಿಂದಲೇ ಮತ ಚಲಾಯಿಸಬಹುದು. ಚುನಾವಣಾ ಕಣದಲ್ಲಿರುವ ಅಭ್ಯರ್ಥಿಗಳು ಕಡ್ಡಾಯವಾಗಿ ತಮ್ಮ ಕ್ರಿಮಿನಲ್ ಪ್ರಕರಣಗಳ ಬಗ್ಗೆ ಮಾಹಿತಿ ನೀಡುವುದು ಕಡ್ಡಾಯವಾಗಿದೆ.

ಅಕ್ರಮ ತಡೆಗೆ ಕಟ್ಟೆಚ್ಚರ: ಸುಳ್ಳು ಮಾಹಿತಿ ಮತ್ತು ನಕಲು ಸುದ್ದಿ, ನೀತಿಸಂಹಿತೆ ಉಲ್ಲಂಘನೆ, ತೋಳ್ಬಲ ಮತ್ತು ಹಣದ ಪ್ರಭಾವ ತಡೆಗಟ್ಟುವುದು ಚುನಾವಣಾ ಆಯೋಗಕ್ಕೆ ಈ ಬಾರಿ ಸವಾಲುಗಳಾಗಿವೆ ಎಂದು ಆಯೋಗದ ಮುಖ್ಯಸ್ಥರು ಹೇಳಿದ್ದಾರೆ. ಗಡಿಯಲ್ಲಿ ಕಾನೂನು ಬಾಹಿರ ಚಟುವಟಿಕೆಗಳ ಮೇಲೆ ಡ್ರೋಣ್ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ಮತದಾರರಿಗೆ ಕುಕ್ಕರ್, ಟಿವಿ, ಫ್ರಿಡ್ಜ್, ನಗದು, ಉಡುಗೊರೆಗಳು, ಮದ್ಯ ಸೇರಿದಂತೆ ಇತರೆ ಆಮಿಷವೊಡ್ಡಿದರೆ ಕಾನೂನುಕ್ರಮ ಜರುಗಿಸುವುದಾಗಿ ಎಚ್ಚರಿಕೆ ನೀಡಿದರು.

ಹಣದ ಮೇಲೆ ಹದ್ದಿನ ಕಣ್ಣು: ಸೂರ್ಯಾಸ್ತದ ಬಳಿಕ ಎಟಿಎಂ ವಾಹನಗಳ ಸಂಚಾರಕ್ಕೆ ಕಟ್ಟುನಿಟ್ಟಿನ ನಿಬಂಧನೆ ಹಾಕಿರುವ ಆಯೋಗ ಕಪ್ಪು ಹಣ ಸಾಗಿಸಿದರೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸುವಂತೆ ಎಚ್ಚರಿಕೆ ನೀಡಲಾಗಿದೆ. ಈ ಬಾರಿಯ ಚುನಾವಣೆಯಲ್ಲಿ ಸಾಮಾಜಿಕ ಜಾಲತಾಣಗಳ ಮೇಲೆ ಹದ್ದಿನ ಕಣ್ಣಿಟ್ಟಿರುವ ಆಯೋಗ ಸುಳ್ಳು ಸುದ್ದಿ ಹಬ್ಬಿಸುವುದು, ಖಾಸಗಿ ಬದುಕಿನ ಮೇಲೆ ವಾಗ್ದಾಳಿ, ಜಾತಿ, ಧರ್ಮ ಆಧಾರಿತ ಪ್ರಚಾರ ಹಾಗೂ ಸುಳ್ಳು ಜಾಹೀರಾತು ನೀಡುವುದಕ್ಕೆ ನಿರ್ಬಂಧ ಹಾಕಿದೆ. ಮಕ್ಕಳನ್ನು ಚುನಾವಣಾ ಪ್ರಚಾರಕ್ಕೆ ಬಳಸುವಂತಿಲ್ಲ.

ಮೊದಲ ಹಂತ: ಏ.19
ಒಟ್ಟು ಲೋಕಸಭಾ ಕ್ಷೇತ್ರಗಳು 102
ಅಧಿಸೂಚನೆ ಮಾ.20
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಮಾ.27
ನಾಮಪತ್ರಗಳ ಪರಿಶೀಲನೆ ಮಾ.28
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಮಾ.30

ಎರಡನೇ ಹಂತ: ಏ.26
ಒಟ್ಟು ಲೋಕಸಭಾ ಕ್ಷೇತ್ರಗಳು 89
ಅಧಿಸೂಚನೆ ಮಾ.28
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಏ.4
ನಾಮಪತ್ರಗಳ ಪರಿಶೀಲನೆ ಏಪ್ರಿಲ್ 5,
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಏಪ್ರಿಲ್ 8

ಮೂರನೇ ಹಂತ: ಮೇ 7
ಒಟ್ಟು ಲೋಕಸಭಾ ಕ್ಷೇತ್ರಗಳು 94
ಅಧಿಸೂಚನೆ ಏಪ್ರಿಲ್12
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಏ.19
ನಾಮಪತ್ರಗಳ ಪರಿಶೀಲನೆ ಏಪ್ರಿಲ್ 20
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಏಪ್ರಿಲ್ 22

ನಾಲ್ಕನೇ ಹಂತ: ಮೇ 13
ಒಟ್ಟು ಲೋಕಸಭಾ ಕ್ಷೇತ್ರಗಳು 96
ಅಧಿಸೂಚನೆ ಏ.18
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಏ.25
ನಾಮಪತ್ರಗಳ ಪರಿಶೀಲನೆ ಏಪ್ರಿಲ್ 26,
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಏಪ್ರಿಲ್ 29

ಐದನೇ ಹಂತ: ಮೇ 20
ಒಟ್ಟು ಲೋಕಸಭಾ ಕ್ಷೇತ್ರಗಳು 49
ಅಧಿಸೂಚನೆ ಏ.26
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಮೇ 3
ನಾಮಪತ್ರಗಳ ಪರಿಶೀಲನೆ ಮೇ 4
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಮೇ 6

ಆರನೇ ಹಂತ: ಮೇ 25
ಒಟ್ಟು ಲೋಕಸಭಾ ಕ್ಷೇತ್ರಗಳು 57
ಅಧಿಸೂಚನೆ ಏ.29
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಮೇ 6
ನಾಮಪತ್ರಗಳ ಪರಿಶೀಲನೆ ಮೇ 7
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಮೇ 9

7ನೇ ಹಂತ: ಜೂನ್ 1
ಒಟ್ಟು ಲೋಕಸಭಾ ಕ್ಷೇತ್ರಗಳು 57
ಅಧಿಸೂಚನೆ ಮೇ 7
ನಾಮಪತ್ರ ಸಲ್ಲಿಕೆಗೆ ಕೊನೆ ದಿನ ಮೇ 14
ನಾಮಪತ್ರಗಳ ಪರಿಶೀಲನೆ ಮೇ 15
ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ ಮೇ 17

ಮತದಾರರ ಮಾಹಿತಿ
ಒಟ್ಟು ಮತದಾರರು 97 ಕೋಟಿ
49.72 ಕೋಟಿ ಪುರುಷರು
47.15 ಕೋಟಿ ಮಹಿಳೆಯರು
2.18 ಶತಾಯುಷಿ ಮತದಾರರು
80 ವರ್ಷ ದಾಟಿದವರು 1.98 ಕೋಟಿ
20–29 ವರ್ಷದೊಳಗಿನವರು 19.74 ಕೋಟಿ
18–19 ವರ್ಷದವರು 1.84 ಕೋಟಿ
ಯುವತಿಯರು 85 ಲಕ್ಷ
88 ಲಕ್ಷ ವಿಶೇಷಚೇತನರು
ತೃತೀಯಲಿಂಗಿಗಳು

ಮತದಾನಕ್ಕೆ ವ್ಯವಸ್ಥೆ
48 ಸಾವಿರ
ಒಟ್ಟು ಮತಗಟ್ಟೆ 10.5 ಲಕ್ಷ
ಇವಿಎಂ 55 ಲಕ್ಷ
4 ಲಕ್ಷ ವಾಹನ
2100 ವೀಕ್ಷಕರ ನೇಮಕ
1.5 ಕೋಟಿ ಭದ್ರತಾ ಸಿಬ್ಬಂದಿ ನಿಯೋಜನೆ

14 ಕ್ಷೇತ್ರದಲ್ಲಿ ಮತದಾನ

ಮತದಾರರಿದ್ದು, ಪುರುಷ ಮತದಾರರ ಸಂಖ್ಯೆ 49.71 ಕೋಟಿಯಾಗಿದ್ದು, ಮಹಿಳಾ ಮತದಾರರ ಸಂಖ್ಯೆ 47.1 ಕೋಟಿಯಾಗಿದೆ. 1.8 ಕೋಟಿ ಹೊಸ ಮತದಾರರು ಈ ಬಾರಿ ಮತದಾನದ ಹಕ್ಕು ಪಡೆದಿದ್ದಾರೆ. ಚುನಾವಣಾ ಕಾರ್ಯಕ್ಕೆ 1.5 ಕೋಟಿ ಸಿಬ್ಬಂದಿ ನೇಮಕವಾಗಲಿದ್ದಾರೆ. ಕೇಂದ್ರ ಚುನಾವಣಾ ಆಯೋಗವು ದೇಶಾದ್ಯಂತ ಒಟ್ಟು 2,100 ಮುಖ್ಯ ಚುನಾವಣಾ ವೀಕ್ಷಕರನ್ನು ನೇಮಿಸಿದೆ.

85 ವರ್ಷ ಮೀರಿದ ಮತದಾರರು ಮತಗಟ್ಟೆಗೆ ಬರಲು ಸಾಧ್ಯವಾಗದೆ, ಮನೆಯಿಂದಲೇ ಮತದಾನ ಮಾಡಲು ಇಚ್ಛಿಸಿದರೆ ಮನೆಯಿಂದಲೇ ಮತದಾನ ಮಾಡುವ ವ್ಯವಸ್ಥೆ ಮಾಡಲಾಗುವುದು.

ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿಶೇಷಚೇತನರಿಗೆ ರ‍್ಯಾಂಪ್, ಗಾಲಿ ಕುರ್ಚಿ ಸೇರಿದಂತೆ ಎಲ್ಲಾ ಮೂಲಸೌಕರ್ಯಗಳನ್ನು ಕಲ್ಪಿಸಲಾಗುವುದು.

ಚುನಾವಣಾ ಮಾರ್ಗಸೂಚಿಗಳ ಪಾಲನೆ ಬಗ್ಗೆ ನಿಗಾ ವಹಿಸಲು ಈ ಬಾರಿ ಡ್ರೋನ್ ಬಳಸಲಾಗುತ್ತಿದೆ. ಮತದಾರರಿಗೆ ಆಮಿಷ ಒಡ್ಡುವಂತಹ ಉಡುಗೊರೆ ನೀಡುವುದು, ಫೋನ್ ಪೇ ಮತ್ತು ಗೂಗಲ್ ಪೇ ಚಟುವಟಿಕೆಗಳ ಮೇಲೆ ನಿಗಾ ಇಡಲಾಗುವುದು. ಮಾದರಿ ಚುನಾವಣಾ ನೀತಿ ಸಂಹಿತೆ ಇಂದಿನಿಂದಲೇ ಜಾರಿಗೆ ಬಂದಿದ್ದು, ಮಾರ್ಗಸೂಚಿಗಳನ್ನು ತಪ್ಪದೆ ಪಾಲಿಸುವಂತೆ ರಾಜಕೀಯ ಪಕ್ಷಗಳಿಗೆ ಚುನಾವಣಾ ಆಯೋಗ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ.

ನಾವ್ ರೆಡಿ; ಎಲ್ಲಾ ವ್ಯವಸ್ಥೆ ಮಾಡಿದ್ದೇವೆ

3855 ಕಂಟ್ರೋಲ್ ಯೂನಿಟ್ ಹಾಗೂ 4142 ವಿವಿ ಪ್ಯಾಟ್‌ಗಳು ನಮ್ಮಲ್ಲಿ ಲಭ್ಯವಿವೆ.

ಅಧಿಕಾರಿಗಳ ನೇಮಕ: ಚುನಾವಣಾ ಆಯೋಗದ ಸೂಚನೆಯಂತೆ ಆಯ್ದ ಮತಗಟ್ಟೆಗಳಿಗೆ 641 ಕೇಂದ್ರ ಸರ್ಕಾರಿ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ಸೂಕ್ಷ್ಮ ವೀಕ್ಷಕ(ಮೈಕ್ರೊ–ಅಬ್‌ಸರ್ವರ್)ರನ್ನಾಗಿ ನೇಮಿಸಲಾಗುವುದು. ಮತಗಟ್ಟೆ ಅಧಿಕಾರಿ, ಸಹಾಯಕ ಮತಗಟ್ಟೆ ಅಧಿಕಾರಿ ಹಾಗೂ ಪ್ರಿಸೈಡಿಂಗ್ ಆಫೀಸರ್‌ಗಳಾಗಿ ಒಟ್ಟು 17,550 ಮಂದಿಯನ್ನು ನಿಯೋಜಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ವೆಚ್ಚದ ಮೇಲೆ ನಿಗಾ: ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಹಾಗೂ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ನಿಗಾ ಇಡಲು 241 ಸೆಕ್ಟರ್ ಅಧಿಕಾರಿಗಳು, 50 ಫ್ಲೈಯಿಂಗ್ ಸ್ಕ್ವಾಡ್, 42 ಸ್ಥಿರ ಕಣ್ಗಾವಲು ತಂಡ(static surveillance team), 23 ವಿಡಿಯೋ ಕಣ್ಗಾವಲು ತಂಡ(video surveillance team), 12 ವಿಡಿಯೋ ವೀಕ್ಷಣೆ ತಂಡ (video viewing team), 11 ಲೆಕ್ಕಪರಿಶೋಧಕ ತಂಡ(acounting team) ಹಾಗೂ 15 ಸಹಾಯಕ ವೆಚ್ಚ ವೀಕ್ಷಕ(assistant expenditure observer) ರನ್ನು ನೇಮಿಸಲಾಗುತ್ತಿದೆ. ಫ್ಲೈಯಿಂಗ್ ಸ್ಕ್ವಾಡ್ ಹಾಗೂ ಸ್ಥಿರ ಕಣ್ಗಾವಲು ತಂಡಗಳು ಮೂರು ಪಾಳಿಯಲ್ಲಿ ಕಾರ್ಯ ನಿರ್ವಹಿಸಲಿವೆ ಎಂದು ವಿವರಣೆ ನೀಡಿದರು.

ಕೋಶ–ಸಮಿತಿಗಳು: ಸಮರ್ಪಕ ನಿರ್ವಹಣೆಗಾಗಿ ವಿವಿಧ ಕೋಶ ಹಾಗೂ ಸಮಿತಿಗಳನ್ನು ರಚಿಸಲಾಗಿದೆ. ಜಿಲ್ಲಾ ಮಾದರಿ ನೀತಿ ಸಂಹಿತೆ ಕೋಶ, ವೆಚ್ಚ ಮೇಲ್ವಿಚಾರಣಾ ಕೋಶ ಹಾಗೂ ಸಮಿತಿ, ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿ, ಮಾಧ್ಯಮ ಪೂರ್ವ ಪ್ರಮಾಣೀಕರಣ ಹಾಗೂ ಪರಿಶೀಲನಾ ಕೋಶ, ಮಾಧ್ಯಮ ಪರಿಶೀಲನಾ ಕೋಶ, ದೂರು ಮೇಲ್ವಿಚಾರಣಾ ಕೋಶ ಹಾಗೂ ಕುಂದುಕೊರತೆ ಸಮಿತಿ ಸ್ಥಾಪಿಸಲಾಗಿದೆ. 'ಜಾಗರೂಕ ನಾಗರಿಕ'ರು ನೀತಿ ಸಂಹಿತೆ ಉಲ್ಲಂಘನೆ ಬಗ್ಗೆ ಸಿ–ವಿಜಿಲ್(c-VIGIL) ತಂತ್ರಾಂಶದ ಮೂಲಕ ದೂರು ದಾಖಲಿಸಬಹುದು ಎಂದು ಹೇಳಿದರು.

ಅಂಚೆ ಮತಪತ್ರ: ಈ ಬಾರಿ ಚುನಾವಣೆಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷಚೇತನ ಮತದಾರರು, ಕೋವಿಡ್ ಶಂಕಿತ ಹಾಗೂ ದೃಢಪಟ್ಟವರು, ಅಗತ್ಯ ಸೇವೆಗಳ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿ, ಮತದಾನದ ದಿನ ಚುನಾವಣಾ ಕರ್ತವ್ಯ ನಿರತರಿಗೆ ಅಂಚೆ ಮತಪತ್ರದ ಮೂಲಕ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇಂತಹವರು ನಮೂನೆ 12ರಲ್ಲಿ ನಾಮಪತ್ರ ಸಲ್ಲಿಕೆ ಆರಂಭವಾದ ದಿನದಿಂದ 5 ದಿನದೊಳಗೆ ಅರ್ಜಿ ಸಲ್ಲಿಸಬೇಕು. ಮತಗಟ್ಟೆಗೆ ಬರಲು ಸಾಧ್ಯವಾಗದ ಸ್ಥಿತಿಯಲ್ಲಿರುವ 85 ವರ್ಷ ಮೇಲ್ಪಟ್ಟವರು ಹಾಗೂ ವಿಶೇಷಚೇತನರಿಗೆ ಮನೆಯಲ್ಲೇ ಮತದಾನಕ್ಕೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು. ಯಾವುದೇ ಚುನಾವಣಾ ಕರಪತ್ರ, ಪೋಸ್ಟರ್, ಬಿಲ್‌ಗಳಲ್ಲಿ ಪ್ರಕಾಶಕರು ಹಾಗೂ ಪ್ರಕಾಶನ ಸಂಸ್ಥೆ ಮಾಹಿತಿ ಇರಬೇಕು. ಜಾಹೀರಾತು ಪ್ರಕಟಿಸುವ ಮುನ್ನ ಪ್ರಮಾಣ ಪತ್ರ ಪಡೆಯುವುದು ಕಡ್ಡಾಯ.

ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡರಿಂದ ಬಿಜೆಪಿ–ಜೆಡಿಎಸ್

ಮೈತ್ರಿ ಅಭ್ಯರ್ಥಿಗಳಾದ ಯದುವೀರ್, ಬಾಲರಾಜ್ ಅಭಿನಂದನೆ

ಸಂಪೂರ್ಣ ಸಹಕಾರದ ಭರವಸೆ ನೀಡಿದ ಜಿ.ಡಿ.ಹರೀಶ್‌ಗೌಡ



ಮೈಸೂರಿನ ವಿಜಯನಗರದಲ್ಲಿರುವ ತಮ್ಮ ಕಚೇರಿಗೆ ಭೇಟಿ ನೀಡಿದ ಮೈಸೂರು–ಕೊಡಗು ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜನಗರ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಅವರನ್ನು ಶಾಸಕ ಜಿ.ಡಿ.ಹರೀಶ್‌ಗೌಡರು ಅಭಿನಂದಿಸಿದರು.

ಮೈಸೂರು,ಮಾ.16(ಪಿಎಂ)– ಮೈಸೂರಿನ ವಿಜಯನಗರದಲ್ಲಿರುವ ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ ಅವರ ಕಚೇರಿಗೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿ ಎಸ್.ಬಾಲರಾಜ್ ಶನಿವಾರ ಭೇಟಿ ನೀಡಿ ಅವರ ಸಹಕಾರ ಕೋರಿದರು.


ಈ ವೇಳೆ ಮಾತನಾಡಿದ ಶಾಸಕ ಜಿ.ಡಿ.ಹರೀಶ್‌ಗೌಡ, ಜೆಡಿಎಸ್ ವರಿಷ್ಠರಾದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಾಗಿ ಈ ಬಾರಿ ಮುನ್ನಡೆಯಬೇಕೆಂದು ತೀರ್ಮಾನಿಸಿದ್ದಾರೆ. ಅದರಂತೆ ಮೈಸೂರು–ಕೊಡಗು ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ಮೈತ್ರಿ ಅಭ್ಯರ್ಥಿಗಳ ಪರವಾಗಿ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ನಮ್ಮ ಜೆಡಿಎಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಎಲ್ಲರೂ ಸಹ ಉತ್ಸಾಹದಿಂದ ಕೆಲಸ ಮಾಡಲಿದ್ದಾರೆ. ಈಗಾಗಲೇ ಎರಡು ಬಾರಿ ಪಕ್ಷದ ಮುಖಂಡರೊಂದಿಗೆ ಚರ್ಚೆ ನಡೆಸಲಾಗಿದೆ. ಈ ಸಂದರ್ಭದಲ್ಲಿ ವರಿಷ್ಠರ ತೀರ್ಮಾನದಂತೆ ನಾವೆಲ್ಲರೂ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಲು ಪ್ರತಿಯೊಬ್ಬರು ಬದ್ಧತೆಯಿಂದ ಕೆಲಸ ಮಾಡಬೇಕೆಂದು ನಿಶ್ಚಯಿಸಲಾಗಿದೆ. ಅಲ್ಲದೆ, ವೈಯಕ್ತಿಕವಾಗಿಯೂ ಸಂಪೂರ್ಣ ಸಹಕಾರ ಕೊಡಲಿದ್ದೇನೆ. ನಮ್ಮ ಮೈತ್ರಿ ಅಭ್ಯರ್ಥಿಗಳಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ಎಸ್.ಬಾಲರಾಜ್ ಇಬ್ಬರೂ ಅತೀ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸುವ ವಿಶ್ವಾಸ ನಮ್ಮೆಲ್ಲರಿಗೂ ಇದೆ ಎಂದರು.

ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಹಾಗೂ ಜೆಡಿಎಸ್ ಮುಖಂಡ ಪಿ.ಎಂ.ಪ್ರಸನ್ನ ಮಾತನಾಡಿ, ನಮ್ಮ ವರಿಷ್ಠರಾದ ಹೆಚ್.ಡಿ.ದೇವೇಗೌಡರು, ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ನಾಯಕರಾದ ಜಿ.ಟಿ.ದೇವೇಗೌಡ, ಸಾ.ರಾ.ಮಹೇಶ್, ಜಿ.ಡಿ.ಹರೀಶ್‌ಗೌಡ ಹಾಗೂ ನಮ್ಮ ತಂದೆ ಕೆ.ಮಹದೇವ್ರು ಅವರ ಮಾರ್ಗದರ್ಶನದಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿಗಳ ಪರವಾಗಿ ನಿಷ್ಠೆಯಿಂದ ಕೆಲಸ ಮಾಡಲಿದ್ದೇವೆ. ಜೊತೆಗೆ ಪಿರಿಯಾಪಟ್ಟಣ ತಾಲೂಕಿನಲ್ಲಿ ನಮ್ಮ ಶಕ್ತಿ ಮೀರಿ ಅತ್ಯಧಿಕ ಮತಗಳನ್ನು ಕೊಡಿಸುವ ಮೂಲಕ ಯದುವೀರರು ಲೋಕಸಭೆಗೆ ಆಯ್ಕೆಯಾಗಲು ಪ್ರಾಮಾಣಿಕವಾಗಿ ಕೆಲಸ ಮಾಡಲಾಗುವುದು ಎಂದು ತಿಳಿಸಿದರು. ಇದಕ್ಕೂ ಮುನ್ನ ಯದುವೀರರು ಹಾಗೂ ಎಸ್.ಬಾಲರಾಜ್ ಅವರನ್ನು ಜಿ.ಡಿ.ಹರೀಶ್‌ಗೌಡರು ಅಭಿನಂದಿಸಿದರು. ಮಾಜಿ ಸಚಿವ ಎನ್.ಮಹೇಶ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಪಕ್ಷದ ಮುಖಂಡ ಫಣೀಶ್ ಸೇರಿದಂತೆ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಹಾಜರಿದ್ದರು.

ಎನ್‌ಡಿಎಗೆ ಸ್ಪಷ್ಟ ಬಹುಮತ: ಮೋದಿ ಮತ್ತೆ ಪ್ರಧಾನಿಯಾಗ್ತಾರೆ...

● ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಭವಿಷ್ಯ ● ಯದುವೀರ್, ಬಾಲರಾಜ್‌ಗೆ ಅಭಿನಂದನೆ



ಶನಿವಾರ ತಮ್ಮ ನಿವಾಸಕ್ಕೆ ಭೇಟಿ ನೀಡಿದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಸ್ವಾಗತಿಸಿದ ಸಂಸದ ವಿ.ಶ್ರೀನಿವಾಸ್ ಪ್ರಸಾದ್, ಸನ್ಮಾನಿಸಿ ಅಭಿನಂದಿಸಿದರು. ಮಾಜಿ ಶಾಸಕರಾದ ಎನ್.ಮಹೇಶ್, ನಿರಂಜನ್ ಕುಮಾರ್, ಹರ್ಷವರ್ಧನ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಉಪಸ್ಥಿತರಿದ್ದರು.

ಮೈಸೂರು, ಮಾ.16(ಎಂಕೆ)– ಈಗಿನ ಸಮೀಕ್ಷೆಗಳ ಪ್ರಕಾರ 543 ಲೋಕಸಭಾ ಕ್ಷೇತ್ರಗಳಲ್ಲಿ ಎನ್‌ಡಿಎಗೆ ಬಹಳ ಸ್ಪಷ್ಟ ಬಹುಮತ ಬರಲಿದ್ದು, ಮೋದಿಯವರೇ ಮತ್ತೆ ಪ್ರಧಾನಿಯಾಗಲಿದ್ದಾರೆ ಎಂದು ಸಂಸದ ವಿ.ಶ್ರೀನಿವಾಸ್ ಪ್ರಸಾದ್ ವಿಶ್ವಾಸ ವ್ಯಕ್ತಪಡಿಸಿದರು. ಮೈಸೂರಿನ ಜಯಲಕ್ಷ್ಮಿಪುರಂನಲ್ಲಿರುವ ತಮ್ಮ ನಿವಾಸಕ್ಕೆ ಶನಿವಾರ ಭೇಟಿ ನೀಡಿದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಸ್ವಾಗತಿಸಿ, ಅಭಿನಂದಿಸಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿ ರಾಷ್ಟ್ರೀಯ ಪಕ್ಷವಾಗಿದ್ದು, ಯಾವ ಕ್ಷೇತ್ರದಲ್ಲಿ ಯಾರ ಮೇಲೆ ಮತದಾರರ ಒಲವಿದೆ ಎಂಬುದನ್ನು ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರೊಡಗೂಡಿ ಸಮೀಕ್ಷೆ ನಡೆಸಿ, ಅಂತಿಮವಾಗಿ ಚರ್ಚಿಸಿ ಅಭ್ಯರ್ಥಿ ಆಯ್ಕೆ ಮಾಡಲಾಗುತ್ತದೆ. ಈ ನಿಟ್ಟಿನಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ರಾಜವಂಶಸ್ಥರಾದ ಯದುವೀರ್ ಅವರ ಆಯ್ಕೆಯನ್ನು ವರಿಷ್ಠರು ಸ್ವಾಗತಿಸಿದ್ದಾರೆ ಎಂದರು. ಮೈಸೂರು ಒಡೆಯರ್ ಕುಟುಂಬದೊಂದಿಗೆ ಆತ್ಮೀಯ ಸ್ನೇಹವಿದೆ. ಹಾಗಾಗಿ ರಾಜಕೀಯದಲ್ಲಿ ಆಸಕ್ತಿ ಇದೆಯೇ ಎಂದು ಯದುವೀರ್ ಅವರನ್ನು ಕೇಳಿದೆ. ಅದಕ್ಕೆ ಅವರು, ಕಳೆದ ಒಂದು ವರ್ಷದಿಂದ ಇದೆ ಎಂದರು. ಅವರಿಗೆ ಹಾಗೂ ಚಾ.ನಗರ ಲೋಕಸಭಾ ಕ್ಷೇತ್ರದ ಬಾಲರಾಜ್‌ಗೂ ಶುಭವಾಗಲಿ ಎಂದಿದ್ದೇನೆ ಎಂದು ತಿಳಿಸಿದರು. ಇದಕ್ಕೂ ಮುನ್ನ ತಮ್ಮ ಮನೆಗೆ ಆಗಮಿಸಿದ ಇಬ್ಬರೂ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳನ್ನು ಸ್ವಾಗತಿಸಿ, ಹೂ ಗುಚ್ಛ ನೀಡಿ ಅಭಿನಂದಿಸಿದರು. ಮಾಜಿ ಶಾಸಕರಾದ ಎನ್.ಮಹೇಶ್, ನಿರಂಜನ್ ಕುಮಾರ್, ಹರ್ಷವರ್ಧನ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಮತ್ತಿತರರಿದ್ದರು.

ಚುನಾವಣೆ ಘೋಷಣೆ ಆದರೂ ಇನ್ನೂ ಅಭ್ಯರ್ಥಿಗಳೇ ನಿರ್ಧಾರವಾಗಿಲ್ಲ!

ಮೈಸೂರು, ಮಾ.16– ಕೇಂದ್ರ ಚುನಾವಣಾ ಆಯೋಗವು ಇಂದು ಲೋಕಸಭಾ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಿದ್ದು, ನೀತಿ ಸಂಹಿತೆ ಜಾರಿಗೊಳಿಸಿದೆ. ಆದರೆ ಮೈಸೂರು ಭಾಗದಲ್ಲಿ ರಾಜಕೀಯ ಪಕ್ಷಗಳು ತಮ್ಮ ಅಭ್ಯರ್ಥಿಗಳನ್ನೇ ಇನ್ನೂ ಅಂತಿಮಗೊಳಿಸಿಲ್ಲ.

ಕೊಡಗು–ಮೈಸೂರು ಲೋಕಸಭಾ ಕ್ಷೇತ್ರಕ್ಕೆ ಮೈಸೂರು ರಾಜವಂಶಸ್ಥರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮತ್ತು ಚಾಮರಾಜನಗರ ಕ್ಷೇತ್ರಕ್ಕೆ ಮಾಜಿ ಸಚಿವ ಎಸ್.ಬಾಲರಾಜು ಅವರನ್ನು ಬಿಜೆಪಿ ಈಗಾಗಲೇ ಅಭ್ಯರ್ಥಿಗಳಾಗಿ ಘೋಷಿಸಿದೆ. ಆದರೆ ಇವೆರಡೂ ಕ್ಷೇತ್ರಗಳಿಗೂ ಕಾಂಗ್ರೆಸ್ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಲ್ಲಿ ಇನ್ನೂ ಕಸರತ್ತು ನಡೆಯುತ್ತಿದೆ. ನಿನ್ನೆ ಮೈಸೂರಿಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಸಂಬಂಧ ಸ್ಥಳೀಯ ಮುಖಂಡರೊಂದಿಗೆ ಚರ್ಚೆ ನಡೆಸಿದ್ದು, ಸೋಮವಾರ ಅಭ್ಯರ್ಥಿಗಳನ್ನು ಪ್ರಕಟಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರನ್ನು ಕಾಂಗ್ರೆಸ್ ತನ್ನ ಅಭ್ಯರ್ಥಿಯನ್ನಾಗಿ ಮೊದಲ ಪಟ್ಟಿಯಲ್ಲೇ ಘೋಷಿಸಿದೆ. ಈ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಜೆಪಿ ಬಿಟ್ಟುಕೊಟ್ಟಿದ್ದು, ಅಭ್ಯರ್ಥಿ ಆಯ್ಕೆ ಸಂಬಂಧ ನಿನ್ನೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಕಾರ್ಯಕರ್ತರ ಸಭೆ ನಡೆಸಿ, ಮಾ.24ರ ನಂತರ ಅಭ್ಯರ್ಥಿ ಘೋಷಿಸುವುದಾಗಿ ತಿಳಿಸಿದ್ದಾರೆ. ಹಾಸನ ಕ್ಷೇತ್ರಕ್ಕೆ ಹಾಲಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನೇ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್ ಘೋಷಿಸಿದ್ದು, ಮಾಜಿ ಸಚಿವ ದಿವಂಗತ ಜಿ.ಪುಟ್ಟಸ್ವಾಮಿಗೌಡ ಅವರ ಮೊಮ್ಮಗ ಶ್ರೇಯಸ್ ಪಟೇಲ್ ಅವರನ್ನು ಕಾಂಗ್ರೆಸ್ ಅಭ್ಯರ್ಥಿಯಾಗಿ ಇಲ್ಲಿ ಕಣಕ್ಕಿಳಿಸಿದೆ.

ಬಂಡಾಯ ಒಂದೆರಡು ದಿನಗಳಲ್ಲಿ ಸರಿಹೋಗಲಿದೆ: ಯಡಿಯೂರಪ್ಪ



ಹುಬ್ಬಳ್ಳಿ: ಲೋಕಸಭೆಗೆ ಸ್ಪರ್ಧಿಸಲು ಟಿಕೆಟ್ ಸಿಗದೇ ಬಂಡಾಯವೆದ್ದಿರುವವರ ಜೊತೆ ಮಾತುಕತೆ ನಡೆಯುತ್ತಿದೆ. ಒಂದೆರಡು ದಿನಗಳಲ್ಲಿ ಎಲ್ಲವೂ ಸರಿ ಹೋಗುತ್ತದೆ ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಹೇಳಿದರು. ಇಲ್ಲಿನ ವಿಮಾನ ನಿಲ್ದಾಣದಲ್ಲಿ ಶನಿವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಈಶ್ವರಪ್ಪ ಸೇರಿದಂತೆ ಬಂಡಾಯ ಎದ್ದಿರುವವರ ಜೊತೆಗೆ ಮಾತುಕತೆ ನಡೆದಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಲೋಕಸಭೆ ಚುನಾವಣೆಗೆ ದಿನಾಂಕವೂ ಘೋಷಣೆಯಾಗಿದೆ. ದೇಶದಾದ್ಯಂತ ಬಿಜೆಪಿ ಪರ ಅಲೆ ಇದೆ. 3ನೇ ಬಾರಿ ನರೇಂದ್ರ ಮೋದಿ ಪ್ರಧಾನಿಯಾಗುವುದು ನಿಶ್ಚಿತ. ರಾಜ್ಯದಿಂದ 25ರಿಂದ 26 ಕ್ಷೇತ್ರಗಳನ್ನು ಗೆದ್ದು ಮೋದಿ ಅವರಿಗೆ ಕೊಡುಗೆ ನೀಡುತ್ತೇವೆ ಎಂದರು.

ಎಸ್.ಸಿ, ಎಸ್.ಟಿ, ಹಿಂದುಳಿದ ವರ್ಗಗಳು ಹಾಗೂ ಯುವಕರ ಕಡೆ ಹೆಚ್ಚು ಗಮನ ಕೊಡುವಂತೆ ಮೋದಿ ಅವರು ಸಲಹೆ ನೀಡಿದ್ದಾರೆ. ಅದರಂತೆ, ಮಾಡುತ್ತೇವೆ. ಈಗಿನಿಂದಲೇ ಮುಖಂಡರು ಪ್ರಚಾರ ಶುರು ಮಾಡಲಿದ್ದಾರೆ ಎಂದು ಹೇಳಿದರು.

ಚುನಾವಣಾ ಆಯೋಗದ ಸೂಚನೆಗಳ ರಾಜಕೀಯ ಪಕ್ಷಗಳು ಕಟ್ಟುನಿಟ್ಟಾಗಿ ಪಾಲಿಸಬೇಕು

ವಿವಿಧ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಜಿಲ್ಲಾ ಚುನಾವಣಾಧಿಕಾರಿ ಸೂಚನೆ



ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಶನಿವಾರ ವಿವಿಧ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜಿಲ್ಲಾ ಚುನಾವಣಾಧಿಕಾರಿಗಳು ಸಭೆ ನಡೆಸಿದರು.

ಮೈಸೂರು,ಮಾ.16(ಪಿಎಂ)– ಲೋಕಸಭಾ ಸಭಾ ಚುನಾವಣೆ–2024ರ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳು ಚುನಾವಣಾ ಆಯೋಗದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿಗಳೂ ಆದ ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ಮೈಸೂರು ಜಿಪಂನ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಶನಿವಾರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಚುನಾವಣೆ ನಿಯಮ ಹಾಗೂ ಕಾಯ್ದೆಗಳಿಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಚುನಾವಣಾ ಆಯೋಗ ನೀಡುವ ಸೂಚನೆಗಳನ್ನು ಪಾಲಿಸಬೇಕು. ಈಗಿನಿಂದಲೇ ಚುನಾವಣೆಗೆ ಸಂಬಂಧಿಸಿದ ನಿಯಮಗಳು ಹಾಗೂ ಕಾಯ್ದೆಗಳ ಬಗ್ಗೆ ತಿಳಿದುಕೊಳ್ಳಬೇಕು. ಸಾರ್ವಜನಿಕರ ಸ್ವತ್ತು ಹಾಗೂ ಸಾರ್ವಜನಿಕರ ಆವರಣಗಳ ವ್ಯಾಪ್ತಿಗೆ ಬರುವ ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ, ರಸ್ತೆ ಹಾಗೂ ರಸ್ತೆ ಬದಿ ಸೇರಿದಂತೆ ಮೊದಲಾದೆಡೆ ಚುನಾವಣಾ ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆ ಒಳಪಡುವವಂತಹ ರಾಜಕೀಯ ಪಕ್ಷಗಳ ಕುರಿತು ಗೋಡೆಬರಹ, ಪೋಸ್ಟರ್‌ಗಳು, ಬ್ಯಾನರ್, ಕಟೌಟ್‌ಗಳನ್ನು ಹಾಕಿದರೆ ಅವುಗಳನ್ನು ತೆರವುಗೊಳಿಸಲು ಸೂಚಿಸಲಾಗಿದೆ ಎಂದರು. ರಾಜಕೀಯ ಪಕ್ಷಗಳ ಸಂಬಂಧ ಕಾರ್ಯಕ್ರಮ ಆಯೋಜನೆಗೆ ಅಧಿಕೃತ ಅನುಮತಿ ಪಡೆಯುವುದು ಕಡ್ಡಾಯ. ಒಂದು ವೇಳೆ ಅನುಮತಿ ಪಡೆಯದಿರುವುದು ಕಂಡುಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು. ಸುವಿಧಾ ಆ್ಯಪ್ ಮೂಲಕ ಚುನಾವಣಾ ಪ್ರಚಾರ ಸಭೆಗಳು ಮತ್ತು ಕಾರ್ಯಕ್ರಮಗಳಿಗೆ ಅನುಮತಿ ನೀಡಲಾಗುತ್ತದೆ. ಯಾವುದೇ ಕಾರಣಕ್ಕೂ ಪ್ರಚಾರಕ್ಕೆ ಮಕ್ಕಳನ್ನು ಬಳಸಬಾರದು. ಅದಕ್ಕೆ ಅವಕಾಶವಿರುವುದಿಲ್ಲ ಎಂದು ಹೇಳಿದರು. ಮಾದರಿ ಚುನಾವಣಾ ನೀತಿ ಸಂಹಿತೆ ಜಾರಿಯಾಗಿರುವ ಹಿನ್ನೆಲೆಯಲ್ಲಿ ಈ ಅವಧಿಯಲ್ಲಿ ಪತ್ರಿಕೆಗಳು, ದೃಶ್ಯ ಮಾಧ್ಯಮ, ಕೇಬಲ್ ಟಿವಿ, ಫೇಸ್‌ಬುಕ್, ವಾಟ್ಸಪ್ ಸೇರಿದಂತೆ ಸೋಷಿಯಲ್ ಮೀಡಿಯಾಗಳಲ್ಲಿ ಯಾವುದೇ ರಾಜಕೀಯ ಪಕ್ಷ ಅಥವಾ ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿ ಪರವಾಗಿ ಜಾಹೀರಾತು ಪ್ರಕಟಿಸಲು ಜಿಲ್ಲಾ ಎಂಸಿಎಂಸಿ ಸಮಿತಿ ಅನುಮತಿ ಕಡ್ಡಾಯವಾಗಿದೆ ಎಂದು ಅವರು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಜಿಪಂ ಸಿಇಓ ಕೆ.ಎಂ.ಗಾಯಿತ್ರಿ, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

50 ಸಾವಿರಕ್ಕಿಂತ ಹೆಚ್ಚು ನಗದು; 10 ಸಾವಿರ ಮೌಲ್ಯಕ್ಕಿಂತ ಅಧಿಕ ಬೆಲೆ ಪದಾರ್ಥ ಸಾಗಿಸಿದರೆ ಜಪ್ತಿ!

ಮೈಸೂರು, ಮಾ.16– ವ್ಯಕ್ತಿಯೊಬ್ಬರು 50 ಸಾವಿರ ರೂ.ಗಿಂತ ಹೆಚ್ಚು ಹಣ ಹಾಗೂ 10 ಸಾವಿರ ಮೌಲ್ಯಕ್ಕಿಂತ ಹೆಚ್ಚು ಬೆಲೆಬಾಳುವ ವಸ್ತುಗಳನ್ನು ಕೊಂಡೊಯ್ದರೆ ಚೆಕ್‌ಪೋಸ್ಟ್‌ನಲ್ಲಿ ವಶಕ್ಕೆ ಪಡೆಯಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ಆ ಹಣ ರಾಜಕೀಯ ಕಾರಣಕ್ಕೆ ತೆಗೆದುಕೊಂಡು ಹೋಗುತ್ತಿಲ್ಲ ಎನ್ನುವುದನ್ನು ದಾಖಲೆ ಸಹಿತ ಸಮಿತಿ ಮುಂದೆ ಸಾಬೀತು ಮಾಡಿದ ಬಳಿಕ ಬಿಡುಗಡೆ ಮಾಡಲಾಗುತ್ತದೆ. ಇಲ್ಲವಾದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಆನ್‌ಲೈನ್ ಮೂಲಕ ಹಣ ವರ್ಗಾವಣೆ ಮಾಡುವ ಬಗ್ಗೆ ನಿಗಾ ವಹಿಸಲು ಪ್ರತ್ಯೇಕ ತಂಡ ನಿಯೋಜಿಸಲಾಗಿದೆ. ಇದಕ್ಕಾಗಿ ಲೀಡ್ ಬ್ಯಾಂಕ್ ಮ್ಯಾನೇಜರ್ ಹಾಗೂ ಎಲ್ಲಾ ಬ್ಯಾಂಕ್ ಮ್ಯಾನೇಜರ್ ಒಳಗೊಂಡ ಕಮಿಟಿ ಮಾಡಲಾಗಿದೆ ಎಂದರು.

ಪ್ರವಾಸೋದ್ಯಮಕ್ಕೆ ತೊಂದರೆಯಾಗಬಾರದು ಎಂಬ ಕಾರಣಕ್ಕೆ ಪ್ರವಾಸಿಗರಿಗೆ ಹೆಚ್ಚು ಅನಾನುಕೂಲವಾಗದಂತೆ ನಿರ್ವಹಣೆ ಮಾಡಲಾಗುವುದು. ಎಕ್ಸ್‌ಪ್ರೆಸ್ ವೇನಲ್ಲಿ ಕಳಸ್ತವಾಡಿ ಬಳಿ ಚೆಕ್‌ಪೋಸ್ಟ್ ನಿರ್ವಹಣೆ ನಮಗೂ ಸವಾಲಾಗಿದೆ. ಜನರಿಗೆ ಸ್ವಲ್ಪ ಮಟ್ಟಿಗೆ ಅನಾನುಕೂಲವಾಗಬಹುದು. ಆದರೆ ಎಲ್ಲರೂ ಸಹಕರಿಸಬೇಕು. ಮದ್ಯ ಮಾರಾಟದ ಬಗ್ಗೆಯೂ ನಿಗಾ ವಹಿಸಲು ಅಬಕಾರಿ ಇಲಾಖೆಗೆ ಕಟ್ಟುನಿಟ್ಟಿನ ಮಾರ್ಗಸೂಚಿ ನೀಡಲಾಗಿದೆ. ನ್ಯೂನತೆಗಳು ಕಂಡು ಬಂದರೆ ಕೂಡಲೇ ಕ್ರಮ ಕೈಗೊಳ್ಳಲಾಗುತ್ತದೆ. ಸಾಮಾಜಿಕ ಮಾಧ್ಯಮಗಳ ಮೇಲೂ ನಿಗಾ ವಹಿಸಲು ಪ್ರತ್ಯೇಕ ಸೆಲ್ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ನೀರಿನ ರಾಜಕಾರಣಕ್ಕೆ ಕಡಿವಾಣ: ನೀರಿನ ಸಮಸ್ಯೆಯನ್ನು ರಾಜಕಾರಣಕ್ಕೆ ಬಳಸಿಕೊಳ್ಳುವ ನಿಟ್ಟಿನಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಒದಗಿಸಲು ಅವಕಾಶವಿಲ್ಲ. ಆ ರೀತಿ ಏನಾದರೂ ಕಂಡು ಬಂದರೆ ಪೂರೈಕೆ ಮಾಡುತ್ತಿರುವವರು ಹಾಗೂ ನೀರಿನ ಸಮಸ್ಯೆ ಬಗೆಹರಿಸುವಲ್ಲಿ ವಿಫಲವಾದ ಅಧಿಕಾರಿಗಳ ವಿರುದ್ಧ ಕ್ರಮವಾಗುತ್ತದೆ. ಇದಕ್ಕಾಗಿಯೇ ಪಾಲಿಕೆ ಆಯುಕ್ತರು, ಸಿಓ ಹಾಗೂ ಪಿಡಿಓಗಳನ್ನು ನೇರವಾಗಿ ಚುನಾವಣಾ ಕಾರ್ಯಕ್ಕೆ ಬಳಕೆ ಮಾಡಿಕೊಳ್ಳುತ್ತಿಲ್ಲ ಎಂದು ಹೇಳಿದರು.


> “ ಕೃಷ್ಣರಾಜ, ಚಾಮರಾಜ, ನರಸಿಂಹರಾಜ ಕ್ಷೇತ್ರಗಳು, ಚಾಮುಂಡೇಶ್ವರಿಯಲ್ಲಿ 167 ಮತಗಟ್ಟೆ, ವರುಣ ಕ್ಷೇತ್ರ ವ್ಯಾಪ್ತಿಯ 8 ಬೂತ್‌ಗಳು ನಮ್ಮ ನಗರ ಪೊಲೀಸ್ ವ್ಯಾಪ್ತಿಗೆ ಬರುತ್ತವೆ. ಒಟ್ಟು 971 ಬೂತ್‌ಗಳಲ್ಲಿ 220 ಕ್ರಿಟಿಕಲ್ ಬೂತ್ ಎಂದು ಗುರುತಿಸಲಾಗಿದೆ. ನಗರದಲ್ಲಿ ನಾಲ್ಕು ಸೇರಿ ಒಟ್ಟು 14 ಚೆಕ್‌ಪೋಸ್ಟ್ ಆರಂಭಿಸಲಾಗಿದೆ. 13 ಫ್ಲೈಯಿಂಗ್ ಸ್ಕ್ವಾಡ್ ಇವೆ. 732 ರೌಡಿ ಶೀಟರ್‌ಗಳಲ್ಲಿ 583 ಈಗಾಗಲೇ ಬೈಂಡ್ ಓವರ್ ಮಾಡಿದ್ದು 69 ಜನ ಜೈಲಲ್ಲಿದ್ದಾರೆ. ನಮ್ಮ ವ್ಯಾಪ್ತಿಯಲ್ಲಿ 1077 ಶಸ್ತ್ರಗಳಿದ್ದು, ವಶಪಡಿಸಿಕೊಳ್ಳಲು ಕ್ರಮ ವಹಿಸಲಾಗಿದೆ. ಬ್ಯಾಂಕ್ ಸೆಕ್ಯುರಿಟಿ ಇನ್ನಿತರ ಅನಿವಾರ್ಯ ಕಾರಣವಿದ್ದವರಿಗೆ ಮಾತ್ರ ಸಮಿತಿ ಪರಿಶೀಲಿಸಿ, ಕ್ರಮ ವಹಿಸಲಿದೆ. ಕೆಎಸ್‌ಆರ್‌ಪಿ ಹಾಗೂ ಸಿಆರ್‌ಪಿಎಫ್‌ನ ತಲಾ 6 ತುಕಡಿ ಕೇಳಿದ್ದು, ಸದ್ಯ ಒಂದು ಪ್ಯಾರಾ ಮಿಲಿಟರಿ ಕಂಪನಿ ಬಂದಿದೆ.
>
> –ಬಿ.ರಮೇಶ್, ನಗರ ಪೊಲೀಸ್ ಆಯುಕ್ತ

> “ ಮೈಸೂರು ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿ 1944 ಮತಗಟ್ಟೆಗಳಿದ್ದು, ಇದರಲ್ಲಿ 305 ಕ್ರಿಟಿಕಲ್ ಎಂದು ಗುರುತಿಸಲಾಗಿದೆ. ಕೇರಳ ಗಡಿಯ ಬಾವಲಿ ಚೆಕ್‌ಪೋಸ್ಟ್ ಸೇರಿ 29 ಚೆಕ್‌ಪೋಸ್ಟ್ ಆರಂಭಿಸಲಾಗಿದೆ. 20 ವಲ್ನರೆಬಲ್ ಏರಿಯಾ ಗುರುತಿಸಿದ್ದೇವೆ. ಬೆದರಿಸಬಹುದಾದ 48 ಜನರನ್ನು ಗುರುತಿಸಿ ಅವರಲ್ಲಿ 44 ಜನರ ವಿರುದ್ಧ ಕ್ರಮ ಕೈಗೊಂಡಿದ್ದೇವೆ. 1154 ರೌಡಿ ಶೀಟರ್‌ಗಳಿದ್ದು, 798 ಮಂದಿಯನ್ನು ವಶಕ್ಕೆ ಪಡೆದಿದ್ದೇವೆ. 1664 ಶಸ್ತ್ರಗಳಿದ್ದು ಇದರಲ್ಲಿ 562 ಡೆಪಾಸಿಟ್ ಮಾಡಿದ್ದಾರೆ.
>
> –ಸೀಮಾ ಲಾಟ್ಕರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

ಹಳೆ ಯೋಜನೆಗೆ ಅಡ್ಡಿಯಿಲ್ಲ: ಕಳೆದ ಲೋಕಸಭಾ ಚುನಾವಣೆಯಲ್ಲಿ ಶೇ.70.39ರಷ್ಟು ಮತದಾನವಾಗಿತ್ತು. ಈ ಬಾರಿ ಶೇ.75ಕ್ಕಿಂತ ಹೆಚ್ಚು ಮತದಾನವಾಗಬೇಕೆಂಬುದು ನಮ್ಮ ಆಶಯವಾಗಿದ್ದು, ಮತದಾರರು ಸಹಕರಿಸಬೇಕು. ಯಾವುದೇ ಹೊಸ ಯೋಜನೆಗೆ ಅವಕಾಶವಿಲ್ಲ. ಆದರೆ ಈಗಾಗಲೇ ಚಾಲ್ತಿಯಲ್ಲಿರುವ ಎಲ್ಲಾ ಯೋಜನೆಗಳೂ ಮುಂದುವರೆಯಲಿವೆ ಎಂದು ಸ್ಪಷ್ಟಪಡಿಸಿದರು.

ಕೊಡವ ಸಾಹಿತ್ಯ ಅಕಾಡೆಮಿ ನೂತನ ಅಧ್ಯಕ್ಷರಾಗಿ ಮಹೇಶ್ ನಾಚಯ್ಯ ನೇಮಕ


ಮಹೇಶ್‌ನಾಚಯ್ಯ


ಸದಾನಂದ

ಮಡಿಕೇರಿ, ಮಾ.15– ಕೊಡವ ಸಾಹಿತ್ಯ ಅಕಾಡೆಮಿ ನೂತನ ಅಧ್ಯಕ್ಷರನ್ನಾಗಿ ಅಜ್ಜಿನಿಕಂಡ ಮಹೇಶ್ ನಾಚಯ್ಯ ಅವರನ್ನು ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ. ಮೂಲತಃ ವಿರಾಜಪೇಟೆ ತಾಲೂಕು ನಿವಾಸಿಯಾಗಿರುವ ಅಜ್ಜಿನಿಕಂಡ ಮಹೇಶ್ ನಾಚಯ್ಯ, ಕೊಡವ ಭಾಷಿಕ ವಾರ ಪತ್ರಿಕೆ 'ಪೊಮಾಲೆ' ಸಂಪಾದಕರಾಗಿದ್ದು, ಕೊಡವ ಭಾಷಾಭಿಮಾನಿಯಾಗಿರುವ ಮಹೇಶ್ ನಾಚಯ್ಯ ಪತ್ರಿಕೋದ್ಯಮದ ಜೊತೆಯಲ್ಲಿಯೇ ವಿವಿಧ ಸಂಘ ಸಂಸ್ಥೆಗಳಲ್ಲಿಯೂ ಸಕ್ರಿಯವಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕೊಡವ ಸಾಹಿತ್ಯ ಅಕಾಡೆಮಿಗೆ ಸದಸ್ಯರನ್ನು ಇನ್ನಷ್ಟೇ ಸರ್ಕಾರ ನೇಮಕ ಮಾಡಬೇಕಿದೆ. ಇನ್ನು ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸ್ಥಾನವನ್ನು ದಕ್ಷಿಣ ಕನ್ನಡಕ್ಕೆ ನೀಡಲಾಗಿದ್ದು, ಅಕಾಡೆಮಿ ಅಧ್ಯಕ್ಷರಾಗಿ ಸದಾನಂದ ಮಾವಜಿ ಅವರನ್ನು ನೇಮಿಸಲಾಗಿದೆ.

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪರಿಸರವನ್ನು ಕಾಪಾಡಿ

ಕೊಡಗಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿ

ಜಮ್ಮ ಹಿಡುವಳಿದಾರರು ಪೊಲೀಸ್ ಠಾಣೆಗೆ ಕೋವಿ ಒಪ್ಪಿಸಬೇಕಿಲ್ಲ


ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡುತ್ತಿರುವುದು. ಈ ವೇಳೆ ಅಪರ ಜಿಲ್ಲಾಧಿಕಾರಿ ವೀಣಾ, ಉಪವಿಭಾಗಾಧಿಕಾರಿ ದಾಮೋಧರ್ ನರ್ವಾಡೆ ಇದ್ದಾರೆ.

ಮಡಿಕೇರಿ,ಮಾ.16– ಭಾರತ ಚುನಾವಣಾ ಆಯೋಗವು ಇಂದು ಲೋಕಸಭಾ ಸಾರ್ವತ್ರಿಕ ಚುನಾವಣೆ ಘೋಷಿಸಿದ್ದು, ಇಂದಿನಿಂದಲೇ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಗೆ ಬಂದಿದೆ ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಹೇಳಿದ್ದಾರೆ.

ಮಡಿಕೇರಿಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಮಾ.28ರಿಂದ ನಾಮಪತ್ರ ಸಲ್ಲಿಕೆಗೆ ಅವಕಾಶ ಏಪ್ರಿಲ್ 4ರಂದು ನಾಮಪತ್ರ ಸಲ್ಲಿಕೆಗೆ ಅಂತಿಮ ದಿನವಾಗಿದ್ದು, ಏ.5ರಂದು ನಾಮಪತ್ರ ಪರಿಶೀಲನೆ, ಏ.8ರಂದು ನಾಮಪತ್ರ ಹಿಂಪಡೆಯಲು ಅವಕಾಶವಿದ್ದು, ಏ.26ರಂದು ಚುನಾವಣೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪ್ರತಿಯೊಬ್ಬ ಮತದಾರರು ಸಹ ಅವರ ಹಕ್ಕನ್ನು ಚಲಾಯಿಸಲು ಅಡತಡೆಗಳಾಗದಂತೆ ಎಲ್ಲರೂ ಸಹ ಮತದಾನದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾಡಳಿತದಿಂದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಭಾರತ ಚುನಾವಣಾ ಆಯೋಗದ ಎಲ್ಲಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಚುನಾವಣೆಯನ್ನು ನಡೆಸಲು ಜಿಲ್ಲೆಯ ಎಲ್ಲಾ ಮತದಾರರು, ಸಾರ್ವಜನಿಕರು ಹಾಗೂ ರಾಜಕೀಯ ಪಕ್ಷಗಳು ಸಹಕಾರ ನೀಡುವಂತೆ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆರಾಮ ರಾಜನ್ ಮಾತನಾಡಿ, ಜಮ್ಮ ಹಿಡುವಳಿದಾರರು ಕೋವಿಯನ್ನು ಸಮೀಪದ ಪೊಲೀಸ್ ಠಾಣೆಗೆ ಒಪ್ಪಿಸಬೇಕಾಗಿಲ್ಲ. ಒಂದೊಮ್ಮೆ 5 ವರ್ಷ ಕ್ರಿಮಿನಲ್ ಪ್ರಕರಣದಲ್ಲಿ ಜೈಲುವಾಸ ಸೇರಿದ್ದರೆ ಕೋವಿಯನ್ನು ಸಮೀಪದ ಠಾಣೆಗೆ ಠೇವಣಿ ಇಡಬೇಕು. ಲೈಸನ್ಸ್ ಹೊಂದಿರುವವರು ಕೋವಿಯನ್ನು ಪೊಲೀಸ್ ಠಾಣೆಯಲ್ಲಿ ಕಡ್ಡಾಯವಾಗಿ ಠೇವಣಿ ಇಡಬೇಕು. ಒಂದೊಮ್ಮೆ ಕಾಡುಪ್ರಾಣಿಗಳ ಉಪಟಳ ಮತ್ತಿತರ ಅತ್ಯವಶ್ಯಕ ಕಾರಣಕ್ಕಾಗಿ ಕೋವಿಯ ಅವಶ್ಯಕತೆ ಇದ್ದರೆ ಪೊಲೀಸ್ ಠಾಣೆಯಲ್ಲಿ ಲಿಖಿತ ರೂಪದಲ್ಲಿ ಮಾಹಿತಿಗಳನ್ನು ನೀಡಿ ಅನುಮತಿಯನ್ನು ಪಡೆದುಕೊಳ್ಳಬಹುದಾಗಿದೆ. ಕೊಡಗು ಜಿಲ್ಲೆಯ ಎಲ್ಲಾ ಗಡಿ ಭಾಗದಲ್ಲಿ ಜಿಲ್ಲೆಗೆ ಬರುವ ಎಲ್ಲಾ ವಾಹನಗಳ ತಪಾಸಣೆ ದಿನದ 24 ಗಂಟೆ ನಡೆಸಲಾಗುವುದು. ದಾಖಲಾತಿ ಇಲ್ಲದ ಹಣ ಮತ್ತು ವಸ್ತುಗಳನ್ನು ಸಾಗಿಸುವಂತಿಲ್ಲ ಒಟ್ಟಿನಲ್ಲಿ ಶಾಂತಿಯುತ ಚುನಾವಣೆ ನಡೆಸಲು ಸಕಲ ಕ್ರಮ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ವೀಣಾ, ಉಪವಿಭಾಗಾಧಿಕಾರಿ ದಾಮೋಧರ್ ನರ್ವಾಡೆ ಉಪಸ್ಥಿತರಿದ್ದರು.

ಶ್ರೀ ಶನೇಶ್ವರ ದೇವಸ್ಥಾನದ ವಾರ್ಷಿಕ ಮಹಾಪೂಜೆ

ಗುಡ್ಡೆಹೊಸೂರು, ಮಾ.16– ಇಲ್ಲಿಗೆ ಸಮೀಪದ ಮಾದಪಟ್ಟಣ ಗ್ರಾಮದ ಶ್ರೀ ಶನೇಶ್ವರ ದೇವಸ್ಥಾನದ ವಾರ್ಷಿಕ ಮಹಾಪೂಜೆಯು ಅದ್ಧೂರಿಯಾಗಿ ನಡೆಯಿತು.



ಮುಂಜಾನೆಯಿಂದ ದೇವಸ್ಥಾನದಲ್ಲಿ ವಿವಿಧ ಪೂಜೆ, ಹೋಮ ಹವನ ನಡೆಸಲಾಯಿತು. ಈ ಎಲ್ಲಾ ಕಾರ್ಯದಲ್ಲಿ ಗ್ರಾಮದ ಸುತ್ತಮುತ್ತಲಿನ ಹಲವು ಗ್ರಾಮದ ಸಾವಿರಾರು ಭಕ್ತರು ಪೂಜೆಯಲ್ಲಿ ಭಾಗವಹಿಸಿದ್ದರು. ಮಧ್ಯಾಹ್ನ ಅನ್ನಸಂತರ್ಪಣೆ ನಡೆಸಲಾಯಿತು. ದೇವಸ್ಥಾನದ ಅಧ್ಯಕ್ಷರು ಹಾಗೂ ಅರ್ಚಕರು ಆದ ಜೋಗಯ್ಯ ನೇತೃತ್ವದಲ್ಲಿ ಎಲ್ಲಾ ಪೂಜಾ ಕಾರ್ಯಗಳನ್ನು ನಡೆಸಲಾಯಿತು.

ಐದು ಪದಕ ಗೆದ್ದು ರಾಜ್ಯ ಮಟ್ಟಕ್ಕೆ ಆಯ್ಕೆ

ಮಡಿಕೇರಿ: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮೈಸೂರು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಮಡಿಕೇರಿಯ ಬಂಗಾಡು ಮನೆ ವಸಂತಿ ಅವರು 5 ಪದಕಗಳನ್ನು ಗೆದ್ದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಕೊಡಗು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.



ಉದ್ದ ಜಿಗಿತದಲ್ಲಿ ಚಿನ್ನದ ಪದಕ, 200 ಮೀ ಓಟದಲ್ಲಿ ಬೆಳ್ಳಿ ಪದಕ, 400/4 ರಿಲೆಯಲ್ಲಿ ಕಂಚಿನ ಪದಕ, ಸಾಂಪ್ರದಾಯಿಕ ಯೋಗಾಸನ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಮತ್ತು ಲಯಬದ್ಧ ಜೋಡಿ ಯೋಗಾಸನದಲ್ಲಿ ಬೆಳ್ಳಿ ಪದಕ ಗೆದ್ದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮಡಿಕೇರಿಯ ಜಿಲ್ಲಾಸ್ಪತ್ರೆಯಲ್ಲಿ 25 ವರ್ಷಗಳ ಕಾಲ ಸೇವೆ ಸಲ್ಲಿಸಿರುವ ವಸಂತಿ ಅವರು, ಪ್ರಸ್ತುತ ಬಡ್ತಿ ಹೊಂದಿ ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಸೀನಿಯರ್ ನರ್ಸಿಂಗ್ ಆಫೀಸರ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ. ಕ್ರೀಡೆಯಲ್ಲಿ ಹೆಚ್ಚು ಆಸಕ್ತಿ ಹೊಂದಿರುವ ಇವರು ಇಲ್ಲಿಯವರೆಗೆ ಅನೇಕ ರಾಜ್ಯ ಮತ್ತು ಜಿಲ್ಲಾ ಮಟ್ಟದ ಕ್ರೀಡಾಕೂಟಗಳಲ್ಲಿ ಪಾಲ್ಗೊಂಡು ದಾಖಲೆಯ ಪದಕಗಳನ್ನು ಗಳಿಸಿದ್ದಾರೆ.

ದಶಕಗಳಿಂದ ತಲೆಮರೆಸಿಕೊಂಡಿದ್ದ ಮೂವರು ಆರೋಪಿಗಳ ಬಂಧನ

ಮಡಿಕೇರಿ,ಮಾ.16– ವಿವಿಧ ಅಪರಾಧ ಕೃತ್ಯ ಎಸಗಿ ಹಲವು ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಗಳನ್ನು ಬಂಧಿಸುವಲ್ಲಿ ಕೊಡಗು ಜಿಲ್ಲಾ ಪೊಲೀಸ್ ಯಶಸ್ವಿಯಾಗಿದೆ.



2007ನೇ ಸಾಲಿನಲ್ಲಿ ಕಾಂತೂರು– ಮೂರ್ನಾಡು ನಿವಾಸಿ ಪದ್ಮಾವತಿ ಎಂಬವರ ಮನೆಗೆ ಪ್ರವೇಶಿಸಿ ಸಾಮಗ್ರಿಗಳನ್ನು ಒಡೆದು ಹಾಕಿ, ಹಲ್ಲೆ ನಡೆಸಿ, ಕೊಲೆ ಬೆದರಿಕೆ ಹಾಕಿದ ಆರೋಪದಡಿ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ಸುಮಾರು 16 ವರ್ಷಗಳಿಂದ ತಲೆ ಮರೆಸಿಕೊಂಡಿದ್ದ, ನಂಜರಾಯಪಟ್ಟಣ ಗ್ರಾಮದ ಹೆಚ್.ಯು. ಚಂದ್ರಶೇಖರ್(49).

2002ನೇ ಸಾಲಿನಲ್ಲಿ ತನ್ನ ಪತ್ನಿ ಕೊಲೆ ಮಾಡಲು ಪ್ರಯತ್ನಿಸಿದ ಕುರಿತು ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ 21 ವರ್ಷದಿಂದ ತಲೆಮರೆಸಿಕೊಂಡಿದ್ದ ಅರ್ಜಿ ಗ್ರಾಮದ ನಿವಾಸಿ ಮಣಿ(60).

2002ನೇ ಸಾಲಿನಲ್ಲಿ ಸಿದ್ದಾಪುರ ಠಾಣಾ ವ್ಯಾಪ್ತಿಯಲ್ಲಿನ ಗುಹ್ಯ ಗ್ರಾಮದ ಮಹಿಳೆಯೊಬ್ಬರ ಮನೆಗೆ ಅಕ್ರಮವಾಗಿ ಪ್ರವೇಶಿಸಿ ಅತ್ಯಾಚಾರ ಮಾಡಿ ಕೊಲೆ ಬೆದರಿಕೆ ಹಾಕಿದ ಕುರಿತು ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ ತಲೆಮರೆಸಿಕೊಂಡಿದ್ದ ಆರೋಪಿ ದೊಡ್ಡ ಪುಲಿಕೋಟು ಗ್ರಾಮದ ನಿವಾಸಿ ಪಣಿ ಎರವರ ಶಂಕರ(52) ಎಂಬವರನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಬಹಳ ವರ್ಷಗಳಿಂದ ತಲೆಮರೆಸಿಕೊಂಡಿದ್ದ ಆರೋಪಿಗಳನ್ನು ಪತ್ತೆ ಹಚ್ಚಲು ಮಡಿಕೇರಿ ಉಪ ವಿಭಾಗದ ಡಿವೈಎಸ್‌ಪಿ ಮಹೇಶ್ ಕುಮಾರ್.ಎಸ್, ಮಡಿಕೇರಿ ನಗರ ವೃತ್ತದ ಪಿ.ಐ ರಾಜು.ಪಿ.ಕೆ, ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯ ಪಿ.ಐ ಉಮೇಶ್.ಯು, ಸಿದ್ದಾಪುರ ಠಾಣೆಯ ಎಸ್‌ಐ ರಾಘವೇಂದ್ರ ಹಾಗೂ ಸಿಬ್ಬಂದಿಗಳ ವಿಶೇಷ ತನಿಖಾ ತಂಡ ಕಾರ್ಯಾಚರಣೆ ನಡೆಸಿತು. ಈ 3 ಪ್ರಕರಣಗಳ ಆರೋಪಿಗಳನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

ರಾಷ್ಟ್ರೀಯ ಗೈಡ್ ಕ್ಯಾಪ್ಟನ್ಸ್ ಸಮಾವೇಶಕ್ಕೆ ಕೊಡಗಿನ ಶಿಕ್ಷಕಿ ಆಯ್ಕೆ



ಮಡಿಕೇರಿ: ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಷ್ಟ್ರೀಯ ಸಂಸ್ಥೆ ವತಿಯಿಂದ ಮಾ.18ರವರೆಗೆ ಪುಣೆಯ ಸಂಗಮ್ಮ ವಿಶ್ವ ಕೇಂದ್ರದಲ್ಲಿ ನಡೆಯುತ್ತಿರುವ ಗೈಡ್ ಕ್ಯಾಪ್ಟನ್ಸ್ ಸಮಾವೇಶದಲ್ಲಿ ವಿರಾಜಪೇಟೆ ಅರಮೇರಿ ಎಸ್.ಎಂ.ಎಸ್ ವಿದ್ಯಾಸಂಸ್ಥೆಯ ಶಿಕ್ಷಕಿ ಮೈಥಿಲಿರಾವ್ ಕೊಡಗು ಜಿಲ್ಲೆಯನ್ನು ಪ್ರತಿನಿಧಿಸುತ್ತಿದ್ದಾರೆ. ಇವರು ರಾಜ್ಯದಲ್ಲೇ ಉತ್ತಮ ತರಬೇತಿ ಪಡೆದ ನಾಯಕಿ ಆಗಿದ್ದು, ಕೊಡಗು ಜಿಲ್ಲಾ ಸಂಸ್ಥೆಯಲ್ಲಿ ಗೈಡ್ ವಿಭಾಗದ ತರಬೇತಿ ನಾಯಕಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಿನ ಪಾಲನೆಗೆ ಸೂಚನೆ



ಮಂಡ್ಯ, ಮಾ.16– ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಇಂದಿನಿಂದ ಜಾರಿಯಾಗಿದ್ದು, ಕಟ್ಟುನಿಟ್ಟಾಗಿ ಪಾಲಿಸುವಂತೆ ಜಿಲ್ಲಾಧಿಕಾರಿ ಡಾ.ಕುಮಾರ್ ಅಧಿಕಾರಿಗಳಿಗೆ ತಿಳಿಸಿದರು.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಎಸ್‌ಎಸ್‌ಟಿ, ಎಫ್‌ಎಸ್‌ಟಿ ತಂಡಗಳು ಕಾರ್ಯಾನ್ಮುಖರಾಗಬೇಕು. ಜಿಲ್ಲೆಯಲ್ಲಿ ನಡೆಯುವ ರಾಜಕೀಯ ಪ್ರಚಾರ ಸಭೆ, ಸಮಾರಂಭ, ರ್‍ಯಾಲಿಗಳಲ್ಲಿ ಭಾಗವಹಿಸಿ ವರದಿ ಸಲ್ಲಿಸಬೇಕು. ಸರ್ಕಾರಿ ಕಟ್ಟಡ, ಸಾರ್ವಜನಿಕ ಸ್ಥಳಗಳ ಮೇಲಿರುವ ರಾಜಕೀಯ ವ್ಯಕ್ತಿಗಳ ಜಾಹೀರಾತು ಫಲಕ, ಫ್ಲೆಕ್ಸ್, ಪೋಸ್ಟರ್‌ಗಳನ್ನು ಕೂಡಲೇ ತೆರವುಗೊಳಿಸಬೇಕು. ಸರ್ಕಾರದ ಎಲ್ಲಾ ವೆಬ್‌ಸೈಟ್‌ಗಳಲ್ಲಿ ರಾಜಕೀಯ ವ್ಯಕ್ತಿಗಳ ಭಾವಚಿತ್ರಗಳನ್ನು ತೆರವುಗೊಳಿಸಬೇಕು. ಇದಕ್ಕೆ ಸಂಬಂಧಿಸಿದಂತೆ ಎನ್‌ಐಸಿ ಅಧಿಕಾರಿಗಳು ಪರಿಶೀಲಿಸಬೇಕು ಎಂದರು.

ಚೆಕ್‌ಪೋಸ್ಟ್‌ಗಳ ಸಿದ್ಧತೆ ಈಗಾಗಲೇ ಪ್ರಾರಂಭವಾಗಿದ್ದು, ಎಲ್ಲಾ ಚೆಕ್‌ಪೋಸ್ಟ್‌ಗಳಿಗೂ ಮೂಲ ಸೌಕರ್ಯ ಕಲ್ಪಿಸಬೇಕು. ಸಿಸಿ ಟಿವಿ ಅಳವಡಿಸಲು ಕ್ರಮ ಕೈಗೊಳ್ಳಬೇಕು. ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ವಿವಿಧ ರೀತಿಯ ಪರವಾನಗಿ ಪಡೆಯಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಹಾಗೂ ತಾಲೂಕು ಮಟ್ಟದಲ್ಲಿ ತಾಲೂಕು ಕಚೇರಿಯಲ್ಲಿ ಸಿಂಗಲ್ ವಿಂಡೋ ಸ್ಥಾಪನೆ ಮಾಡಿ ನಿಗದಿತ ಸಮಯದಲ್ಲಿ ಬರುವ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ದೂರು ನಿರ್ವಹಣಾ ಕೋಶದ ನಿರ್ವಹಣೆ ವ್ಯವಸ್ಥಿತವಾಗಿ ನಡೆಯಬೇಕು ಎಂದರು.

85 ವರ್ಷ ಮೇಲ್ಪಟ್ಟವರಿಗೆ ಪೋಸ್ಟಲ್ ಬ್ಯಾಲೆಟ್ ಮೂಲಕ ಮತದಾನ ಕಲ್ಪಿಸಲು ಫಾರಂ 12ಡಿ ನಮೂನೆ ಪಡೆಯಬೇಕಿದ್ದು, 85 ವರ್ಷ ಮೇಲ್ಪಟ್ಟವರ ವಿವರ ಪಡೆದು ಅವರ ಮನೆಗೆ ಭೇಟಿ ಮಾಡಿ 12ಡಿ ನಮೂನೆ ಸಿದ್ಧಪಡಿಸಿಕೊಳ್ಳಬೇಕು. ಅಲ್ಲದೇ ಅಗತ್ಯ ಸೇವಾ ವಲಯದ ಮತದಾರರ ವಿವರವನ್ನು ಸಹ ಸಿದ್ಧಪಡಿಸಿಕೊಳ್ಳಿ, ತಾಲೂಕು ಮಟ್ಟದಲ್ಲಿ ಸಹಾಯಕ ಚುನಾವಣಾಧಿಕಾರಿಗಳು ರಾಜಕೀಯ ಪಕ್ಷಗಳ ಸಭೆ ನಡೆಸಿ ಅವರಿಗೆ ಚುನಾವಣೆಗೆ ಸಂಬಂಧಿಸಿದ ಮಾಹಿತಿ ಒದಗಿಸಬೇಕು. ಯಾವುದೇ ದೂರು ಕಂಡು ಬಂದಲ್ಲಿ ತಕ್ಷಣ ವಿಲೇವಾರಿ ಮಾಡಬೇಕು ಎಂದರು.

ಜಿಪಂ ಸಿಇಓ ಶೇಖ್ ತನ್ವೀರ್ ಆಸಿಫ್ ಮಾತನಾಡಿ, ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ದೀಪಗಳು ಸೇರಿದಂತೆ ಎಲ್ಲಾ ಮೂಲ ವ್ಯವಸ್ಥೆಗಳಿರುವ ಬಗ್ಗೆ ಸಹಾಯಕ ಚುನಾವಣಾಧಿಕಾರಿಗಳು ಪರಿಶೀಲಿಸಬೇಕು ಎಂದರು. ಅಪರ ಡಿಸಿ ಡಾ.ಹೆಚ್.ಎಲ್.ನಾಗರಾಜು ಮಾತನಾಡಿದರು.ಸಭೆಯಲ್ಲಿ ಎಸ್ಪಿ ಎನ್.ಯತೀಶ್, ಜಿಪಂ ಯೋಜನಾ ನಿರ್ದೇಶಕ ಸಂಜೀವಪ್ಪ, ಎಸಿ ಮಹೇಶ್, ಮುಡಾ ಆಯುಕ್ತ ಲೋಕನಾಥ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.


ಶ್ರೀರಂಗಪಟ್ಟಣ ತಾಲೂಕಿನ ಪಾಲಹಳ್ಳಿಯಲ್ಲಿ ಕಾಂಕ್ರೀಟ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ರಮೇಶ್ ಬಂಡಿಸಿದ್ದೇಗೌಡ ಗುದ್ದಲಿ ಪೂಜೆ ನೆರವೇರಿಸಿದರು. ಈ ವೇಳೆ ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಎಸ್.ಚಂದ್ರಶೇಖರ್, ಗ್ರಾಪಂ ಅಧ್ಯಕ್ಷ ವಿಮಲ, ಪೈ.ಮುಕುಂದ, ಪಿ.ಜಿ.ಗೋವಿಂದರಾಜು, ವಿ.,ಶಂಕರೇಗೌಡ, ರಾಮೇಗೌಡ ಗಾಯಿತ್ರಿದೇವಿ, ಪಿಡಿಓ ರವಿ ಸೇರಿದಂತೆ ಇನ್ನಿತರರಿದ್ದರು.

ಸಿಎಂ ಆಗಲು ಕುಮಾರಸ್ವಾಮಿ ನನ್ನ ಬಳಿ ಕೈಕಟ್ಟಿ ನಿಲ್ಲುತ್ತಿದ್ದರು

ಹೆಚ್‌ಡಿಕೆ ವಿರುದ್ಧ ಸಿಆರ್‌ಎಸ್ ವಾಗ್ದಾಳಿ


ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿದರು.

ಮಂಡ್ಯ, ಮಾ.16– ಮುಖ್ಯಮಂತ್ರಿಯಾಗಲು ಕುಮಾರಸ್ವಾಮಿ ನನ್ನ ಬಳಿ ಕೈಕಟ್ಟಿ ನಿಲ್ಲುತ್ತಿದ್ದರು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದರು.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸ್ಥಾನಕ್ಕಾಗಿ ಚಲುವರಾಯಸ್ವಾಮಿ ದುಂಬಾಲು ಬಿದ್ದಿದ್ದರು ಎಂದು ಅವರು ನನಗೆ ಹೇಳಿದ್ದಾರೆ. ಆದರೆ ಕುಮಾರಸ್ವಾಮಿ ಸಿಎಂ ಆಗಲು ನನ್ನ ಬಳಿ ಕೈಕಟ್ಟಿ ನಿಲ್ಲುತ್ತಿದ್ದರು. ಅವರ ಅಪ್ಪ, ಅವರ ಭಾವ ಬೇಡ ಎಂದಾಗ 39 ಶಾಸಕರ ಬಳಿ ಹೆಚ್ಡಿಕೆ ಹೇಗೆ ನಿಲ್ಲುತ್ತಿದ್ದರು ಗೊತ್ತಾ ಎಂದು ಪ್ರಶ್ನಿಸಿದ ಅವರು, ಅಂದು ನನ್ನನ್ನು ಜನ ಗೆಲ್ಲಿಸಿದ್ದಕ್ಕೆ ಮಂತ್ರಿಯಾಗಿದ್ದೇನೆ. ಈಗಲೂ ಜನ ಗೆಲ್ಲಿಸಿರುವುದಕ್ಕೆ ಮಂತ್ರಿ ಮಾಡಿದ್ದಾರೆ ಎಂದರು.

ಜೆಡಿಎಸ್‌ನವರು ಹಳೇ ಭಾಷಣ ಹೊಡೆಯುತ್ತಿದ್ದಾರೆ. ಭಾಷಣದಲ್ಲಿ ಅವರು ಮುಂದೆ ಇದ್ದಾರೆ. ಅಭಿವೃದ್ಧಿಯಲ್ಲಿ ನಾವು ಮುಂದಿದ್ದೇವೆ. ನಾವು ಬರೀ ಬಾಯಲ್ಲಿ ಹೇಳಲ್ಲ. ಕೆಲಸ ಮಾಡಿ ತೋರಿಸುತ್ತೇವೆ. ಕೆಲವರಿಗೆ ಮಂಡ್ಯ ಅಭಿವೃದ್ಧಿ ಬೇಕಿಲ್ಲ. ಜೆಡಿಎಸ್‌ನವರಿಗೆ ಹೊಸ ಕಾರ್ಖಾನೆ, ಹೊಸ ವಿವಿ ಬೇಡ ಅಭಿವೃದ್ಧಿ ಆದರೆ ಜಿಲ್ಲೆ ಇವರ ಹಿಡಿತಕ್ಕೆ ಸಿಗಲ್ಲ ಎಂಬ ನಿಟ್ಟಿನಲ್ಲಿ ಅಭಿವೃದ್ಧಿಗೆ ವಿರೋಧಿಸುತ್ತಿದ್ದಾರೆ. ಅವರನ್ನು ಕೇಳಿ ನಾನು ತೀರ್ಮಾನ ಮಾಡಬೇಕಾ. ಜನರ ಆಗತ್ಯಗಳಿಗೆ ಅಭಿವೃದ್ಧಿ ಮಾಡುತ್ತೇವೆ ಎಂದರು.

ಕಾಂಗ್ರೆಸ್ ಒಕ್ಕಲಿಗ ನಾಯಕರನ್ನು ತುಳಿಯುತ್ತಿದೆ ಎಂಬ ಹೆಚ್ಡಿಕೆ ಹೇಳಿಕೆಗೆ ಪ್ರತಿಕ್ರಿಯಿಸಿ, ಕಾಂಗ್ರೆಸ್‌ನಲ್ಲಿ ಒಕ್ಕಲಿಗರಿಲ್ವಾ, ನಾವ್ಯಾರು ಒಕ್ಕಲಿಗರಲ್ವಾ? ಜಾತಿ ರಾಜಕಾರಣವನ್ನು ಜನ ಈಗ ಒಪ್ಪಲ್ಲ. ಅವರ ಚಿಹ್ನೆ, ಪಕ್ಷದ ಮೇಲೆ ಅವರಿಗೆ ವಿಶ್ವಾಸ ಇಲ್ಲ. ಅದಕ್ಕೆ ಡಾ. ಮಂಜುನಾಥ್ ಅವರನ್ನು ಬಿಜೆಪಿ ಅಭ್ಯರ್ಥಿ ಮಾಡಿದ್ದಾರೆ. ರಾಜಕೀಯವಾಗಿ ಯಾರು ಯಾರನ್ನ ತುಳಿದರು ಎಂಬ ಇತಿಹಾಸ ಇದೆ ಈಗ ನಾನು ಯಾಕೆ ಮಾತನಾಡುವುದು. ಜನಕ್ಕೆ ಅದೆಲ್ಲಾ ತಿಳಿದೆ ನಮ್ಮ ಪರ ಇದ್ದಾರೆ. ಹೊಟ್ಟೆ ನೋವು ತಡೆಯಲಾರದೆ ಏನೇನೋ ಮಾತನಾಡುತ್ತಾರೆ. ಅದಕ್ಕೆ ವೈದ್ಯರೆ ಮೆಡಿಸಿನ್ ಕೊಡಬೇಕು ಎಂದರು.

ಚುನಾವಣೆಯಲ್ಲಿ ಜನ ಅವರನ್ನು ನಂಬಲಿಲ್ಲ, ನಮ್ಮ ಗ್ಯಾರಂಟಿ ನಂಬಿದರು. ಅವರ ಆಡಳಿತವನ್ನು ಜನ ಒಪ್ಪಲಿಲ್ಲ. ಮಲಗಿದ್ದರೂ ಎದ್ದರೂ ಚಲುವರಾಯಸ್ವಾಮಿ ಜಪ ಮಾಡ್ತಿದ್ದಾರೆ. ಸುರೇಶ್‌ಗೌಡನ ಬಗ್ಗೆ ಮಾತನಾಡಲ್ಲ. ಎಲ್ಲರಿಗೂ ಉತ್ತರ ಕೊಡುವ ಅವಶ್ಯಕತೆ ಇಲ್ಲ ಎಂದು ಹೇಳಿದರು.

ಕಾಂಗ್ರೆಸ್ ಷಡ್ಯಂತ್ರದಿಂದ ನಿಖಿಲ್‌ಗೆ ಸೋಲು ಎಂಬ ವಿಚಾರದ ಬಗ್ಗೆ ಮಾತನಾಡಿ, ಕಳೆದ ಚುನಾವಣೆಯಲ್ಲಿ ನಾನು ತಟಸ್ಥನಾಗಿದ್ದೆ. ನಾನು ಯಾರಿಗೂ ಚುನಾವಣೆ ಮಾಡಲಿಲ್ಲ. ಆಗ ಮೈತ್ರಿಯನ್ನು ಕಾಂಗ್ರೆಸ್ ಕಾರ್ಯಕರ್ತರು ಒಪ್ಪಲಿಲ್ಲ. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಏನು ಮಾಡಲು ಆಗಲಿಲ್ಲ. ಈಗಲೂ ಜೆಡಿಎಸ್–ಬಿಜೆಪಿ ಮೈತ್ರಿ ಈ ಭಾಗದಲ್ಲಿ ಜನ ಒಪ್ಪಲ್ಲ. ಎದುರಾಳಿ ನೋಡಿ ನಾವು ಚುನಾವಣೆ ಮಾಡಲ್ಲ. ಯಾರೇ ಅಭ್ಯರ್ಥಿ ಆದರೂ ನಾವು ತಲೆಕೆಡಿಸಿಕೊಳ್ಳಲ್ಲ. ನಮ್ಮ ಜನರ ಮೇಲೆ ನಂಬಿಕೆ ಇದೆ. ಬಿಜೆಪಿ–ಜೆಡಿಎಸ್ ಒಡೆದ ಮಡಿಕೆಯಾಗಿದೆ. ಮೈತ್ರಿ ಧಿಕ್ಕರಿಸಿ ಜನ ನಮ್ಮನ್ನು ಬೆಂಬಲಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭ ಶಾಸಕ ಗಣಿಗ ರವಿಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಆಕಸ್ಮಿಕ ಬೆಂಕಿ: ಕಬ್ಬು, ತೆಂಗಿನ ಗಿಡಗಳು ಭಸ್ಮ



ಚಿನಕುರಳಿ, ಮಾ.16– ಆಕಸ್ಮಿಕ ಬೆಂಕಿ ತಗುಲಿ 3 ಎಕರೆ ಕಬ್ಬು ಸೇರಿದಂತೆ 100ಕ್ಕೂ ಹೆಚ್ಚು ತೆಂಗಿನ ಗಿಡಗಳು ಭಸ್ಮವಾಗಿರುವ ಘಟನೆ ಇಲ್ಲಿಗೆ ಸಮೀಪದ ರಾಗಿಮುದ್ದನಹಳ್ಳಿಯಲ್ಲಿ ನಡೆದಿದೆ.

ಗ್ರಾಮದ ಹೊರವಲಯದ ಮೂಡನಹಳ್ಳಿ ಎಲ್ಲೆಯಲ್ಲಿರುವ ಸುನೀತ ಹಾಗೂ ಸಾಕಮ್ಮ ಎಂಬುವರಿಗೆ ಸೇರಿದ 3 ಎಕರೆ ಜಮೀನಿನಲ್ಲಿ ಬೆಳೆದಿದ್ದ ಕಬ್ಬು ಹಾಗೂ ತೆಂಗಿನ ಗಿಡಗಳು ಭಸ್ಮವಾಗಿ ಲಕ್ಷಾಂತರ ರೂ. ನಷ್ಟ ಸಂಭವಿಸಿದೆ ಎನ್ನಲಾಗಿದೆ.

ಬೇಬಿಬೆಟ್ಟದ ಅರಣ್ಯಕ್ಕೆ ಕಿಡಿಗೇಡಿಗಳು ಹಾಕಿದ್ದ ಬೆಂಕಿ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿದ್ದ ರಾಗಿಮುದ್ದನಹಳ್ಳಿ ಗ್ರಾಮದ ನಿವಾಸಿಗಳಾದ ಸುನೀತ ಹಾಗೂ ಸಾಕಮ್ಮ ಎಂಬುವರಿಗೆ ಸೇರಿದ 3 ಎಕರೆ ಜಮೀನಿಗೂ ವ್ಯಾಪಿಸಿದೆ. ಪರಿಣಾಮ ಜಮೀನಿನಲ್ಲಿದ್ದ ಕಬ್ಬಿನ ಫಸಲು ಸೇರಿದಂತೆ ನೂರಾರು ತೆಂಗಿನ ಗಿಡಗಳು ಬೆಂಕಿಗೆ ಆಹುತಿಯಾಗಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ನೀರಿಲ್ಲದ ವೇಳೆ ಕಷ್ಟಪಟ್ಟು ಬೆಳೆ ಬೆಳೆದಿದ್ದೇವೆ. ಇಂತಹ ಸಂದರ್ಭ ಬೆಂಕಿ ತಗುಲಿ ಬೆಳೆ ಸುಟ್ಟು ಹೋಗಿ ಲಕ್ಷಾಂತರ ರೂ. ನಷ್ಟ ಸಂಭವಿಸಿದೆ. ಹಾಗಾಗಿ ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿ ಸರ್ಕಾರದಿಂದ ಸೂಕ್ತ ಪರಿಹಾರ ದೊರಕಿಸಿಕೊಡಬೇಕೆಂದು ಜಮೀನಿನ ಮಾಲೀಕರಾದ ಸುನೀತ ಹಾಗೂ ಸಾಕಮ್ಮ ಆಗ್ರಹಿಸಿದ್ದಾರೆ.

ಬಿಜೆಪಿ ಪರಿಶಿಷ್ಟ ಪಂಗಡಗಳ ಮುನ್ನಡೆ ಮಹಾ ಸಮಾವೇಶ

ಎಸ್‌ಟಿ ಸಮುದಾಯಕ್ಕೆ ಕಾಂಗ್ರೆಸ್ ಕೊಡುಗೆ ಶೂನ್ಯ

ಎಸ್‌ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು


ಚಾಮರಾಜನಗರದ ಕರಿನಂಜನಪುರ ರಸ್ತೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಬಿಜೆಪಿ ಪರಿಶಿಷ್ಟ ಪಂಗಡಗಳ ಮುನ್ನಡೆ ಮಹಾಸಮಾವೇಶವನ್ನು ಬಿಜೆಪಿ ಎಸ್‌ಟಿ ಮೋರ್ಚಾದ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ಉದ್ಘಾಟಿಸಿದರು.

ಚಾಮರಾಜನಗರ, ಮಾ.16– ದೇಶ, ರಾಜ್ಯದಲ್ಲಿ 65 ವರ್ಷಗಳ ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಪರಿಶಿಷ್ಟ ಪಂಗಡ ಸಮುದಾಯಕ್ಕೆ ಯಾವುದೇ ಕೊಡುಗೆ ಕೊಟ್ಟಿಲ್ಲ ಎಂದು ಬಿಜೆಪಿ ಎಸ್‌ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ಆರೋಪಿಸಿದರು.

ನಗರದ ಕರಿನಂಜನಪುರ ರಸ್ತೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಬಿಜೆಪಿ ಪರಿಶಿಷ್ಟ ಪಂಗಡಗಳ ಮುನ್ನಡೆ ಮಹಾ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಸಮುದಾಯದ ಶ್ರೀಗಳ ಹೋರಾಟದ ಫಲವಾಗಿ ಬಿಜೆಪಿ ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚಳ ಮಾಡಿದೆ. ವಾಲ್ಮೀಕಿ ಜಯಂತಿ ಸರ್ಕಾರ ಕಾರ್ಯಕ್ರಮವಾಗಿ ಆಚರಣೆ, ಅಯೋಧ್ಯೆಯಲ್ಲಿ ವಿಮಾನ ನಿಲ್ದಾಣಕ್ಕೆ ಶ್ರೀ ವಾಲ್ಮೀಕಿಯವರ ಹೆಸರು ನಾಮಕರಣ, ಎಸ್‌ಸಿ, ಎಸ್‌ಟಿ ಅಭಿವೃದ್ಧಿಗೆ ಒತ್ತು ನೀಡಿದ ಕೀರ್ತಿ ಬಿಜೆಪಿ ಸರ್ಕಾರಕ್ಕೆ ಸಲ್ಲುತ್ತದೆ ಎಂದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಎಸ್‌ಸಿಪಿ, ಟಿಎಸ್‌ಪಿ ಅನುದಾನವನ್ನು ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳಿಗೆ ಬಳಸುವ ಮೂಲಕ ಎಸ್‌ಸಿ, ಎಸ್‌ಟಿ ಸಮುದಾಯಗಳಿಗೆ ಅನ್ಯಾಯ ಮಾಡಿದ್ದಾರೆ ಎಂದು ಆರೋಪಿಸಿದರು.

ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಬಿಜೆಪಿ ನಾಯಕ ಸಮುದಾಯಕ್ಕೆ ಅನೇಕ ಕೊಡುಗೆಗಳನ್ನು ಕೊಟ್ಟಿದೆ. ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚು ಮಾಡಿದೆ. ಪಕ್ಷದ ಉಪ್ಪಿನ ಋಣ ಸಮುದಾಯದ ಮೇಲಿದೆ. ಮುಂದಿನ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಎಸ್.ಬಾಲರಾಜ್ ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸುವ ಮೂಲಕ 3ನೇ ಬಾರಿಗೆ ನರೇಂದ್ರಮೋದಿ ಅವರನ್ನು ಪ್ರಧಾನಿಯಾಗಿ ಆಯ್ಕೆ ಮಾಡಿ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಸಹಕರಿಸಬೇಕು ಎಂದು ಮನವಿ ಮಾಡಿದರು.


ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಮಾತನಾಡಿ, 20 ವರ್ಷಗಳ ರಾಜಕೀಯ ವನವಾಸಕ್ಕೆ ಒಂದು ಅವಕಾಶ ಸಿಕ್ಕಿದೆ. ನೀವು ನನಗೆ ಕೊಡುವ ಒಂದೊಂದು ಮತವನ್ನು ಮೋದಿಯವರಿಗೆ ಅರ್ಪಣೆ ಮಾಡಿ 3ನೇ ಬಾರಿಯೂ ದೇಶದ ಪ್ರಧಾನಿಯನ್ನಾಗಿ ಆಯ್ಕೆ ಮಾಡಲು ನನಗೊಂದು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು. ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಮೈಸೂರು ಮಾಜಿ ಮೇಯರ್ ಶಿವಕುಮಾರ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್, ಮಾಜಿ ಸಚಿವ ಎಸ್.ಎ. ರಾಮದಾಸ್, ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಭಾರಿ ಫಣೀಶ್, ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಉಪಾಧ್ಯಕ್ಷ ಶಿವು ವಿರಾಟ್, ನಗರ ಮಂಡಲ ಅಧ್ಯಕ್ಷ ಶಿವರಾಜ್, ಎಸ್‌ಟಿ ಮೋರ್ಚಾದ ರಾಜ್ಯದ ಕಾರ್ಯದರ್ಶಿ ಜಯಸುಂದರ್, ಮಂಜುಳ, ಅನಿಲ್, ಮಾಜಿ ಅಧ್ಯಕ್ಷ ಆರ್.ಸುಂದರ್, ಮುಖಂಡರಾದ ಎನ್.ಮಲ್ಲೇಶ್, ನಾಗಶ್ರೀ ಪ್ರತಾಪ್, ಕಪಿನಿನಾಯಕ, ನೂರೊಂದು ಶೆಟ್ಟಿ, ಕಿನಕಹಳ್ಳಿ ರಾಚಯ್ಯ ಬುಲೆಟ್ ಚಂದ್ರು, ಮನೀತ್ ಇತರರು ಭಾಗವಹಿಸಿದ್ದರು.



ಹನೂರು ತಾಲೂಕಿನ ಲೊಕ್ಕನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಅಧಿಕಾರೇತರ ಸದಸ್ಯ ಆರ್.ಪಿ. ವಿಷ್ಣುಕುಮಾರ್ ಅವರು ಮಾಜಿ ಶಾಸಕ ಆರ್.ನರೇಂದ್ರ ಅವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯರಾದ ಗಿರೀಶ್, ಹರೀಶ್, ಮುಖಂಡರಾದ ಎಲ್ ನಾಗೇಂದ್ರ, ಮಾದೇಶ್ .ಎಸ್, ರವಿಗೌಡ, ಕುಮಾರ್‌ಗೌಡ, ರಾಜು, ನಿಂಗಶೆಟ್ಟಿ, ಪೆದ್ದನಪಾಳ್ಯ ಮಣಿ ಸೇರಿದಂತೆ ಇನ್ನಿತರರು ಹಾಜರಿದ್ದರು.

ಬೇಗೂರು ಸುತ್ತಮುತ್ತ ನೀರಿಗೆ ಹಾಹಾಕಾರ


ಬೇಗೂರು ಸುತ್ತಮುತ್ತಲ ಐದಾರು ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಹಾಹಾಕಾರ.



"ಬೇಸಿಗೆ ಹಿನ್ನೆಲೆ ನದಿಯ ನೀರಿನ ಪ್ರಮಾಣ ಕಡಿಮೆಯಾಗಿದ್ದು, ನೀರಿನ ಮಟ್ಟ ಹೆಚ್ಚಿಸಲು ಸೆಂಡ್ ಬ್ಯಾಗ್‌ಗಳನ್ನು ಉಪಯೋಗಿಸುತ್ತಿದ್ದು ವಿದ್ಯುತ್ ವೋಲ್ಟೇಜ್ ಸಮಸ್ಯೆ ಇರುವ ಹಿನ್ನೆಲೆ ನೀರು ಸರಬರಾಜಿನಲ್ಲಿ ವ್ಯತ್ಯಾಸವಾಗುತ್ತಿದ್ದು, ಶೀಘ್ರದಲ್ಲಿ ಸಮಸ್ಯೆ ಬಗ್ಗೆಹರಿಸಲು ಕ್ರಮ ಕೈಗೊಳ್ಳಲಾಗುವುದು.

– ವಸಂತಕುಮಾರಿ, ಪುರಸಭಾ ಮುಖ್ಯಾಧಿಕಾರಿ ಗುಂಡ್ಲುಪೇಟೆ

"ಕಬಿನಿ ಕುಡಿಯುವ ನೀರಿನ ಪೈಪ್ ಲೈನ್‌ಗಳು ಬಹಳ ಹಳೆಯದಾಗಿದೆ ಹೀಗಾಗಿ ಗುಂಡ್ಲುಪೇಟೆಗೆ ಪ್ರತ್ಯೇಕವಾಗಿ ನಿರೋದಗಿಸುವ ಕಾಮಗಾರಿ ಶೀಘ್ರಗತಿಯಲ್ಲಿ ನಡೆಯಬೇಕು ಮತ್ತು ಕಬಿನಿ ಪೈಪ್‌ಗಳನ್ನು ದುರಸ್ತಿಪಡಿಸಿ ನೀರು ಪೂರೈಸುವಂತೆ ಶೀಘ್ರ ಕ್ರಮ ಕೈಗೊಳ್ಳಬೇಕು.

– ಮಹೇಶ್ ಅರೇಪುರ

ಬೇಗೂರು, ಮಾ.16– ಕಬಿನಿ ಜಲಾಶಯದಿಂದ ಗುಂಡ್ಲುಪೇಟೆಗೆ ನೀರು ಸರಬರಾಜಾಗುತ್ತಿದ್ದು, ಈ ಭಾಗದಲ್ಲಿ ಬರುವ ಸುತ್ತಮುತ್ತಲ ಹಳ್ಳಿಗಳಿಗೂ ಸಹ ಇದೇ ನೀರು ಪೂರೈಕೆಯಾಗುತ್ತಿದೆ. ಆದರೆ ಪೈಪ್‌ಗಳು ಹಳೆದಾಗಿದ್ದು ಆಗಾಗ ಒಡೆದು ಹೋಗುತ್ತಿರುತ್ತವೆ ಮತ್ತು ಶೀಘ್ರ ದುರಸ್ತಿಯಾಗದ ಕಾರಣ ಜನರು ನೀರಿಲ್ಲದೆ ಪರದಾಡುವಂತಾಗಿದೆ.

ಇನ್ನೂ ಬೇಸಿಗೆ ಪ್ರಾರಂಭವಾಗಿಲ್ಲ ಈಗಾಗಲೇ ನೀರಿಗೆ ಈ ರೀತಿಯ ಬರವಾದರೆ ಬೇಸಿಗೆ ದಿನಗಳಲ್ಲಿ ಗ್ರಾಮಸ್ಥರು ನೀರಿಗಾಗಿ ಗುಳೆಹೋಗುವ ಪರಿಸ್ಥಿತಿ ನಿರ್ಮಾಣವಾಗಬಹುದು. ಆದ್ದರಿಂದ ಗ್ರಾಪಂ ಆಡಳಿತ ವರ್ಗದವರು ಮತ್ತು ಚುನಾಯಿತ ಪ್ರತಿನಿಧಿಗಳು ಕುಡಿಯುವ ನೀರಿಗೆ ಕಬಿನಿ ಮೂಲವನ್ನೇ ಆಶ್ರಯಿಸದೇ, ನೀರಿನ ಸರಬ ರಾಜಿನಲ್ಲಿ ಯಾವುದೇ ವ್ಯತ್ಯಾಸವಾಗದಂತೆ ಹೊಸ ಬೋರ್‌ವೆಲ್ ಕೊರೆಸಿ ನೀರು ಸರಬರಾಜು ಮಾಡಲಿ ಎಂಬುದು ಗ್ರಾಮಸ್ಥರ ಅಳಲು.

ಬೇಗೂರು ಹೋಬಳಿ ಅರೇಪುರ, ಹಿರಿಕಾಟಿ, ಚಿಕ್ಕಾಟಿ, ತೊಂಡವಾಡಿ, ರಾಘವಾಪುರ, ತಗ್ಗಲೂರು, ಗರಗನಹಳ್ಳಿ, ಸೇರಿದಂತೆ 33ಕ್ಕೂ ಹೆಚ್ಚು ಹಳ್ಳಿಗಳ ಜನರು ಕಬಿನಿ ಕುಡಿಯುವ ನೀರನ್ನೇ ಅವಲಂಬಿಸಿದ್ದು, ಕಳೆದ 10 ದಿನಗಳಿಂದ ಕಬಿನಿ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದ್ದು, ಬೇಗೂರು ಹೋಬಳಿ ಸುತ್ತಮುತ್ತಲ ಗ್ರಾಮಗಳಲ್ಲಿ ನೀರಿನ ಬರ ಜನತೆಗೆ ತಟ್ಟಿದೆ ಗ್ರಾಮದ ಜನರು ಹನಿ ನೀರಿಗೂ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಕುಡಿಯುವ ನೀರಿನ ಸಮಸ್ಯೆ ಇದೇ ಮೊದಲೇನಲ್ಲ ಈ ಸಮಸ್ಯೆ ಆಗಿಂದಾಗ್ಗೆ ತಲೆದೋರುತ್ತಲೇ ಇದ್ದರೂ ಚುನಾಯಿತ ಪ್ರತಿನಿಧಿಗಳಾಗಲಿ, ಅಧಿಕಾರಿಗಳಾಗಲಿ ಶಾಶ್ವತವಾಗಿ ಕುಡಿಯುವ ನೀರು ಒದಗಿಸಲು ಕ್ರಮ ಕೈಗೊಂಡಿಲ್ಲ. ಅಧಿಕಾರಿಗಳು ಹೊಸದಾಗಿ ಬೋರ್‌ವೆಲ್ ಕೊರೆಸಿ ಸಮರ್ಪಕ ನೀರು ಸರಬರಾಜಿಗೆ ವ್ಯವಸ್ಥೆ ಕೈ ಗೊಳ್ಳುವಂತಾಗಲಿ.

ಮೈಸೂರು-ಕೊಡಗು ಕ್ಷೇತ್ರದಲ್ಲಿ 20,72,337 ಮತದಾರರು

ಏ.26ರಂದು ಮತದಾನ; ಜಿಲ್ಲಾಡಳಿತದಿಂದ ತ್ವರಿತ ಕ್ರಮ

ಮೈಸೂರು, ಮಾ.16-ಮೈಸೂರು-ಕೊಡಗು ಲೋಕಸಭಾ ಚುನಾವಣೆಗೆ ಏ.26 ರಂದು ಮತದಾನ ನಡೆಯಲಿದ್ದು, ಇಂದಿ ನಿಂದಲೇ ಚುನಾವಣಾ ನೀತಿ ಸಂಹಿತೆ ಜಾರಿಗೆ ಬಂದಿದೆ. ಮಾ.28 ರಂದು ಅಧಿಸೂಚನೆ ಹೊರಬೀಳಲಿದ್ದು, ಏ.4ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಏ.5 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಏ.8 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಜೂ.4ರಂದು ಮತ ಎಣಿಕೆ ನಡೆಯಲಿದ್ದು, ಜೂ.6ರಂದು ಚುನಾವಣಾ ಪ್ರಕ್ರಿಯೆ ಮುಕ್ತಾಯವಾಗಲಿದೆ.

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರಕ್ಕೆ ಮೈಸೂರು ಜಿಲ್ಲೆಯ ಕೃಷ್ಣರಾಜ, ಚಾಮರಾಜ, ನರಸಿಂಹರಾಜ, ಚಾಮುಂಡೇಶ್ವರಿ, ಹುಣಸೂರು, ಪಿರಿಯಾಪಟ್ಟಣ, ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ವಿಧಾನಸಭಾ ಕ್ಷೇತ್ರಗಳು ಒಳಪಡಲಿವೆ. ಮೈಸೂರು ಜಿಲ್ಲೆಯ ಕೆ.ಆರ್.ನಗರ ವಿಧಾನ ಸಭಾ ಕ್ಷೇತ್ರ ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಒಳಪಡಲಿದ್ದು, ಹೆಚ್.ಡಿ.ಕೋಟೆ, ನಂಜನಗೂಡು, ವರುಣ ಮತ್ತು ತಿ.ನರಸೀಪುರ ವಿಧಾನಸಭಾ ಕ್ಷೇತ್ರಗಳು ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಒಳಪಟ್ಟಿವೆ.

ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ 10,17,120 ಪುರುಷರು, 10,55,035 ಮಹಿಳೆಯರು, 182 ಇತರರು ಸೇರಿದಂತೆ ಒಟ್ಟು 20,72,337 ಮತದಾರರಿದ್ದಾರೆ. ಚಾಮುಂಡೇಶ್ವರಿ ಕ್ಷೇತ್ರ ಅತೀ ಹೆಚ್ಚು ಮತದಾರರನ್ನು ಹೊಂದಿದ್ದು, ಈ ಕ್ಷೇತ್ರದಲ್ಲಿ 1,71,090 ಪುರುಷರು, 1,74,196 ಮಹಿಳೆಯರು, 34 ಇತರರು ಸೇರಿದಂತೆ ಒಟ್ಟು 3,45,320 ಮತದಾರರಿದ್ದಾರೆ. ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರ ಅತೀ ಕಡಿಮೆ ಮತದಾರರನ್ನು ಹೊಂದಿದ್ದು, ಈ ಕ್ಷೇತ್ರದಲ್ಲಿ 98,447 ಪುರುಷರು, 98,764 ಮಹಿಳೆಯರು, ನಾಲ್ವರು ಇತರರು ಸೇರಿ ಒಟ್ಟು 1,97,215 ಮತದಾರರಿದ್ದಾರೆ.

ಉಳಿದಂತೆ ನರಸಿಂಹರಾಜ ಕ್ಷೇತ್ರದಲ್ಲಿ 1,47,502 ಪುರುಷರು, 1,59,047 ಮಹಿಳೆಯರು, 52 ಇತರರು ಸೇರಿ ಒಟ್ಟು 3,06,600, ಕೃಷ್ಣರಾಜ ಕ್ಷೇತ್ರದಲ್ಲಿ 1,24,419 ಪುರುಷರು, 1,31,168 ಮಹಿಳೆಯರು, 28 ಇತರರು ಸೇರಿ 2,55,165, ಚಾಮರಾಜ ಕ್ಷೇತ್ರದಲ್ಲಿ 1,24,897 ಪುರುಷರು, 1,29,996 ಮಹಿಳೆಯರು, 32 ಇತರರೂ ಸೇರಿ ಒಟ್ಟು 2,52,922, ಹುಣಸೂರು ಕ್ಷೇತ್ರದಲ್ಲಿ 1,22,284 ಪುರುಷರು, 1,24,208 ಮಹಿಳೆಯರು, 16 ಇತರರು ಸೇರಿ ಒಟ್ಟು 2,46,508, ಮಡಿಕೇರಿ ಕ್ಷೇತ್ರದಲ್ಲಿ 1,15,159 ಪುರುಷರು, 1,21,294 ಮಹಿಳೆಯರು, 9 ಇತರರು ಸೇರಿ ಒಟ್ಟು 2,36,568, ವಿರಾಜಪೇಟೆ ಕ್ಷೇತ್ರದಲ್ಲಿ 1,13,319 ಪುರುಷರು, 1,16,266 ಮಹಿಳೆಯರು, 7 ಇತರರು ಸೇರಿದಂತೆ ಒಟ್ಟು 2,36,562 ಮತದಾರರಿದ್ದಾರೆ.

ಒಟ್ಟಾರೆ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಪುರುಷರಿಗಿಂತ ಮಹಿಳಾ ಮತದಾರರ ಸಂಖ್ಯೆ ಹೆಚ್ಚಾಗಿದೆ. ಅದರಲ್ಲಿ ವಿರಾಜಪೇಟೆ ಹೊರತುಪಡಿಸಿದರೆ ಉಳಿದ 7 ವಿಧಾನಸಭಾ ಕ್ಷೇತ್ರಗಳಲ್ಲೂ ಮಹಿಳಾ ಮತದಾರರೇ ಹೆಚ್ಚಾಗಿದ್ದಾರೆ.

ಈ ಬಾರಿ 41,145 ಯುವ ಮತದಾರರು

ಈ ಬಾರಿ ಚುನಾವಣೆಯಲ್ಲಿ 18 ರಿಂದ 19 ವಯೋಮಿತಿಯ 41,145 ಯುವ ಮತದಾರರಿದ್ದು, ಇವರು, ಇದೇ ಪ್ರಥಮ ಬಾರಿಗೆ ಮತ ಚಲಾಯಿಸುವ ಹಕ್ಕು ಪಡೆದಿದ್ದಾರೆ. ಇವರಲ್ಲಿ 21,369 ಪುರುಷರು, 19,775 ಮಹಿಳೆಯರು, ಓರ್ವ ಇತರರು ಸೇರಿದ್ದಾರೆ. ಮಡಿಕೇರಿ ಕ್ಷೇತ್ರದಲ್ಲಿ 2,231 ಪುರುಷರು, 2,335 ಮಹಿಳೆಯರು ಸೇರಿ 4,566 ಯುವ ಮತದಾರರಿದ್ದಾರೆ. ವಿರಾಜಪೇಟೆ ಕ್ಷೇತ್ರದಲ್ಲಿ 2,316 ಪುರುಷರು, 2,194 ಮಹಿಳೆಯರೂ ಸೇರಿ ಒಟ್ಟು 4,510, ಪಿರಿಯಾಪಟ್ಟಣ ಕ್ಷೇತ್ರದಲ್ಲಿ 2,477 ಪುರುಷರು, 2,025 ಮಹಿಳೆಯರೂ ಸೇರಿ 4,502, ಹುಣಸೂರು ಕ್ಷೇತ್ರದಲ್ಲಿ 3,158 ಪುರುಷರು, 2,701 ಮಹಿಳೆಯರು, ಓರ್ವ ಇತರರು ಸೇರಿ 5,860, ಚಾಮುಂಡೇಶ್ವರಿಯಲ್ಲಿ 4,039 ಪುರುಷರು, 3,597 ಮಹಿಳೆಯರೂ ಸೇರಿ 7,636, ಕೃಷ್ಣರಾಜದಲ್ಲಿ 1,935 ಪುರುಷರು, 1,837 ಮಹಿಳೆಯರೂ ಸೇರಿ 3,772, ಚಾಮರಾಜದಲ್ಲಿ 2,020 ಪುರುಷರು, 2,045 ಮಹಿಳೆಯರೂ ಸೇರಿ ಒಟ್ಟು 4,065, ನರಸಿಂಹರಾಜದಲ್ಲಿ 3,193 ಪುರುಷರು, 3,141 ಮಹಿಳೆಯರೂ ಸೇರಿ ಒಟ್ಟು 6,234 ಯುವ ಮತದಾರರಿದ್ದಾರೆ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಮತದಾರರ ಪಟ್ಟಿಗೆ ಅತೀ ಹೆಚ್ಚು ಯುವ ಜನತೆ ಸೇರ್ಪಡೆಯಾಗಿದ್ದರೆ, ಕೃಷ್ಣರಾಜದಲ್ಲಿ ಅತೀ ಕಡಿಮೆ ಎಂದರೆ 3,772 ಯುವ ಮತದಾರರು ಸೇರ್ಪಡೆಯಾಗಿದ್ದಾರೆ.

2,202 ಮತಗಟ್ಟೆ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದಲ್ಲಿ 10 ಆಕ್ಸಿಲರಿ ಮತಗಟ್ಟೆಗಳೂ ಸೇರಿ ಒಟ್ಟು 2,202 ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತದೆ.

ಮೂರನೇ ಪುಟದಿಂದ

ಚುನಾವಣೆಗೆ ಜಿಲ್ಲಾಡಳಿತ ಸನ್ನದ್ಧ

ವಿಧಾನಸಭಾ ಕ್ಷೇತ್ರಗಳು ಒಳಪಡಲಿವೆ. ಈ ಜನವರಿ 22 ರಂದು ಪ್ರಕಟಿಸಿರುವ ಅಂತಿಮ ಮತದಾರರ ಪಟ್ಟಿಯ ಪ್ರಕಾರ ಒಟ್ಟು 8 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 8,69,389 ಪುರುಷರು, 8,88,113 ಮಹಿಳೆಯರು, ಇತರೆ 114 ಮತದಾರರು ಸೇರಿದಂತೆ ಒಟ್ಟು 17,57,616 ಮತದಾರರು ಚಾಮರಾಜನಗರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇದ್ದಾರೆ.

ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 2 ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರಗಳನ್ನು ಬಳಸಲಾಗುತ್ತಿದ್ದು 1177 ಬ್ಯಾಲೆಟ್ ಯೂನಿಟ್, 1177 ಕಂಟ್ರೋಲ್ ಯೂನಿಟ್ ಹಾಗೂ 1276 ವಿ.ವಿ. ಪ್ಯಾಟ್ಸ್‌ಗಳನ್ನು ಬಳಸಲಾಗುತ್ತಿದೆ.

ಜಿಲ್ಲಾ ವ್ಯಾಪ್ತಿಯಲ್ಲಿ ಮಾದರಿ ನೀತಿ ಸಂಹಿತೆ ಪಾಲನೆಗಾಗಿ ಫ್ಲೈಯಿಂಗ್ ಸ್ಕ್ವಾಡ್ (ಎಫ್.ಎಸ್.ಟಿ) 12 ತಂಡಗಳು ಮೂರು ಪಾಳಿಗಳಲ್ಲಿ, ಸ್ಟ್ಯಾಟಿಕ್ ಸರ್ವೈಲೆನ್ಸ್ (ಎಸ್.ಎಸ್.ಟಿ) 13 ತಂಡಗಳು ಮೂರು ಪಾಳಿಗಳಲ್ಲಿ, 97 ಸೆಕ್ಟರ್ ಅಧಿಕಾರಿಗಳು ನಿಯೋಜನೆಯಾಗಿದ್ದಾರೆ. ವೀಡಿಯೋ ಸರ್ವೈಲೆನ್ಸ್ 10 ತಂಡಗಳು, ವೀಡಿಯೋ ವೀವಿಂಗ್ 4 ತಂಡಗಳನ್ನು ಹಾಗೂ ಅಭ್ಯರ್ಥಿಗಳ ಚುನಾವಣಾ ವೆಚ್ಚ ಪರಿಶೀಲನೆಗಾಗಿ ಅಧಿಕಾರಿಗಳ ತಂಡ ನೇಮಕ ಮಾಡಲಾಗಿದೆ. 8 ಅಂತರರಾಜ್ಯ ಚೆಕ್‌ಪೋಸ್ಟ್ ಮತ್ತು 5 ಅಂತರ್ ಜಿಲ್ಲಾ ಚೆಕ್‌ಪೋಸ್ಟ್‌ಗಳನ್ನು ತೆರೆಯಲು ಕ್ರಮವಹಿಸಲಾಗಿದೆ.

ಮತದಾರರ ಪಟ್ಟಿ ಹಾಗೂ ಚುನಾವಣಾ ವಿಷಯಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ತಿಳಿಸಲು ಜಿಲ್ಲಾಧಿಕಾರಿಗಳ ಕಚೇರಿಯ ಕೊಠಡಿ ಸಂಖ್ಯೆ 104/1 ರಲ್ಲಿ ಮತದಾರರ ಸಹಾಯವಾಣಿ 1950 (ಟೋಲ್ ಫ್ರೀ) ಸ್ಥಾಪಿಸಲಾಗಿದೆ. ಈ ಸಹಾಯವಾಣಿಯು 24 X 7 ಅವಧಿಯಲ್ಲಿ ಕಾರ್ಯ ನಿರ್ವಹಿಸಲಿದ್ದು, ಸಾರ್ವಜನಿಕರು ಟೋಲ್ ಫ್ರೀ ಸಂಖ್ಯೆ: 1950ಕ್ಕೆ ಕರೆ ಮಾಡಿ ಮತದಾರರ ಪಟ್ಟಿ, ಮತದಾನ ಮತ್ತು ಚುನಾವಣಾ ವಿಷಯಗಳಿಗೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿಯನ್ನು ಪಡೆಯಬಹುದಾಗಿದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಮಾದರಿ ನೀತಿ ಸಂಹಿತೆ ಹಾಗೂ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಕುರಿತು ನಿಗಾ ವಹಿಸಲು ಭಾರತ ಚುನಾವಣಾ ಆಯೋಗವು ಸಿವಿಜಿಲ್ ಎಂಬ ತಂತ್ರಾಂಶವನ್ನು ಪರಿಚಯಿಸಿದ್ದು, ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಸಿವಿಜಿಲ್ ತಂತ್ರಾಂಶದ ಮೂಲಕ ದೂರು ದಾಖಲಿಸಿದ್ದಲ್ಲಿ ಈ ಬಗ್ಗೆ 100 ನಿಮಿಷದೊಳಗೆ ಇತ್ಯರ್ಥಪಡಿಸಲಾಗುವುದು. ಸಿವಿಜಿಲ್ ತಂತ್ರಾಂಶವನ್ನು ಪ್ಲೇ ಸ್ಟೋರ್ ಮೂಲಕ ಡೌನ್ ಲೋಡ್ ಮಾಡಿಕೊಂಡು ಫೋಟೋ ಮತ್ತು ವಿಡಿಯೋ ಮೂಲಕ ದೂರನ್ನು ಸಲ್ಲಿಸಬಹುದು.

ವೋಟರ್ ಹೆಲ್ಪ್‌ಲೈನ್ ಮೊಬೈಲ್ ಅಪ್ಲಿಕೇಶನ್ ಸಹಾಯದಿಂದ ಮತದಾರರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಪತ್ತೆ ಮಾಡುವುದರ ಜೊತೆಗೆ ನೋಂದಣಿಗಾಗಿ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಬಹುದು. ಇತರೆ ಮಾಹಿತಿಗಳನ್ನು ಪಡೆಯಬಹುದು. ವಿಶೇಷಚೇತನ ಮತದಾರರು ಹೊಸದಾಗಿ ನೋಂದಾವಣೆ ಮಾಡಲು, ವಿಳಾಸ ಬದಲಾವಣೆ ಮಾಡಲು ಇತರೆ ಅಂಶಗಳಲ್ಲಿ ಬದಲಾವಣೆ ಮಾಡಲು ಮತ್ತು ತಮ್ಮನ್ನು ವಿಶೇಷಚೇತನ ಮತದಾರರೆಂದು ಗುರುತಿಸಿಕೊಳ್ಳಲು ಪಿಡಬ್ಲ್ಯೂಡಿ ಆಪ್ ಅಪ್ಲಿಕೇಶನ್ ಬಳಸಬಹುದಾಗಿದೆ. ಈ ತಂತ್ರಾಂಶವನ್ನು ಪ್ಲೇ ಸ್ಟೋರ್ ಮೂಲಕ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ.

ಏಕ ಗವಾಕ್ಷಿ ವ್ಯವಸ್ಥೆ ಮೂಲಕ ರಾಜಕೀಯ ಪಕ್ಷಗಳು ಹಾಗೂ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಸಭೆ, ಸಮಾರಂಭ ನಡೆಸಲು ಮತ್ತು ಚುನಾವಣಾ ಪ್ರಚಾರಕ್ಕಾಗಿ ಅನುಮತಿ ನೀಡುವ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಚಾಮರಾಜನಗರ (ಪ.ಜಾ.) ಲೋಕಸಭಾ ಕ್ಷೇತ್ರದ 8 ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಏಕ ಗವಾಕ್ಷಿ ಕೇಂದ್ರ ಸ್ಥಾಪಿಸಲಾಗಿದೆ.

ರಾಜಕೀಯ ಪಕ್ಷಗಳು ಮತ್ತು ಸ್ಪರ್ಧಿಸುವ ಅಭ್ಯರ್ಥಿಗಳ ಪರವಾಗಿ ಮಾಧ್ಯಮಗಳಲ್ಲಿ ಪ್ರಕಟವಾಗುವ ಚುನಾವಣಾ ವಿಷಯಗಳಿಗೆ ಸಂಬಂಧಿಸಿದಂತೆ ನಿಗಾ ವಹಿಸಲು ಜಿಲ್ಲಾ ಮಟ್ಟದಲ್ಲಿ ಎಂ.ಸಿ.ಎಂ.ಸಿ ತಂಡ ರಚಿಸಲಾಗಿರುತ್ತದೆ. ರಾಜಕೀಯ ಪಕ್ಷಗಳು / ಸ್ಪರ್ಧಿಸುವ ಅಭ್ಯರ್ಥಿಗಳು ದೃಶ್ಯ ಮಾಧ್ಯಮದಲ್ಲಿ ಪ್ರಚಾರ ಕೈಗೊಳ್ಳಲು ಎಂ.ಸಿ.ಎಂ.ಸಿ ಸಮಿತಿಯಿಂದ ಅನುಮತಿ ಪಡೆಯಬೇಕಾಗಿರುತ್ತದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರಲ್ಲಿ ಚುನಾವಣೆಯ ಪರ್ವ, ದೇಶದ ಗರ್ವ ವಿಶೇಷ ಧ್ಯೇಯವಾಕ್ಯದೊಂದಿಗೆ, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲಾ ಸ್ವೀಪ್ ಸಮಿತಿಯನ್ನು ರಚಿಸಲಾಗಿದೆ. ತಾಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದ ಸ್ವೀಪ್ ಸಮಿತಿಗಳನ್ನು ರಚಿಸಲಾಗಿದೆ. ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಯುವ ರಾಯಭಾರಿಗಳನ್ನಾಗಿ ಚಲನಚಿತ್ರ ನಟ ಕಾರ್ತಿಕ್ ಮಹೇಶ್ ಹಾಗೂ ನಿರ್ದೇಶಕ ನಾಗಭೂಷಣ್, ತೃತೀಯ ಲಿಂಗಿಗಳ ರಾಯಭಾರಿಯಾಗಿ ಸಮತಾ ಸೊಸೈಟಿಯ ಅಧ್ಯಕ್ಷರಾದ ದೀಪಾ ಬುದ್ದೆ ಅವರನ್ನು ನೇಮಕ ಮಾಡಲಾಗಿದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

ಪಂಚ ಗ್ಯಾರಂಟಿಯಿಂದ ಮಹಿಳೆಯ ಸ್ವಾವಲಂಬನೆ ಸಾಧ್ಯವಾಯ್ತು

● ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ. ಪುಷ್ಪಾ ಅಮರನಾಥ್ ಅಭಿಮತ

● ಎಲ್ಲಾ ಭರವಸೆ ಈಡೇರಿಸಿ ಮುಖ್ಯಮಂತ್ರಿಗಳು 'ಗ್ಯಾರಂಟಿ ಸಿದ್ದರಾಮಯ್ಯ' ಆಗಿದ್ದಾರೆ



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಶನಿವಾರ ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಮಾ.16(ಎಂಟಿವೈ)- ನುಡಿದಂತೆ ನಡೆಯುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಮಹಿಳೆಯರ ಸ್ವಾವಲಂಬನೆ ಮತ್ತು ರಕ್ಷಣೆಗೆ ಸಹಕಾರಿಯಾಗಿವೆ ಎಂದು ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ವಿಧಾನಸಭಾ ಚುನಾವಣೆಗೂ ಮುನ್ನ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಪಕ್ಷದ ಹಿರಿಯ ನಾಯಕ ರಾಹುಲ್ ಗಾಂಧಿ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳು ಕೇವಲ ಘೋಷಣೆಗೆ ಸೀಮಿತವಾಗದೆ, ರಾಜ್ಯ ಸರ್ಕಾರ ಪರಿಣಾಮಕಾರಿಯಾಗಿ ಜಾರಿಗೊಳಿಸಿದೆ. ಇದರಿಂದ ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು ದಾರಿ ಮಾಡಿಕೊಟ್ಟಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆಯನ್ನು ಈಡೇರಿಸುವ ಮೂಲಕ ದೇಶದಲ್ಲಿ ಗ್ಯಾರಂಟಿ ಸಿದ್ದರಾಮಯ್ಯ ಎಂದು ಹೆಸರು ಪಡೆದುಕೊಂಡಿದ್ದಾರೆ. ನಾವು ನುಡಿದಂತೆ ನಡೆದಿದ್ದೇವೆ. ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 'ನಾರಿ ನ್ಯಾಯ'ವನ್ನು ಅನುಷ್ಠಾನ ಮಾಡುತ್ತೇವೆ ಎಂದು ಭರವಸೆ ನೀಡಿದರು.


ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮಹಾಲಕ್ಷ್ಮೀ ಗ್ಯಾರಂಟಿಯಲ್ಲಿ ಬಡ ಕುಟುಂಬಕ್ಕೆ ವಾರ್ಷಿಕ 1 ಲಕ್ಷ ಕೊಡುವುದಾಗಿ ಘೋಷಣೆ ಮಾಡಿದ್ದೇವೆ. ದೌರ್ಜನ್ಯಕ್ಕೆ ತುತ್ತಾದ ಹೆಣ್ಣು ಮಕ್ಕಳಿಗೆ ಕಾನೂನಿನ ನೆರವು ನೀಡುವ ಕಾರ್ಯಕ್ರಮ ಜಾರಿಗೊಳಿಸಲಾಗುವುದು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಕೀಲರನ್ನು ನೇಮಕ ಮಾಡಲಾಗುತ್ತಿದೆ. ಸರ್ಕಾರಿ ಹುದ್ದೆಗಳಲ್ಲಿ ಮಹಿಳೆಯರಿಗೆ ಶೇ. 50 ಮೀಸಲಾತಿ, ಆಶಾ ಕಾರ್ಯಕರ್ತೆಯರ ವೇತನ ಹೆಚ್ಚಳ, ಉದ್ಯೋಗ ನಿರತ ಮಹಿಳೆಯರಿಗಾಗಿ ಸಾವಿತ್ರಿಬಾಯಿ ಫುಲೆ ಹೆಸರಿನಲ್ಲಿ ಹಾಸ್ಟೆಲ್ ನಿರ್ಮಾಣ ಮಾಡುತ್ತೇವೆ ಎಂದು ಹೇಳಿದರು.

ಬಿಜೆಪಿ ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಯನ್ನು ಕಾಪಿ ಮಾಡಿದೆ. ಮತ್ತೊಮ್ಮೆ ಅಧಿಕಾರ ಕೊಟ್ಟರೆ ಗ್ಯಾರಂಟಿ ಕೊಡುವುದಾಗಿ ಆಶ್ವಾಸನೆ ಕೊಡುತ್ತಿದ್ದಾರೆ. 10 ವರ್ಷಗಳಿಂದ ಅಧಿಕಾರದಲ್ಲಿರುವ ಬಿಜೆಪಿ ಇದುವರೆಗೂ ಒಂದೇ ಒಂದು ಭರವಸೆಯನ್ನು ಈಡೇರಿಸಿಲ್ಲ. ಈಗ ಮತ್ತೊಮ್ಮೆ ಅವಕಾಶ ಕೇಳುತ್ತಿದ್ದಾರೆ. 2013ರಲ್ಲಿ ಅಧಿಕಾರಕ್ಕೆ ಬಂದ 60 ದಿನಗಳಲ್ಲಿ ಮಹಿಳಾ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿದ್ದರು. 10 ವರ್ಷಗಳು ಬೇಕಾಯಿತು. ಅಗತ್ಯ ವಸ್ತುಗಳು, ಅಡುಗೆ ಅನಿಲದ ಬೆಲೆ ದ್ವಿಗುಣವಾಗಿದೆ. ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ. ಕಪ್ಪುಹಣ, ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಯಾಕೇ ಮಾಡಲಿಲ್ಲ? ಪೆಟ್ರೋಲ್, ಡಿಸೇಲ್ ಬೆಲೆ ಯಾಕೇ ದುಪ್ಪಟ್ಟಾಯಿತು? ಬಿಜೆಪಿಯವರು ಉತ್ತರ ಕೊಡಬೇಕು. ಈಗ ಮೋದಿ ಕಾ ಗ್ಯಾರಂಟಿ ಅಪ್ಪಟ ಸುಳ್ಳು ಮತ್ತು ಚುನಾವಣೆಯ ಗಿಮಿಕ್ ಎಂದರು.

ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ನಿರಂತರವಾಗಿ ಅನ್ಯಾಯವಾಗುತ್ತಿದೆ. ಮಲತಾಯಿ ಧೋರಣೆ ಅನುಸರಿಸಲಾಗುತ್ತಿದೆ. ನ್ಯಾಯಯುತ ತೆರಿಗೆ ಹಣ ಕೊಡದೇ ಮಹಾಮೋಸ ಮಾಡಲಾಗುತ್ತಿದೆ. ಕರ್ನಾಟಕದ ಹಣವನ್ನು ಬೇರೆ ರಾಜ್ಯಗಳಿಗೆ ಹಂಚುತ್ತಿದ್ದಾರೆ. ಹಾಗಾಗಿ ಕರ್ನಾಟಕದ ಜನತೆ ಬಿಜೆಪಿ ನಾಯಕರ ಆಶ್ವಾಸನೆಯನ್ನು ನಂಬಬಾರದು. ಬಡವರಿಗೆ ಕಾರ್ಯಕ್ರಮಗಳನ್ನು ಕೊಟ್ಟಿದ್ದು ಕಾಂಗ್ರೆಸ್ ಸರ್ಕಾರ ಮಾತ್ರ ನೆಹರೂ ಸರ್ಕಾರದಿಂದ ಡಾ.ಮನಮೋಹನ್ ಸಿಂಗ್ ಸರ್ಕಾರದವರೆಗೆ ಎಷ್ಟು ಕಾರ್ಯಕ್ರಮಗಳನ್ನು ಕೊಟ್ಟಿದ್ದಾರೆ ಬಿಜೆಪಿ ಬಡವರ ಪರವಾಗಿ ಒಂದೇ ಒಂದೂ ಕಾರ್ಯಕ್ರಮ ರೂಪಿಸಿದೆಯೇ, ಯಾವ ಕೆಲಸ ಮಾಡದಿದ್ದರೂ ಭಾವನಾತ್ಮಕವಾಗಿ ಜನರನ್ನು ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಮೇಯರ್‌ಗಳಾದ ಪುಷ್ಪಲತಾ ಚಿಕ್ಕಣ್ಣ, ಮೋದಾಮಣಿ, ಉಪ ಮೇಯರ್ ಪುಷ್ಪವಲ್ಲಿ, ಮುಖಂಡರಾದ ರಾಧಾಮಣಿ, ಡಾ.ಸುಜಾತಾ ರಾವ್, ಲತಾ ಮೋಹನ್, ಭವ್ಯ, ಚಂದ್ರಕಲಾ, ಇಂದ್ರ, ಸುಶೀಲಾ ಮರಿಗೌಡ ಇದ್ದರು.

ಮಾಜಿ ಶಾಸಕ ವಾಸು, ನಿವೃತ್ತ ಐಎಎಸ್ ಅಧಿಕಾರಿ ಕೆ.ಶಿವರಾಂ ಅವರಿಗೆ ಶ್ರದ್ಧಾಂಜಲಿ



ವಿವಿ ಸಂಜೆ ಕಾಲೇಜಿನ ಮುಂಭಾಗ ಇತ್ತೀಚೆಗೆ ನಿಧನರಾದ ಮಾಜಿ ಶಾಸಕ ವಾಸು, ನಿವೃತ್ತ ಐಎಎಸ್ ಅಧಿಕಾರಿ ಕೆ.ಶಿವರಾಂ ಅವರಿಗೆ ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆ ಪದಾಧಿಕಾರಿಗಳು, ಶ್ರದ್ಧಾಂಜಲಿ ಅರ್ಪಿಸಿದರು.

ಮೈಸೂರು, ಮಾ.16(ಎಸ್‌ಪಿಎನ್)- ಮೈಸೂರು ಮಹಾರಾಜ ಕಾಲೇಜು ಆವರಣದ ಸಂಜೆ ಕಾಲೇಜಿನ ಮುಂಭಾಗ ಇತ್ತೀಚೆಗೆ ನಿಧನರಾದ ಮಾಜಿ ಶಾಸಕ ವಾಸು, ನಿವೃತ್ತ ಐಎಎಸ್ ಅಧಿಕಾರಿ ಕೆ.ಶಿವರಾಂ ಅವರಿಗೆ ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆ ಪದಾಧಿಕಾರಿಗಳು, ಶ್ರದ್ಧಾಂಜಲಿ ಅರ್ಪಿಸಿದರು.

ನಂತರ ಮೈಸೂರು ವಿವಿ ಪ್ರಾಚ್ಯವಸ್ತು ಸಂಶೋಧನಾಲಯದ ಮಾಜಿ ನಿರ್ದೇಶಕ ಡಾ.ಎಸ್.ಶಿವರಾಜಪ್ಪ ಮಾತನಾಡಿ, ಮಾಜಿ ಶಾಸಕ ವಾಸು ಅವರು ರಾಜಕೀಯ, ಸಾಮಾಜಿಕ, ಶಿಕ್ಷಣ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿದ್ದು, ಅವರ ಸೇವೆ ಅವಿಸ್ಮರಣೀಯ ಎಂದರು.

ಮಾಜಿ ಸಚಿವ ವಿ.ಶ್ರೀನಿವಾಸ್ ಪ್ರಸಾದ್ ಅವರು ರಾಜಕೀಯ, ಸಾಮಾಜಿಕ ಕ್ಷೇತ್ರಕ್ಕೆ ಕಾಲಿಟ್ಟು ಮಾ.17ಕ್ಕೆ 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ಅಭಿನಂದನಾ ಕಾರ್ಯಕ್ರಮ(ಭಾನುವಾರ) ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ವಾಸು ಅವರೇ ಕೆಲ ಕಾರ್ಯಗಳ ಜವಾಬ್ದಾರಿ ವಹಿಸಿಕೊಂಡಿದ್ದರು. ಆದರೆ, ಇಂದು ಅವರೇ ಇಲ್ಲದಿರುವುದು ಅತ್ಯಂತ ದುಃಖಕರ ಸಂಗತಿ ಎಂದರು.

ವಾಸು ಅವರು ಮೈಸೂರು ನಗರ ಪಾಲಿಕೆ ಮೇಯರ್ ಆಗಿ, ಚಾಮರಾಜ ಕ್ಷೇತ್ರದ ಶಾಸಕರಾಗಿ ಸೇವೆ ಸಲ್ಲಿಸಿದ್ದಾರೆ. ತಮ್ಮ ಸೇವಾವಧಿಯಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ದೂರದೃಷ್ಟಿಯುಳ್ಳ ಅನೇಕ ಕೆಲಸಗಳನ್ನು ಮಾಡಿ, ಇಂದಿನ ಯುವಕರಿಗೆ ಆದರ್ಶಪ್ರಾಯರಾಗಿದ್ದಾರೆ ಎಂದು ವಾಸು ಅವರ ಸೇವೆಯನ್ನು ಕೊಂಡಾಡಿದರು.

ನಿವೃತ್ತ ಐಎಎಸ್ ಅಧಿಕಾರಿ ಕೆ.ಶಿವರಾಂ ಮೈಸೂರಿನಲ್ಲಿ ಸೇವೆ ಸಲ್ಲಿಸುತ್ತಿದ್ದ ಸಂದರ್ಭದಲ್ಲಿ ದಿನನಿತ್ಯ ಕಚೇರಿಗೆ ಬರುತ್ತಿದ್ದ ಶೋಷಿತರು, ಬಡವರು, ರೈತಾಪಿ ವರ್ಗ ಹಾಗೂ ಕಾರ್ಮಿಕರ ನೋವನ್ನು ಆಲಿಸಿ, ನಂತರ ಬೇರೆ ಕೆಲಸಗಳತ್ತ ಗಮನಹರಿಸುತ್ತಿದ್ದರು. ಆದರೆ, ರಾಜಕೀಯ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದರೂ ರಾಜಕೀಯ ಪಕ್ಷಗಳು ಅವರ ಪ್ರತಿಭೆಯನ್ನು ಬಳಸಿಕೊಳ್ಳುವಲ್ಲಿ ವಿಫಲವಾದವು ಎಂದರು.

ಈ ವೇಳೆ ಹಿರಿಯ ಪತ್ರಕರ್ತ ಅಂಶಿಪ್ರಸನ್ನ ಕುಮಾರ್, ಮೈಸೂರು ವಿವಿ ಮಾಜಿ ಸಿಂಡಿಕೇಟ್ ಸದಸ್ಯ ಇ.ಸಿ.ನಿಂಗರಾಜ್ ಗೌಡ, ಡಾ.ಹೆಚ್.ಪಿ.ಜ್ಯೋತಿ, ಪ್ರೊ.ಸಪ್ನಾ, ಕಸಾಪ ಮಾಜಿ ಜಿಲ್ಲಾಧ್ಯಕ್ಷ ಎಂ.ಚಂದ್ರಶೇಖರ್ ಸೇರಿದಂತೆ ಅನೇಕರಿದ್ದರು.

'ಗಾಳಿಯ ಎದೆಸೀಳಿ ಹೊರಟ ಹಕ್ಕಿ' ಕವನ ಸಂಕಲನ ಬಿಡುಗಡೆ

ನೈಜತೆ ಅನಾವರಣಕ್ಕಾಗಿ ಹಿಂದೆಂದಿಗಿಂತಲೂ ಪ್ರಸ್ತುತ ಕಾವ್ಯದ ಜವಾಬ್ದಾರಿ ಹೆಚ್ಚಿದೆ

ವಿಮರ್ಶಕಿ ಡಾ.ಆರ್.ತಾರಿಣಿ ಶುಭದಾಯಿನಿ



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಂಗಣದಲ್ಲಿ ಶನಿವಾರ 'ಗಾಳಿಯ ಎದೆಸೀಳಿ ಹೊರಟ ಹಕ್ಕಿ' ಕವನ ಸಂಕಲನ ಬಿಡುಗಡೆ ಮಾಡಲಾಯಿತು.

ಮೈಸೂರು,ಮಾ.16(ಪಿಎಂ)- ಜ್ಞಾನ ಮತ್ತು ಆನಂದದ ಮಿಳಿತಗೊಂಡ ಶೋಧ ಮಾರ್ಗವು ಕಾವ್ಯದಲ್ಲಿದ್ದು, ಹೊಸಗಾಲದ ಮಾಯೆಗಳನ್ನು ಗೆದ್ದು ನೈಜತೆ ಅನಾವರಣಕ್ಕಾಗಿ ಹಿಂದೆಂದಿಗಿಂತಲೂ ಪ್ರಸ್ತುತ ಕಾವ್ಯದ ಜವಾಬ್ದಾರಿ ಹೆಚ್ಚಿದೆ ಎಂದು ವಿಮರ್ಶಕಿ ಡಾ.ಆರ್. ತಾರಿಣಿ ಶುಭದಾಯಿನಿ ಹೇಳಿದರು.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ರೋಟರಿ ಸಭಾಂಗಣದಲ್ಲಿ ಲುಂಬಿನಿ ಪ್ರಕಾಶನ ಮತ್ತು ಮೈಸೂರು ಗೆಳೆಯರು ಜಂಟಿ ಆಶ್ರಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಎಸ್.ಕೆ.ಮಂಜುನಾಥ್ ಅವರ 'ಗಾಳಿಯ ಎದೆಸೀಳಿ ಹೊರಟ ಹಕ್ಕಿ' ಕವನ ಸಂಕಲನ ಬಿಡುಗಡೆ ಸಮಾರಂಭದಲ್ಲಿ ಕೃತಿ ಕುರಿತು ಅವರು ಮಾತನಾಡಿದರು.

ಪ್ರಸ್ತುತ ಕವಿತೆ ಓದುವ ರುಚಿ ಕಳೆದುಕೊಂಡಿದ್ದೇವೆಯೇ? ಎಂಬ ಪ್ರಶ್ನೆ ಮೂಡುತ್ತದೆ. ಏಕೆಂದರೆ ಕಾವ್ಯ ಗ್ರಹಿಸಬೇಕಾದ ಮನಸ್ಸು ಮತ್ತು ವಸ್ತುಸ್ಥಿತಿ ಎರಡನ್ನೂ ಇಂದು ಬೇರೆ ರೀತಿಯಲ್ಲಿ ಕಟ್ಟಲಾಗುತ್ತಿದೆ. ನಾವೀಗ ಸಾಮಾಜಿಕ ಸ್ತರಗಳಲ್ಲಿ ಸಾಹಿತ್ಯ ಗ್ರಹಿಸುವ ಕಾಲಘಟ್ಟದಲ್ಲಿದ್ದೇವೆ. ನಮ್ಮ ಓದುವ ಮತ್ತು ಬರೆಯುವ ಸಂವೇದನೆ ಕೂಡ ಇಂದು ಪಂಥೀಯ ರಾಜಕೀಯದ ಆಚೀಚೆಯೇ ಇದೆ. 21ನೇ ಶತಮಾನದ ದಶಕಗಳನ್ನು ಗಮನಿಸಿದರೆ ಇದೊಂದು ನಿರಚನೆಯ ಕಾಲ. ಹಾಗಲ್ಲ, ಈಗಲ್ಲ ಎಂದು ಇರುವುದನ್ನು ನಿರಚನೆ ಮಾಡುತ್ತಿರುವ ಸನ್ನಿವೇಶದ ನಡುವೆ ಹೊಸದನ್ನು ಕಟ್ಟುವ ಕ್ರಮಗಳು ಇನ್ನು ಕಾಣದಾಗಿವೆ. ಹಾಗಾಗಿ ಈ ರುಚಿ ಮತ್ತು ಕಾವ್ಯವನ್ನು ಕಟ್ಟುವ ಪ್ರಶ್ನೆ ಮೂಡುತ್ತದೆ ಎಂದು ವಿಶ್ಲೇಷಿಸಿದರು.

ಮರವಾಗಿ ಹೊಮ್ಮುವ ಸಾಮರ್ಥ್ಯವನ್ನು ಕವಿತೆಯು ತನ್ನ ಬೀಜದೊಳಗೆ ಅಡಕ ಮಾಡಿಕೊಂಡಿರುತ್ತದೆ. ಅದನ್ನು ನಾವು ದಾಟಿಸಬೇಕು. ಕಾವ್ಯ ನೇರವಾಗಿ ಮಾತನಾಡುವುದಿಲ್ಲ. ಬೆಳಕು ಎಲ್ಲಾ ಕಡೆ ನೇರವಾಗಿ ಪ್ರತಿಫಲನವಲ್ಲವಾದರೆ, ನೀರಿನೊಳಗೆ ಅಂಕುಡೊಂಕಾಗಿ ಪ್ರತಿಫಲನವಾಗುತ್ತದೆ. ಆ ರೀತಿಯಲ್ಲಿ ಕವಿತೆ ಏನನ್ನೋ ಮುಚ್ಚಿ, ಏನನ್ನೋ ಬಿಚ್ಚಿ ಹದಗೊಳಿಸುವ ಭಾಷೆ ಮತ್ತು ಅಭಿವ್ಯಕ್ತಿಯಾಗಿದ್ದು, ಅದು ವಕ್ರೀಭವನ (ರಿಫ್ರಾಕ್ಷನ್) ಆಗಿರುತ್ತದೆ. ಕಾವ್ಯವು ಕೇವಲ ಅಭಿವ್ಯಕ್ತಿ ಸಂಗತಿ ಮಾತ್ರವಾಗಬಾರದು. ಜೊತೆಗೆ ರುಜು ಮಾರ್ಗದ ಶೋಧ ಮಾಧ್ಯಮವಾಗಬೇಕು. ಇದು ಒಂದು ಸಮುದಾಯಕ್ಕೆ ಕಟ್ಟಿಕೊಡಬಹುದಾದ ವಿವೇಕದ ದಾರಿ ಕೂಡ ಆಗಿರುತ್ತದೆ ಎಂದರು.

ಇಂದು ಮತ್ತೆ ಜ್ಞಾನೋದಯದ ಪ್ರಕ್ರಿಯೆಯನ್ನು ನಾವು ಕಾವ್ಯದ ಮೂಲಕ ಗ್ರಹಿಸಲು ಪ್ರಾಯಶಃ ಇನ್ನೂ ತಯಾರಿ ಹಂತದಲ್ಲಿದ್ದೇವೆ. ಈ ನಡುವೆ ಕಟ್ಟಡವನ್ನು ಕೆಡವಿ, ಹೊಸ ಕಟ್ಟಡ ನಿರ್ಮಾಣಕ್ಕೆ ಕನಸುಗಾರಿಕೆಯ ಕೊರತೆ ಉದ್ಭವಿಸಿದೆ. 'ಕಾವ್ಯ' ಶೋಧ ಮಾರ್ಗದ ಮಾಧ್ಯಮ ಎಂದುಕೊಳ್ಳದ ಹಿನ್ನೆಲೆಯಲ್ಲಿ ಇಂದು ನೂರಾರು ಜನ ಕವಿಗಳಾಗಿ ಬೆಳೆಯುತ್ತಿದ್ದಾರೆ. ಈ ಪೈಕಿ ಕಳೆ ಮತ್ತು ಬೆಳೆ ಯಾವುದೆಂದು ಗೊತ್ತಾಗದ ಸನ್ನಿವೇಶದಲ್ಲಿದ್ದೇವೆ ಎಂದು ಹೇಳಿದರು.

ಇದಕ್ಕೂ ಮುನ್ನ ವನ್ಯಜೀವಿ ಛಾಯಾಗ್ರಾಹಕ ಕೃಪಾಕರ ಅವರು ಕವನ ಸಂಕಲನ ಬಿಡುಗಡೆ ಮಾಡಿದರು. ಹಿರಿಯ ಸಾಹಿತಿ ಜಿ.ಪಿ.ಬಸವರಾಜು ಅಧ್ಯಕ್ಷತೆ ವಹಿಸಿದ್ದರು. ಕಥೆಗಾರ ಮೋದೂರು ತೇಜ, ಕೃತಿಕರ್ತೃ ಎಸ್.ಕೆ.ಮಂಜುನಾಥ್, ಪ್ರಾಧ್ಯಾಪಕ ಗೋವಿಂದರಾಜು ಲಕ್ಷ್ಮೀಪುರ ಮತ್ತಿತರರು ಹಾಜರಿದ್ದರು.

ಅಕಾಡೆಮಿ, ಪ್ರಾಧಿಕಾರಗಳಿಗೆ ನೇಮಕ

ಬೆಂಗಳೂರು: ಲೋಕಸಭಾ ಚುನಾವಣೆ ವೇಳಾಪಟ್ಟಿ ಪ್ರಕಟವಾಗುವ ಮುನ್ನಾ ದಿನ (ಮಾ. 15) ರಾಜ್ಯದ ಅಕಾಡೆಮಿ ಮತ್ತು ಪ್ರಾಧಿಕಾರಗಳಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಪುರುಷೋತ್ತಮ ಬಿಳಿಮಲೆ, ಕುವೆಂಪು ಭಾಷಾ ಭಾರತಿ ಪ್ರಾಧಿಕಾರಕ್ಕೆ ಚನ್ನಪ್ಪ ಕಟ್ಟಿ ಕರ್ನಾಟಕ ಸಾಹಿತ್ಯ ಅಕಾಡೆಮಿಗೆ ಎಲ್.ಎನ್. ಮುಕುಂದರಾಜ್ ಅವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಪುರುಷೋತ್ತಮ ಬಿಳಿಮಲೆ (ನವದೆಹಲಿ) ಹಾಗೂ ಮೈಸೂರಿನ ಪತ್ರಕರ್ತ ಟಿ. ಗುರುರಾಜ್ ಸೇರಿದಂತೆ 7 ಸದಸ್ಯರನ್ನು ನೇಮಕ ಮಾಡಲಾಗಿದೆ. ಕುವೆಂಪು ಭಾಷಾ ಭಾರತಿ ಪ್ರಾಧಿಕಾರಕ್ಕೆ ಚನ್ನಪ್ಪ ಕಟ್ಟಿ (ವಿಜಯಪುರ) ಅವರನ್ನು ಅಧ್ಯಕ್ಷರಾಗಿ ಹಾಗೂ 9 ಮಂದಿ ಸದಸ್ಯರನ್ನು ನೇಮಿಸಲಾಗಿದೆ. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾಗಿ ಮೈಸೂರು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಮಾನಸ ಅವರನ್ನು ಅಧ್ಯಕ್ಷರನ್ನಾಗಿ ಹಾಗೂ ಐವರನ್ನು ಸದಸ್ಯರನ್ನಾಗಿ ನೇಮಿಸಲಾಗಿದೆ. ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಕನ್ನಡ ಹೋರಾಟಗಾರ ಹಾಗೂ ಹಿರಿಯ ಪತ್ರಕರ್ತ ಜಾಣಗೆರೆ ವೆಂಕಟರಾಮಯ್ಯ ಸೇರಿ 7 ಸದಸ್ಯರನ್ನು ನೇಮಿಸಲಾಗಿದೆ ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾಗಿ ತುಮಕೂರಿನ ಎಲ್.ಎನ್. ಮುಕುಂದರಾಜ್ ಹಾಗೂ 15 ಸದಸ್ಯರನ್ನು ನೇಮಕ ಮಾಡಲಾಗಿದೆ. ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷರಾಗಿ ಕೆ.ವಿ.ನಾಗರಾಜಮೂರ್ತಿ ಹಾಗೂ 15 ಸದಸ್ಯರು, ಕರ್ನಾಟಕ ಸಂಗೀತ, ನೃತ್ಯ ಅಕಾಡೆಮಿ ಅಧ್ಯಕ್ಷೆಯಾಗಿ ಮೈಸೂರಿನ ಕೃಪಾ ಫಡ್ಕೆ ಹಾಗೂ 15 ಸದಸ್ಯರು, ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಅಧ್ಯಕ್ಷರಾಗಿ ರಾಮನಗರದ ಎಂ.ಸಿ.ರಮೇಶ್ ಹಾಗೂ 10 ಸದಸ್ಯರು, ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷರಾಗಿ ಪ.ಸ.ಕುಮಾರ್ ಹಾಗೂ 15 ಸದಸ್ಯರು, ಕರ್ನಾಟಕ ಯಕ್ಷಗಾನ ಅಕಾಡೆಮಿ ಅಧ್ಯಕ್ಷರಾಗಿ ಉಡುಪಿಯ ತಲ್ಲೂರು ಶಿವರಾಮ ಶೆಟ್ಟಿ ಹಾಗೂ 10 ಸದಸ್ಯರನ್ನು ನೇಮಕ ಮಾಡಲಾಗಿದೆ.

ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷರಾಗಿ ಶಿವಪ್ರಸಾದ್ ಗೊಲ್ಲಹಳ್ಳಿ ಹಾಗೂ 15 ಸದಸ್ಯರು, ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾಗಿ ತಾರಾನಾಥ್ ಗಟ್ಟಿ ಕಾಪಿಕಾಡ್ ಹಾಗೂ 10 ಸದಸ್ಯರು, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾಗಿ ಜೊಕಿಂ ಸ್ಟ್ಯಾನ್ಲಿ ಅಲ್ವಾರಿಸ್ ಹಾಗೂ 10 ಸದಸ್ಯರು, ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾಗಿ ಉಮರ್ ಯು.ಎಚ್. ಹಾಗೂ 10 ಸದಸ್ಯರು, ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾಗಿ ಸದಾನಂದ ಮಾವಜಿ ಹಾಗೂ 6 ಮಂದಿ ಸದಸ್ಯರನ್ನು ನೇಮಕ ಮಾಡಲಾಗಿದೆ. ಕರ್ನಾಟಕ ಬಯಲಾಟ ಅಕಾಡೆಮಿ ಅಧ್ಯಕ್ಷರಾಗಿ ಪ್ರೊ.ದುರ್ಗಾದಾಸ್ ಹಾಗೂ 9 ಮಂದಿ ಸದಸ್ಯರು, ಕರ್ನಾಟಕ ಬಂಜಾರ ಅಕಾಡೆಮಿ ಅಧ್ಯಕ್ಷರಾಗಿ ಎ.ಆರ್. ಗೋವಿಂದಸ್ವಾಮಿ ಹಾಗೂ 10 ಸದಸ್ಯರನ್ನು ನೇಮಕ ಮಾಡಲಾಗಿದೆ. ರಂಗ ಸಮಾಜದ ಸದಸ್ಯರಾಗಿ 7 ಮಂದಿಯನ್ನು ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.

ಅರಿವಿನ ಕೊರತೆಯಿಂದ ಪ್ರಧಾನಮಂತ್ರಿ ಉಜ್ವಲ ಯೋಜನೆಗೆ ಹಿನ್ನಡೆ

● ನಿವೃತ್ತ ಆಹಾರ ಅಧಿಕಾರಿ ಡಾ. ರಾಮೇಶ್ವರಪ್ಪ ವಿವರಣೆ ● ಯೋಜನೆಯಂತೂ ಶೇ.100ರಷ್ಟು ಜಾರಿಯಾಗಿದೆ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ನಳ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 'ಗ್ರಾಮೀಣ ಕರ್ನಾಟಕದಲ್ಲಿ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿಯಲ್ಲಿ ಸಾಮಾಜಿಕ-ಆರ್ಥಿಕ ಮೌಲ್ಯಮಾಪನ' ಕುರಿತ ಒಂದು ದಿನದ ಕಾರ್ಯಾಗಾರವನ್ನು ಮೈಸೂರು ವಿಶ್ವವಿದ್ಯಾನಿಲಯದ ತೂಬಿನಕೆರೆಯ ಸರ್ ಎಂ.ವಿ ಪಿಜಿ ಕೇಂದ್ರದ ಅರ್ಥಶಾಸ್ತ್ರ ಪ್ರಾಧ್ಯಾಪಕಿ ಪ್ರೊ.ಹೆಚ್.ಆರ್.ಉಮಾ, ಗ್ಯಾಸ್ ಸ್ಟೌವ್ ಹೊತ್ತಿಸುವ ಮೂಲಕ ಉದ್ಘಾಟಿಸಿದರು.

ಮೈಸೂರು, ಮಾ.16(ಎಂಟಿವೈ)- ಗ್ರಾಮೀಣ ಪ್ರದೇಶದ ಮಹಿಳೆಯ ಬದುಕನ್ನು ಹಸನುಗೊಳಿಸಿ ಹೊಗೆ ಮುಕ್ತ ವಾತಾವರಣ ನಿರ್ಮಿಸಲು ಸಹಕಾರಿಯಾಗಿದ್ದ ಪ್ರಧಾನಮಂತ್ರಿ ಉಜ್ವಲ ಯೋಜನೆ ಅನುಷ್ಠಾನ ಯಶಸ್ವಿಯಾಗಿದ್ದರೂ, ಅರಿವಿನ ಕೊರತೆಯಿಂದ ಬಳಕೆಯಲ್ಲಿ ಹಿನ್ನಡೆಯಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಡಾ.ಕೆ.ರಾಮೇಶ್ವರಪ್ಪ ವಿಷಾದಿಸಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ನಳ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 'ಗ್ರಾಮೀಣ ಕರ್ನಾಟಕದಲ್ಲಿ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿಯಲ್ಲಿ ಸಾಮಾಜಿಕ-ಆರ್ಥಿಕ ಮೌಲ್ಯಮಾಪನ' ಕುರಿತ ಒಂದು ದಿನದ ಕಾರ್ಯಾಗಾರದಲ್ಲಿ ದಿಕ್ಸೂಚಿ ಭಾಷಣ ಮಾಡಿದ ಅವರು, ಕರ್ನಾಟಕ ಸೇರಿದಂತೆ ದೇಶದ ವಿವಿಧೆಡೆ ಪ್ರಧಾನಮಂತ್ರಿ ಉಜ್ವಲ ಯೋಜನೆ ಶೇ.100ರಷ್ಟು ಜಾರಿಯಾಗಿದೆ. ಇದುವರೆಗೆ ದೇಶದಲ್ಲಿ 10.32 ಕೋಟಿ ಕುಟುಂಬಗಳಿಗೆ ಉಜ್ವಲ ಯೋಜನೆಯಡಿ ಅನಿಲ ಸಂಪರ್ಕ ಒದಗಿಸಲಾಗಿದೆ. ಕುಟುಂಬವೊಂದರಲ್ಲಿ ತಲಾ ನಾಲ್ವರು ಸದಸ್ಯರಂತೆ ಒಟ್ಟು 45 ಕೋಟಿ ಜನರು ಈ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ. 2019ರಲ್ಲಿ 5 ಮಿಲಿಯನ್ ಕುಟುಂಬಕ್ಕೆ ಉಜ್ವಲ ಯೋಜನೆಯಡಿ ಅನಿಲ ಸಂಪರ್ಕ ನೀಡಲು ಉದ್ದೇಶಿಸಲಾಗಿತ್ತು ಆದರೆ, ಬೇಡಿಕೆ ವ್ಯಕ್ತವಾಗುತ್ತಿದ್ದಂತೆ 10 ಕೋಟಿ ಕುಟುಂಬಕ್ಕೆ ವಿಸ್ತರಿಸಲು ನಿರ್ಧರಿಸಲಾಗಿದೆ. ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಆದರೆ, ಕೆಲವೆಡೆ ಶೇ.50 ರಿಂದ ಶೇ.80ರಷ್ಟರವರೆಗೆ ಉಜ್ವಲ ಯೋಜನೆ ಬಳಕೆಯಲ್ಲಿದೆ. ಇದಕ್ಕೆ ಅರಿವಿನ ಕೊರತೆ ಕಾರಣ ಎಂದರು

ರಾಜ್ಯದಲ್ಲಿ ಈ ಹಿಂದೆ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಉಜ್ವಲ ಯೋಜನೆಗೆ ಪರ್ಯಾಯವಾಗಿ ಅಡುಗೆ ಅನಿಲ ಸಿಲಿಂಡರನ್ನು ರಿಯಾಯಿತಿ ದರದಲ್ಲಿ ನೀಡುವ ಯೋಜನೆಯನ್ನು ಜಾರಿಗೆ ತಂದಿತ್ತು. ರಾಜ್ಯ ಸರ್ಕಾರಗಳು ಜಾರಿಗೆ ತಂದ ರಿಯಾಯಿತಿ ದರದಲ್ಲಿ ಸಿಲಿಂಡರ್ ನೀಡುವ ಯೋಜನೆಯಿಂದ ಜನರಲ್ಲಿ ಗೊಂದಲ ಉಂಟಾಗಿದೆ. ಹಾಗಾಗಿ ಉಜ್ವಲ ಯೋಜನೆಗೆ ಹಿನ್ನಡೆಯಾಗಿದೆ ಎಂದು ವಿಶ್ಲೇಷಿಸಿದರು.

ದಿ.ರಾಜೀವ್ ಗಾಂಧಿ ದೇಶದ ಪ್ರಧಾನಿಯಾಗಿದ್ದ ಅವಧಿಯಲ್ಲಿ ಗ್ರಾಮೀಣ ಪ್ರದೇಶಕ್ಕೂ ಅಡುಗೆ ಅನಿಲ ಸಂಪರ್ಕ ನೀಡುವ ಯೋಜನೆಯನ್ನು ವಿಸ್ತರಿಸಿದರು. ಅಲ್ಲಿಯವರೆಗೂ ಅಡುಗೆ ಅನಿಲ ಬಳಕೆ ಕೇವಲ ನಗರ ಪ್ರದೇಶಕ್ಕೆ ಸೀಮಿತ ಎಂಬ ಮನೋಭಾವವಿತ್ತು ಗ್ರಾಮೀಣ ಪ್ರದೇಶದಲ್ಲಿ ಅಡುಗೆ ಅನಿಲ ಬಳಕೆಯಿಂದಾಗಿ ಹೊಗೆ ಮುಕ್ತ ವಾತಾವರಣ ನಿರ್ಮಿಸಬಹುದು. ಮಹಿಳೆಯರ ಬದುಕು ಹಸನಗೊಳಿಸುತ್ತದೆ. ಅಡುಗೆ ತಯಾರಿಯಲ್ಲಿ ಸಮಯ ಕಡಿಮೆ, ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದಿಲ್ಲ ಎಂದರು.

ಇದಕ್ಕೂ ಮುನ್ನ ಮೈಸೂರು ವಿಶ್ವವಿದ್ಯಾನಿಲಯದ ತೂಬಿನಕೆರೆಯ ಸರ್ ಎಂ.ವಿ ಪಿಜಿ ಕೇಂದ್ರ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಪ್ರೊ. ಹೆಚ್.ಆರ್.ಉಮಾ ಕಾರ್ಯಾಗಾರವನ್ನು ಉದ್ಘಾಟಿಸಿದರು. ಮುಕ್ತ ವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಡೀನ್ ಡಾ.ರಮಾನಾಥ ನಾಯ್ಡು, ಪ್ರೊ.ಎಂ.ಎಸ್.ರಮಾನಂದ, ಪ್ರೊ ವಿಶ್ವನಾಥ್, ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ.ಆರ್.ಹೆಚ್.ಪವಿತ್ರ ಇದ್ದರು.



ಆರಂಭವಾಗ್ತಿದೆ ಐಪಿಎಲ್ ಜ್ವರ...!



ವಿಶ್ವ ಕ್ರಿಕೆಟ್‌ನ ಅತ್ಯಂತ ಶ್ರೀಮಂತ ಟೂರ್ನಿ ಇಂಡಿಯನ್ ಪ್ರೀಮಿಯರ್ ಲೀಗ್(ಐಪಿಎಲ್) ಆರಂಭಕ್ಕೆ ದಿನಗಣನೆ ಆರಂಭವಾಗಿದ್ದು, ಕ್ರಿಕೆಟ್ ಪ್ರೇಮಿಗಳಿಗೆ ಭರಪೂರ ಮನರಂಜನೆ ನೀಡಲು ವೇದಿಕೆ ಸಿದ್ಧವಾಗಿದೆ.

2008 ರಿಂದ 2023ರವರೆಗೆ ಒಟ್ಟು 16 ಐಪಿಎಲ್ ಆವೃತ್ತಿಯನ್ನು ಯಶಸ್ವಿಯಾಗಿ ನಡೆಸಿರುವ ಬಿಸಿಸಿಐ 2024ನೇ ಸಾಲಿನ 17ನೇ ಆವೃತ್ತಿ ಆಯೋಜಿಸಿದೆ. ಈ ಬಾರಿ ನಡೆದ ಮಿನಿ ಬಿಡ್ಡಿಂಗ್‌ನಲ್ಲಿ ಎಲ್ಲಾ ಫ್ರಾಂಚೈಸಿಗಳು ಕೆಲ ಆಟಗಾರರನ್ನು ಬಿಟ್ಟು, ತಮಗೆ ಬೇಕಾದ ಮತ್ತಷ್ಟು ಆಟಗಾರರನ್ನು ಖರೀದಿಸುವ ಮೂಲಕ ಬಲಿಷ್ಠ ತಂಡಗಳನ್ನು ಕಟ್ಟಿಕೊಂಡಿದ್ದಾರೆ. ಅಲ್ಲದೇ ಈಗಾಗಲೇ ಎಲ್ಲಾ ತಂಡಗಳ ಆಟಗಾರರು ಕಠಿಣ ಅಭ್ಯಾಸದಲ್ಲಿ ತೊಡಗಿ ಪ್ರಶಸ್ತಿ ಗೆಲ್ಲಲು ರಣತಂತ್ರ ರೂಪಿಸಿರುವುದರಿಂದ ಟೂರ್ನಿ ಹಲವು ರೋಚಕ ಕ್ಷಣಗಳಿಗೆ ಸಾಕ್ಷಿಯಾಗಲಿದೆ.

ಟೂರ್ನಿಯಲ್ಲಿ ಒಟ್ಟು 74 ಪಂದ್ಯಗಳು ನಡೆಯಲಿದ್ದು, ಎಲ್ಲಾ ತಂಡಗಳು ಹೋಂ ಮತ್ತು ಅವೇ ಪಂದ್ಯಗಳನ್ನು ಆಡಲಿದೆ. ಅಲ್ಲದೇ ದೇಶದಲ್ಲಿ ಲೋಕಸಭಾ ಚುನಾವಣೆ ನಡೆಯುವ ಹಿನ್ನಲೆಯಲ್ಲಿ ಬಿಸಿಸಿಐ ಮಾ.22 ರಿಂದ ಏ.7ರವರೆಗೆ ಮೊದಲ ಚರಣದ ಪಂದ್ಯಗಳ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ಉಳಿದ ಪಂದ್ಯಗಳ ವೇಳಾಪಟ್ಟಿಯನ್ನು ಪ್ರಕಟಿಸಬೇಕಿದೆ.

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣ, ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನ, ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ, ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣ, ಜೈಪುರದ ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣ, ಲಕ್ನೋನ ಭಾರತ್ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣ, ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣ, ವಿಶಾಖಪಟ್ಟಣದ ಡಾ.ವೈ.ಎಸ್.ರಾಜಶೇಖರ ರೆಡ್ಡಿ ಕ್ರೀಡಾಂಗಣ, ಮುಂಬೈನ ವಾಂಖೇಡೆ ಕ್ರೀಡಾಂಗಣಗಳಲ್ಲಿ ಪಂದ್ಯಗಳು ನಡೆಯಲಿವೆ. ಸಂಜೆ ಪಂದ್ಯಗಳು ಪ್ರತಿದಿನ 7.30ಕ್ಕೆ ಆರಂಭವಾದರೇ, ಮಧ್ಯಾಹ್ನದ ಪಂದ್ಯಗಳು 3.30ಕ್ಕೆ ನಡೆಯಲಿವೆ.

ಇನ್ನು ಚೆನ್ನೈನಲ್ಲಿ ನಡೆಯುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ.

ಚೆನ್ನೈ ಸೂಪರ್ ಕಿಂಗ್ಸ್

ಅಜಯ್ ಮಂಡಲ್, ಅಜಿಂಕ್ಯ ರಹಾನೆ, ದೀಪಕ್ ಚಹಾರ್, ಡೆವೊನ್ ಕಾನ್ವೇ ಮಹೇಶ್ ತೀಕ್ಷಣ, ಮತೀಶ ಪತಿರಣ, ಮಿಚೆಲ್ ಸ್ಯಾಂಟ್ನರ್, ಮೊಯಿನ್ ಅಲಿ, ಎಂ.ಎಸ್.ಧೋನಿ, ಮುಖೇಶ್ ಚೌಧರಿ, ನಿಶಾಂತ್ ಸಿಂಧು, ಪ್ರಶಾಂತ್ ಸೋಲಂಕಿ, ರಾಜವರ್ಧನ್ ಹಂಗರಗೇಕರ್, ರವೀಂದ್ರ ಜಡೇಜಾ, ಋತುರಾಜ್ ಗಾಯಕವಾಡ್, ಶೇಕ್ ರಶೀದ್, ಶಿವಂ ದುಬೆ, ಸಿಮರ್ಜೀತ್ ಸಿಂಗ್, ತುಷಾರ್ ದೇಶಪಾಂಡೆ, ರಚಿನ್ ರವೀಂದ್ರ ಶಾರ್ದೂಲ್ ಠಾಕೂರ್, ಡೇರಿಲ್ ಮಿಚೆಲ್, ಸಮೀರ್ ರಿಜ್ವಿ, ಮುಸ್ತಾಫಿಜುರ್ ರೆಹಮಾನ್, ಅವನೀಶ್ ರಾವ್ ಅರವಲ್ಲಿ.

ಡೆಲ್ಲಿ ಕ್ಯಾಪಿಟಲ್ಸ್

ಅಭಿಷೇಕ್ ಪೊರೆಲ್, ಆನ್ರಿಚ್ ನಾರ್ಟ್ಜೆ, ಅಕ್ಷರ್ ಪಟೇಲ್, ಡೇವಿಡ್ ವಾರ್ನರ್, ಇಶಾಂತ್ ಶರ್ಮಾ, ಕುಲದೀಪ್ ಯಾದವ್, ಲಲಿತ್ ಯಾದವ್, ಲುಂಗಿಸಾನಿ ಎನ್ಗಿಡಿ, ಮಿಚೆಲ್ ಮಾರ್ಷ್, ಮುಖೇಶ್ ಕುಮಾರ್, ಪ್ರವೀಣ್ ದುಬೆ, ಪೃಥ್ವಿ ಶಾ, ರಿಷಬ್ ಪಂತ್, ಸೈಯದ್ ಖಲೀಲ್ ಅಹಮದ್, ವಿಕಿ ಓಸ್ಟ್ವಾಲ್, ಯಶ್ ಧುಲ್, ಹ್ಯಾರಿ ಬ್ರೂಕ್, ಟ್ರಿಸ್ಟಾನ್ ಸ್ಟಬ್ಸ್, ರಿಕಿ ಭುಯಿ, ಕುಮಾರ್ ಕುಶಾಗ್ರಾ, ರಾಸಿಖ್ ದಾರ್, ಝೈ ರಿಚರ್ಡ್ಸನ್, ಸುಮಿತ್ ಕುಮಾರ್, ಶಾಯ್ ಹೋಪ್, ಸ್ವಸ್ತಿಕ್ ಚಿಕಾರಾ.

ಗುಜರಾತ್ ಟೈಟಾನ್ಸ್

ಅಭಿನವ್ ಮನೋಹರ್, ಸಾಯಿ ಸುದರ್ಶನ್, ದರ್ಶನ್ ನಲ್ಕಂಡೆ, ಡೇವಿಡ್ ಮಿಲ್ಲರ್, ಜಯಂತ್ ಯಾದವ್, ಜೋಶುವಾ ಲಿಟಲ್, ಕೇನ್ ವಿಲಿಯಮ್ಸನ್, ಮ್ಯಾಥ್ಯೂ ವೇಡ್, ಮೊಹಮ್ಮದ್ ಶಮಿ, ಮೋಹಿತ್ ಶರ್ಮಾ, ನೂರ್ ಅಹ್ಮದ್, ಆರ್.ಸಾಯಿ ಕಿಶೋರ್, ರಾಹುಲ್ ತೆವಾಟಿಯಾ, ರಶೀದ್ ಖಾನ್, ಶುಭಮನ್ ಗಿಲ್, ವಿಜಯ್ ಶಂಕರ್, ವೃದ್ಧಿಮಾನ್ ಸಹಾ, ಅಜ್ಮತುಲ್ಲಾ ಒಮರ್ಜಾಯ್, ಉಮೇಶ್ ಯಾದವ್, ಶಾರುಖ್ ಖಾನ್, ಸುಶಾಂತ್ ಮಿಶ್ರಾ, ಕಾರ್ತಿಕ್ ತ್ಯಾಗಿ, ಮಾನವ್ ಸುತಾರ್, ಸ್ಪೆನ್ಸರ್ ಜಾನ್ಸನ್, ರಾಬಿನ್ ಮಿಂಜ್.

ಕೋಲ್ಕತ್ತಾ ನೈಟ್ ರೈಡರ್ಸ್

ನಿತೀಶ್ ರಾಣಾ, ರಿಂಕು ಸಿಂಗ್, ರಹಮಾನುಲ್ಲಾ ಗುರ್ಬಾಜ್, ಶ್ರೇಯಸ್ ಅಯ್ಯರ್, ಜೇಸನ್ ರಾಯ್, ಸುನಿಲ್ ನರೈನ್, ಸುಯಶ್ ಶರ್ಮಾ, ಅನುಕೂಲ್ ರಾಯ್, ಆಂಡ್ರೆರಸೆಲ್, ವೆಂಕಟೇಶ ಅಯ್ಯರ್, ಹರ್ಷಿತ್ ರಾಣಾ, ವೈಭವ್ ಅರೋರಾ, ವರುಣ್ ಚಕ್ರವರ್ತಿ, ಕೆ.ಎಸ್.ಭರತ್, ಚೇತನ್ ಸಕರಿಯಾ, ಮಿಚೆಲ್ ಸ್ಟಾರ್ಕ್, ಆಂಗ್ಕ್ರಿಶ್ ರಘುವಂಶಿ, ರಮಣದೀಪ್ ಸಿಂಗ್, ಶೆರ್ಫೇನ್ ರುದರ್‌ಫೋರ್ಡ್, ಮನೀಶ್ ಪಾಂಡೆ, ಮುಜೀಬ್ ಉರ್ ರೆಹಮಾನ್, ಗಸ್ ಅಟ್ಕಿನ್ಸನ್, ಸಾಕಿಬ್ ಹುಸೇನ್.

ಲಕ್ನೋ ಸೂಪರ್ ಜೈಂಟ್ಸ್

ಕೆ.ಎಲ್.ರಾಹುಲ್, ಕ್ವಿಂಟನ್ ಡಿಕಾಕ್, ನಿಕೋಲಸ್ ಪೂರನ್, ಆಯುಷ್ ಬದೋನಿ, ಕೈಲ್ ಮೇಯರ್ಸ್, ಮಾರ್ಕಸ್ ಸ್ಟೊಯಿನಿಸ್, ದೀಪಕ್ ಹೂಡಾ, ರವಿ ಬಿಷ್ಣೋಯ್, ನವೀನ್ ಉಲ್ ಹಕ್, ಕೃನಾಲ್ ಪಾಂಡ್ಯ, ಯುದ್ಧವೀರ್ ಸಿಂಗ್, ಪ್ರೇರಕ್ ಮಂಕಡ್, ಯಶ್ ಠಾಕೂರ್, ಅಮಿತ್ ಮಿಶ್ರಾ, ಮಾರ್ಕ್ ವುಡ್, ಮಯಾಂಕ್ ಯಾದವ್, ಮೊಹ್ಸಿನ್ ಖಾನ್, ಕೆ.ಗೌತಮ್, ದೇವದತ್ ಪಡಿಕ್ಕಲ್, ಶಿವಂ ಮಾವಿ, ಅರ್ಶಿನ್ ಕುಲಕರ್ಣಿ, ಎಂ.ಸಿದ್ಧಾರ್ಥ್, ಆಷ್ಟನ್ ಟರ್ನರ್, ಡೇವಿಡ್ ವಿಲಿ, ಮೊಹಮ್ಮದ್ ಅರ್ಷದ್ ಖಾನ್.

ಮುಂಬೈ ಇಂಡಿಯನ್ಸ್

ರೋಹಿತ್ ಶರ್ಮಾ, ಡೆವಾಲ್ಡ್ ಬ್ರೆವಿಸ್, ಸೂರ್ಯಕುಮಾರ್ ಯಾದವ್, ಇಶಾನ್ ಕಿಶನ್, ತಿಲಕ್ ವರ್ಮಾ, ಟಿಮ್ ಡೇವಿಡ್, ವಿಷ್ಣು ವಿನೋದ್, ಅರ್ಜುನ್ ತೆಂಡೂಲ್ಕರ್, ಶಮ್ಸ್ ಮುಲಾನಿ, ನೆಹಾಲ್ ವಧೇರಾ, ಜಸ್ಪ್ರೀತ್ ಬುಮ್ರಾ, ಕುಮಾರ್ ಕಾರ್ತಿಕೇಯ, ಪಿಯೂಷ್ ಚಾವ್ಲಾ, ಆಕಾಶ್ ಮಧ್ವಲ್, ಜೇಸನ್ ಬೆಹ್ರೆನ್ಡಾರ್ಫ್, ಹಾರ್ದಿಕ್ ಪಾಂಡ್ಯ, ರೊಮಾರಿಯೊ ಶೆಫರ್ಡ್, ಜೆರಾಲ್ಡ್ ಕೊಯೆಟ್ಜೆ, ದಿಲ್ಶನ್ ಮಧುಶಂಕ, ಶ್ರೇಯಸ್ ಗೋಪಾಲ್, ನುವಾನ್ ತುಷಾರ, ನಮನ್ ಧೀರ್, ಅಂಶುಲ್ ಕಾಂಬೋಜ್, ಮೊಹಮ್ಮದ್ ನಬಿ, ಶಿವಾಲಿಕ್ ಶರ್ಮಾ.

ಪಂಜಾಬ್ ಕಿಂಗ್ಸ್

ಶಿಖರ್ ಧವನ್, ಲಿಯಾಮ್ ಲಿವಿಂಗ್‌ಸ್ಟೋನ್, ಜಾನಿ ಬೈರ್ ಸ್ಟೋ, ಜಿತೇಶ್ ಶರ್ಮಾ, ಶಿವಂ ಸಿಂಗ್, ರಾಹುಲ್ ಚಹಾರ್, ಪ್ರಭಾಸಿಮ್ರಾನ್ ಸಿಂಗ್, ಅರ್ಷದೀಪ್ ಸಿಂಗ್, ಹರ್‌ಪ್ರೀತ್ ಭಾಟಿಯಾ, ಹರ್ಪ್ರೀತ್ ಬ್ರಾರ್, ಅಥರ್ವ ತೈಡೆ, ವಿದ್ವತ್ ಕಾವೇರಪ್ಪ ರಿಷಿ ಧವನ್, ಕಗಿಸೊ ರಬಾಡ, ಸ್ಯಾಮ್ ಕರ್‍ರಾನ್, ನಾಥನ್ ಎಲ್ಲಿಸ್, ಸಿಕಂದರ್ ರಜಾ, ಹರ್ಷಲ್ ಪಟೇಲ್, ಕ್ರಿಸ್ ವೋಕ್ಸ್, ಅಶುತೋಷ್ ಶರ್ಮಾ, ವಿಶ್ವನಾಥ್ ಪ್ರತಾಪ್ ಸಿಂಗ್, ಶಶಾಂಕ್, ತನಯ್ ತ್ಯಾಗರಾಜನ್, ಪ್ರಿನ್ಸ್ ಚೌಧರಿ, ರಿಲೀ ರೊಸೊವ್.

ರಾಯಲ್ ಚಾಲೆಂಜರ್ಸ್ ಬೆಂಗಳೂರು

ಫಾಫ್ ಡು ಪ್ಲೆಸಿಸ್, ಗ್ಲೆನ್ ಮ್ಯಾಕ್ಸ್‌ವೆಲ್, ವಿರಾಟ್ ಕೊಹ್ಲಿ, ರಜತ್ ಪಾಟಿದಾರ್, ಅನುಜ್ ರಾವತ್, ದಿನೇಶ್ ಕಾರ್ತಿಕ್, ಸುಯಶ್ ಪ್ರಭು ದೇಸಾಯಿ, ವಿಲ್ ಜ್ಯಾಕ್ಸ್, ಮಹಿಪಾಲ್ ಲೋಮ್ರೋರ್, ಕರ್ಣ್ ಶರ್ಮಾ, ಮನೋಜ್ ಭಾಂಡಗೆ, ವೈಶಾಕ್ ವಿಜಯಕುಮಾರ್, ಆಕಾಶ್ ದೀಪ್, ಮೊಹಮ್ಮದ್ ಸಿರಾಜ್, ರೀಸ್ ಟೋಪ್ಲಿ, ಹಿಮಾಂಶು ಶರ್ಮಾ, ರಾಜನ್ ಕುಮಾರ್, ಮಯಾಂಕ್ ದಾಗರ್, ಕ್ಯಾಮರೂನ್ ಗ್ರೀನ್, ಅಲ್ಜಾರಿ ಜೋಸೆಫ್, ಯಶ್ ದಯಾಳ್, ಟಾಮ್ ಕರ್‍ರಾನ್, ಲಾಕಿ ಫರ್ಗುಸನ್, ಸ್ವಪ್ನಿಲ್ ಸಿಂಗ್, ಸೌರವ್ ಚುವಾಹಾನ್.

ರಾಜಸ್ತಾನ್ ರಾಯಲ್ಸ್

ಸಂಜು ಸ್ಯಾಮ್ಸನ್, ಜೋಸ್ ಬಟ್ಲರ್, ಶಿಮ್ರಾನ್ ಹೆಟ್ಮೆಯರ್, ಯಶಸ್ವಿ ಜೈಸ್ವಾಲ್, ಧ್ರುವ್ ಜುರೆಲ್, ರಿಯಾನ್ ಪರಾಗ್, ಡೊನೊವನ್ ಫೆರೆರಾ, ಕುನಾಲ್ ರಾಥೋರ್, ರವಿಚಂದ್ರನ್ ಅಶ್ವಿನ್, ಕುಲದೀಪ್ ಸೇನ್, ನವದೀಪ್ ಸೈನಿ, ಪ್ರಸಿದ್ಧ್ ಕೃಷ್ಣ ಸಂದೀಪ್ ಶರ್ಮಾ, ಟ್ರೆಂಟ್ ಬೌಲ್ಟ್, ಯಜುವೇಂದ್ರ ಚಾಹಲ್, ಆಡಮ್ ಝಂಪಾ, ಅವೇಶ್ ಖಾನ್, ರೋವ್‌ಮನ್ ಪೊವೆಲ್, ಶಿವಂ ದುಬೆ, ಟಾಮ್ ಕೊಹ್ಲರ್ ಕಾಡ್ಮೋರ್, ನಾಂದ್ರೆ ಬರ್ಗರ್, ಅಬಿದ್ ಮುಷ್ತಾಕ್.

ಸನ್‌ರೈಸರ್ಸ್ ಹೈದರಾಬಾದ್

ಅಬ್ದುಲ್ ಸಮದ್, ಐಡೆನ್ ಮಾರ್ಕ್ರಾಮ್, ರಾಹುಲ್ ತ್ರಿಪಾಠಿ, ಗ್ಲೆನ್ ಫಿಲಿಪ್ಸ್, ಹೆನ್ರಿಕ್ ಕ್ಲಾಸೆನ್, ಮಯಾಂಕ್ ಅಗರ್ವಾಲ್, ಅನ್ಮೋಲ್ಪ್ರೀತ್ ಸಿಂಗ್, ಉಪೇಂದ್ರ ಸಿಂಗ್ ಯಾದವ್, ನಿತೀಶ್ ಕುಮಾರ್ ರೆಡ್ಡಿ, ಅಭಿಷೇಕ್ ಶರ್ಮಾ, ಮಾರ್ಕೊ ಜಾನ್ಸೆನ್, ವಾಷಿಂಗ್ಟನ್ ಸುಂದರ್, ಸನ್ವೀರ್ ಸಿಂಗ್, ಭುವನೇಶ್ವರ್ ಕುಮಾರ್, ಟಿ.ನಟರಾಜನ್, ಮಯಾಂಕ್ ಮಾರ್ಕಂಡೆ ಉಮ್ರಾನ್ ಮಲಿಕ್, ಫಜಲ್ಹಕ್ ಫಾರೂಕಿ, ಶಹಬಾಜ್ ಅಹ್ಮದ್, ಟ್ರಾವಿಸ್ ಹೆಡ್, ವನಿಂದು ಹಸರಂಗ, ಪ್ಯಾಟ್ ಕಮ್ಮಿನ್ಸ್, ಜಯದೇವ್ ಉನದ್ಕತ್, ಆಕಾಶ್ ಸಿಂಗ್, ಜಾತವೇಧ್ ಸುಬ್ರಮಣ್ಯನ್.

ಟೂರ್ನಿ ನಡೆಯುವ ವಿಧಾನ

ಪಂದ್ಯಾವಳಿಯಲ್ಲಿ 10 ತಂಡಗಳು ಕಣಕ್ಕಿಳಿಯಲಿದ್ದು, ಲೀಗ್ ಹಂತದಲ್ಲಿ ಪ್ರತಿ ತಂಡ 14 ಪಂದ್ಯಗಳನ್ನು ಆಡಲಿವೆ. ಅಂಕಪಟ್ಟಿಯಲ್ಲಿ ಉತ್ತಮ ರನ್‌ರೇಟ್‌ನೊಂದಿಗೆ ಹೆಚ್ಚು ಅಂಕ ಪಡೆಯುವ ಮೊದಲ 4 ತಂಡಗಳು ಪ್ಲೇ ಆಫ್‌ಗೆ ಅರ್ಹತೆ ಪಡೆಯಲಿವೆ. ಬಳಿಕ ನಡೆಯುವ ಕ್ವಾಲಿಫೈಯರ್–1 ಪಂದ್ಯದಲ್ಲಿ ಅಗ್ರ 2 ತಂಡಗಳು ಕಾದಾಡಲಿದ್ದು, ಪಂದ್ಯ ಜಯಿಸುವ ತಂಡ ನೇರವಾಗಿ ಫೈನಲ್ ತಲುಪಲಿದೆ. ಸೋತ ತಂಡಕ್ಕೆ ಮತ್ತೊಂದು ಅವಕಾಶವಿರುತ್ತದೆ.

ಅಂಕಪಟ್ಟಿಯಲ್ಲಿ 3 ಮತ್ತು 4 ಸ್ಥಾನ ಗಳಿಸುವ ತಂಡಗಳು ಎಲಿಮಿನೇಟರ್ ಪಂದ್ಯವಾಡಲಿದೆ. ಈ ಪಂದ್ಯ ಗೆದ್ದ ತಂಡ ಮೊದಲ ಪಂದ್ಯದಲ್ಲಿ ಸೋತ ತಂಡದ ವಿರುದ್ಧ ಸೆಣಸಾಡಲಿದೆ. ಸೋತ ತಂಡ ಟೂರ್ನಿಯಿಂದ ನಿರ್ಗಮಿಸಲಿದೆ. ಕ್ವಾಲಿಫೈಯರ್–2ನಲ್ಲಿ ಎಲಿಮಿನೇಟರ್‌ನಲ್ಲಿ ಗೆದ್ದ ತಂಡ ಹಾಗೂ ಕ್ವಾಲಿಫೈಯರ್–1 ರಲ್ಲಿ ಸೋತ ತಂಡಗಳು ಮುಖಾಮುಖಿಯಾಗಲಿದ್ದು, ಇಲ್ಲಿ ಗೆದ್ದ ತಂಡ ಫೈನಲ್‌ನಲ್ಲಿ ಟ್ರೋಫಿಗಾಗಿ ಫೈಟ್ ನಡೆಸಲಿದೆ.

ಆರೆಂಜ್, ಪರ್ಪಲ್ ಕ್ಯಾಪ್: ಟೂರ್ನಿಯಲ್ಲಿ ಅತೀ ಹೆಚ್ಚು ರನ್ ಹಾಗೂ ವಿಕೆಟ್ ಪಡೆಯುವ ಆಟಗಾರರಿಗೆ ಆರೆಂಜ್ ಹಾಗೂ ಪರ್ಪಲ್ ಕ್ಯಾಪ್‌ಗಳನ್ನು ನೀಡಲಿದ್ದು, ಪಂದ್ಯಾವಳಿಯಲ್ಲಿ ಆಟಗಾರ ಕ್ಯಾಪ್ ಹಾಕಿಕೊಂಡು ಆಟವಾಡುತ್ತಾನೆ. ಟೂರ್ನಿ ಅಂತಿಮ ಹಂತದಲ್ಲಿ ಇದಕ್ಕಾಗಿ ಪ್ರಶಸ್ತಿ ಹಾಗೂ ನಗದು ಬಹುಮಾನ ನೀಡಲಾಗುವುದು.

ಚಾಂಪಿಯನ್ ತಂಡಗಳ ವಿವರ

2008– ರಾಜಸ್ಥಾನ ರಾಯಲ್
2009– ಡೆಕ್ಕನ್ ಚಾರ್ಜರ್ಸ್
2010– ಚೆನ್ನೈ ಸೂಪರ್ ಕಿಂಗ್ಸ್
2011– ಚೆನ್ನೈ ಸೂಪರ್ ಕಿಂಗ್ಸ್
2012– ಕೋಲ್ಕತ್ತಾ ನೈಟ್ ರೈಡರ್ಸ್
2013– ಮುಂಬೈ ಇಂಡಿಯನ್ಸ್
2014– ಕೋಲ್ಕತ್ತಾ ನೈಟ್ ರೈಡರ್ಸ್
2015– ಮುಂಬೈ ಇಂಡಿಯನ್ಸ್
2016– ಸನ್‌ರೈಸರ್ಸ್ ಹೈದರಾಬಾದ್
2017– ಮುಂಬೈ ಇಂಡಿಯನ್ಸ್
2018– ಚೆನ್ನೈ ಸೂಪರ್ ಕಿಂಗ್ಸ್
2019– ಮುಂಬೈ ಇಂಡಿಯನ್ಸ್
2020– ಮುಂಬೈ ಇಂಡಿಯನ್ಸ್
2021– ಚೆನ್ನೈ ಸೂಪರ್ ಕಿಂಗ್ಸ್
2022– ಗುಜರಾತ್ ಟೈಟಾನ್ಸ್
2023– ಚೆನ್ನೈ ಸೂಪರ್ ಕಿಂಗ್ಸ್
2024 ....?

ಪಂದ್ಯಾವಳಿ ಬಹುಮಾನ ಮೊತ್ತ

ಚಾಂಪಿಯನ್ 30 ಕೋಟಿ
ರನ್ನರ್ ಅಪ್ 13 ಕೋಟಿ
3ನೇ ಸ್ಥಾನ 8 ಕೋಟಿ
4ನೇ ಸ್ಥಾನ 7 ಕೋಟಿ
ಆರೆಂಜ್ ಕ್ಯಾಪ್, ಪರ್ಪಲ್ ಕ್ಯಾಪ್, ಸೂಪರ್ ಸ್ಟ್ರೈಕರ್ ಆಫ್ ದಿ ಸೀಸನ್ ಪ್ರಶಸ್ತಿ ತಲಾ 15 ಲಕ್ಷ
ಉದಯೋನ್ಮುಖ ಆಟಗಾರ ಪ್ರಶಸ್ತಿ ವಿಜೇತರು 20 ಲಕ್ಷ ರೂ.ಗಳನ್ನು ಪಡೆಯಲಿದ್ದಾರೆ.

ಐಪಿಎಲ್ ದಾಖಲೆ ವೀರರು



ಅತಿ ಹೆಚ್ಚು ರನ್
ವಿರಾಟ್ ಕೊಹ್ಲಿ
7263 ರನ್ಸ್
(2008–2023)



ಅತಿ ಹೆಚ್ಚು ವಿಕೆಟ್
ಯಜುವೇಂದ್ರ ಚಹಾಲ್
187 ವಿಕೆಟ್ಸ್
(2013–2023)



ಅತಿ ಹೆಚ್ಚು ಶತಕ
ವಿರಾಟ್ ಕೊಹ್ಲಿ
7 ಶತಕ
(2008–2023)



ಅತಿ ಹೆಚ್ಚು ಅರ್ಧ ಶತಕ
ಡೇವಿಡ್ ವಾರ್ನರ್
65 ಅರ್ಧ ಶತಕ
(2008–2023)



ಅತಿ ಹೆಚ್ಚು ಸಿಕ್ಸ್
ಕ್ರಿಸ್ ಗೇಲ್
357 ಸಿಕ್ಸ್
(2009–2021)



ಅತಿ ಹೆಚ್ಚು ಫೋರ್
ಶಿಖರ್ ಧವನ್
750 ಫೋರ್
(2008–2023)



ಹೆಚ್ಚು ಮೇಡನ್
ಪ್ರವೀಣ್ ಕುಮಾರ್
14 ಮೇಡನ್ಸ್
(2008–2017)




ಅತಿ ಹೆಚ್ಚು ಫೈನಲ್
ಎಂ.ಎಸ್ ಧೋನಿ
11 ಫೈನಲ್ಸ್
(2008–2023)

ಐಪಿಎಲ್ ಮೊದಲ ಚರಣದ ವೇಳಾಪಟ್ಟಿ

ಲೋಕಸಭಾ ಚುನಾವಣೆ ಗಮನದಲ್ಲಿಟ್ಟುಕೊಂಡು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) 17ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಮೊದಲ ಚರಣದ ಪಂದ್ಯಗಳ ವೇಳಾಪಟ್ಟಿ ಪ್ರಕಟಿಸಿದೆ.

ಮೊದಲ ಚರಣದ ಪಂದ್ಯಗಳು ಮಾ.22ರಿಂದ ಏಪ್ರಿಲ್ 7ರವರೆಗೆ ನಡೆಯಲಿದ್ದು, ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಕಾದಾಟ ನಡೆಸಲಿವೆ.

ಮಾ.22	ಚೆನ್ನೈ ಸೂಪರ್ ಕಿಂಗ್ಸ್ / ರಾಯಲ್ ಚಾಲೆಂಜರ್ಸ್ ಬೆಂಗಳೂರು	ರಾತ್ರಿ 8ಕ್ಕೆ, ಚೆನ್ನೈ
ಮಾ.23	ಪಂಜಾಬ್ ಕಿಂಗ್ಸ್ / ಡೆಲ್ಲಿ ಕ್ಯಾಪಿಟಲ್ಸ್	ಮಧ್ಯಾಹ್ನ 3:30ಕ್ಕೆ, ಮೊಹಾಲಿ
ಮಾ.23	ಕೋಲ್ಕತ್ತಾ ನೈಟ್ ರೈಡರ್ಸ್ / ಸನ್‌ರೈಸರ್ಸ್ ಹೈದರಾಬಾದ್	ರಾತ್ರಿ 7:30ಕ್ಕೆ, ಕೋಲ್ಕತ್ತಾ
ಮಾ.24	ರಾಜಸ್ಥಾನ್ ರಾಯಲ್ಸ್ / ಲಕ್ನೋ ಸೂಪರ್ ಜೈಂಟ್ಸ್	ಮಧ್ಯಾಹ್ನ 3:30ಕ್ಕೆ ಜೈಪುರ
ಮಾ.24	ಗುಜರಾತ್ ಟೈಟನ್ಸ್ /ಮುಂಬೈ ಇಂಡಿಯನ್ಸ್	ರಾತ್ರಿ 7:30ಕ್ಕೆ ಅಹಮದಾಬಾದ್
ಮಾ.25	ರಾಯಲ್ ಚಾಲೆಂಜರ್ಸ್ ಬೆಂಗಳೂರು / ಪಂಜಾಬ್ ಕಿಂಗ್ಸ್	ರಾತ್ರಿ 7:30ಕ್ಕೆ ಬೆಂಗಳೂರು
ಮಾ.26	ಚೆನ್ನೈ ಸೂಪರ್ ಕಿಂಗ್ಸ್ / ಗುಜರಾತ್ ಟೈಟಾನ್ಸ್	ರಾತ್ರಿ 7:30ಕ್ಕೆ ಚೆನ್ನೈ
ಮಾ.27	ಸನ್‌ರೈಸರ್ಸ್ ಹೈದರಾಬಾದ್ / ಮುಂಬೈ ಇಂಡಿಯನ್ಸ್	ರಾತ್ರಿ 7:30ಕ್ಕೆ ಹೈದರಾಬಾದ್
ಮಾ.28	ರಾಜಸ್ಥಾನ್ ರಾಯಲ್ಸ್ / ಡೆಲ್ಲಿ ಕ್ಯಾಪಿಟಲ್ಸ್	ರಾತ್ರಿ 7:30ಕ್ಕೆ ಜೈಪುರ
ಮಾ.29	ರಾಯಲ್ ಚಾಲೆಂಜರ್ಸ್ ಬೆಂಗಳೂರು / ಕೋಲ್ಕತ್ತಾ ನೈಟ್ ರೈಡರ್ಸ್	ರಾತ್ರಿ 7:30ಕ್ಕೆ ಬೆಂಗಳೂರು
ಮಾ.30	ಲಕ್ನೋ ಸೂಪರ್ ಜೈಂಟ್ಸ್ / ಪಂಜಾಬ್ ಕಿಂಗ್ಸ್	ರಾತ್ರಿ 7:30ಕ್ಕೆ ಲಖನೌ
ಮಾ.31	ಗುಜರಾತ್ ಟೈಟಾನ್ಸ್ / ಸನ್‌ರೈಸರ್ಸ್ ಹೈದರಾಬಾದ್	ಮ.3:30ಕ್ಕೆ ಅಹಮದಾಬಾದ್
ಮಾ.31	ಡೆಲ್ಲಿ ಕ್ಯಾಪಿಟಲ್ಸ್ / ಚೆನ್ನೈ ಸೂಪರ್ ಕಿಂಗ್ಸ್	ರಾತ್ರಿ 7:30ಕ್ಕೆ ವಿಶಾಖಪಟ್ಟಣ
ಏ.1	ಮುಂಬೈ ಇಂಡಿಯನ್ಸ್ / ರಾಜಸ್ತಾನ್ ರಾಯಲ್ಸ್	ರಾತ್ರಿ 7:30ಕ್ಕೆ ಮುಂಬೈ
ಏ.2	ರಾಯಲ್ ಚಾಲೆಂಜರ್ಸ್ ಬೆಂಗಳೂರು / ಲಕ್ನೋ ಸೂಪರ್ ಜೈಂಟ್ಸ್	ರಾತ್ರಿ 7:30ಕ್ಕೆ ಬೆಂಗಳೂರು
ಏ.3	ಡೆಲ್ಲಿ ಕ್ಯಾಪಿಟಲ್ಸ್ / ಕೋಲ್ಕತ್ತಾ ನೈಟ್ ರೈಡರ್ಸ್	ರಾತ್ರಿ 7:30ಕ್ಕೆ ವಿಶಾಖಪಟ್ಟಣ
ಏ.4	ಗುಜರಾತ್ ಟೈಟಾನ್ಸ್ / ಪಂಜಾಬ್ ಕಿಂಗ್ಸ್	ರಾತ್ರಿ 7:30ಕ್ಕೆ ಅಹಮದಾಬಾದ್
ಏ.5	ಸನ್‌ರೈಸರ್ಸ್ ಹೈದರಾಬಾದ್ / ಚೆನ್ನೈ ಸೂಪರ್ ಕಿಂಗ್ಸ್	ರಾತ್ರಿ 7:30ಕ್ಕೆ ಹೈದರಾಬಾದ್
ಏ.6	ರಾಜಸ್ತಾನ್ ರಾಯಲ್ಸ್ / ರಾಯಲ್ ಚಾಲೆಂಜರ್ಸ್ ಬೆಂಗಳೂರು	ರಾತ್ರಿ 7:30ಕ್ಕೆ ಜೈಪುರ.
ಏ.7	ಮುಂಬೈ ಇಂಡಿಯನ್ಸ್ / ಡೆಲ್ಲಿ ಕ್ಯಾಪಿಟಲ್ಸ್	ಮಧ್ಯಾಹ್ನ 3:30ಕ್ಕೆ ಮುಂಬೈ
ಏ.7	ಲಕ್ನೋ ಸೂಪರ್ ಜೈಂಟ್ಸ್ / ಗುಜರಾತ್ ಟೈಟಾನ್ಸ್	ರಾತ್ರಿ 7:30ಕ್ಕೆ ಲಖನೌ



ವಾರಭವಿಷ್ಯ

17.03.2024 ರಿಂದ 23.03.2024

ಈ ವಾರದಲ್ಲಿ ಗ್ರಹಗಳ ರಾಶಿ ಸಂಚಾರ:– ರವಿ–ಮೀನ, ಚಂದ್ರ–ಮಿಥುನ, ಕಟಕ, ಸಿಂಹ, ಕುಜ–ಕುಂಭ, ಬುಧ–ಮೀನ, ಗುರು–ಮೇಷ, ಶುಕ್ರ–ಕುಂಭ, ಶನಿ–ಕುಂಭ, ರಾಹು–ಮೀನ ಮತ್ತು ಕೇತು–ಕನ್ಯಾ.

ವಿ.ಕೇಶವಮೂರ್ತಿ
ಜ್ಯೋತಿಷ್ಯ ವಿದ್ವಾಂಸರು, 'ಭಾವಸಾರ ರತ್ನ'
'ಚೈತನ್ಯಶ್ರೀ ಪ್ರಶಸ್ತಿ ಪುರಸ್ಕೃತರು'
ಕಲ್ಪದ್ರುಮ ಜ್ಯೋತಿಷ್ಯ ಅಧ್ಯಯನ ಕೇಂದ್ರ
ವಿಳಾಸ: 533, 6ನೇ ಕ್ರಾಸ್, ಬೋಗಾದಿ ಉತ್ತರ,
2ನೇ ಹಂತ, ಮೈಸೂರು ನಿರ್ಮಿತಿ ಕೇಂದ್ರ ಹತ್ತಿರ, ಮೈಸೂರು.
ಮೊ.9740973224, 9739548720



ಮೇಷ (ಚು.ಚೆ.ಲ.ಲಿ.ಲು.ಲೆ.ಲೋ.ಅ)

ನಿಮ್ಮ ವೈಯಕ್ತಿಕ ಕೆಲಸ ಕಾರ್ಯಗಳು ನಿಂತು ನಿಂತು ಸಾಗಿದೆ. ನಿರೀಕ್ಷಿತ ಫಲಿತಾಂಶ ದೊರೆಯಲು ಗುರುದೇವ ಅಡ್ಡ ನಿಂತಿದ್ದಾನೆ. ಸರ್ಕಾರಿ ಕೆಲಸ ಕಲಾಪಗಳಲ್ಲಿ ಅಧಿಕಾರಿಗಳ ಆಶ್ರಯವನ್ನೇ ನಂಬಬೇಕಿದೆ. ಮರಳು ಗಾಡಿನಲ್ಲಿ ಓಯಸಿಸ್ ಎಂಬಂತೆ ಕೆಲವು ಹಿತಚಿಂತಕರ ನೆರವು ದೊರೆಯುವುದು. ವಾರಾಂತ್ಯಕ್ಕೆ ಕೆಲವೊಂದು ಪಾಸಿಟಿವ್ ಫಲಿತಾಂಶಗಳು ಹೊಸ ಚೈತನ್ಯ ತುಂಬಲಿದೆ.

ಗಂ ಗಣಪತಯೇ ನಮಃ ಮಂತ್ರ ಜಪಿಸಿ. ಶುಭ ಸಂಖ್ಯೆ–5

ವೃಷಭ (ಇ.ಉ.ಎ.ಒ.ವ.ವಿ.ವು.ವೆ.ವೊ)

'ಪ್ರಯತ್ನ ಪುರುಷಾಧೀನ, ಫಲ ದೈವಾಧೀನ' ಎಂಬ ನಾಣ್ಣುಡಿಯನ್ನು ಪಾಲಿಸಿದಲ್ಲಿ ನಿಮ್ಮ ಮನಸ್ಸಿನ ದುಗುಡತೆಗಳು ನಿವಾರಣೆ ಆಗುವುದು. ಜೀವನದಲ್ಲಿ ಏರಿಳಿತಗಳು ಇಲ್ಲದೇ ಉಂಟೇ? ವಾರಮಧ್ಯೆ ನಿರೀಕ್ಷಿತ ಹಣ ಕೈ ಸೇರುವುದು. ಹೆಂಡತಿ–ಮಕ್ಕಳೊಂದಿಗೆ ಅನ್ಯೋನ್ಯತೆಯಿಂದ ಇರಲು ಪ್ರಯತ್ನಿಸಿ. ಟ್ರಾವೆಲ್ ಏಜೆನ್ಸಿಯವರಿಗೆ ನಿರೀಕ್ಷೆ ಮೀರಿ ಆದಾಯವಾಗುವುದು. ನಿಮ್ಮ ಆರೋಗ್ಯ ಬಿಗಡಾಯಿಸಬಹುದು.

ಶ್ರೀದೇವೀ ಉಪಾಸನೆ. ಶುಭ ಸಂಖ್ಯೆ–7.

ಮಿಥುನ (ಕ.ಕಿ.ಕು.ಘ.ಙ.ಛ.ಕೆ.ಕೊ.ಹ)

ವಾರದ ಆದಿಗೆ ಸೌಭಾಗ್ಯ ಪ್ರಾಪ್ತಿ. ಕುಟುಂಬದಲ್ಲಿ ಎದುರಾಗುವ ಸಮಸ್ಯೆಗಳನ್ನು ಯಶಸ್ವಿಯಾಗಿ ನಿಭಾಯಿಸುವಿರಿ. ಸತಿ–ಸುತರಲ್ಲಿ ಉಂಟಾಗಿದ್ದ ವೈಮನಸ್ಸು ಶಮನವಾಗುವುದು. ವಿದ್ಯುತ್ ವಸ್ತು ಮಾರಾಟಗಾರರಿಗೆ ಉತ್ತಮ ವ್ಯಾಪಾರ ಹಾಗೂ ಧನಲಾಭವಾಗುವುದು. ದೂರ ಪ್ರಯಾಣಗಳು ಉಂಟಾಗುವುದು. ಆಹಾರ ವ್ಯತ್ಯಾಸದಿಂದ ಆರೋಗ್ಯ ಕೆಡುವ ಸಂಭವ, ವೈದ್ಯರ ಸಂದರ್ಶನ.

ಶ್ರೀ ಶ್ರೀನಿವಾಸಸ್ವಾಮಿ ದರ್ಶನ. ಶುಭ ಸಂಖ್ಯೆ–4.

ಕಟಕ (ಹೀ.ಹು.ಹೆ.ಹೊ.ಡ.ಡಿ.ಡು)

ವಾರದಾರಂಭಕ್ಕೆ ಸತ್ಕರ್ಮಾಚರಣೆಯಿಂದ ಧನ್ಯತೆಯ ಭಾವ. ನಿಮ್ಮ ರಾಶ್ಯಾಧಿಪತಿ ಚಂದ್ರನ ಪ್ರಭಾವದಿಂದ ಅಡಚಣೆಗಳಿದ್ದಾಗ್ಯೂ ಕೆಲಸ ಕಾರ್ಯಗಳು ಯಶಸ್ವಿಯಾಗುವುದು. ನೂತನ ವಾಹನ, ಬೆಲೆ ಬಾಳುವ ವಸ್ತುಗಳನ್ನು ಹೊಂದುವಿರಿ. ಶತ್ರುಗಳು ಮಿತ್ರತ್ವ ಬಯಸಿ ಬಂದರೆ ತಿರಸ್ಕರಿಸದಿರಿ. ಗೋವು ಪಾಲಕರಿಗೆ ಉತ್ತಮ ಆದಾಯ ದೊರೆಯುವುದು. ವಾರದ ಕಡೆಗೆ ದೈವಕಾರ್ಯದಲ್ಲಿ ಭಾಗಿಯಾಗುವಿರಿ.

ಶ್ರೀ ಶಕ್ತಿದೇವತಾ ದರ್ಶನ. ಶುಭ ಸಂಖ್ಯೆ–8

ಸಿಂಹ (ಮ.ಮಿ.ಮು.ಮೆ.ಮೊ.ಟ.ಟಿ.ಟು.ಟೆ)

ಸಪ್ತಾಹದ ಆದಿಗೆ ಮನೆಯಲ್ಲಿ ಸಡಗರ ಸಂಭ್ರಮದ ವಾತಾವರಣ. ನೂತನ ವಸ್ತ್ರಾಭರಣ ಖರೀದಿ, ವನಿತೆಯರು ಶೃಂಗಾರ ಸಾಧನಗಳಿಗೆ ಧಾರಾಳ ಹಣ ವ್ಯಯಿಸುವರು. ಕೃಷಿಕರಿಗೆ, ಪಶು ಸಂಗೋಪನೆ ಮಾಡುವವರಿಗೆ ಹೆಚ್ಚಿನ ಆದಾಯ. ನಿಮ್ಮ ರಾಶ್ಯಾಧಿಪತಿ ರವಿಯ ಗೋಚರ ಅಶುಭವಿದ್ದು, ಸರ್ಕಾರಿ ನೌಕರರಿಗೆ ತನಿಖಾ ಸಂಸ್ಥೆಗಳ ಬಿಸಿ ತಟ್ಟುವುದು. ರಾಜಕಾರಣಿಗಳಿಗೆ ಅಪವಾದ.

ಶ್ರೀ ರವ್ಯಾಷ್ಟಕ ಪಠಿಸಿ. ಶುಭ ಸಂಖ್ಯೆ– 2.

ಕನ್ಯಾ (ಟೊ.ಪ.ಪಿ.ಪು.ಷ.ಣ.ಠ.ಪೆ.ಪೊ)

'ರಾಮೇಶ್ವರಕ್ಕೆ ಹೋದರೂ ಶನೇಶ್ವರ ಬಿಡ' ಎಂಬಂತೆ ಆಗಿದೆ ನಿಮ್ಮ ಪರಿಸ್ಥಿತಿ. ಸವಾಲು ಒಂದರ ಮೇಲೆ ಒಂದರಂತೆ ಎದುರಾಗಲಿದೆ. ಅಧೀರರಾಗುವ ಅಗತ್ಯವಿಲ್ಲ. ಚಂದ್ರಗ್ರಹ ಬಲದಿಂದ 'ಧೈರ್ಯವಂತನಿಗೆ ದೈವ ಸಹಾಯ' ಎಂಬಂತೆ ನಿಮ್ಮ ಚಾಣಾಕ್ಷಬುದ್ಧಿಯಿಂದ ಎಲ್ಲವನ್ನೂ ನಿಭಾಯಿಸುವಿರಿ. ಯಾವುದೇ ಹೊಸ ಒಪ್ಪಂದಗಳಿಗೆ ಸಹಿ ಮಾಡುವ ಮೊದಲು ಕಾನೂನು ಸಲಹೆ ಪಡೆಯಿರಿ.

ಶ್ರೀ ಕುಲದೇವತಾ ದರ್ಶನ. ಶುಭ ಸಂಖ್ಯೆ–6.

ತುಲಾ (ರ.ರಿ.ರು.ರೆ.ರೊ.ತ.ತಿ.ತು.ತೆ)

ಈ ಸಪ್ತಾಹದಲ್ಲಿ ಹಲವು ಗ್ರಹಗಳು ಶುಭ ಸ್ಥಾನದಲ್ಲಿ ಸಂಚರಿಸುವ ಪರಿಣಾಮ ನಿಮಗೆ ಎದುರಾಗುವ ಆತಂಕ, ಕಷ್ಟಗಳು ಸೂರ್ಯನೆದುರು ಮಂಜು ಕರಗಿದಂತೆ ಮಾಯವಾಗುವುದು. ಸತಿ–ಸುತರಿಂದ ಸಂತೋಷ ದೊರೆತು ಮನಸ್ಸು ಪ್ರಫುಲ್ಲವಾಗಿರುವುದು. ಶಾರ್ಟ್ ಟ್ರಿಪ್‌ಗಳು ಉಂಟಾಗಬಹುದು. ಸರ್ಕಾರದಿಂದ ಗೌರವ ಪ್ರಶಸ್ತಿ ದೊರೆಯುವ ಸಂಭವ. ಮನೆ ಕೆಲಸದವರಿಂದ ಜಾಗೃತರಾಗಿರಿ.

ಶ್ರೀ 'ಅಯಿಗಿರಿ ನಂದಿನಿ' ಸ್ತೋತ್ರ ಪಠಣ, ಶ್ರವಣ. ಶುಭ ಸಂಖ್ಯೆ –1.

ವೃಶ್ಚಿಕ (ತೊ.ನ.ನಿ.ನು.ನೆ.ನೊ.ಯ.ಯಿ.ಯು

ಶ್ರೀ ಶನಿಯ ಕಾಟದಿಂದ ಜರ್ಝರಿತರಾದರೂ ಗೋಚರ ಚಂದ್ರ ನಿಮ್ಮನ್ನು ರಕ್ಷಿಸುವನು. ಎದುರಾಗುವ ಸಮಸ್ಯೆಗಳನ್ನು ಶಕ್ತಿಯಿಂದಲ್ಲದೆ ಯುಕ್ತಿಯಿಂದ ಜಯಿಸಲು ಪ್ರಯತ್ನಿಸಿ. ಹೊಸ ಬಂಡವಾಳ ಹೂಡುವಾಗ ಪರಿಣತರ ಮಾರ್ಗದರ್ಶನ ಪಡೆಯಲು ಮರೆಯದಿರಿ. 'ಕಷ್ಟಕ್ಕಾದವನೇ ನೆಂಟ' ಎಂಬಂತೆ ಅಪರಿಚಿತರ ನೆರವು ದೊರೆಯುವುದು. ಸರ್ಕಾರಿ ನೌಕರರು ಅಪಮಾರ್ಗದಲ್ಲಿ ನಡೆದು ತೊಂದರೆ ಅನುಭವಿಸುವರು.

ಶ್ರೀ ಯೋಗ ನೃಸಿಂಹ ಸ್ತುತಿ. ಶುಭ ಸಂಖ್ಯೆ– 3.

ಧನುಸ್ಸು (ಯೆ.ಯೊ.ಬ.ಬಿ.ಬು.ಧ.ಭ.ಢ.ಬೆ)

ಬೃಹಸ್ಪತಿಯ ಅನುಗ್ರಹವಿದ್ದಾಗ ಆತ್ಮವಿಶ್ವಾಸದಲ್ಲಿ ವೃದ್ಧಿ, ಧೈರ್ಯ–ಸ್ಥೈರ್ಯಗಳಿಂದ ನಿಮ್ಮ ಕೆಲಸ ಕಾರ್ಯಗಳು ದಡ ಸೇರಲಿದೆ. ಅನೇಕ ಮೂಲಗಳಿಂದ ಧನ ಸಂಗ್ರಹವಾಗುವುದು. ನಿಮ್ಮ ಯಶಸ್ಸಿಗೆ ನಿಮ್ಮ ಶ್ರೀಮತಿಯ ಕೊಡುಗೆಯೂ ಸೇರುವುದು. ನೀವು ಉತ್ತಮರಲ್ಲಿ ಗುರುತಿಸಿಕೊಂಡರೆ ನಿಮ್ಮ ಮಾನ, ಪ್ರತಿಷ್ಠೆಗಳು ಹೆಚ್ಚುವುದು. ದುಡುಕಿ ಮಾತನಾಡಬೇಡಿ. ಇದರಿಂದ ಹೆಚ್ಚಿನ ಹಾನಿಯಾಗುವುದು.

ಶ್ರೀ ಔದುಂಬರ ವೃಕ್ಷ ಪ್ರದಕ್ಷಿಣೆ. ಶುಭ ಸಂಖ್ಯೆ–9.

ಮಕರ (ಬೊ.ಜ.ಜಿ.ಶಿ.ಶು.ಶೆ.ಶೊ.ಗ.ಗಿ.)

ಉನ್ನತ ಅಧಿಕಾರಿಗಳ ದರ್ಪದಿಂದ ನಿಮ್ಮ ಮನಸ್ಸಿನ ನೆಮ್ಮದಿ ಹಾಳಾಗುವುದು. ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಮನಸ್ತಾಪವನ್ನು ಎದುರಿಸಬೇಕಾಗುವುದು. ಗಳಿಸಿದ ಹಣ ಅಪಮಾರ್ಗಗಳಲ್ಲಿ ವ್ಯಯವಾಗುವುದು. ತಾಳ್ಮೆಯಿಂದ ಹಿರಿಯರ ಮಾರ್ಗದರ್ಶನದಂತೆ ದೇವತಾ ಕಾರ್ಯಗಳಲ್ಲಿ ಪಾಲ್ಗೊಳ್ಳುವುದರಿಂದ ಮಾನಸಿಕ ಶಾಂತಿ ದೊರಕುವುದು.

ಶ್ರೀ ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿ. ಶುಭ ಸಂಖ್ಯೆ– 2.

ಕುಂಭ (ಗು.ಗೆ.ಗೊ.ಸ.ಸಿ.ಸು.ಸೆ.ಸೊ.ದ)

ಗೃಹಾರಂಭ ಕೆಲಸದಲ್ಲಿ ಅಡ್ಡಿ ಆತಂಕಗಳು ಎದುರಾಗುವುದು. ಚಂದ್ರಗ್ರಹದ ಕೃಪೆಯಿಂದ ಧನಾಗಮದ ಹಾದಿ ಸುಗಮವಾದರೂ ಅನಿರೀಕ್ಷಿತ ಖರ್ಚುಗಳು ಹೆಚ್ಚುವುದು. ನಿಮ್ಮ ವ್ಯಾಪಾರ ವ್ಯವಹಾರಗಳಲ್ಲಿ ಎದುರಾಳಿಗಳು ಮೇಲುಗೈ ಸಾಧಿಸುವರು. ಮನೆಯಲ್ಲಿ ಹಿರಿಯರ ಆರೋಗ್ಯದಲ್ಲಿ ಏರುಪೇರು ಉಂಟಾಗಬಹುದು. ಔಷಧಿ ವೆಚ್ಚಗಳು ಹೆಚ್ಚಾದೀತು. ರಾಜಕಾರಣಿಗಳಿಗೆ ಅಪಕೀರ್ತಿ ಸುತ್ತಿಕೊಳ್ಳುವುದು.

ಶ್ರೀ ಶಮೀವೃಕ್ಷ ಪ್ರದಕ್ಷಣೆ. ಶುಭ ಸಂಖ್ಯೆ–3

ಮೀನ (ದಿ.ದು.ಖ.ಝ.ಥ.ತೆ.ದೊ.ಚ.ಚಿ)

ವಾರದ ಆದಿಗೆ ಗ್ರಹಗಳ ಶುಭ ಸಂಚಾರದಿಂದ ನಿಮಗೆ ಗೌರವ ಆದರಗಳು ಪ್ರಾಪ್ತವಾಗಲಿದೆ. ನಿಮ್ಮ ಪೂರ್ವಗುರು ಒಬ್ಬರ ಸಲಹೆ, ಸಹಾಯಗಳು ನಿಮ್ಮ ಶ್ರೇಯಸ್ಸಿಗೆ ಕಾರಣವಾಗುವುದು. ದೈವಚಿಂತನೆಗೆ ಪ್ರೇರಣೆಯಾಗಿ ಮನಸ್ಸು ನಿರ್ಮಲವಾಗುವುದು. ವಾರದ ಕಡೆಗೆ 'ಕಾಸಿದ್ರೆ ಕೈಲಾಸ' ಎಂಬಂತೆ ಮೋಜು–ಮಸ್ತಿಗಳು ಉಂಟಾಗುವುದು. ಅನ್ನ–ಪಾನಗಳಲ್ಲಿ ನಿಯಂತ್ರಣವಿರಲಿ.

ಶ್ರೀ ದತ್ತ ಗುರುದರ್ಶನ. ಶುಭ ಸಂಖ್ಯೆ–4.

ಮೈಸೂರು ಮಿತ್ರ ಭಾನುವಾರ 17 ಮಾರ್ಚ್ 2024

ಹುಣಸೂರಲ್ಲಿ ಮಳಿಗೆ ನಿರ್ಮಾಣಕ್ಕೆ ಗುದ್ದಲಿ ಪೂಜೆ


ಮಳಿಗೆಗಳ ನಿರ್ಮಾಣ ಕಾಮಗಾರಿಗೆ ಶಾಸಕ ಜಿ.ಡಿ.ಹರೀಶ್‌ಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ಹುಣಸೂರು, ಮಾ.16– ಯಾವುದೇ ಸಂಘ ಸಂಸ್ಥೆ ಅಥವಾ ಸಹಕಾರ ಕ್ಷೇತ್ರ ಏಳಿಗೆಯಾಗಲು ಉತ್ತಮ ಸಂಘಟನೆ ಮತ್ತು ಆಡಳಿತ ವೈಖರಿಯಿಂದ ಮಾತ್ರ ಸಾಧ್ಯ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ನಗರದ ಸರಸ್ವತಿಪುರಂ ಮುಖ್ಯರಸ್ತೆಯ ಟಿಎಪಿಸಿಎಂಎಸ್ ಆವರಣದಲ್ಲಿ 50 ಲಕ್ಷ ರೂ. ವೆಚ್ಚದ ನೂತನ ಮಳಿಗೆಗಳ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ಹಿಂದೆ ಇದೇ ಜಾಗದಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ 10 ಮಳಿಗೆಗಳನ್ನು ನಿರ್ಮಿಸಲಾಗಿದೆ. ಈಗ ಮತ್ತೆ 50 ಲಕ್ಷ ವೆಚ್ಚದಲ್ಲಿ 10 ಮಳಿಗೆ ನಿರ್ಮಿಸಲು ಟೆಂಡರ್ ಆಗಿದೆ ಎಂದರು.

ಈ ಸ್ಥಳದಲ್ಲಿ ಶಿಥಿಲಗೊಂಡಿದ್ದ ಕಟ್ಟಡ ತೆರವುಗೊಳಿಸಿ ಹೊಸ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲಾಗಿದೆ. ಮಾಜಿ ಶಾಸಕ ದಿ.ಕರಿಯಪ್ಪಗೌಡರು ಇಲ್ಲಿ ರೈತ ಭವನದ ಕನಸು ಕಂಡಿದ್ದರು. ಅದರಂತೆ ಮುಂದಿನ ದಿನಗಳಲ್ಲಿ ಎಲ್ಲರ ಸಹಕಾರದೊಂದಿಗೆ ರೈತ ಭವನ ನಿರ್ಮಿಸಲಾಗುವುದು ಎಂದರು.

60 ವರ್ಷಗಳ ಇತಿಹಾಸವಿರುವ ಇಲ್ಲಿನ ಟಿಎಪಿಸಿಎಂಎಸ್‌ಗೆ ಇದೇ ಮೊದಲ ಬಾರಿ ಗ್ರಾಮೀಣ ಭಾಗದ ಅದರಲ್ಲೂ ದಲಿತ ಸಮುದಾಯದ ಬಸವಲಿಂಗಯ್ಯ ಅವರನ್ನು ಅಧ್ಯಕ್ಷರನ್ನಾಗಿ ಮಾಡಿ, ಉಪಾಧ್ಯಕ್ಷ ಸ್ಥಾನಕ್ಕೆ ವಾಲ್ಮೀಕಿ ಸಮುದಾಯದ ನಾಗರಾಜು ಅವರನ್ನು ಆಯ್ಕೆ ಮಾಡುವ ಮೂಲಕ ಇತಿಹಾಸ ಸೃಷ್ಟಿಸಿದ್ದೇವೆ. ಇದು ನಮಗೆ ಹೆಮ್ಮೆಯ ವಿಷಯ ಎಂದರು.

ಟಿಎಪಿಸಿಎಂಎಸ್ ಅಧ್ಯಕ್ಷ ಬಸವಲಿಂಗಯ್ಯ ಮಾತನಾಡಿ, ಶಾಸಕ ಜಿ.ಡಿ.ಹರೀಶ್‌ಗೌಡರ ಸಹಕಾರದಿಂದ ಈಗಾಗಲೇ 10 ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲಾಗಿದೆ. ಮುಂದೆ ನಡೆಯುವ ಎಲ್ಲಾ ಕಾಮಗಾರಿಗೂ ನಮ್ಮೊಂದಿಗೆ ಇರಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ನಾಗರಾಜು, ಕಾರ್ಯದರ್ಶಿ ಹೇಮ, ನಿರ್ದೇಶಕರಾದ ಕೆಂಪೇಗೌಡ, ಚಂದ್ರಶೇಖರ್ ಇತರರಿದ್ದರು.

ಮೈತ್ರಿ ಅಭ್ಯರ್ಥಿ ಯದುವೀರ್ ಗೆಲುವಿಗೆ ಅವಿರತ ಶ್ರಮ


ಹುಣಸೂರು: ವರಿಷ್ಠರ ತೀರ್ಮಾನದಂತೆ ಈ ಬಾರಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಯೊಂದಿಗೆ ಮೈಸೂರು–ಕೊಡಗು ಕ್ಷೇತ್ರದಲ್ಲಿ ಲೋಕಸಭಾ ಚುನಾವಣೆ ಎದುರಿಸಲು ಸಕಲ ಸಿದ್ಧತೆ ನಡೆಸಿದ್ದು, ಪ್ರತಿ ಹಳ್ಳಿ ಹಳ್ಳಿಗಳಲ್ಲೂ ಪ್ರಚಾರ ಕೈಗೊಳ್ಳುವ ಮೂಲಕ ಮೈತ್ರಿ ಅಭ್ಯರ್ಥಿ ಯದುವೀರ್ ಒಡೆಯರ್ ಗೆಲುವಿಗೆ ಶ್ರಮಿಸುವುದಾಗಿ ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕರು, ಮೈಸೂರು–ಕೊಡಗು ಕ್ಷೇತ್ರದಲ್ಲಿ ಸಂಸದ ಪ್ರತಾಪಸಿಂಹ ಅಭಿವೃದ್ಧಿ ವಿಷಯದಲ್ಲಿ ಹಾಗೂ ತಂಬಾಕು ಬೆಳೆಗಾರರ ಸಮಸ್ಯೆಗೆ ಸ್ಪಂದಿಸಿ, ಹಲವು ಯೋಜನೆ ಮತ್ತು ಸವಾಲುಗಳನ್ನು ಪರಿಹರಿಸುವಲ್ಲಿ ಯಶಸ್ಸು ಕಂಡಿದ್ದರು. ಆದರೆ ಅವರಿಗೆ ಟಿಕೆಟ್ ನಿರಾಕರಿಸಿದೆ. ಇದು ಆ ಪಕ್ಷದ ಆಂತರಿಕ ವಿಚಾರ. ಈ ಬಾರಿ ಬಿಜೆಪಿ ತನ್ನ ಅಭ್ಯರ್ಥಿ ಬದಲಿಸಿ ಯದುವೀರ್ ಅವರಿಗೆ ಟಿಕೆಟ್ ನೀಡಿದೆ. ಜೆಡಿಎಸ್ ಮೈತ್ರಿ ಧರ್ಮ ಪಾಲಿಸಿ ಬಿಜೆಪಿ ಅಭ್ಯರ್ಥಿ ಗೆಲುವಿಗೆ ಶ್ರಮಿಸಿ ಕೇಂದ್ರದಲ್ಲಿ ಸುಭದ್ರ ಸರ್ಕಾರಕ್ಕೆ ಕೈ ಜೋಡಿಸಲಿದೆ ಎಂದರು.

ಮತದಾರರು ಯದುವೀರ್ ಸ್ವೀಕರಿಸುವ ವಿಶ್ವಾಸವಿದೆ: ಯದುವೀರ್ ಅವರು ಸಾರ್ವಜನಿಕ ಜೀವನದಲ್ಲಿ ತೊಡಗಿದ್ದು ಹಲವು ಸಾರ್ವಜನಿಕ, ಸಮಾಜಸೇವಾ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ತಳ ಹಂತದ ಜನರ ಬದುಕಿನ ಬವಣೆ ಅರಿತಿದ್ದಾರೆ. ಮತದಾರರು ಯದುವೀರ್ ಅವರನ್ನು ಪ್ರೀತಿಯಿಂದ ಸ್ವೀಕರಿಸುವ ವಿಶ್ವಾಸವಿದೆ. ಸಂಸದರಾದ ಬಳಿಕ ಪ್ರತಾಪಸಿಂಹ ಅವರ ಮಾದರಿ ಕೆಲಸ ನಿರ್ವಹಿಸುವ ಆಶಾಭಾವನೆ ಹೊಂದಿದ್ದೇನೆ ಎಂದು ಪ್ರಶ್ನೆಯೊಂದಕ್ಕೆ ತಿಳಿಸಿದರು.

ಪ್ರತಾಪಸಿಂಹಗೆ ಟಿಕೆಟ್ ತಪ್ಪಿದ್ದಕ್ಕೆ ಬೇಸರವಿದೆ: ಪ್ರತಾಪಸಿಂಹ ಅವರಿಗೆ ಟಿಕೆಟ್ ಕೈ ತಪ್ಪಿದ ಬಗ್ಗೆ ಬೇಸರವಿದೆ. ಆದರೆ ಅವರೇ ಹೇಳಿರುವಂತೆ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡುವ ಗುರಿಯೊಂದಿಗೆ ಯದುವೀರ್ ಅವರ ಗೆಲುವಿಗೆ ಪ್ರಚಾರದಲ್ಲಿ ತೊಡಗಿಸಿಕೊಳ್ಳುವುದಾಗಿ ತಿಳಿಸಿರುವುದರಿಂದ ಯಾವುದೇ ಗೊಂದಲವಿಲ್ಲದೆ ಎರಡೂ ಪಕ್ಷದ ಕಾರ್ಯಕರ್ತರು ಮೈತ್ರಿ ಅಭ್ಯರ್ಥಿ ಗೆಲುವಿಗೆ ಶ್ರಮಿಸಲಿದ್ದೇವೆ ಎಂದರು.

ಜನಪ್ರತಿನಿಧಿಯಾಗಿ ಜನಸಾಮಾನ್ಯರ ಧ್ವನಿಯಾಗುವೆ: ಯದುವೀರ್



ಪಿರಿಯಾಪಟ್ಟಣ, ಮಾ.16– ನಾನು ರಾಜ ಮನೆತನದಿಂದ ಬಂದಿದ್ದರೂ ಜನಪ್ರತಿನಿಧಿಯಾಗಿ ಜನಸಾಮಾನ್ಯರ ಧ್ವನಿಯಾಗುವೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ಪಟ್ಟಣದ ಬಿಜೆಪಿ ಕಚೇರಿಗೆ ಭೇಟಿ ನೀಡಿ ಮಾತನಾಡಿದ ಅವರು, ಈ ಬಾರಿ ನಾನು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಆಯ್ಕೆಯಾಗಿದ್ದೇನೆ. ಮುಂಬರುವ ದಿನಗಳಲ್ಲಿ ಮೈಸೂರನ್ನು ಮತ್ತಷ್ಟು ಅಭಿವೃದ್ಧಿಗೊಳಿಸಲು ನನ್ನ ಬಳಿ ಅನೇಕ ಯೋಜನೆಗಳಿದ್ದು, ನಿಮ್ಮೆಲ್ಲರ ಸಹಕಾರವಿದ್ದರೆ ಮುಂದೊಂದು ದಿನ ಪ್ರಪಂಚದ ಭೂಪಟದಲ್ಲಿ ಮೈಸೂರನ್ನು ಅತ್ಯಂತ ಜನಪ್ರಿಯ ಪ್ರವಾಸಿ ತಾಣವನ್ನಾಗಿ ಮಾಡುವುದಾಗಿ ತಿಳಿಸಿದರು.

ರಾಜಕೀಯವಾಗಿ ನಿಮ್ಮ ಮುಂದಿರುವ ಸವಾಲುಗಳೇನು? ಸಂಸದ ಪ್ರತಾಪ್ ಸಿಂಹ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದು, ಅವರು ಇದೀಗ ಟಿಕೆಟ್ ವಂಚಿತರಾಗಿದ್ದಾರೆ. ನಿಮಗೆ ಅವರಿಂದ ವ್ಯತಿರಿಕ್ತ ಪರಿಣಾಮ ಬೀರುವುದೇ? ಪಿರಿಯಾಪಟ್ಟಣ ತಂಬಾಕು ಬೆಳೆಗೆ ಪ್ರಸಿದ್ಧಿಯಾಗಿದ್ದು, ಈ ಕ್ಷೇತ್ರಕ್ಕೆ ಮುಂದಿನ ದಿನಗಳಲ್ಲಿ ನಿಮ್ಮ ಕೊಡುಗೆ ಏನು? ಎಸಿ ಕೋಣೆಯಲ್ಲಿದ್ದ ನೀವು ಪೊಲೀಸ್ ಠಾಣೆಗೆ ಆಗಮಿಸಿ ಜನಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸಬೇಕು ಇದು ನಿಮ್ಮಿಂದ ಸಾಧ್ಯವೇ? ಎಂಬ ಪ್ರಶ್ನೆಗಳಿಗೆ ಸಾವಧಾನದಿಂದ ಉತ್ತರಿಸಿದ ಯದುವೀರ್, ನಿಮ್ಮ ಪ್ರಶ್ನೆ ನಿಮಗೆ ಹೆಚ್ಚಿನ ಸವಾಲು ಎಂದು ಕಾಣಬಹುದು. ಆದರೆ ನಾನು ಜನಪ್ರತಿನಿಧಿಯಾಗಿ ಮುಂಬರುವ ಎಲ್ಲಾ ರೀತಿಯ ಸವಾಲುಗಳನ್ನು ಎದುರಿಸಲು ಸಿದ್ಧನಾಗಿದ್ದೇನೆ. ಇದಕ್ಕೆ ನಿಮ್ಮೆಲ್ಲರ ಹಾಗೂ ಕಾರ್ಯಕರ್ತರ ಸಹಕಾರ ಅಗತ್ಯ ಎಂದರು.

ಈ ವೇಳೆ ಮಾಜಿ ಶಾಸಕ ರಾಮದಾಸ್, ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ, ಕಾರ್ಯದರ್ಶಿ ಚೆನ್ನಬಸವರಾಜ್, ಮುಖಂಡರಾದ ಹೆಚ್.ಸಿ.ಬಸವರಾಜ್, ಪ್ರಶಾಂತ್‌ಗೌಡ, ಮೈ.ವಿ.ರವಿಶಂಕರ್, ಸೋಮಶೇಖರ್, ರಾಜೇಗೌಡ, ವಿಕ್ರಂರಾಜ್, ಸತೀಶ್, ನಳಿನಿಗೌಡ, ಶುಭಗೌಡ, ರವಿ ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.



ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿಯಲ್ಲಿ ಭೀಮರಾವ್ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘ ಉದ್ಘಾಟನಾ ಸಮಾರಂಭ, ಮಹಿಳಾ ದಿನಾಚರಣೆ ಹಾಗೂ ಮಾಜಿ ಸಂಸದ ಆರ್. ಧ್ರುವನಾರಾಯಣ್ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಯಿತು. ಈ ವೇಳೆ ಆದಿ ಕರ್ನಾಟಕ ಮಹಾಸಭಾ ಅಧ್ಯಕ್ಷ ನರಸಿಂಹಮೂರ್ತಿ, ಜಿವಿಕೆ ಸಂಘದ ಅಧ್ಯಕ್ಷ ಚಂದ್ರಶೇಖರ ಮೂರ್ತಿ, ಮಹಾಸಭೆ ಅಧ್ಯಕ್ಷ ನಟರಾಜು, ಗುತ್ತಿಗೆದಾರರಾದ ಪರಶಿವಮೂರ್ತಿ, ಗ್ರಾಪಂ ಸದಸ್ಯರಾದ ಪರಮೇಶ, ಮುರಳಿಗೌಡ ಸೇರಿದಂತೆ ಇನ್ನಿತರರಿದ್ದರು.

ಈ ಬಾರಿ ಅದ್ಧೂರಿ ಬಸವ ಜಯಂತಿಗೆ ತೀರ್ಮಾನ

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ದೇವನೂರು ಮಹದೇವಪ್ಪ


ಪೂರ್ವಭಾವಿ ಸಭೆಯಲ್ಲಿ ದೇವನೂರು ಮಹದೇವಪ್ಪ ಮಾತನಾಡಿದರು.

ನಂಜನಗೂಡು, ಮಾ.16– ಅಖಿಲ ಭಾರತ ವೀರಶೈವ ಮಹಾಸಭಾ ವತಿಯಿಂದ ಈ ಬಾರಿ ಅದ್ಧೂರಿಯಾಗಿ ಬಸವ ಜಯಂತಿ ಆಚರಿಸಲು ತೀರ್ಮಾನಿಸಲಾಗಿದೆ ಎಂದು ಮಹಾಸಭಾ ಅಧ್ಯಕ್ಷ ದೇವನೂರು ಮಹದೇವಪ್ಪ ತಿಳಿಸಿದರು.

ಇಲ್ಲಿನ ಮಲ್ಲನಮೂಲೆ ಮಠದಲ್ಲಿ ಮಹಾಸಭಾ ಗೌರವಾಧ್ಯಕ್ಷ ಚೆನ್ನಬಸವ ಸ್ವಾಮೀಜಿ ಸಮ್ಮುಖದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ವೀರಶೈವ ಸಮುದಾಯ ಅಧಿಕವಾಗಿದ್ದರೂ, ತಾಲೂಕಿನಲ್ಲಿ ಸುಸಜ್ಜಿತ ಸಮುದಾಯ ಭವನ ವಿರಲಿಲ್ಲ. ಆದರೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸಮುದಾಯ ಭವನ ನಿರ್ಮಿಸಿಕೊಡಲು ಮುಡಾ ಬಡಾವಣೆಯಲ್ಲಿ ಸಿಎ ನಿವೇಶನ ನೀಡಿ 2 ಕೋಟಿ ಅನುದಾನ ಮಂಜೂರು ಮಾಡಿಕೊಟ್ಟರು. ನಂತರ ಶಾಸಕ ಹರ್ಷವರ್ಧನ್ 2.5 ಕೋಟಿ ಅನುದಾನ ನೀಡಿದ್ದಾರೆ. ಭವನ ಪೂರ್ಣಗೊಳ್ಳಲು ಇನ್ನೂ 4.5 ಕೋಟಿ ಅನುದಾನ ಅವಶ್ಯವಿದ್ದು, ಮಹಾಸಭಾದಿಂದ ಜಿಲ್ಲಾ ಉಸ್ತುವಾರಿ ಸಚಿವರಿಗೆ ಅನುದಾನ ನೀಡುವಂತೆ ಮನವಿ ಮಾಡಿದಾಗ ಅವರು ಸಕಾರಾತ್ಮಕವಾಗಿ ಸ್ಪಂದಿಸಿ ಅನುದಾನ ನೀಡುವುದಾಗಿ ಒಪ್ಪಿದ್ದಾರೆ. ಇನ್ನು ಸದಸ್ಯರ ಸಲಹೆಯಂತೆ ಈ ಬಾರಿ ಅದ್ಧೂರಿಯಾಗಿ ಬಸವ ಜಯಂತಿ ಆಚರಿಸಲು ಸಿದ್ಧತೆ ಕೈಗೊಳ್ಳಲಾಗುವುದು ಎಂದರು.

ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಚೆನ್ನಬಸವ ಸ್ವಾಮೀಜಿ ಮಾತನಾಡಿ, ತಾಲೂಕಿನಲ್ಲಿ ವೀರಶೈವ ಸಮುದಾಯಕ್ಕೆ ನಾಯಕತ್ವದ ಕೊರತೆ ಇದ್ದು, ಪ್ರತಿ ಬಾರಿ ಈ ವಿಚಾರ ಪ್ರಸ್ತಾಪಿಸುತ್ತಿದ್ದೇನೆ. ಈ ಬಸವ ಜಯಂತಿಯೊಳಗೆ ತಾಲೂಕಿನಲ್ಲಿ ಪಕ್ಷಾತೀತವಾಗಿ ವೀರಶೈವ ನಾಯಕರೊಬ್ಬರು ಆಯ್ಕೆಯಾಗಬೇಕು. ಆಗ ಮಾತ್ರ ಸಮುದಾಯ ಅಭಿವೃದ್ಧಿಯತ್ತ ಸಾಗಲಿದೆ ಎಂದರು.

ಈ ವೇಳೆ ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಮಾಧು, ಮುಖಂಡರಾದ ಪಿ.ಮಹೇಶ್, ಎಸ್.ಎಂ. ಕೆಂಪಣ್ಣ ಎಂ.ಮಾದಪ್ಪ ಸಿದ್ದಲಿಂಗಪ್ಪ ಅಶೋಕ್, ಶಿವಕುಮಾರ್, ಗುರುಸಿದ್ದಪ್ಪ, ಗುರುಮಲ್ಲಪ್ಪ, ಮಹದೇವಮೂರ್ತಿ, ಶಿವಬಸಪ್ಪ ಮಹೇಶ್ ಬಾಬು, ರಾಜು ಸೇರಿದಂತೆ ಇತರರಿದ್ದರು.

ರಂಗಾಚಾರಿಹುಂಡಿಯಲ್ಲಿ ಮಹಿಳಾ ದಿನಾಚರಣೆ

ತಿ.ನರಸೀಪುರ, ಮಾ.16– ತಾಲೂಕಿನ ರಂಗಾಚಾರಿಹುಂಡಿ ಗ್ರಾಮದ ಸಮುದಾಯ ಭವನದಲ್ಲಿ ರಂಗಸಮುದ್ರ ಗ್ರಾಪಂ ಹಾಗೂ ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ನಡೆಯಿತು.

ಲೇಖಕಿ, ಮಹಿಳಾ ಹೋರಾಟಗಾರ್ತಿ ವನಜಾ ಮಾತನಾಡಿ, ಭಾರತದ ಸಂವಿಧಾನದ ಅಡಿ ಮಹಿಳೆಯರ ಹಕ್ಕುಗಳನ್ನು ಬಲಪಡಿಸಲಾಗಿದೆ ಎಂದರು.

ತಾಪಂ ಇಓ ಚಂದ್ರ ಮಾತನಾಡಿ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿ ಮಹಿಳೆಯರು ಮತ್ತು ಪುರುಷರಿಗೆ ಸಮಾನ ವೇತನವಿದೆ. ನಾವು ಕೆಲಸ ನೀಡಲು ಸಿದ್ಧರಿದ್ದೇವೆ. ಗ್ರಾಮೀಣ ಜನರು ಇದನ್ನು ಸದುಪಯೋಗಪಡಿಸಿಕೊಳ್ಳಿ ಎಂದರು.

ಮೈಸೂರು ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆ ನಿರ್ದೇಶಕಿ ಸರಸ್ವತಿ ಮಾತನಾಡಿ, ಸಂಸ್ಥೆ ಕಳೆದ 40 ವರ್ಷಗಳಿಂದ ಕರ್ನಾಟಕದ 8 ಜಿಲ್ಲೆಗಳಲ್ಲಿ 56 ಕೊಳಚೆ ಪ್ರದೇಶಗಳಲ್ಲಿ ಹಾಗೂ 196 ಗ್ರಾಮಗಳಲ್ಲಿ ಜನಾಭಿವೃದ್ಧಿ, ಮಕ್ಕಳಾಭಿವೃದ್ಧಿ, ಯುವಜನರು,



ಮಹಿಳೆಯರು ಹಾಗೂ ಸಮುದಾಯ ಆರೋಗ್ಯ ಹಾಗೂ ಶಿಕ್ಷಣ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ಜಗತ್ತಿನ ಎಲ್ಲಾ ದೇಶಗಳು ಅಭಿವೃದ್ಧಿ ಪಥದಲ್ಲಿ ನಾವು ಮುಂಚೂಣಿಯಲ್ಲಿರಬೇಕು ಎಂದು ಬಯಸುತ್ತೇವೆ ಎಂದರು.

ಇದೇ ವೇಳೆ ನಡೆದ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತ ಮಹಿಳೆಯರಿಗೆ ಬಹುಮಾನ ವಿತರಿಸಲಾಯಿತು. ಗ್ರಾಪಂಗಳಲ್ಲಿ ಆಟೋ ಓಡಿಸುತ್ತಿರುವ ರೇಖಾ, ವಾಣಿ, ಕು.ವಿಜಯಲಕ್ಷ್ಮಿ ಅವರಿಗೆ ಸನ್ಮಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ರಂಗಸಮುದ್ರ ಗ್ರಾಪಂ ಅಧ್ಯಕ್ಷೆ ಸುಜಾತ, ಉಪಾಧ್ಯಕ್ಷ ಎಲ್.ಸಿ.ಆನಂದ, ಪಿಡಿಓ ಮೊಹಮ್ಮದ್ ಇಸ್ಹಾಕ್, ಸದಸ್ಯರಾದ ರತ್ನ, ಪುಟ್ಟಸ್ವಾಮಿ, ರೂಪಶ್ರೀ ಸೇರಿದಂತೆ 200ಕ್ಕೂ ಹೆಚ್ಚು ಮಹಿಳೆಯರು ಭಾಗವಹಿಸಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಸೈರನ್ 108 (ತ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಟೇರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕರಟಕ ದಮನಕ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರಂಗನಾಯಕ (ಕ)	4 ಪ್ರದರ್ಶನಗಳು
ರಾಜಕಮಲ್	
ಯೋಧ (ಹಿಂ)	4 ಪ್ರದರ್ಶನಗಳು
ಸಂಗಂ	
ಕೆರೆಬೇಟೆ (ಕ)	4 ಪ್ರದರ್ಶನಗಳು
ಲಿಡೋ	
ಹೈಡ್ ಅಂಡ್ ಸೀಕ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸೈರನ್ (ತ)	4 ಪ್ರದರ್ಶನಗಳು
ಪ್ರಭಾ	
ಸೋಮು ಸೌಂಡ್ ಇಂಜಿನಿಯರ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕುಂಗ್ ಫು ಪಾಂಡ 4(3ಡಿ) (ಇಂ): ಬೆ.10.20ಕ್ಕೆ, ಸಂ.5.45ಕ್ಕೆ, ರಾ.7.50ಕ್ಕೆ, ರಾ.9.55ಕ್ಕೆ, ಕರಟಕ ದಮನಕ (ಕ): ಮ.12.25ಕ್ಕೆ, ಚೌಚೌ ಬಾತ್ (ಕ): ಮ.3.25ಕ್ಕೆ.
ಸ್ಕ್ರೀನ್ 2	ಹೈಡ್ & ಸೀಕ್ (ಕ): ಬೆ.10.25ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಮ.1ಕ್ಕೆ, ಆರ್ಟಿಕಲ್ 370 (ಹಿಂ): ಸಂ.4.10ಕ್ಕೆ, ಕರಟಕ ದಮನಕ (ಕ): ರಾ.7.15ಕ್ಕೆ, ಸೋಮು ಸೌಂಡ್ ಇಂಜಿನಿಯರ್ (ಕ): ರಾ.10.15ಕ್ಕೆ.
ಸ್ಕ್ರೀನ್ 3	ಮೆಹಬೂಬ (ಕ): ಬೆ.10.50ಕ್ಕೆ, ಕೆರೆಬೇಟೆ (ಕ): ಮ.1.35ಕ್ಕೆ, ಬಸ್ತಾರ್ ದಿ ನಕ್ಸಲ್ ಸ್ಟೋರಿ (ಹಿಂ): ಸಂ.4.30ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.7ಕ್ಕೆ, ರಜಾಕರ್ ಸೈಲೆಂಟ್ ಜಿನೋಸೈಡ್ ಆಫ್ ಹೈದ್ರಾಬಾದ್ (ತೆ): ರಾ.9.45ಕ್ಕೆ.
ಸ್ಕ್ರೀನ್ 4	ಜಾಕಿ (ಕ): ಬೆ.8ಕ್ಕೆ, ಬೆ.10.50ಕ್ಕೆ, ರಾ.10.10ಕ್ಕೆ, ಸೈತಾನ್ (ಹಿಂ): ಮ.1.45ಕ್ಕೆ, ಯೋಧ (ಹಿಂ): ಸಂ.4.30ಕ್ಕೆ, ರಾ.7.20ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಆಪರೇಷನ್ ವ್ಯಾಲೆಂಟೈನ್ (ತೆ): ಬೆ.9.55ಕ್ಕೆ, ಲಾಪತಾ ಲೇಡಿಸ್ (ಹಿಂ): ಮ.12.45ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಡ್ಯೂನ್ ಪಾರ್ಟ್ 2 (ಇಂ): ಬೆ.9.50ಕ್ಕೆ, ಮ.1.20ಕ್ಕೆ, ಕ್ರೀಂ (ಕ): ಸಂ.4.50ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ): ರಾ.7.25ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಲಾಪತಾ ಲೇಡಿಸ್ (ಹಿಂ): ಬೆ.10ಕ್ಕೆ, ರಾ.7.25ಕ್ಕೆ, ಆರ್ಟಿಕಲ್ 370 (ಹಿಂ): ಮ.12.45ಕ್ಕೆ, ಸಂ.4.05ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಆಪರೇಷನ್ ವ್ಯಾಲೆಂಟೈನ್ (ತೆ): ಮ.12ಕ್ಕೆ, ಉಪಾಧ್ಯಕ್ಷ (ಕ): ಮ.3.05ಕ್ಕೆ, ಒಂದು ಸರಳ ಪ್ರೇಮಕಥೆ (ಕ): ಸಂ.6.20ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕೋಟೆಯಲ್ಲಿ ಸ್ಮಶಾನಕ್ಕಾಗಿ ನಿವಾಸಿಗಳ ಪ್ರತಿಭಟನೆ


ಸ್ಮಶಾನ ಹದ್ದುಬಸ್ತಿಗೆ ಆಗ್ರಹಿಸಿ ಸಿದ್ದಪ್ಪಾಜಿ ರಸ್ತೆ ನಿವಾಸಿಗಳು ಪ್ರತಿಭಟನೆ ನಡೆಸಿದರು.

ಪಟ್ಟಣದ ನಿವಾಸಿ ಜೆ.ಪಿ.ಚಂದ್ರಶೇಖರ್ ಹಾಗೂ ಅವರ ಕುಟುಂಬದವರ ಹೆಸರಿಗೆ ಸರ್ವೇ ನಂ.57/2 ಹಾಗೂ 239ರಲ್ಲಿನ ಸ್ಮಶಾನಕ್ಕೆ ಸೇರಿದ ಒಟ್ಟು 1.02 ಎಕರೆ ಜಾಗ ದುರಸ್ತಿ ಆಗಿರುವ ಕಾರಣ, ಸರ್ವೇ ಇಲಾಖೆ ಹಾಗೂ ಕಂದಾಯ ಅಧಿಕಾರಿಗಳಿಂದ ವರದಿ ತರಿಸಿಕೊಂಡು ಅದರ ಆಧಾರದ ಮೇಲೆ ಪೋಡ್ ರದ್ದು ಮಾಡಲು ಸಹಾಯಕ ಭೂಮಾಪಕರಿಗೆ ಪತ್ರ ಬರೆದು ಆರ್‌ಟಿಸಿ ರದ್ದು ಮಾಡಲು ಕ್ರಮ ವಹಿಸಲಾಗುತ್ತದೆ.
– ಶ್ರೀನಿವಾಸ್, ತಹಸೀಲ್ದಾರ್

ಹೆಚ್.ಡಿ.ಕೋಟೆ, ಮಾ.16– ಸ್ಮಶಾನಕ್ಕೆ ಮೀಸಲಿಟ್ಟ ಜಾಗವನ್ನು ಕಂದಾಯ ಹಾಗೂ ಸರ್ವೇ ಇಲಾಖೆ ಅಧಿಕಾರಿಗಳು ಅಳತೆ ಮಾಡಿ ಹದ್ದುಬಸ್ತು ಮಾಡಿಕೊಡದೆ ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿ ಪಟ್ಟಣದ ಸಿದ್ದಪ್ಪಾಜಿ ರಸ್ತೆ ನಿವಾಸಿಗಳು ಶನಿವಾರ ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಎದುರು ಜಮಾಯಿಸಿದ ಸಿದ್ದಪ್ಪಾಜಿ ರಸ್ತೆ 300ಕ್ಕೂ ಹೆಚ್ಚು ನಿವಾಸಿಗಳು ಉಚ್ಚ ನ್ಯಾಯಾಲಯದ ಆದೇಶವಿದ್ದೂ ಪರಿಶಿಷ್ಟ ಜನಾಂಗಕ್ಕೆ ಮೀಸಲಿಟ್ಟ ಸ್ಮಶಾನ ಜಾಗವನ್ನು ಹದ್ದುಬಸ್ತು ಮಾಡಿಕೊಡದೆ ವಿಳಂಬ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಸರ್ವೇ ನಂ.57/2 ರಲ್ಲಿ 0.15 ಗುಂಟೆ ಹಾಗೂ ಸರ್ವೇ ನಂ. 239 ರಲ್ಲಿ 0.27 ಗುಂಟೆ ಒಟ್ಟು 1.02 ಎಕರೆ ಸೇರಿದಂತೆ ತಾರಕ ನದಿ ಪಕ್ಕದಲ್ಲಿದ್ದ ಹೆಚ್ಚುವರಿ ಜಾಗವನ್ನು ಪರಿಶಿಷ್ಟ ಜಾತಿ ಜನಾಂಗದ ಸ್ಮಶಾನಕ್ಕೆ 1994ರಲ್ಲಿ ಮೈಸೂರು ವಿಶೇಷ ಜಿಲ್ಲಾಧಿಕಾರಿಗಳು ನೀಡಿರುತ್ತಾರೆ. ಇದನ್ನು ಪ್ರಶ್ನಿಸಿ ಸ್ಮಶಾನ ಒತ್ತುವರಿದಾರರು ಹೈಕೋರ್ಟ್‌ನಲ್ಲಿ ದಾವೆ ಹೂಡಿದ್ದರು. ಇದನ್ನು ವಜಾಗೊಳಿಸಿದ ಹೈಕೋರ್ಟ್ ಸ್ಮಶಾನಕ್ಕೆ ಜಾಗ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿತ್ತು. ಹೀಗಿದ್ದರೂ ಅಧಿಕಾರಿಗಳು ಸ್ಮಶಾನ ಜಾಗ ಒತ್ತುವರಿ ತೆರವುಗೊಳಿಸದೇ ಭೂ ಮಾಲೀಕರಿಗೆ ಸಹಕಾರ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಮುಖಂಡ ಲಾರಿ ಪ್ರಕಾಶ್ ಮಾತನಾಡಿ, ಹೈಕೋರ್ಟ್ ಆದೇಶ ಉಲ್ಲಂಘಿಸಿ ಒತ್ತುವರಿ ಮಾಡಿಕೊಂಡಿರುವ ಸ್ಮಶಾನ ಜಾಗವನ್ನು ತೆರವುಗೊಳಿಸಬೇಕು. ಅಲ್ಲದೇ ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೇ ಮುಂದಿನ ದಿನಗಳಲ್ಲಿ ಉಗ್ರಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಸ್ಥಳಕ್ಕಾಗಮಿಸಿದ ತಹಸೀಲ್ದಾರ್ ಶ್ರೀನಿವಾಸ್, ಹೈಕೋರ್ಟ್ ಆದೇಶದ ಪ್ರಕಾರ ಈಗಾಗಲೇ ದುರಸ್ತಿ ಆಗಿರುವ ಸ್ಮಶಾನ ಜಾಗದ ಪೋಡ್ ರದ್ದು ಮಾಡಲು ಸರ್ವೇ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ವರದಿ ನೀಡಲಾಗಿದೆ ಹಾಗೂ ಹೈಕೋರ್ಟ್ ಆದೇಶ ಉಲ್ಲಂಘನೆ ಮಾಡಿರುವ ಒತ್ತುವರಿದಾರರ ಮೇಲೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಬರೆಯುವುದಾಗಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರು ಪ್ರತಿಭಟನೆ ಕೈಬಿಟ್ಟರು.

ಪ್ರತಿಭಟನೆಯಲ್ಲಿ ಯಜಮಾನ ಸೋಮಣ್ಣ, ಪುರಸಭಾ ಸದಸ್ಯ ನಂಜಪ್ಪ, ಚಾ.ಸೋಮಣ್ಣ, ಸ್ವಾಮಿ, ಹೆಚ್.ಸಿ. ವೆಂಕಟೇಶ, ವೈರಮುಡಿ ಮಂಜು, ಚನ್ನ ಕೋಟೆ, ಲಾಟರಿ ನಾಗರಾಜು, ಸಿದ್ದರಾಜು, ಸದಾಶಿವ, ಶ್ರೀನಿವಾಸ್, ನಂಜುಂಡಿ, ಆಟೋ ಗುರು, ಹುಚ್ಚಪ್ಪ ಆಕಾಶ್, ತೇಜು ಗುರುಮಲ್ಲು ಕೃಷ್ಣ, ಮಹೇಶ, ಕಾರಹುಂಡಿ ಸೋಮಣ್ಣ, ಅಂಬೇಡ್ಕರ್ ಸೇನೆ ತಾಲೂಕು ಅಧ್ಯಕ್ಷ ಮಹದೇವಸ್ವಾಮಿ, ಪಾರ್ಥಸಾರಥಿ ಸೇರಿದಂತೆ ಇನ್ನಿತರರಿದ್ದರು.

ಮೈಮುಲ್ ನಿವೃತ್ತ ಅಧಿಕಾರಿ ಡಾ.ಸಿ.ದಿವಾಕರ್‌ಗೆ ಬೀಳ್ಕೊಡುಗೆ


ತಿ.ನರಸೀಪುರ ಪಟ್ಟಣದ ವೀರಶೈವ ವಿದ್ಯಾರ್ಥಿ ನಿಲಯದಲ್ಲಿ ಮೈಮುಲ್ ಅಧಿಕಾರಿ ಡಾ.ಸಿ. ದಿವಾಕರ್‌ಗೆ ಬೀಳ್ಕೊಡುಗೆ.

ತಿ.ನರಸೀಪುರ, ಮಾ.16– ಮೈಮುಲ್‌ನಲ್ಲಿ ವಿವಿಧ ಹುದ್ದೆ ಅಲಂಕರಿಸಿ ನಿವೃತ್ತಿ ಹೊಂದುತ್ತಿರುವ ಡಾ.ಸಿ.ದಿವಾಕರ್ ಅವರ ಮುಂದಿನ ಜೀವನ ಸುಖಕರವಾಗಿರಲಿ ಎಂದು ಮೈಮುಲ್ ನಿರ್ದೇಶಕ ಚೆಲುವರಾಜು ಆಶಿಸಿದರು.

ಪಟ್ಟಣದ ವೀರಶೈವ ವಿದ್ಯಾರ್ಥಿ ನಿಲಯದಲ್ಲಿ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಆಶ್ರಯದಲ್ಲಿ ಆಯೋಜಿಸಿದ್ದ ಮೈಮುಲ್ ಅಧಿಕಾರಿ ಡಾ.ಸಿ.ದಿವಾಕರ್‌ಗೆ ಬೀಳ್ಕೊಡುಗೆ, ನೂತನ ಉಪ ವ್ಯವಸ್ಥಾಪಕ ಎಲ್.ಆರ್.ಕರಿಬಸವರಾಜು ಅವರ ಸ್ವಾಗತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಡಾ.ಸಿ.ದಿವಾಕರ್ ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದು, ಗ್ರಾಮೀಣ ರೈತರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದರು. ಅಲ್ಲದೇ ಹೈನುಗಾರಿಕೆ ಮಾಡಲು ಅನುಸರಿಸಬೇಕಾದ ಮಾರ್ಗೋಪಾಯಗಳ ಕುರಿತು ರೈತರಿಗೆ ತಿಳುವಳಿಕೆ ನೀಡಿ ರೈತರ ಮೆಚ್ಚುಗೆಗೆ ಪಾತ್ರರಾಗಿದ್ದರು. ಮೈಮುಲ್‌ನಲ್ಲಿ 36 ವರ್ಷಗಳ ಕಾಲ ನಿರಂತರ ಸೇವೆ ಸಲ್ಲಿಸಿ ನಿವೃತ್ತರಾಗುತ್ತಿರುವ ಅವರ ನಿವೃತ್ತ ಜೀವನ ಸದಾ ಸುಖಕರವಾಗಿರಲಿ ಎಂದು ಆಶಿಸಿದರು.

ಮೈಮುಲ್ ಮಾಜಿ ಅಧ್ಯಕ್ಷ ಓಂ ಪ್ರಕಾಶ್, ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ವಿಜಯಕುಮಾರ್, ಪಶು ಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಲಿಂಗರಾಜು ಮಾತನಾಡಿದರು. ಇದೇ ವೇಳೆ ನಿವೃತ್ತರಾದ ಡಾ.ಸಿ.ದಿವಾಕರ್ ಹಾಗೂ ಉಪ ವ್ಯವಸ್ಥಾಪಕರಾಗಿ ಅಧಿಕಾರ ವಹಿಸಿಕೊಂಡ ಕರಿಬಸವರಾಜು ಅವರನ್ನು ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ವತಿಯಿಂದ ಸನ್ಮಾನಿಸಲಾಯಿತು.

ಮೈಮುಲ್ ಮಾಜಿ ನಿರ್ದೇಶಕ ಕೆ.ಬಿ.ಪ್ರಭಾಕರ್, ಉಪ ವ್ಯವಸ್ಥಾಪಕಿ ಸೌಮ್ಯ, ಸಹಾಯಕ ವ್ಯವಸ್ಥಾಪಕ ನಿಶ್ಚಿತ್ ಕುಮಾರ್, ಮಾರ್ಗ ವಿಸ್ತರಣಾಧಿಕಾರಿ ಆರ್.ಪ್ರಮೋದ್, ದಿವ್ಯ, ನೌಕರ ಸಂಘದ ಅಧ್ಯಕ್ಷ ಕುಳ್ಳೇಗೌಡ, ಡೈರಿ ಕಾರ್ಯದರ್ಶಿಗಳಾದ ಅಂದಾನಿ ಗೌಡ, ಮಾದಪ್ಪ, ನಾಗೇಂದ್ರ, ಡೈರಿ ಅಧ್ಯಕ್ಷ ನರೇಂದ್ರ, ಸಿದ್ದಪ್ಪ ದೊಡ್ಡ ರಮೇಶ್, ಪ್ರಗತಿಪರ ಹಾಲು ಉತ್ಪಾದಕ ಜಯರಾಂ ಮತ್ತಿತರರಿದ್ದರು.

ವೈದ್ಯರ ಸಂದರ್ಶನ

ಡಾ|| ಶಿವಪ್ರಸಾದ್ ಬಿ.ಎನ್.
ಕನ್ಸಲ್ಟೆಂಟ್ ರೂಮಟಾಲಜಿಸ್ಟ್
ಈ ಕೆಳಕಂಡ ವಿಳಾಸದಲ್ಲಿ ಸಂದರ್ಶನಕ್ಕೆ ಲಭ್ಯವಿರುತ್ತಾರೆ.
ಬೆನಕ ಹೆಲ್ತ್ ಕೇರ್
#432, 6ನೇ ಮೇನ್, 1ನೇ ಹಂತ, ವಿಜಯನಗರ, ಮೈಸೂರು–570 017
0821-452331 / 8105574841

ಜಮೀನು ಮಾರಾಟಕ್ಕಿದೆ

ಮೈಸೂರು ತಾ. ಜಯಪುರ ಹೋ. ಮದ್ದೂರು ಗ್ರಾಮದಲ್ಲಿ 32 ಗುಂಟೆ, ಮದ್ದೂರು ಹುಂಡಿ ಗ್ರಾಮದಲ್ಲಿ 25 ಗುಂಟೆ, ದೂರ ಗ್ರಾಮದಲ್ಲಿ 19 ಗುಂಟೆ, ಗೋಪಾಲಪುರ ಗ್ರಾಮದಲ್ಲಿ 25 ಗುಂಟೆ, ಮಾವಿನಹಳ್ಳಿಯಲ್ಲಿ 3 ಎಕರೆ 7 ಗುಂಟೆ ಮುರಡಗಳ್ಳಿ ಗ್ರಾಮದಲ್ಲಿ 1 ಎಕರೆ 4 ಗುಂಟೆ ಜಮೀನು ಮಾರಾಟಕ್ಕಿದೆ.
9945661696, 9663793666

ಸ್ನೇಹಜೀವಿ
ಪ್ರಶಾಂತ್ (ತಿಮ್ಮಯ್ಯ) ರವರಿಗೆ
ಹುಟ್ಟುಹಬ್ಬದ ಶುಭಾಶಯಗಳು



ಶುಭಕೋರುವವರು :
ನಂಜುಂಡಸ್ವಾಮಿ, ಅಧ್ಯಕ್ಷರು
ಸಿಂಹದಮರಿ ಸೇವಾ ಟ್ರಸ್ಟ್ (ರಿ.)
ಶಿವರಾಜ್‌ಕುಮಾರ್ ಮತ್ತು ಅಪ್ಪು ಅಭಿಮಾನಿಗಳ ಸಂಘ
ಶಿವರಾಂಪೇಟೆ, ಮೈಸೂರು

Festival Offer
BUY 2 Pant Lengths & GET 1 Pant length FREE
Bombay Dyeing since 1879
Authorised Dealer
Vastra Vaibhav
☎ : 0821-4288614
Shiiv Market, Shivarampet
Beside Rajkamal Theatre, Mysuru
*T&C Apply.

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀಮತಿ ದೇವಮ್ಮ
ನಿಧನ: 06-03-2024
ಇವರು ದಿ.06.03.2024 ರಂದು ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧ ದಿನಾಂಕ : 17.03.2024 ಭಾನುವಾರ ಉತ್ತರ ಕ್ರಿಯಾದಿ ಕಾರ್ಯವನ್ನು ಸಂಜೆ 04.00 ಗಂಟೆಗೆ ನಮ್ಮ ಸ್ವಗೃಹ ನಂ.2149, 1ನೇ ಕ್ರಾಸ್, ಅಶೋಕಪುರಂನಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಶಾಂತಿ ಕೋರಬೇಕಾಗಿ ವಿನಂತಿ
ಭೋಜನ ದಿ: 19-03-2024 ಮಧ್ಯಾಹ್ನ 12.30ಕ್ಕೆ
ದುಃಖತಪ್ತರು: ಮೃತರ ಮಕ್ಕಳು, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು

ಮೊದಲನೇ ವರ್ಷದ ಪುಣ್ಯಸ್ಮರಣೆ



ಜನನ: 17-7-1973
ಮರಣ: 17-3-2023
ದೇವರಾಜ ಡಿ. ಆರ್
RBI, Mysore
ಸದಾ ನಿಮ್ಮ ನೆನಪು & ನಿಮ್ಮ ಆದರ್ಶ ನಮಗೆ ದಾರಿದೀಪ
ಇಂತಿ ದುಃಖತಪ್ತ: ಕುಟುಂಬವರ್ಗ

BUILDING FOR SALE

Corner Muda property 2200 Sq.ft. South-East with building for sale Lalithmahal Nagara/ Alanahalli Layout 8500/- per sqft (slightly negotiable)
Contact
7899708676



Hi! TAXI
ONLY ONE WAY TAXI CHARGE
MYSORE to BANGALORE
City drop or Pick up
BANGALORE to MYSORE
Airport drop or Pick up
MYSURU
9611177599

ಮನೆ ಮಾರಾಟಕ್ಕಿದೆ

30x40 ಅಳತೆಯುಳ್ಳ ಮೂರು ಅಂತಸ್ತಿನ 35 ಚದರ ಉಳ್ಳ ಪೂರ್ವ ದಿಕ್ಕಿನಲ್ಲಿ ಇರುವ ಜೆ.ಪಿ.ನಗರ, 'ಬಿ' ಬ್ಲಾಕ್, ಮೈಸೂರು
9449175644

DTCP SITES FOR SALE

DTCP Sites
Rs. 699 per sq.ft.,
Near Jayapura,
H.D. Kote Road, Mysore.
9590491194,9606783264

ನಿಸರ್ಗ ಇಕೋ ಪ್ಯಾರಡೈಸ್
ಮೈಸೂರು - ಹುಣಸೂರು ಮುಖ್ಯರಸ್ತೆ, ಮೈಸೂರು
HP HYLAND PROPERTIES
DTCP APPROVAL
ನಿಮ್ಮ ಕನಸಿನ ನಿವೇಶನ ಮೈಸೂರಿನಲ್ಲಿ
ಸುಲಭ 4 ಕಂತುಗಳ ಸೌಲಭ್ಯವಿದೆ
ಕೇವಲ ₹650/ ಪ್ರತಿ ಚದರ ಅಡಿ
30x40 | 30x50
40x60 | 50x80
ಅಳತೆಯ ಎಲ್ಲಾ ಸೌಲಭ್ಯಗಳನ್ನು ಒಳಗೊಳ್ಳುವ ನಿವೇಶನಗಳು
ಕೆಲವೇ ಸೈಟ್‌ಗಳು ಮಾತ್ರ ಲಭ್ಯ
ಹೈಲ್ಯಾಂಡ್ ಪ್ರಾಪರ್ಟೀಸ್
ಮೈಸೂರು - ಹುಣಸೂರು ಮುಖ್ಯರಸ್ತೆ, ಮೈಸೂರು
90713 86615
95133 01854

SITE FOR SALE

41x31, S/W corner site, DTCP Approved, KB Enclave Layout, Kumarabeedu, Bogadi Road. @ 37 Lakh (negotiable).
7022989269, 9945750261

SITE FOR SALE

Two corner sites measuring 1700 sq.ft. S/E and 2040 sq.ft. N/W, Near Rastrotthana Vidya Kendra, Vijayanagara 4th Stage. Road width: 60 ft.
Mob: 9902311977

SITE FOR SALE

60x40 West Face Bogadi Bapuji Layout, Mysore.
(Brokers Excuse)
Mob: 9845113361



ಡಿಸ್ಟ್ರಿಬ್ಯೂಟರ್ ಬೇಕಾಗಿದ್ದಾರೆ

ದೀರ್ಘ ಬೆವರೇಸ್ ಪ್ರೈ. ಲಿ.
ಪ್ಯಾಕೇಜ್ಡ್ ಡ್ರಿಂಕಿಂಗ್ ವಾಟರ್
ಮೈಸೂರು, ಮಂಡ್ಯ, ಚಾಮರಾಜನಗರ ಗುಂಡ್ಲುಪೇಟೆ, ಮಡಿಕೇರಿಗೆ
ಬ್ರಾಂಡ್ : ಗೋಲ್ಡನ್ ಮೂನ್ /ಬ್ಲಾಕ್ ಡೀರ್
500 ಮಿ.ಲಿ. /1000 ಮಿ.ಲಿ. /2000 ಮಿ.ಲಿ.
ಸಂಪರ್ಕಿಸಿ : 7899779157
8792780020, 8050108099

ಸೈಟುಗಳು ಮಾರಾಟಕ್ಕಿದೆ

1030 ಚದರ ಅಡಿ ನಾರ್ತ್ ಈಸ್ಟ್ ಕಾರ್ನರ್
2889 ಚದರ ಅಡಿ ನಾರ್ತ್ ಈಸ್ಟ್ ಕಾರ್ನರ್
ಮೈಸೂರು ವಿಶ್ವವಿದ್ಯಾಲಯ ಬಡಾವಣೆ ಪಕ್ಕ, ರಿಂಗ್ ರೋಡ್ ಒಳಗಡೆ.
Mob: 9741201247

SBIT TRAVELS

Group Tours
All Inclusive : 5N6D | Dubai
March 22nd : 99,800/- April 3rd : 1,03,800/-
4N5D | Dubai
84,800/-
April : 10th, 19th, 26th | May: 1st, 5th, 15th
6N7D | BHUTAN
50,800/-
April : 17th, 25th | May: 2nd, 15th, 25th
9342524127, 9343524127
(Saraswathipuram, Mysuru)

ಹಸಿರು ನಮ್ಮ ಉಸಿರು

